ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 13 ಮಂಗಳವಾರ 2026

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 266 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಸಂಕ್ರಾಂತಿ ಬಳಿಕ ರಾಜ್ಯ ರಾಜಕಾರಣಕ್ಕೆ ಹೊಸ ದಿಕ್ಕು!

- ಜ.16ಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿ ಭೇಟಿ
- 22ರವರೆಗೆ ರಾಜಧಾನಿಯಲ್ಲೇ ವಾಸ್ತವ್ಯ



ಬೆಂಗಳೂರು, ಜ.12(ಕೆಎಂಶಿ)– ಸಂಕ್ರಾಂತಿ ನಂತರ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿ ಗಾದಿಗೆ ಪಟ್ಟು ಹಿಡಿಯುವುದು ಪಕ್ಕಾ ಆಗಿದ್ದು, ಜನವರಿ 16 ರಂದು ಅವರು ದೆಹಲಿ ಪ್ರವಾಸ ಕೈಗೊಂಡಿದ್ದಾರೆ.

ಸಂಕ್ರಾಂತಿ ಮರುದಿನವೇ ಪ್ರವಾಸ ಕೈಗೊಂಡಿರುವ ಶಿವಕುಮಾರ್, ಜನವರಿ 22ರವರೆಗೆ ರಾಜಧಾನಿಯಲ್ಲೇ ಮೊಕ್ಕಾಂ ಹೂಡಲಿದ್ದಾರೆ. ಈ ವೇಳೆ ಅಧಿಕಾರ ಹಂಚಿಕೆ ಸೂತ್ರ ಜಾರಿಗೊಳಿಸುವಂತೆ ಹಕ್ಕೊತ್ತಾಯ ಮಾಡಲು ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿಯವರನ್ನು ಪ್ರತ್ಯೇಕ ಭೇಟಿಗೆ ಸಮಯ ಕೇಳಿದ್ದಾರೆ ಎನ್ನಲಾಗಿದೆ. ಅಸ್ಸಾಂ ವಿಧಾನಸಭಾ ಚುನಾವಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ರಾಹುಲ್ ಗಾಂಧಿಯವರು ಜ.16ರಂದು ದೆಹಲಿಯಲ್ಲಿ ಸಭೆ ಕರೆದಿದ್ದಾರೆ. ಡಿ.ಕೆ.ಶಿವಕುಮಾರ್, ಅಸ್ಸಾಂ ಚುನಾವಣಾ ವೀಕ್ಷಕರಾಗಿರುವುದರಿಂದ ರಾಹುಲ್ ಸಭೆಯಲ್ಲಿ ಭಾಗವಹಿಸಲಿದ್ದಾರೆ. ನಂತರ ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ಚರ್ಚೆ ಮಾಡಲು ತಮಗೆ ಅವಕಾಶ ನೀಡುವಂತೆ ರಾಹುಲ್ ಕಚೇರಿಗೆ ಮನವಿ ಮಾಡಿದ್ದಾರೆ. ಅಂದು ಸಮಯಾವಕಾಶ ದೊರೆಯದಿದ್ದರೆ ಡಿಕೆಶಿ ವಾಪಸ್ಸಾಗುವುದಿಲ್ಲ. ರಾಹುಲ್ ಗಾಂಧಿ ಭೇಟಿ ಮಾಡಲೇಬೇಕೆಂದು ಡಿಕೆಶಿ ನಾಲ್ಕು ದಿನಗಳ ದೆಹಲಿ ಪ್ರವಾಸ ಕೈಗೊಂಡಿದ್ದಾರೆ ಎಂದು ಅವರ ಕಚೇರಿ ಮೂಲಗಳಿಂದ ತಿಳಿದು ಬಂದಿದೆ.

■ 6ನೇ ಪುಟಕ್ಕೆ

ಇಂದು ಮೈಸೂರು ವಿಮಾನ ನಿಲ್ದಾಣದಲ್ಲಿ ಸಿಎಂ, ಡಿಸಿಎಂ ಜೊತೆ ರಾಹುಲ್ ಗಾಂಧಿ ಮಿನಿ ಮೀಟಿಂಗ್!

ಮೈಸೂರು, ಜ.12(ಬಿಎಲ್‌ಯು)– ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಕಾದಾಟದ ನಡುವೆ ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ ಮಂಗಳವಾರ ಮೈಸೂರಿಗೆ ಭೇಟಿ ನೀಡುತ್ತಿದ್ದು, ಇಲ್ಲಿನ ವಿಮಾನ ನಿಲ್ದಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಮಹತ್ವದ ಸಭೆ ನಡೆಸುವ ಸಾಧ್ಯತೆ ಇದೆ.

ಖಾಸಗಿ ಕಾರ್ಯಕ್ರಮ ನಿಮಿತ್ತ ತಮಿಳುನಾಡಿನ ಗುಡಲೂರಿಗೆ ತೆರಳುತ್ತಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ದೆಹಲಿಯಿಂದ ವಿಶೇಷ ವಿಮಾನದಲ್ಲಿ ಮಂಗಳವಾರ ಮಧ್ಯಾಹ್ನ 2 ಗಂಟೆಗೆ ಮೈಸೂರು ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ಇದಕ್ಕೆ ಅರ್ಧ ಗಂಟೆ ಮುಂಚಿತವಾಗಿ ಬೆಂಗಳೂರಿನಿಂದ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರು ಒಟ್ಟಿಗೆ ವಿಶೇಷ ವಿಮಾನದಲ್ಲಿ ಮೈಸೂರಿಗೆ ಬಂದು ತಮ್ಮ ನಾಯಕನನ್ನು ಸ್ವಾಗತಿಸಲಿದ್ದಾರೆ.

ವಿಶ್ರಾಂತಿ ನೆಪದಲ್ಲಿ ಮಹತ್ವದ ಚರ್ಚೆ: ತಮಿಳುನಾಡಿನ ಗುಡಲೂರಿಗೆ ಪ್ರಯಾಣ ಬೆಳೆಸುವ ನಡುವೆ ಒಂದು ಗಂಟೆ ಮೈಸೂರು ವಿಮಾನ ನಿಲ್ದಾಣದ ವಿಶ್ರಾಂತಿ ಕೊಠಡಿಯಲ್ಲಿ ರಾಹುಲ್ ಗಾಂಧಿ ತಂಗಲಿದ್ದಾರೆ. ಈ ವೇಳೆ ತಮ್ಮನ್ನು ಭೇಟಿಯಾಗುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ರಾಜ್ಯ ಕಾಂಗ್ರೆಸ್‌ನ ವಿದ್ಯಮಾನಗಳ ಬಗ್ಗೆ ಮಹತ್ವದ ಚರ್ಚೆ ನಡೆಸಲಿದ್ದಾರೆ ಎನ್ನಲಾಗಿದೆ. ಸಂಜೆ ವೇಳೆಗೆ ಸಿಎಂ ಹಾಗೂ ಡಿಸಿಎಂ ಒಟ್ಟಿಗೆ ಬೆಂಗಳೂರಿಗೆ ವಾಪಸ್ಸಾಗಲಿದ್ದಾರೆ.

ಉಭಯ ನಾಯಕರ ಹಕ್ಕೊತ್ತಾಯ?: ರಾಜ್ಯದಲ್ಲಿ 'ಮುಖ್ಯಮಂತ್ರಿ ಕುರ್ಚಿ' ವಿಚಾರ ನಾಕೊಡೆ, ನೀಬಿಡೆ ಎನ್ನುವಂತಾಗಿದೆ. ಹೈಕಮಾಂಡ್ ಸೂಚನೆ ಬಳಿಕ ಉಭಯ ನಾಯಕರ ಹೇಳಿಕೆಗಳಿಗೆ ತಾತ್ಕಾಲಿಕ ಬ್ರೇಕ್ ಬಿದ್ದಿತ್ತಾದರೂ ಸಂಕ್ರಾಂತಿ ಸಮೀಪಿಸುತ್ತಿದ್ದಂತೆ ಮತ್ತೆ ಕ್ರಾಂತಿಯ ಕಿಡಿ ಕಾವೇರುತ್ತಿದೆ. ರಾಜ್ಯದ ಅತೀ ಹೆಚ್ಚು ಅವಧಿ ಆಡಳಿತ

■ 6ನೇ ಪುಟಕ್ಕೆ

'ಬಹುರೂಪಿ ಬಾಬಾ ಸಾಹೇಬ್–ಸಮತೆಯೆಡೆಗೆ ನಡಿಗೆ' ಆಶಯದ ಬಹುರೂಪಿ ನಾಟಕೋತ್ಸವಕ್ಕೆ ಚಾಲನೆ

ಅಂಬೇಡ್ಕರ್ ಸಂವಿಧಾನದಿಂದ ಸಾಮಾನ್ಯನೂ ದೇಶದ ಅಧಿಕಾರದ ಚುಕ್ಕಾಣಿ ಹಿಡಿಯಲು ಅವಕಾಶವಾಗಿದೆ : ಸಚಿವ ತಂಗಡಗಿ

ಮೈಸೂರು, ಜ.12(ಪಿಎಂ)– ನಾಟಕಗಳೊಂದಿಗೆ ನಾನಾ ಕಲೆಗಳ ಒಳಗೊಂಡ ಸಾಂಸ್ಕೃತಿಕ ಸೊಬಗಿನ ಉತ್ಸವ 'ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ'ಕ್ಕೆ ಮೈಸೂರು ರಂಗಾಯಣದಲ್ಲಿ ಸೋಮವಾರ ವಿಧ್ಯುಕ್ತ ಚಾಲನೆ ದೊರೆಯಿತು.


'ಬಹುರೂಪಿ ಬಾಬಾ ಸಾಹೇಬ್–ಸಮತೆಯೆಡೆಗೆ ನಡಿಗೆ' ಆಶಯದೊಂದಿಗೆ ಆಯೋಜಿಸಿರುವ 25ನೇ ವರ್ಷದ ಬೆಳ್ಳಿ ಬಹುರೂಪಿ ಇದಾಗಿದ್ದು, ರಂಗಾಯಣದ ವನರಂಗ ಆವರಣದಲ್ಲಿ ಜನಪದ ಕಲಾತಂಡಗಳ ಮೆರಗಿನೊಂದಿಗೆ ಅದ್ದೂರಿಯಾಗಿ ಉದ್ಘಾಟಿಸಲಾಯಿತು. ವನರಂಗದ ಹೊರಾವರಣದಲ್ಲಿ ಸ್ಥಾಪಿಸಿರುವ ಅಮೂರ್ತ ಶಿಲ್ಪ ಅನಾವರಣಗೊಳಿಸುವ ಮೂಲಕ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ ಎಸ್.ತಂಗಡಗಿ ಬಹುರೂಪಿ ನಾಟಕೋತ್ಸವಕ್ಕೆ ಅಧಿಕೃತ ಚಾಲನೆ ನೀಡಿದರು.

ಬಳಿಕ ವನರಂಗದಲ್ಲಿ ನಡೆದ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಈ ಬಾರಿಯ ಬೆಳ್ಳಿಹಬ್ಬದ ಬಹುರೂಪಿಯು ಭಾರತದ ಭಾಗ್ಯವಿಧಾತ, ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಚಿಂತನೆಯಡಿ ನಡೆಯುತ್ತಿರುವುದು ವಿಶೇಷ. ಬೆಳ್ಳಿ ಬಹುರೂಪಿಗೆ ಸಾರ್ಥಕವಾದ ಶೀರ್ಷಿಕೆ ಇಡಬೇಕೆಂದು ರಂಗಾಯಣ ನಿರ್ದೇಶಕರು ಬಾಬಾ ಸಾಹೇಬ್ ಅವರ ಹೆಸರು ಪ್ರಸ್ತಾಪಿಸಿದಾಗ, ನಿಜವಾಗಲೂ ಸಂತೋಷವಾಯಿತು. ಏಕೆಂದರೆ ನಮ್ಮ ದೇಶಕ್ಕೆ ಅಂಬೇಡ್ಕರ್ ಅವರ ಕೊಡುಗೆ ಅಪಾರ. ಅವರು ಕೊಟ್ಟ ಸಂವಿಧಾನದಿಂದ ನಾವು ನೆಮ್ಮದಿಯಿಂದ ಬದುಕುವಂತಾಗಿದೆ. ಒಬ್ಬ ಸಾಮಾನ್ಯನೂ ಈ ದೇಶದ ಅಧಿಕಾರದ ಚುಕ್ಕಾಣಿ ಹಿಡಿಯಲು ಅವಕಾಶ ಕಲ್ಪಿಸಿದೆ. ನಾನಿಂದು ಇಲ್ಲಿ ಭಾಷಣ ಮಾಡುತ್ತಿದ್ದರೆ, ಅದಕ್ಕೆ ಬಾಬಾ ಸಾಹೇಬರ ಶ್ರಮದ ಫಲ ಕಾರಣ ಎಂದು ಸ್ಮರಿಸಿದರು.

1 ಕೋಟಿ ಅನುದಾನ: ಮೈಸೂರು ರಂಗಾಯಣಕ್ಕೆ ದೊಡ್ಡ ಇತಿಹಾಸವಿದೆ. ರಂಗಭೀಷ್ಮ ಎಂದೇ ಹೆಸರಾದ ಬಿ.ವಿ.ಕಾರಂತರ ಆದಿಯಾಗಿ ಇಲ್ಲಿನ ನಿರ್ದೇಶಕರು ರಂಗಾಯಣ ಕಟ್ಟಿ ಬೆಳೆಸಿದ್ದಾರೆ. ರಂಗಾಯಣವನ್ನು ಧಾರವಾಡ, ಕಲಬುರ್ಗಿ ಹೀಗೆ ಪ್ರಾದೇಶಿಕವಾಗಿ ಸ್ಥಾಪನೆ ಮಾಡಿ ಉತ್ತೇಜನ ನೀಡಲಾಗುತ್ತಿದೆ. ಆ ಮೂಲಕ ರಂಗಾಯಣ ವಿಸ್ತರಿಸಿ ರಂಗ ಚಟುವಟಿಕೆಗೆ ದೊಡ್ಡ ಶಕ್ತಿಯನ್ನು ರಾಜ್ಯ ಸರ್ಕಾರ ನೀಡುತ್ತಿದೆ. ಜೊತೆಗೆ 25ನೇ ವರ್ಷದ ಬಹುರೂಪಿಗೆ ವಿಶೇಷವಾಗಿ 1 ಕೋಟಿ ರೂ. ಅನುದಾನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಲ್ಪಿಸಿದ್ದಾರೆ ಎಂದು ತಿಳಿಸಿದರು. ಇದಕ್ಕೂ ಮುನ್ನ ಪ್ರಾಸ್ತಾವಿಕವಾಗಿ ಮಾತನಾಡಿದ ಮೈಸೂರು ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಮೈಸೂರು ರಂಗಾಯಣ ಸಾಂಸ್ಕೃತಿಕವಾಗಿ ದಿಟ್ಟ ಹೆಜ್ಜೆಯೊಂದಿಗೆ ಮುನ್ನಡೆಯುತ್ತಿದೆ. 25ನೇ ವರ್ಷದ ಬಹುರೂಪಿಯ ಆಶಯ ಮಹತ್ವದ್ದಾಗಿದೆ. ಏಕೆಂದರೆ ಜಾಗತಿಕವಾಗಿ ಈ ಕಾಲವನ್ನು ಎದುರಿಸಲು ನಮಗೆ ಉಳಿದಿರುವ ಒಂದೇ ಒಂದು ಪ್ರಜ್ಞೆ ಮತ್ತು ವಿವೇಕವೆಂದರೆ ಅದು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ವಿಚಾರಧಾರೆಗಳಾಗಿವೆ ಎಂದು ಹೇಳಿದರು.

ಸಾಂಸ್ಕೃತಿಕ ರಾಜಕಾರಣ ಮಾಡುತ್ತೇನೆ!: ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ನಾನು ಬಹು ರೂಪಿ ನಾಟಕೋತ್ಸವದ ಒಟ್ಟು ಆಶಯವಾಗಿ ರೂಪಿಸುವಾಗ ನನ್ನ ಆಪ್ತ ಸ್ನೇಹಿತರೊಬ್ಬರು,

■ 6ನೇ ಪುಟಕ್ಕೆ




ಮೈಸೂರು ರಂಗಾಯಣದ ವನರಂಗದಲ್ಲಿ ಸೋಮವಾರ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ ಉದ್ಘಾಟನೆ ವೇಳೆ ಭಾರತದ ರಂಗಭೂಮಿಯ ಹೆಸರಾಂತ ಹಿರಿಯ ಕಲಾವಿದೆ ಪದ್ಮಶ್ರೀ ಪುರಸ್ಕೃತರಾದ ಮಣಿಪುರ ಮೂಲದ ಹೈಸ್ನಾಂ ಸಾವಿತ್ರಿ ಅವರಿಗೆ 'ಬೆಳ್ಳಿ ಬಹುರೂಪಿ ರಂಗಗೌರವ' ಪ್ರದಾನ ಮಾಡಲಾಯಿತು.

> ಬೆಳ್ಳಿ ಹಬ್ಬದ ಬಹುರೂಪಿಗೆ ಆಹ್ವಾನಿಸಿರುವುದು ಅತ್ಯಂತ ಹೆಮ್ಮೆ ಎನ್ನಿಸುತ್ತಿದೆ. ಪ್ರತಿವರ್ಷ ಯಶಸ್ವಿಯಾಗಿ ನಡೆಯುವ ಈ ರಾಷ್ಟ್ರೀಯ ರಂಗೋತ್ಸವವು ದೇಶದ ವಿವಿಧ ಮೂಲೆಗಳ ಕಲಾವಿದರಿಗೆ ವೇದಿಕೆ ಒದಗಿಸುತ್ತಿದೆ. ಇದಕ್ಕಾಗಿ ಮೈಸೂರು ರಂಗಾಯಣ, ರಾಜ್ಯ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ. ಮೈಸೂರು ರಂಗಾಯಣ ಮತ್ತು ಮಣಿಪುರದ ಕಲಾಕ್ಷೇತ್ರ ಸ್ನೇಹಿತರಾಗಿ ಮಾತ್ರವಲ್ಲದೆ, ಒಂದು ಕುಟುಂಬವಾಗಿ ಸುದೀರ್ಘ ಪಯಣ ಹಂಚಿಕೊಂಡು ಬಹಳ ಕಾಲವಾಗಿದೆ. ಗುರುಗಳಾದ ಬಿ.ವಿ. ಕಾರಂತರು, ಹೈಸ್ನಮ್ ಕನ್ಹೈಯಾಲಾಲ್ ಅವರು ಇದ್ದಾಗ, ಅವರೊಂದಿಗೆ ಕೆಲಸ ಮಾಡಿದ ದಿನಗಳು ನನಗೆ ನೆನಪಾಗುತ್ತಿದೆ. ಆ ಇಬ್ಬರು ಗುರುಗಳ ಪರಂಪರೆಯನ್ನು ಕಾಲಕ್ಕೆ ತಕ್ಕಂತೆ ಸಾಮರಸ್ಯದಿಂದ ಮುಂದುವರೆಸಿಕೊಂಡು ಹೋಗುವುದು ಇಂದಿನ ಪೀಳಿಗೆಯ ಜವಾಬ್ದಾರಿಯಾಗಿದೆ.
>
> **-ಹೈಸ್ನಾಂ ಸಾವಿತ್ರಿ.**
> ಭಾರತದ ರಂಗಭೂಮಿಯ ಹಿರಿಯ ಕಲಾವಿದೆ.

ಅಗತ್ಯವಿದ್ದಾಗ ಸಿಎಂ, ಡಿಸಿಎಂ ಮಾತುಕತೆಗೆ ಕರೆಯುತ್ತೇವೆ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಅಗತ್ಯವಿದ್ದಾಗ ಚರ್ಚೆಗಾಗಿ ದೆಹಲಿಗೆ ಕರೆಯಲಾಗುವುದು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೋಮವಾರ ಹೇಳಿದ್ದಾರೆ.



ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಯನ್ನು ಮಾತುಕತೆಗಾಗಿ ದೆಹಲಿಗೆ ಯಾವಾಗ ಕರೆಸಲಾಗುತ್ತದೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಖರ್ಗೆ, 'ಅಗತ್ಯವಿದ್ದಾಗಲೆಲ್ಲ ಪಕ್ಷವು ಅವರನ್ನು ಕರೆಯುತ್ತದೆ' ಎಂದು ಹೇಳಿದರು.

2023ರಲ್ಲಿ ಸರ್ಕಾರ ರಚನೆಯಾದ ಸಮಯದಲ್ಲಿ ಸಿದ್ದರಾಮಯ್ಯ ಮತ್ತು ಶಿವಕುಮಾರ್ ನಡುವೆ ನಡೆದಿದೆ ಎನ್ನಲಾದ 'ಅಧಿಕಾರ ಹಂಚಿಕೆ' ಒಪ್ಪಂದದಿಂದಾಗಿ ಈ ವಿಚಾರ ಮುನ್ನೆಲೆಗೆ ಬಂದಿದೆ. ಇತ್ತೀಚೆಗೆ ದೇವರಾಜ್ ಅರಸ್ ಅವರ ದಾಖಲೆಯನ್ನು ಮುರಿದು ರಾಜ್ಯದಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿದ ಸಿಎಂ ಎಂಬ ಖ್ಯಾತಿ ಪಡೆದಿರುವ ಸಿದ್ದರಾಮಯ್ಯ ಪೂರ್ಣಾವಧಿಗೆ ಮುಂದುವರೆಯುವ ವಿಶ್ವಾಸದಲ್ಲಿದ್ದಾರೆ. ಆದಾಗ್ಯೂ, ಅಂತಿಮ ನಿರ್ಧಾರವು ಕಾಂಗ್ರೆಸ್ ಹೈಕಮಾಂಡ್‌ಗೆ ಬಿಟ್ಟದ್ದು ಎಂದಿದ್ದಾರೆ. ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಭಾನುವಾರ, ತಮ್ಮ ಕಠಿಣ ಪರಿಶ್ರಮವೇ ರಾಜಕೀಯದಲ್ಲಿ ತಮ್ಮನ್ನು ಇಲ್ಲಿಯವರೆಗೆ ಕರೆತಂದಿದೆ ಎಂದಿದ್ದರು.

ಯುಗಾದಿವರೆಗೆ ಸಿದ್ದರಾಮಯ್ಯ ಸಿಎಂ ಸ್ಥಾನ ಬಿಡಲ್ಲ

ರಾಯಚೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವೆ ಸಿಎಂ ಹುದ್ದೆಗಾಗಿ ತೀವ್ರ ಫೈಟ್ ನಡೆಯುತ್ತಿರುವ ಬೆನ್ನಲ್ಲೇ ಕೋಡಿ ಮಠದ ಶ್ರೀಗಳು ಸೋಮವಾರ ಸ್ಫೋಟಕ ಭವಿಷ್ಯ ನುಡಿದಿದ್ದಾರೆ.



ಇಂದು ಕಾಗಿನೆಲೆ ಕನಕಪೀಠದ ಕಾರ್ಯಕ್ರಮದಲ್ಲಿ ಸಂಕ್ರಾಂತಿ ನಂತರ ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನ ಬದಲಾವಣೆ ವಿಚಾರದ ಬಗ್ಗೆ ಮಾತನಾಡಿದ ಶ್ರೀಗಳು, ಸಂಕ್ರಾಂತಿ, ಯುಗಾದಿ ಅಲ್ಲ, ಬಜೆಟ್‌ವರೆಗೂ ಯಾವ್ರದೇ ಬದಲಾವಣೆ ಇಲ್ಲ ಎಂದರು. ಜೋತಿಷ್ಯವನ್ನು ನಂಬುವ ಜನ ಸಂಕ್ರಾಂತಿ, ಯುಗಾದಿ ಅಂತಾ ಹೇಳ್ತಾರೆ. ಸಂಕ್ರಾಂತಿಯಲ್ಲಿ ಸೂರ್ಯ, ಯುಗಾದಿಯಲ್ಲಿ ಚಂದ್ರನನ್ನು ಹಿಡಿದು ಜೋತಿಷ್ಯ ಹೇಳುತ್ತಾರೆ. ಆದರೆ ಯುಗಾದಿ ಹಬ್ಬ ಮುಗಿಯುವವರೆಗೂ ಸಿದ್ದರಾಮಯ್ಯ ಸಿಎಂ ಆಗಿ ಇರಲಿದ್ದು,

■ 6ನೇ ಪುಟಕ್ಕೆ

ರಾಜ್ಯದಲ್ಲೀಗ ಆಡಳಿತ ನಡೆಸುತ್ತಿರುವುದು 'ಡಮ್ಮಿ ಸಿಎಂ'

ಚಾಮರಾಜನಗರ, ಜ.12– ರಾಜ್ಯದ ಖಜಾನೆ ಖಾಲಿಯಾಗಿದೆ. ಸ್ಥಿರತೆ ಹೋಗಿದೆ. ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವುದು ಡಮ್ಮಿ ಸಿಎಂ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ವಾಗ್ದಾಳಿ ನಡೆಸಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯನವರು 2ನೇ ಬಾರಿಗೆ ಮುಖ್ಯಮಂತ್ರಿಯಾದ ಮೇಲೆ ನಿಷ್ಕ್ರಿಯವಾಗಿದ್ದಾರೆ. ಅವರಿಗೆ ಆಡಳಿತ ನಡೆಸಲು ಗೊತ್ತಾಗುತ್ತಿಲ್ಲ. ತಮ್ಮ ಸರ್ಕಾರದ ಹುಳುಕು ಮುಚ್ಚಿಕೊಳ್ಳಲು ಏನು ಬೇಕಾದರೂ ಮಾತನಾಡುತ್ತಾರೆ. ದೇಶ ಇದ್ದರೇ ನಾವು. ದೇಶಕ್ಕಿಂತ ಯಾರೂ ದೊಡ್ಡವರಲ್ಲ. ಹೀಗಾಗಿ ಅವರಿಗೆ ಈ ಹಿಂದೆಯೇ ಸಲಹೆ–ಸೂಚನೆಗಳನ್ನು ನೀಡಿದ್ದೆ. ಆದರೆ ನಾನು ಹೇಳಿದ್ದು ಅವರ ತಲೆಗೆ ಹೋಗುತ್ತಿಲ್ಲ ಎಂದರು. ಬಳ್ಳಾರಿ ಘಟನೆ ಬಗ್ಗೆ ಮಾತನಾಡಿದ ಅವರು, ಬಳ್ಳಾರಿ ಘಟನೆಯನ್ನು ಸ್ವತಃ ನೋಡಿದ್ದೇನೆ. ಅಲ್ಲದೇ ಬಳ್ಳಾರಿಯಲ್ಲಿ ಏನಾಗಿದೆ ಎಂಬುದು ಎಲ್ಲರಿಗೂ ಗೊತ್ತಿದೆ ಬಳ್ಳಾರಿಯಲ್ಲಿ ನಿಮ್ಮವರು ಮಾಡಿದ ಪಾಪದ ಕೆಲಸ ಹಾಗೂ ಪಟಾಲಂ ನಡೆದುಕೊಂಡ ರೀತಿ ಸರಿಪಡಿಸಿಕೊಳ್ಳದಿದ್ದರೆ ಮುಂದೊಂದು ದಿನ ನಿಮಗೂ ಕುತ್ತಿಟ್ಟ ಬುತ್ತಿ ಎಂದರು.

ಸಾಮಾಜಿಕ ಬಹಿಷ್ಕಾರ ಹಾಕಿದರೆ 3 ವರ್ಷ ಜೈಲು

ಕಾನೂನು ಜಾರಿಗೆ ತಂದ ರಾಜ್ಯ ಸರ್ಕಾರ

ಬೆಂಗಳೂರು: ಸಾಮಾಜಿಕ ಬಹಿಷ್ಕಾರಕ್ಕೆ ಸಂಪೂರ್ಣ ನಿಷೇಧ ಹೇರಲು ನಿರ್ಧರಿಸಿರುವ ರಾಜ್ಯ ಸರ್ಕಾರ, ಇನ್ನು ಮುಂದೆ ಯಾವುದೇ ವ್ಯಕ್ತಿ, ಕುಟುಂಬ ಅಥವಾ ಕುಟುಂಬದ ಸದಸ್ಯರನ್ನು ಸಾಮಾಜಿಕವಾಗಿ ಬಹಿಷ್ಕರಿಸಿದರೆ ಮೂರು ವರ್ಷದವರೆಗೆ ಜೈಲು ಶಿಕ್ಷೆ ಮತ್ತು 1 ಲಕ್ಷ ದಂಡ ವಿಧಿಸುವ ಕಾನೂನು ಜಾರಿಗೆ ತಂದಿದೆ.

ಸಾಮಾಜಿಕ ಬಹಿಷ್ಕಾರವನ್ನು ಅಪರಾಧವೆಂದು ಪರಿಗಣಿಸಿ ಶಿಕ್ಷೆ ವಿಧಿಸಲು ಅವಕಾಶ ನೀಡುವ 'ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ) ಮಸೂದೆಗೆ ರಾಜ್ಯಪಾಲ ಥಾವರಚಂದ್ ಗೆಹ್ಲೋತ್ ಅಂಕಿತ ಹಾಕಿದ್ದಾರೆ. ಈ ಕುರಿತು ರಾಜ್ಯ ಸರ್ಕಾರ ಸೋಮವಾರ ಅಧಿಸೂಚನೆ ಹೊರಡಿಸಿದ್ದು, ಕಾಯ್ದೆ ರೂಪದಲ್ಲಿ ಜಾರಿಗೆ ಬಂದಿದೆ..

ಬಹಿಷ್ಕರಿಸುವ ತೀರ್ಮಾನ ತೆಗೆದುಕೊಂಡವರು, ಈ ಉದ್ದೇಶದಿಂದ ಸಭೆ, ಪಂಚಾಯಿತಿ,

■ 6ನೇ ಪುಟಕ್ಕೆ


ಪಿಂಚಣಿಗೆ ಪೇಚಾಡುತ್ತಿದ್ದ ಮೈಸೂರು ವಿವಿಗೆ ಸರ್ಕಾರದಿಂದ 25 ಕೋಟಿ ನೆರವು

ಇನ್ನಿತರೆ ವಿವಿಗಳಿಗೂ ಷರತ್ತು ಬದ್ಧ ನೆರವು

ಮೈಸೂರು, ಜ.12(ಎಸ್‌ಪಿಎನ್)– ಮೈಸೂರು ವಿವಿ, ಕರ್ನಾಟಕ ವಿವಿ ಸೇರಿದಂತೆ ರಾಜ್ಯದ ಆರು ವಿಶ್ವ ವಿದ್ಯಾಲಯಗಳಿಗೆ ಪಿಂಚಣಿ ಪಾವತಿಗಾಗಿ ಅನುದಾನ ಬಿಡುಗಡೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಉನ್ನತ ಶಿಕ್ಷಣ ವಲಯದಡಿ ಬರುವ ವಿವಿಗಳಿಗೆ ರಾಜ್ಯ ವಲಯ ಯೋಜನೆಗಳಡಿ ಅನುದಾನ ಒದಗಿಸಲಾಗಿದೆ. ಹೆಚ್ಚುವರಿ ಅನುದಾನ ಒದಗಿಸುವಂತೆ ಈ ವಿವಿಗಳಿಂದ ಸಲ್ಲಿಕೆಯಾಗಿದ್ದ ಮನವಿಯನ್ನು ಪುರಸ್ಕರಿಸಿದ್ದು, 2025–26ನೇ ಸಾಲಿನ ಪೂರಕ ಬಜೆಟ್‌ನಲ್ಲಿ (2ನೇ ಕಂತು) ಕೆಲವು ಷರತ್ತುಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಲಾಗಿದೆ.

ಮೈಸೂರು ವಿವಿ ಹಾಗೂ ಕರ್ನಾಟಕ ವಿವಿಗೆ ತಲಾ 25 ಕೋಟಿ, ಬೆಂಗಳೂರು ವಿವಿಗೆ 5 ಕೋಟಿ, ಗುಲ್ಬರ್ಗ, ಮಂಗಳೂರು ಹಾಗೂ ಕುವೆಂಪು ವಿಶ್ವವಿದ್ಯಾಲಯಗಳಿಗೆ ತಲಾ 15 ಕೋಟಿಯನ್ನು




ಸಹಾಯಾನುದಾನ ಮತ್ತು ವಿಶ್ರಾಂತಿ ವೇತನಗಳ ಉಪಶೀರ್ಷಿಕೆಯಲ್ಲಿ ಬಿಡುಗಡೆ ಮಾಡಲಾಗಿದೆ. ಮೈಸೂರು ವಿ.ವಿ ಸೇರಿದಂತೆ ಹಲವು ವಿಶ್ವವಿದ್ಯಾಲಯಗಳಲ್ಲಿ ಪಿಂಚಣಿ ಕೊಡುವುದಕ್ಕೂ ಸಾಧ್ಯವಾಗದಂತಹ ಆರ್ಥಿಕ ಮುಗ್ಗಟ್ಟು ಉಂಟಾಗಿರುವ ಬಗ್ಗೆ ತೀವ್ರ ಚರ್ಚೆಯಾಗಿತ್ತು. ಈ ಕಾರಣದಿಂದ ಸರ್ಕಾರ ಅನುದಾನದ ಬಲ ತುಂಬಿದೆ.

■ 6ನೇ ಪುಟಕ್ಕೆ

ಸಂಕ್ರಾಂತಿಯಂದೇ ಐತಿಹಾಸಿಕ ಸುತ್ತೂರು ಜಾತ್ರೆ ಆರಂಭ

ಆರು ದಿನಗಳ ಧಾರ್ಮಿಕ ಉತ್ಸವಕ್ಕೆ 25 ಲಕ್ಷಕ್ಕೂ ಅಧಿಕ ಭಕ್ತರ ಆಗಮನ ನಿರೀಕ್ಷೆ

ವಸ್ತುಪ್ರದರ್ಶನ, ಸಾಮೂಹಿಕ ವಿವಾಹ, ಕುಸ್ತಿ ಪಂದ್ಯಾವಳಿ, ನಾನಾ ದೇಶಿ ಆಟಗಳು, ದನಗಳ ಪರಿಷೆ, ಕಪಿಲಾರತಿ, ಕೃಷಿ ವಸ್ತುಪ್ರದರ್ಶನ... ಇನ್ನು ಹತ್ತು ಹಲವು ವಿಶೇಷ



ಮೈಸೂರು, ಜ.12(ಎಂಟಿವೈ)– ಮೈಸೂರು ಭಾಗದ ಅತೀ ಪ್ರಮುಖ ಜಾತ್ರೆಗಳಲ್ಲಿ ಒಂದಾ ಗಿರುವ ಐತಿಹಾಸಿಕ ಸುತ್ತೂರಿನ ಆದಿ ಜಗದ್ಗುರು ಶಿವರಾತ್ರೀಶ್ವರ ಶಿವಯೋಗಿಗಳ ಜಾತ್ರಾ ಮಹೋತ್ಸವ ಜ.15ರಿಂದ 20 ರವರೆಗೆ ವಿಜೃಂಭಣೆಯಿಂದ ಜರುಗಲಿದ್ದು, ಕಪಿಲಾ ನದಿ ತೀರದಲ್ಲಿರುವ ಸುತ್ತೂರು ಕ್ಷೇತ್ರದಲ್ಲಿ ಜಾತ್ರೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ವರ್ಷದಿಂದ ವರ್ಷಕ್ಕೆ ಹೆಚ್ಚು ಜನ ಪ್ರಿಯತೆ, ಹೊರ ರಾಜ್ಯಗಳಿಂದಲೂ ಭಕ್ತರನ್ನು ಸೆಳೆಯುತ್ತಿದೆ. ಆರು ದಿನಗಳ ಕಾಲ ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಜಿ ಸಾನ್ನಿಧ್ಯದಲ್ಲಿ ವಿವಿಧ ಧಾರ್ಮಿಕ ಕೈಂಕರ್ಯಗಳು ಜರುಗಲಿವೆ. ಜಾತ್ರಾ ಆರಂಭಕ್ಕೆ ದಿನಗಣನೆ ಆರಂಭವಾಗಿದ್ದು, ಸುತ್ತೂರು ಅಲಂಕಾರಗೊಂಡಿದೆ. ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಕ್ಕಾಗಿ ವೇದಿಕೆ ನಿರ್ಮಾಣ ಕಾರ್ಯವೂ ಅಂತಿಮ ಹಂತ ತಲುಪಿದ್ದು, ಲಕ್ಷಾಂತರ ಭಕ್ತರಿಗೆ ದಾಸೋಹಕ್ಕಾಗಿ ನೂರಾರು ಟನ್ ದವಸ, ಧಾನ್ಯ ಸಂಗ್ರಹವಾಗಿದೆ.

ಸುತ್ತೂರು ಕ್ಷೇತ್ರದ ಅತಿಥಿ ಗೃಹದ ಸಭಾಂಗಣದಲ್ಲಿ ಜಾತ್ರಾ ಮಹೋತ್ಸವ ಕುರಿತು ಜೆಎಸ್‌ಎಸ್ ಮಹಾವಿದ್ಯಾಪೀಠದ ಗೌರವ ಕಾರ್ಯದರ್ಶಿ ಎಸ್.ಪಿ.ಮಂಜುನಾಥ ಮಾತನಾಡಿ, ಜಾತ್ರಾ ಮಹೋತ್ಸವ ಜ.15ರಿಂದ 20ರವರೆಗೆ ವಿಜೃಂಭಣೆಯಿಂದ ನೆರವೇರಲಿದೆ. ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಜಿ ಸಾನ್ನಿಧ್ಯದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಜ.15ರಂದು ಗ್ರಾಮೀಣ ಕಲೆ ರಂಗೋಲಿ ಸ್ಪರ್ಧೆ ಏರ್ಪಡಿಸಲಾಗಿದೆ. ಜ.16ರಂದು ಸಾಮೂಹಿಕ ವಿವಾಹ, ಹಾಲ್ಹರವಿ ಉತ್ಸವ, ಜ.17ರಂದು ರಥೋತ್ಸವ, ವೀರಭದ್ರೇಶ್ವರ ಕೊಂಡೋತ್ಸವ, ಜ.18ರಂದು ಮಹದೇಶ್ವರ ಕೊಂಡೋತ್ಸವ ಹಾಗೂ ಲಕ್ಷದೀಪೋತ್ಸವ, ಜ.19ರಂದು ತೆಪ್ಪೋತ್ಸವ, ಜ.20ರಂದು ಅನ್ನ ಬ್ರಹ್ಮೋತ್ಸವದೊಂದಿಗೆ ಹಲವು ಧಾರ್ಮಿಕ ಕಾರ್ಯಕ್ರಮಗಳು, ವೈವಿಧ್ಯಮಯ ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ಕ್ರೀಡಾಚಟುವಟಿಕೆಗಳು ಜರುಗಲಿವೆ. ಜಾತ್ರೆ ಆಚರಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಮುಖ್ಯಮಂತ್ರಿ, ಕೇಂದ್ರ ಹಾಗೂ ರಾಜ್ಯ ಸಚಿವರು, ಸಂಸದರು, ಶಾಸಕರು, ಗಣ್ಯರು, ವಿವಿಧ ಮಠಗಳ ಮಠಾಧೀಶರು, ಸಾಹಿತಿಗಳು ಭಾಗವಹಿಸಲಿದ್ದಾರೆ. ಜಾತ್ರೆಗೆ ಈ 25 ಲಕ್ಷಕ್ಕೂ ಹೆಚ್ಚು ಜನ ಭಾಗವಹಿಸುವ ನಿರೀಕ್ಷೆ ಇದೆ ಎಂದರು.

ಈ ವರ್ಷ 32ನೇ ರಾಜ್ಯಮಟ್ಟದ ಭಜನಾ ಮತ್ತು ಏಕತಾರಿ ಸ್ಪರ್ಧೆ ಏರ್ಪಡಿಸಲಾಗಿದೆ. ರಾಜ್ಯ ಹಾಗೂ ಹೊರ ರಾಜ್ಯಗಳಿಂದ ಸುಮಾರು 750ಕ್ಕೂ ಹೆಚ್ಚು ಪುರುಷ, ಮಹಿಳಾ, ಮಕ್ಕಳ ತಂಡಗಳು ಭಾಗವಹಿಸಲಿದ್ದು, ಪ್ರತಿ ವಿಭಾಗಕ್ಕೂ ಪ್ರತ್ಯೇಕ ಬಹುಮಾನ ನೀಡಲಾಗುತ್ತದೆ ಎಂದು ತಿಳಿಸಿದರು.

ವಸ್ತುಪ್ರದರ್ಶನ: ಜಾತ್ರೆಯ ಪ್ರಮುಖ ಆಕರ್ಷಣೆಯಾದ ವಸ್ತುಪ್ರದರ್ಶನದಲ್ಲಿ ಕೈಗಾರಿಕೋತ್ಪನ್ನಗಳು, ಕೈಮಗ್ಗ, ಜವಳಿ, ಕರಕುಶಲ ಉತ್ಪನ್ನಗಳು, ಗ್ರಾಮೀಣ ಉತ್ಪನ್ನಗಳು, ಸ್ವಸಹಾಯ ಸಂಘಗಳು, ಸ್ತ್ರೀ ಶಕ್ತಿ ಸಂಘಗಳು ತಯಾರಿಸಿದ ಗೃಹಬಳಕೆ ಉತ್ಪನ್ನಗಳು ಹಾಗೂ ಗುಡಿ ಕೈಗಾರಿಕೆ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ವ್ಯವಸ್ಥೆ ಮಾಡಲಾಗಿದೆ. ಜೆಎಸ್‌ಎಸ್ ಪ್ರೌಢಶಾಲೆಗಳ ವಿದ್ಯಾರ್ಥಿಗಳು ಸಿದ್ಧಪಡಿಸಿರುವ 200ಕ್ಕೂ ಹೆಚ್ಚು ಶಿಕ್ಷಣ ಮತ್ತು ವಿಜ್ಞಾನಕ್ಕೆ ಸಂಬಂಧಿಸಿದ ಮಾದರಿಗಳನ್ನು ಪ್ರದರ್ಶಿಸಲಾಗುತ್ತಿದೆ ಎಂದರು.

ಸಾಮೂಹಿಕ ವಿವಾಹ: ಜ.16ರಂದು ನಡೆಯುವ ಉಚಿತ ಸಾಮೂಹಿಕ ವಿವಾಹದಲ್ಲಿ ಜಾತಿ–ಮತ

■ 6ನೇ ಪುಟಕ್ಕೆ




ಸುದ್ದಿಗೋಷ್ಠಿಯಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿಗಳಾದ ಎಸ್.ಪಿ. ಮಂಜುನಾಥ್, ಶಿವಕುಮಾರಸ್ವಾಮಿ, ಆಡಳಿತಾಧಿಕಾರಿ ಉದಯಶಂಕರ್ ಇದ್ದರು.



25 ಲಕ್ಷ ಜನರಿಗೆ ಪ್ರಸಾದದ ವ್ಯವಸ್ಥೆ

ಈ ಬಾರಿಯ ಜಾತ್ರಾ ಮಹೋತ್ಸವಕ್ಕೆ 25 ಲಕ್ಷ ಜನ ಆಗಮಿಸುವ ನಿರೀಕ್ಷೆಯಿದೆ. ಜಾತ್ರಾ ಮಹೋತ್ಸವದಲ್ಲಿ ಭಕ್ತಾದಿಗಳಿಗೆ ಪ್ರತಿನಿತ್ಯ ಬೆಳಗ್ಗೆ, ಮಧ್ಯಾಹ್ನ ಹಾಗೂ ರಾತ್ರಿ ಪ್ರಸಾದದ ವ್ಯವಸ್ಥೆ ಮಾಡಲಾಗಿದೆ. ಒಟ್ಟು 6 ದಿನಗಳ ಪ್ರಸಾದ ತಯಾರಿಕೆಗೆ 1000 ಕ್ವಿಂಟಾಲ್ ಅಕ್ಕಿ, 250 ಕ್ವಿಂಟಾಲ್ ತೊಗರಿಬೇಳೆ, 1600 ಕ್ಯಾನ್ ರಿಫೈನ್ ಅಡುಗೆ ಎಣ್ಣೆ, 12 ಟನ್ ಬೆಲ್ಲ, 3500 ಕೆ.ಜಿ. ಖಾರದಪುಡಿ, 200 ಕ್ವಿಂಟಾಲ್ ಸಕ್ಕರೆ, 160 ಕ್ವಿಂಟಾಲ್ ಕಡ್ಲೆಹಿಟ್ಟು, 600 ಕೆ.ಜಿ. ನಂದಿನಿ ತುಪ್ಪ, 750 ಕೆ.ಜಿ. ದ್ರಾಕ್ಷಿ, ಗೋಡಂಬಿ, 9000 ಲೀ ಹಾಲು, 28,000 ಲೀ ಮೊಸರು, 25,000 ತೆಂಗಿನಕಾಯಿ, 5000 ಕೆಜಿ ಉಪ್ಪಿನಕಾಯಿ, ಲಾಡು, ಸಿಹಿ ಬೂಂದಿ, ಮೈಸೂರು ಪಾಕ್, ಪಾಯಸವನ್ನು ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು. – **ಪ್ರೊ.ಸುಬ್ಬಪ್ಪ, ದಾಸೋಹ ಸಮಿತಿಯ ಸಂಚಾಲಕ**



ಮೈಸೂರು ಕೈಗಾರಿಕಾ ಪ್ರದೇಶಗಳ ರಸ್ತೆಗಳಿಗೆ ಕಾಯಕಲ್ಪ

50 ಕೋಟಿ ರೂ. ವೆಚ್ಚದಲ್ಲಿ 20 ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ಪೂರ್ಣ





ಫೈಲ್ ಚಿತ್ರ

ಮೈಸೂರು, ಜ. 12(ಆರ್‌ಕೆ)– ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಮೈಸೂರಿನ ಹೂಟಗಳ್ಳಿ, ಕೂರ್ಗಳ್ಳಿ ಹಾಗೂ ಹೆಬ್ಬಾಳು ಕೈಗಾರಿಕಾ ಪ್ರದೇಶದ ಪ್ರಮುಖ ರಸ್ತೆಗಳಿಗೆ ಕಡೆಗೂ ಹೂಟಗಳ್ಳಿ ನಗರಸಭೆಯು ಕಾಯಕಲ್ಪ ನೀಡಲು ನಿರ್ಧರಿಸಿದೆ.

ಕೆ.ಆರ್.ಎಸ್. ರಸ್ತೆಯ ಕೂರ್ಗಳ್ಳಿ ಬಳಿ ಆಟೋಮೋಟಿವ್ ಆಕ್ಸೆಲ್ ಲಿಮಿಟೆಡ್ ಜಂಕ್ಷನ್‌ನಿಂದ ಹೆಬ್ಬಾಳು ರಿಂಗ್ ರೋಡ್ ಜಂಕ್ಷನ್‌ವರೆಗೆ 4.7 ಕಿಲೋ ಮೀಟರ್ ರಸ್ತೆ, ಹೆಬ್ಬಾಳು ರಿಂಗ್ ರಸ್ತೆಯ ಭಾರತ್ ಕ್ಯಾನ್ಸರ್ ಆಸ್ಪತ್ರೆ ಸಿಗ್ನಲ್ ಲೈಟ್ ಜಂಕ್ಷನ್‌ನಿಂದ ಇನ್ಫೋಸಿಸ್ ಟೆಕ್ನಾಲಜಿಸ್ ವರೆಗೆ 1 ಕಿ.ಮೀ. ಜೋಡಿ ರಸ್ತೆ ಹಗಲೀಕರಣ ಮತ್ತು ಅಭಿವೃದ್ಧಿ ಸೇರಿದಂತೆ, ಹೂಟಗಳ್ಳಿ ನಗರಸಭೆ ವ್ಯಾಪ್ತಿಯ ಒಟ್ಟು 20 ಕಾಮಗಾರಿಗಳನ್ನು ಅಂದಾಜು 50 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಲು ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ.

ಕಾಮಗಾರಿಗೆ ಆಡಳಿತಾತ್ಮಕ ಮತ್ತು ತಾಂತ್ರಿಕ ಅನುಮೋದನೆ ದೊರೆತಿದ್ದು, ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯು ಹಣಕಾಸು ಅನುಮೋದನೆ ನೀಡಬೇಕಾಗಿದೆ. ಈ ವಾರದೊಳಗೆ ಅಂತಿಮ ಅನುಮೋದನೆ ಹಾಗೂ ಯಶಸ್ವಿ ಬಿಡ್ಡುದಾರರಿಗೆ ಕಾರ್ಯಾದೇಶ ನೀಡುವ ನಿರೀಕ್ಷೆಯಿದೆ. ಮುಂದಿನ ವಾರದಿಂದ ಏಕಕಾಲದಲ್ಲಿ ಎಲ್ಲಾ 20 ಕಾಮಗಾರಿಗಳು ಆರಂಭವಾಗುವ ಸಾಧ್ಯತೆ ಇದೆ.

ಕೈಗಾರಿಕೆಗಳಿಂದ ಪ್ರತಿ ವರ್ಷ ತೆರಿಗೆ ಸಂಗ್ರಹಿಸುತ್ತಿರುವ ಹೂಟಗಳ್ಳಿ ನಗರಸಭೆ ಹಾಗೂ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಆ ಪ್ರದೇಶದ ರಸ್ತೆ, ಚರಂಡಿ, ಬೀದಿ ದೀಪ, ಸ್ವಚ್ಛತೆ ಹಾಗೂ ಇನ್ನಿತರ ಮೂಲ ಸೌಕರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸದ ಕಾರಣ ಅಲ್ಲಿಯ ರಸ್ತೆಗಳು ಹಳ್ಳ ಬಿದ್ದು ಕಾರ್ಮಿಕರು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಂಚರಿಸುವುದು ದುಸ್ತರವಾಗಿತ್ತು. ಮಳೆ ಸುರಿದಾಗ ಗುಂಡಿಗಳಲ್ಲಿ ನೀರು ತುಂಬಿ ರಸ್ತೆಗಳೇ ಕಾಣದೇ ಹಲವು ಬಾರಿ ಅಪಘಾತಗಳು ಸಂಭವಿಸಿದ್ದೂ ಉಂಟು.

ಅಲ್ಲದೇ ರಸ್ತೆ ಬದಿಯಲ್ಲಿ ಕಸ ತಂದು ಸುರಿಯುತ್ತಿದ್ದ ಕಾರಣ ಅಶುಚಿತ್ವ ತಾಂಡವವಾಡುತ್ತಿತ್ತು. ಗಿಡ–ಗಂಟಿಗಳು ಬೆಳೆದಿದ್ದರಿಂದ ಕೈಗಾರಿಕಾ ಪ್ರದೇಶದಲ್ಲಿ ಸಂಚಾರ ದುಸ್ತರವಾಗುತ್ತಿತ್ತು.

ಇನ್ಫೋಸಿಸ್ ಟೆಕ್ನಾಲಜಿಸ್ ರಸ್ತೆಯು ಈಗಾಗಲೇ ಜೋಡಿ ರಸ್ತೆಯಾಗಿದ್ದು, ಅದನ್ನು ಹಗಲೀಕರಣ ಮಾಡಿ, ನಾಲ್ಕು ಪಥದ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ಕೈಗೊಳ್ಳಲಿದ್ದು, ಎರಡು ಬದಿ ಕಾಂಕ್ರೀಟ್ ಬಾಕ್ಸ್ ಡ್ರೇನೇಜ್ ಮಧ್ಯೆ ಮೀಡಿಯನ್ ಅಭಿವೃದ್ಧಿ ಹಾಗೂ ಸ್ಟ್ರೀಟ್ ಲೈಟ್ ಅಳವಡಿಸುವ ಕೆಲಸವು (60 ಲಕ್ಷ ರೂ.) ಟೆಂಡರ್‌ನಲ್ಲಿ ಸೇರಿದೆ. ಅದೇ ರೀತಿ ಹೆಬ್ಬಾಳು ರಿಂಗ್ ರೋಡ್ ಮತ್ತು ಆಟೋಮೋಟಿವ್ ಆಕ್ಸೆಲ್ ಜಂಕ್ಷನ್ ನಡುವೆ 2.4 ಕಿ.ಮೀ. ಉದ್ದದ ರಸ್ತೆಯನ್ನು 7 ಮೀಟರ್ ಹಗಲಕ್ಕೆ ವಿಸ್ತರಿಸಿ ಎರಡು ಕಡೆ ಕಾಂಕ್ರೀಟ್ ಬಾಕ್ಸ್ ಡ್ರೈನ್ (4.99 ಕೋಟಿ ರೂ.) ಮಾಡಿ ಅಭಿವೃದ್ಧಿಪಡಿಸಲಾಗುವುದು. ಅದರ ಜೊತೆಗೆ ಹೂಟಗಳ್ಳಿಯ ಸಂತೆ ಮೈದಾನದ ಬಳಿ ಮಳೆ ನೀರು ಚರಂಡಿ, ಕೂರ್ಗಳ್ಳಿಯ ಅರಳಿಮರದಿಂದ ಕೆಐಎಡಿಬಿ ಜೋಡಿ ರಸ್ತೆವರೆಗೆ, ಹಾಲಿನ ಡೈರಿ ಮುಖ್ಯ ರಸ್ತೆಯಿಂದ ಹಳೆ ಅರಣ್ಯ ಭವನ ಸರ್ಕಲ್‌ವರೆಗೆ ಚರಂಡಿ ಕೆಲಸ, ವಿವಿಧೆಡೆ ಮಳೆ ನೀರು ಚರಂಡಿ, ಯುಜಿಡಿ, ನೀರು ಸರಬರಾಜು ಪೈಪ್ ಲೈನ್ ಸೇರಿದಂತೆ ಹಲವು ಬಗೆಯ ಕಾಮಗಾರಿಗಳನ್ನು ಹೂಟಗಳ್ಳಿ, ಬೆಳವಾಡಿ, ಕೂರ್ಗಳ್ಳಿ ಸುತ್ತಮುತ್ತಲಿನ ಪ್ರದೇಶದಲ್ಲಿ ಕೈಗೊಳ್ಳಲು ಟೆಂಡರ್ ಕರೆಯಲಾಗಿದೆ ಎಂದು ಹೂಟಗಳ್ಳಿ ನಗರಸಭೆ ಆಯುಕ್ತ ಸಿ.ಚಂದ್ರಶೇಖರ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಜ.18, ನಾತ್ ಸ್ಪರ್ಧೆ

ಮೈಸೂರು,ಜ.12(ಪಿಎಂ)– ಕರ್ನಾಟಕ ನಾತ್ ಅಕಾಡೆಮಿ ಮೈಸೂರು ಘಟಕದ ವತಿಯಿಂದ ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗಾಗಿ ನಾತ್ ಸ್ಪರ್ಧೆಯನ್ನು ಜ.18ರಂದು ನಗರದ ಉದಯಗಿರಿಯ ಮೆಜೆಸ್ಟಿಕ್ ಶಾಲೆಯಲ್ಲಿ ಆಯೋಜಿಸಲಾಗಿದೆ. ಆಸಕ್ತರು ಮೊ. 98866 87550, 88615 05058, 9380074094 ಮೂಲಕ ನೋಂದಾಯಿಸಬಹುದು. ನೋಂದಾಯಿಸಲು ಜ.15ರ ಸಂಜೆ 5ರವರೆಗೆ ಅವಕಾಶವಿದೆ.



ತೆಲಂಗಾಣದಲ್ಲಿ ನಡೆದ ಆಲ್ ಇಂಡಿಯಾ ಮಾಸ್ಟರ್ ಈಜು ಚಾಂಪಿಯನ್‌ಶಿಪ್‌ನಲ್ಲಿ 50 ಮೀ. ಬಟರ್ ಫ್ಲೈ, 50 ಮೀ. ಫ್ರಿ ಸ್ಟೈಲ್‌ನಲ್ಲಿ ಮೈಸೂರಿನ ಈಜು ತರಬೇತುದಾರರಾದ ವಿ.ಜಗದೀಶ್ ಎರಡು ಚಿನ್ನದ ಪದಕ ಪಡೆದಿದ್ದಾರೆ.

ಚಾ.ಬೆಟ್ಟದ ನಂದಿ ಮಾರ್ಗದ ಕಾಂಕ್ರಿಟ್ ತಡೆಗೋಡೆ ನಿರ್ಮಾಣ ಶೀಘ್ರ ಮುಗಿಸಿ

ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪ ಕಟ್ಟಾಜ್ಞೆ



ಮೈಸೂರಿನ ಚಾಮುಂಡಿಬೆಟ್ಟದ ನಂದಿ ಮಾರ್ಗದ ರಸ್ತೆ ಕುಸಿದ ಸ್ಥಳದಲ್ಲಿ ನಿರ್ಮಾಣ ಮಾಡುತ್ತಿರುವ ಕಾಂಕ್ರಿಟ್ ತಡೆಗೋಡೆ ಕಾಮಗಾರಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪ ಭಾನುವಾರ ಪರಿಶೀಲನೆ ನಡೆಸಿದರು.

ಮೈಸೂರು, ಜ.12(ಬಿಎಲ್‌ಯು)– ಮೈಸೂರಿನ ಚಾಮುಂಡಿಬೆಟ್ಟದ ನಂದಿ ಮಾರ್ಗದ ರಸ್ತೆ ಕುಸಿದ ಜಾಗದಲ್ಲಿ ನಿರ್ಮಾಣ ಮಾಡುತ್ತಿರುವ ಕಾಂಕ್ರಿಟ್ ತಡೆಗೋಡೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಅಧಿಕಾರಿಗಳಿಗೆ ಕಟ್ಟಾಜ್ಞೆ ಮಾಡಿದ್ದಾರೆ.

ಕಾಂಕ್ರಿಟ್ ತಡೆಗೋಡೆ ನಿರ್ಮಾಣ ಸ್ಥಳಕ್ಕೆ ನಿನ್ನೆ ಖುದ್ದು ಭೇಟಿ ನೀಡಿದ ಡಾ.ಮಹದೇವಪ್ಪ ನೆನೆಗುದಿಗೆ ಬಿದ್ದಿರುವ ಕಾಮಗಾರಿ ಪರಿಶೀಲಿಸಿದರು.

ಬೆಟ್ಟದ ನಂದಿ ಮಾರ್ಗದ ರಸ್ತೆ ಮೂರು ಕಡೆ ಕುಸಿದಿತ್ತು. ಈ ಹಿನ್ನೆಲೆಯಲ್ಲಿ ನಂದಿ ಮಾರ್ಗವನ್ನು ಸಂಪೂರ್ಣವಾಗಿ ಬಂದ್ ಮಾಡಲಾಗಿತ್ತು. ತರುವಾಯ ತಜ್ಞರ ಸಲಹೆ ಮೇರೆಗೆ ವೈಜ್ಞಾನಿಕ ರೀತಿಯ ಕಾಂಕ್ರಿಟ್ ತಡೆಗೋಡೆ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಯಿತು.

ಆದರೆ ಹಲವು ವರ್ಷ ಕಳೆದರೂ ಇನ್ನು ಕಾಮಗಾರಿ ಪೂರ್ಣಗೊಳ್ಳದ ಹಿನ್ನೆಲೆಯಲ್ಲಿ ಜನಸಾಮಾನ್ಯರಿಂದ ಆಕ್ರೋಶ ವ್ಯಕ್ತವಾಗಿತ್ತು. ಈ ಹಿನ್ನೆಲೆಯಲ್ಲಿ ಡಾ.ಮಹದೇವಪ್ಪ ಅವರು ತಡೆಗೋಡೆ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಕುರಿತಂತೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು, ನಂದಿ ಮಾರ್ಗ ಕಿರಿದಾಗಿರುವ ಕಾರಣ ವಾಹನ ಚಾಲನೆ ಕಷ್ಟಕರವಾಗಿದೆ. ಈ ಹಿನ್ನೆಲೆಯಲ್ಲಿ ಗುಣಮಟ್ಟ, ಸುರಕ್ಷಿತ ರಸ್ತೆಯನ್ನು ಮರು ನಿರ್ಮಾಣ ಮಾಡಬೇಕು ಎಂದು ಸೂಚನೆ ನೀಡಿದ್ದಾರೆ.

ಇದುವರೆಗೆ ಪಂಚ ಗ್ಯಾರಂಟಿಗಳಿಗೆ 1.10 ಲಕ್ಷ ಕೋಟಿ ಹಣ ವಿನಿಯೋಗ

ಜೊತೆಗೆ 1.36 ಲಕ್ಷ ಕೋಟಿ ಅಭಿವೃದ್ಧಿಗೆ ಮೀಸಲು



ದಿನೇಶ್ ಗೂಳಿಗೌಡ

ಚಿತ್ರದುರ್ಗ, ಜ.12– ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ರಾಜ್ಯ ಸರ್ಕಾರ ಈವರೆಗೆ 1.10 ಲಕ್ಷ ಕೋಟಿ ರೂ. ಹಣವನ್ನು ವ್ಯಯಿಸಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

ಜಿಲ್ಲೆಯ ಹೊಳಲ್ಕೆರೆ ತಾಲೂಕು ಪಂಚಾಯ್ತಿಯಲ್ಲಿ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿ, ಗ್ಯಾರಂಟಿ ಯೋಜನೆಗಳಿಗೆ ಹಣ ನೀಡುವುದರ ಜೊತೆಗೆ ಅಭಿವೃದ್ಧಿ ಕಾಮಗಾರಿಗಳಿಗೂ ಬಜೆಟ್‌ನಲ್ಲಿ 1.36 ಲಕ್ಷ ಕೋಟಿ ರೂ. ಹಣವನ್ನು ಮೀಸಲಿಡಲಾಗಿದೆ ಎಂದರು.

ಕರ್ನಾಟಕದಲ್ಲಿ ಜಾರಿಗೆ ಬಂದ ಐದು ಗ್ಯಾರಂಟಿ ಯೋಜನೆಗಳು ರಾಜ್ಯ ಮಟ್ಟಕ್ಕೆ ಸೀಮಿತವಾಗದೆ, ಇಡೀ ದೇಶದ ರಾಜಕೀಯ ಆಡಳಿತದ ದಿಕ್ಕನ್ನೇ ಬದಲಿಸಿವೆ. ಬಡತನ ನಿವಾರಣೆ, ಮಹಿಳಾ ಸಬಲೀಕರಣ ಮತ್ತು ಸಾಮಾಜಿಕ ಭದ್ರತೆ ನಿಟ್ಟಿನಲ್ಲಿ ಹೊಸ ಇತಿಹಾಸ ಬರೆದಿದೆ. ಜನಕಲ್ಯಾಣದ ಕಲ್ಪನೆಯನ್ನು ಪುನರ್ ವ್ಯಾಖ್ಯಾನ ನೀಡಿವೆ. ಬಡವರು, ಮಹಿಳೆಯರು ಮತ್ತು ಯುವಕರನ್ನು ಕೇಂದ್ರವಾಗಿಸಿಕೊಂಡ ಈ ಯೋಜನೆಗಳು ರಾಷ್ಟ್ರಮಟ್ಟದಲ್ಲಿ ನೀತಿ ರೂಪಿಸುವವರ ಮೇಲೆ ಪ್ರಭಾವ ಬೀರಿವೆ. ಗ್ಯಾರಂಟಿ ಯೋಜನೆಗಳು ಜನರ ಬದುಕಿಗೆ ಆಸರೆಯಾಗಿವೆ. ವಿರೋಧಿಸುವವರು ಕೂಡ ಈ ಯೋಜನೆಗಳ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳ ಕುರಿತು ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯಲ್ಲಿ ವ್ಯಾಪಕ ಪ್ರಚಾರ ಕಾರ್ಯಕೈಗೊಳ್ಳಬೇಕು. ಹೊಳಲ್ಕೆರೆ ತಾಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 51,393 ಫಲಾನುಭವಿಗಳು ನೋಂದಣಿಯಾಗಿದ್ದು 24 ಕಂತುಗಳ ಹಣ ಬಿಡುಗಡೆ ಆಗಿದೆ. ಗೃಹಜ್ಯೋತಿ ಯೋಜನೆಯಡಿ 45,897 ಕುಟುಂಬಗಳು ಉಚಿತ ವಿದ್ಯುತ್ ಬಳಕೆ ಮಾಡುತ್ತಿವೆ. ಅನ್ನಭಾಗ್ಯ ಯೋಜನೆಯಡಿ 45,222 ಕುಟುಂಬಗಳಿಗೆ ಪ್ರತಿ ತಿಂಗಳು 2800 ಮೆಟ್ರಿಕ್ ಟನ್ ಆಹಾರ ಧಾನ್ಯ ಪೂರೈಕೆ ಮಾಡಲಾಗುತ್ತಿದೆ. ಶಕ್ತಿ ಯೋಜನೆಯಡಿ 1.54 ಕೋಟಿ ಮಹಿಳೆಯರು ಉಚಿತವಾಗಿ ಬಸ್‌ಗಳಲ್ಲಿ ಪ್ರಯಾಣಿಸಿದ್ದಾರೆ. ಯುವನಿಧಿ ಯೋಜನೆಯಡಿ 1089 ಯುವಕ–ಯುವತಿಯರಿಗೆ ನಿರುದ್ಯೋಗ ಭತ್ಯೆ ನೀಡಲಾಗಿದೆ ಎಂದು ಸಭೆಯಲ್ಲಿ ಪಡೆದ ಮಾಹಿತಿ ತಿಳಿಸಿದರು.

ಸಭೆಯಲ್ಲಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಶಿವಪ್ರಕಾಶ್, ಚಿತ್ರದುರ್ಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಶಿವಣ್ಣ, ಉಪಾಧ್ಯಕ್ಷ ಮೈಲಾರಪ್ಪ ತಾಲೂಕು ಅಧ್ಯಕ್ಷ ಹನುಮಂತಪ್ಪ ಹಾಗೂ ಸಮಿತಿ ಸದಸ್ಯರು ಹಾಜರಿದ್ದರು.

ಎಂತಹ ಮಹತ್ವದ ಸುಧಾರಣೆ ತಂದರೂ ಎಸ್‌ಎಸ್‌ಎಲ್‌ಸಿ ಪೂರ್ವಭಾವಿ ಪರೀಕ್ಷೆ ಪ್ರಶ್ನೆ ಪತ್ರಿಕೆ ಬಯಲು

ಪೊಲೀಸರಿಗೆ ದೂರು ಸಲ್ಲಿಕೆ

ಬೆಂಗಳೂರು, ಜ. 12(ಕೆಎಂಶಿ)– ವಿದ್ಯಾರ್ಥಿ ಜೀವನದ ಅತ್ಯಂತ ಮಹತ್ವದ ಘಟ್ಟ ಎಂದು ಬಣ್ಣಿಸಲಾಗಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮಹತ್ವದ ಸುಧಾರಣೆಗಳನ್ನು ಮಾಡುತ್ತಿರುವ ರಾಜ್ಯ ಸರ್ಕಾರ, ಈ ನಿಟ್ಟಿನಲ್ಲಿ ಮೂರು ಪರೀಕ್ಷೆ ವ್ಯವಸ್ಥೆ ಮಾಡಿದೆ.

ಅಲ್ಲದೆ ಪ್ರಶ್ನೆ ಪತ್ರಿಕೆ ಸೋರಿಕೆ ತಡೆಗಟ್ಟಲು ಆನ್‌ಲೈನ್ ಮೂಲಕ ಪ್ರಶ್ನೆ ಪತ್ರಿಕೆ ರವಾನಿಸುವ ವ್ಯವಸ್ಥೆ ಮಾಡಲಾಗಿದೆ. ಈ ವ್ಯವಸ್ಥೆ ಎಷ್ಟರಮಟ್ಟಿಗೆ ಸಮರ್ಪಕವಾಗಿ ಕೆಲಸ ಮಾಡಲಿದೆ ಎಂದು ಪರಿಶೀಲಿಸಲು ನೂತನ ವ್ಯವಸ್ಥೆ ಅಡಿಯಲ್ಲಿ ಪೂರ್ವಭಾವಿ ಪರೀಕ್ಷೆ ನಡೆಸುತ್ತಿದೆ.

ನೂತನ ವ್ಯವಸ್ಥೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಅಸಾಧ್ಯ ಎಂದು ಭಾವಿಸಿರುವಾಗಲೇ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಕೂಡ ಸೋರಿಕೆಯಾಗಿ ಸರ್ಕಾರಕ್ಕೆ ಸವಾಲು ಎದುರಾಗಿದೆ. ಇದನ್ನು ಗಂಭೀರವಾಗಿ ಪರಿಗಣಿಸಿದ ಶಿಕ್ಷಣ ಇಲಾಖೆ ಪೊಲೀಸರಿಗೆ ದೂರು ನೀಡಿತ್ತು. ಕೆಲವರ ವಶಕ್ಕೆ ಪಡೆದು ತನಿಖೆ ಕೈಗೊಂಡಿದ್ದಾರೆ.

ತುಮಕೂರಿನ ಶಾಲೆಯೊಂದರ ಮುಖ್ಯೋಪಾಧ್ಯಾಯ ವಿ.ಡಿ.ಗಿರೀಶ್, ರಾಮನಗರದ ಸಹ ಶಿಕ್ಷಕ ಅಹಮದ್ ಖಾನ್, ಕಲಬುರಗಿ ಜಿಲ್ಲೆಯ ಮುಖ್ಯ ಶಿಕ್ಷಕಿ ಶಾಹಿದಾ ಬೇಗಂ, ಶಿಕ್ಷಕ ಮೊಹಮ್ಮದ್ ಸಿರಾಜುದ್ದೀನ್, ಸಹ ಶಿಕ್ಷಕಿ ಫಾಹ್ಮದಾ, ಶಿಕ್ಷಕಿ ಫರ್ಜಾನಾ ಬೇಗಂ ಬಂಧಿತ ಆರೋಪಿಗಳಾಗಿದ್ದಾರೆ. ಇವರ ಜೊತೆಗೆ ಇಬ್ಬರು ಅಪ್ರಾಪ್ತ ವಿದ್ಯಾರ್ಥಿಗಳನ್ನೂ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ.

ಚಲನಚಿತ್ರ ಸಾಹಿತ್ಯ ವಾರ್ಷಿಕ ಪ್ರಶಸ್ತಿ: ರಘುನಾಥ, ಪ್ರಕಾಶ್‌ರಾಜ್ ಕೃತಿ ಆಯ್ಕೆ



ಬೆಂಗಳೂರು: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2020 ಹಾಗೂ 2021ನೇ ಕ್ಯಾಲೆಂಡರ್ ವರ್ಷಗಳ ರಾಜ್ಯ ಚಲನಚಿತ್ರ ವಾರ್ಷಿಕ ಸಾಹಿತ್ಯ ಪ್ರಶಸ್ತಿಗಳನ್ನು ಪ್ರಕಟಿಸಿದೆ. 2020ನೇ ಕ್ಯಾಲೆಂಡರ್ ವರ್ಷದ ಚಲನಚಿತ್ರ ಸಾಹಿತ್ಯ ಪ್ರಶಸ್ತಿಗೆ ಬಳ್ಳಾರಿ ಜಿಲ್ಲೆ ಸಿರಿಗೇರಿಯ ಅನ್ನಪೂರ್ಣ ಪ್ರಕಾಶನ ಪ್ರಕಟಿಸಿದ, ಹಿರಿಯ ಪತ್ರಕರ್ತ ರಘುನಾಥ ಚ.ಹ.ಅವರು ಆಯ್ದ 20 ಸಿನೆಮಾಗಳ ಕುರಿತು ಬರೆದ ಲೇಖನಗಳ ಸಂಗ್ರಹ 'ನಮೋ ವೆಂಕಟೇಶ' ಕೃತಿ ಆಯ್ಕೆಯಾಗಿದೆ. ಆಯುಕ್ತೆ ಹೇಮಂತ್ ಎಂ.ನಿಂಬಾಳ್ಕರ್ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿದ್ದ ಪತ್ರಕರ್ತ ಡಾ.ರಾಜಶೇಖರ ಹತಗುಂದಿ ಹಾಗೂ ಬಸವರಾಜ ಮೇಗಲಕೇರಿ 2020ನೇ ಕ್ಯಾಲೆಂಡರ್ ವರ್ಷದ ಕೃತಿಯನ್ನು ಆಯ್ಕೆ ಮಾಡಿದ್ದರು.

2021 ನೇ ಕ್ಯಾಲೆಂಡರ್ ವರ್ಷದ ಚಲನಚಿತ್ರ ವಾರ್ಷಿಕ ಸಾಹಿತ್ಯ ಪ್ರಶಸ್ತಿಗೆ ಬೆಂಗಳೂರಿನ ಸಿರಿಗಂಧ ಪ್ರಕಾಶನ ಪ್ರಕಟಿಸಿರುವ ,ಲೇಖಕ ಹಾಗೂ ಚಲನಚಿತ್ರ ನಿರ್ದೇಶಕ ಪ್ರಕಾಶರಾಜ್ ಮೇಹು ಅವರು ಬರೆದ ಡಾ.ರಾಜಕುಮಾರ್ ಬದುಕಿನ ಕುರಿತ 'ಅಂತರಂಗದ ಅಣ್ಣ' ಕೃತಿ ಆಯ್ಕೆಯಾಗಿದೆ. ಸಾಹಿತಿ ಡಾ.ಚಿದಾನಂದ ಸಾಲಿ ಹಾಗೂ ಪತ್ರಕರ್ತ ಡಾ.ಶರಣು ಹುಲ್ಲೂರು ಅವರು ಪ್ರಶಸ್ತಿ ಆಯ್ಕೆ ಸಮಿತಿಯ ಸದಸ್ಯರಾಗಿದ್ದರು.

ಪ್ರಶಸ್ತಿಯು ಲೇಖಕರು ಹಾಗೂ ಪ್ರಕಾಶಕರಿಬ್ಬರಿಗೂ ತಲಾ 20 ಸಾವಿರ ರೂ.ನಗದು ಹಾಗೂ 50 ಗ್ರಾಂ ಬೆಳ್ಳಿ ಪದಕಗಳನ್ನು ಒಳಗೊಂಡಿದೆ ಎಂದು ಎಂದು ವಾರ್ತಾ ಇಲಾಖೆ ಜಂಟಿ ನಿರ್ದೇಶಕ, ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿ ಮಂಜುನಾಥ ಡೊಳ್ಳಿನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಎಸ್‌ವೈ ಅವರನ್ನು ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಮಾಡಿ

ದಾವಣಗೆರೆ: ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರನ್ನು ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಎಂದು ಸಮಾಜದ ಮುಖಂಡರಿಗೆ ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಮನವಿ ಮಾಡಿದರು.

ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾಗಿದ್ದ ಶಾಮನೂರು ಶಿವಶಂಕರಪ್ಪನವರು ವೀರಶೈವ ಲಿಂಗಾಯತ ಸಮಾಜದ ಎಲ್ಲಾ ಒಳಪಂಗಡಗಳನ್ನು ಒಂದು ಮಾಡಿದ್ದರು. ಗುರು ವಿರಕ್ತರನ್ನು ಒಂದೇ ವೇದಿಕೆಯ ಮೇಲೆ ತಂದಿದ್ದರು. ವೀರಶೈವ ಲಿಂಗಾಯತ ಎರಡು ಒಂದೇ ಎಂದು ಸರ್ಕಾರದ ವಿರುದ್ಧವೇ ಗುಡುಗಿದ್ದರು. ಆ ಸಂದರ್ಭದಲ್ಲಿ ಯಡಿಯೂರಪ್ಪನವರು ಕೂಡ ಸಾಥ್ ನೀಡಿದ್ದರು ಎಂದರು.

ಯಡಿಯೂರಪ್ಪನವರು ಕೂಡ ಸಮಾಜದ ಎಲ್ಲಾ ಒಳ ಪಂಗಡಗಳನ್ನು ಒಂದು ಮಾಡಲು ಶ್ರಮಿಸಿದ್ದಾರೆ. ಆದ್ದರಿಂದ ಮಹಾಸಭಾ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳಾದ ಈಶ್ವರ್ ಖಂಡ್ರೆ, ರಾಜ್ಯಾಧ್ಯಕ್ಷ ಶಂಕರ್ ಬಿದರಿಯವರಿಗೆ ಮನವಿ ಮಾಡುತ್ತೇವೆ. ರಾಷ್ಟ್ರೀಯ ಅಧ್ಯಕ್ಷರಾಗಿ ಯಡಿಯೂರಪ್ಪ ಅವರನ್ನು ಆಯ್ಕೆ ಮಾಡಬೇಕು ಎಂದರು.

ಚಿನ್ನಮ್ಮ ನಿಧನ



ನಾಪೋಕ್ಲು, ಜ.12– ಸಮೀಪದ ಪಾಲೂರು ಗ್ರಾಮ ನಿವಾಸಿ ಮಲ್ಲೀರ ದಿವಂಗತ ದೇವಯ್ಯ ಅವರ ಪತ್ನಿ ಚಿನ್ನಮ್ಮ (93) ನಿನ್ನೆ ನಿಧನರಾದರು. ಮೃತರು ಮೂವರು ಪುತ್ರರು ಹಾಗೂ ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಪಾಲೂರು ಗ್ರಾಮದಲ್ಲಿ ಜರುಗಿತು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

13.1.2026 ಮಂಗಳವಾರ, ಮಳೆ ನಕ್ಷತ್ರ: ಉಷಾ, 11.01.2026ರಿಂದ 23.01.2026 ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಪುಷ್ಯ ಮಾಸ, ಕೃಷ್ಣ ಪಕ್ಷ, ತಿಥಿ: ದಶಮಿ, ನಕ್ಷತ್ರ: ವಿಶಾಖ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

- **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ:** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಬೆಳಗ್ಗೆಯಿಂದ ಮಹಾತೋಭಾರ ಶ್ರೀ ಧರ್ಮ ಶಾಸ್ತಾ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥ–ಪ್ರಸಾದ ವಿನಿಯೋಗ, ಸ್ಥಳ: ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನ, ರಾಘವೇಂದ್ರನಗರ.
- **ಮೈಸೂರು ವಿಶ್ವವಿದ್ಯಾನಿಲಯ ಪ್ರಸಾರಾಂಗ, ಶೇಷಾದ್ರಿಪುರಂ ಪದವಿ ಕಾಲೇಜು, ಕನ್ನಡ ವಿಭಾಗ:** ಪ್ರಚಾರೋಪನ್ಯಾಸ, ಪ್ರಾಸ್ತಾವಿಕ ನುಡಿ: ಪ್ರಸಾರಾಂಗ ನಿರ್ದೇಶಕ ಪ್ರೊ. ಎಂ. ನಂಜಯ್ಯ ಹೊಂಗನೂರು, ಅಧ್ಯಕ್ಷತೆ: ಶೇಷಾದ್ರಿಪುರಂ ಪದವಿ ಕಾಲೇಜು ಪ್ರಾಂಶುಪಾಲರಾದ ಡಾ. ಸೌಮ್ಯ ಈರಪ್ಪ ಕೆ., ಉಪನ್ಯಾಸ: ಪ್ರಾಚ್ಯ ವಿದ್ಯಾ ಸಂಶೋಧನಾಲಯದ ವಿಶ್ರಾಂತ ಸಂಶೋಧಕ ಪ್ರೊ. ಹೆಚ್.ವಿ. ನಾಗರಾಜರಾವ್, ಸ್ಥಳ: ಕಾಲೇಜಿನ ಸಭಾಂಗಣ, ಬೆಳಗ್ಗೆ 11 ಗಂಟೆಗೆ.
- **ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯ, ಮೈಸೂರು ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ:** ರಂಗಭೂಮಿ ಮತ್ತು ಪ್ರದರ್ಶಕ ಕಲೆಗಳ ಕುರಿತು ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನ, ಸ್ಥಳ: ಕೆಎಸ್‌ಜಿಹೆಚ್ ಸಭಾಂಗಣ, ವಿಶ್ವವಿದ್ಯಾನಿಲಯ ಆವರಣ, ಬೆಳಗ್ಗೆ 11.30ರಿಂದ.
- **ಶ್ರೀ ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನ, ಮೈಸೂರು:** ವಿಶ್ವಮಾನವ ಕುವೆಂಪು ಜಯಂತಿ ಮಹೋತ್ಸವ ಹಾಗೂ 'ಅನಿಕೇತನ ಪ್ರಶಸ್ತಿ' ಪ್ರದಾನ ಸಮಾರಂಭ, ಉದ್ಘಾಟನೆ: ಮಾಜಿ ಸಂಸದ ಪ್ರತಾಪ್ ಸಿಂಹ, ಪುಷ್ಪಾರ್ಚನೆ: ಸಂಧ್ಯಾ ಸುರಕ್ಷ ಟ್ರಸ್ಟ್ ಅಧ್ಯಕ್ಷ ಡಾ.ಬಿ.ಆರ್.ನಟರಾಜ ಜೋಯ್ಸ್, ಅಧ್ಯಕ್ಷತೆ: ಚುಟುಕು ಯುಗಾಚಾರ್ಯ ಡಾ. ಎಂ.ಜಿ.ಆರ್. ಅರಸ್, ಸ್ಥಳ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘ, ಮಧ್ಯಾಹ್ನ 12.30ಕ್ಕೆ
- **ಸಂಶೋಧಕರ ಸಂಘ, ಮೈಸೂರು ವಿಶ್ವವಿದ್ಯಾನಿಲಯ, ದಲಿತ ಒಕ್ಕೂಟ, ಮೈಸೂರು ವಿವಿ:** ಅಕ್ಷರದವ್ವ ಸಾವಿತ್ರಿ ಬಾಯಿ ಫುಲೆ ಅವರ 195ನೇ ಜನ್ಮ ದಿನಾಚರಣೆ ಹಾಗೂ ವಿಶ್ವಮಾನವ ಕುವೆಂಪು ಅವರ 121 ಜನ್ಮ ದಿನಾಚರಣೆ, ಉದ್ಘಾಟನೆ: ಕೊಳ್ಳೇಗಾಲದ ಶಾಸಕ ಎ.ಆರ್.ಕೃಷ್ಣಮೂರ್ತಿ, ಪುಷ್ಪಾರ್ಚನೆ: ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ, ಕುವೆಂಪು ಅವರ ಸಾಹಿತ್ಯದಲ್ಲಿ ವೈಚಾರಿಕೆ ಕುರಿತು ಚಿಂತಕರಾದ ಡಾ.ಕೃಷ್ಣಮೂರ್ತಿ ಚಮರಂ, ಸಾವಿತ್ರಿ ಬಾಯಿ ಫುಲೆ ಅವರ ಶಿಕ್ಷಣದ ಮಾರ್ಗ ಕುರಿತು ಮಹಾರಾಜ ಕಾಲೇಜು ಪ್ರಾಧ್ಯಾಪಕಿ ಪ್ರೊ.ವಿಜಯಲಕ್ಷ್ಮಿ ಮನಾಪುರೆ, ಅಧ್ಯಕ್ಷತೆ: ಪ್ರಸಾರಾಂಗದ ನಿರ್ದೇಶಕ ಪ್ರೊ. ನಂಜಯ್ಯ ಹೊಂಗನೂರು, ಸ್ಥಳ: ಇಎಂಎಂಆರ್‌ಸಿ ಸಭಾಂಗಣ, ಮಾನಸ ಗಂಗೋತ್ರಿ, ಸಂಜೆ 4.30ಕ್ಕೆ.
- **ಚಾಮುಂಡಿಬೆಟ್ಟ ಅಭಿವೃದ್ಧಿ ಪ್ರಾಧಿಕಾರ:** ಶ್ರೀ ಚಾಮುಂಡೇಶ್ವರಿ ಅಮ್ಮನವರ ಕೊಠಾರೋತ್ಸವ, ಗೋಷ್ಠಿ ಗಾಯನ, ಸ್ಥಳ: ಚಾಮುಂಡಿಬೆಟ್ಟದ ದೇವಸ್ಥಾನದ ಬಳಗ, ಸಂಜೆ 6ರಿಂದ.
- **ಶ್ರೀ ಮಹಾಜನ ಸಭಾ ಟ್ರಸ್ಟ್:** ತಿರುಪ್ಪಾವೈ ಪಾರಾಯಣ, ಆಧ್ಯಾತ್ಮಿಕ ಪ್ರವಚನಕಾರರಾದ ಡಾ. ಎನ್.ಕೆ. ರಾಮ್‌ಶೇಷನ್ ಅವರಿಂದ, ಸ್ಥಳ: ಶ್ರೀರಾಮ ಮಂದಿರ, ಕಾಂತರಾಜ ರಸ್ತೆ, ಕೃಷ್ಣಮೂರ್ತಿಪುರಂ, ಸಂಜೆ 6.30ರಿಂದ.

ಬಾಬಾ ಸಾಹೇಬ್ ಸಮತೆಯೆಡೆಗೆ ನಡಿಗೆ ರಾಷ್ಟ್ರೀಯ ನಾಟಕೋತ್ಸವ–2026

ಬಹುರೂಪಿ ಚಲನಚಿತ್ರೋತ್ಸವ–2026

(ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಂಗಾಯಣ, ಮೈಸೂರು)

- **ಶ್ರೀರಂಗ ರಂಗಮಂದಿರ:** ಬೆಳಗ್ಗೆ 10ಕ್ಕೆ ಸಂವಿಧಾನ್ ಮೇಕಿಂಗ್ ಆಫ್ ದಿ ಇಂಡಿಯನ್ ಕಾನ್ಸ್‌ಟಿಟ್ಯೂಷನ್ (ಹಿಂದಿ), ನಿರ್ದೇಶನ: ಆರ್.ಎಸ್. ಟಿವಿ, ಮಧ್ಯಾಹ್ನ 12ಕ್ಕೆ ಜೈ ಭೀಮ್ ಕಾಮ್ರೇಡ್–1 (ಹಿಂದಿ), ನಿರ್ದೇಶನ: ಆನಂದ ಪಟವರ್ಧನ್, ಮಧ್ಯಾಹ್ನ 2ರಿಂದ ಮಾರಿಕೊಂಡವರು (ಕನ್ನಡ), ನಿರ್ದೇಶನ: ಕೆ.ಶಿವರುದ್ರಯ್ಯ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತುಸಂಜೆ 6.10 ಸಾಧಕರ ಸೋಪಾನ–ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಸಹಬಾಳ್ವೆ, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ಅಮೃತಾ ನಿತಿನ್ ಶಾಸ್ತ್ರಿ ಮತ್ತು ಎಂ.ಎಸ್.ಲಕ್ಷೀಶ, ವ್ಯಾಖ್ಯಾನ –ಪ್ರೊ. ಮೊರಬದ ಮಲ್ಲಿಕಾರ್ಜುನ, 6.50 ರೈತರಿಗೆ ಸಲಹೆ, 7.15 ಮತ್ತು ಸಂಜೆ 5.40–ಪ್ರಾಯೋಜಿತ ಕಾರ್ಯಕ್ರಮ ಕೆ.ಎಸ್.ಓ.ಯು. ಮುಕ್ತವಾಣಿ, ಪ್ರಾಯೋಜಕರು–ಪ್ರಸಾರಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು, ವಿಷಯ–ಸಮಾಜ ಶಾಸ್ತ್ರ ಅಧ್ಯಯನ ಅವಕಾಶಗಳನ್ನು ಕುರಿತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಪ್ರೊ.ಎಚ್.ಆರ್.ಜಯಪಾಲ್ ಅವರೊಂದಿಗಿನ ಸಂದರ್ಶನದ ಮೊದಲ ಭಾಗ. ಪ್ರಸ್ತುತಿ: ಎನ್.ಕೇಶವಮೂರ್ತಿ, 8.30–ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ತುಮಕೂರು ಬಿ.ರವಿಶಂಕರ್ ನಿರ್ದೇಶನದಲ್ಲಿ ಲಯವಿನ್ಯಾಸ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹೊಂಗಿರಣ–ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ–ಎಸ್.ಲಕ್ಷ್ಮೀನಾರಾಯಣ, ಆರ್.ಲೋಕೇಶ್ವರಿ ಹಾಗೂ ಬಿ.ಜಿ.ಕವಿತಾ, **ಮಧ್ಯಾಹ್ನ:** 12.05 ವನಿತಾ ವಿಹಾರ–ಮೈಸೂರು ಜಿಲ್ಲೆ, ಕೆ.ಆರ್.ನಗರ ತಾಲೂಕಿನ ಶಾಶ್ವತಿ ಅಕ್ಕಮಹಾದೇವಿ ಬಳಗದ ಸದ್ಯಸೆಯರಿಂದ ಸಂಕ್ರಾಂತಿ ಹಬ್ಬದ ಕುರಿತು ಕಾರ್ಯಕ್ರಮ ವೈವಿಧ್ಯ, 12.35–ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ–ಪ್ರಧಾನ ಮಂತ್ರಿ ಜೀವನ್, ಜ್ಯೋತಿ ಬಿಮಾ ಯೋಜನೆ–ಮಾತನಾಡುತ್ತಾರೆ ಸತೀಶ್ ಬಿ. ಆರಾಧ್ಯ, 1.20–ಭಾವಗೀತೆಗಳು–ಶಿವಮೊಗ್ಗ ವೇಣುಗೋಪಾಲ್, 2.40–ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ ಡಾ.ಎಸ್.ಬಾಲಚಂದರ್–ವೀಣಾವಾದನ, 4.00–ಕಥಾಕಾಲಕ್ಷೇಪ –ಲವ–ಕುಶ, ಪ್ರಸ್ತುತಿ–ವಿದ್ವಾನ್ ಆರ್.ಗುರುರಾಜುಲು ನಾಯ್ಡು, 5.00 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 5.40 ಪ್ರಾಯೋಜಿತ ಕಾರ್ಯಕ್ರಮ ಕೆ. ಎಸ್. ಓ.ಯು. ಮುಕ್ತವಾಣಿ, ಪ್ರಾಯೋಜಕರು–ಪ್ರಸಾರಂಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು, ಸಮಾಜ ಶಾಸ್ತ್ರ ಅಧ್ಯಯನ ಅವಕಾಶಗಳನ್ನು ಕುರಿತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಪ್ರೊ.ಎಚ್.ಆರ್.ಜಯಪಾಲ್ ಅವರೊಂದಿಗಿನ ಸಂದರ್ಶನದ ಅಂತಿಮ ಭಾಗ. 6.50 ಕೃಷಿರಂಗ– ಕಿಸಾನ್‌ವಾಣಿ –ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ್ಯ ತರಂಗ–ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ, ಮೀನುಗಾರಿಕಾ ಇಲಾಖೆಯ ಜಲಸಂಪನ್ಮೂಲಗಳ ವಿಲೇವಾರಿ ಕುರಿತು ನಂಜನಗೂಡಿನ ಮೀನುಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕರಾದ ಜೆ.ಎಂ.ಪ್ರಶಾಂತ್ ಅವರೊಂದಿಗೆ ಸಂದರ್ಶನ, ಸಂದರ್ಶಕರು –ಎನ್.ಕೇಶವ ಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ–ಪ್ರಸ್ತುತಿ–ಬಿ. ದಿಗ್ವಿಜಯ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ–ಹರಿಪ್ರಸಾದ್ ಚೌರಸಿಯಾ–ಕೊಳಲು ವಾದನ, 8.30 ಹಿಂದಿ ಚಿತ್ರಗೀತೆಗಳು, 9.30 ಸವಿನೆನಪು, 10.00 ಆಕಾಶವಾಣಿ ಸಂಗೀತ್ ಸಮ್ಮೇಳನ್–2025, ಬೆಂಗಳೂರು ಬ್ರದರ್ಸ್–ಯುಗಳ ಹಾಡುಗಾರಿಕೆ.

ರಾಷ್ಟ್ರೀಯ ನಾಟಕೋತ್ಸವ–2026



- **ಭೂಮಿಗೀತ:** ಸಂಜೆ 6.30ರಿಂದ ಬಾಬ್ ಮಾರ್ಲೆ ಫ್ರಂ ಕೋಡಿಹಳ್ಳಿ ಕನ್ನಡ ನಾಟಕ, ಪಠ್ಯ ಆಕರ: ಎನ್.ಕೆ. ಹನುಮಂತಯ್ಯ, ಚಂದ್ರಶೇಖರ್ ಕೆ., ಕಮಟರ್ಗ: ವಿ.ಎಲ್. ನರಸಿಂಹಮೂರ್ತಿ, ರಚನೆ, ವಿನ್ಯಾಸ, ನಿರ್ದೇಶನ: ಲಕ್ಷ್ಮಣ್ ಕೆ.ಸಿ, ತಂಡ: ಜಂಗಮ ಕಲೆಕ್ಟರ್, ಬೆಂಗಳೂರು.
- **ವನರಂಗ:** ಸಂಜೆ 7ಕ್ಕೆ, ದದನ್ ರಾಜಾ–ಅಸ್ಸಾಮಿ ನಾಟಕ, ರಚನೆ: ಮದನ್ ರಾಭಾ, ನಿರ್ದೇಶನ: ಧನಂಜಯ ರಾಭಾ, ತಂಡ: ಬದುಂಗ್ ದುಪ್ಪ ಕಲಾಕೇಂದ್ರ, ರಾಮ್‌ಪುರ, ಅಸ್ಸಾಂ.
- **ಕಿರು ರಂಗಮಂದಿರ:** ಸಂಜೆ 7ಕ್ಕೆ, ಕುಹೂ–ಮಲೆಯಾಳಂ ನಾಟಕ, ರಚನೆ: ರಂಗರೂಪ, ನಿರ್ದೇಶನ: ಅರುಣ್‌ಲಾಲ್, ತಂಡ: ಲಿಟಲ್ ಅರ್ಥ್ ಸ್ಕೂಲ್ ಆಫ್ ಥಿಯೇಟಿಕ್, ಕೇರಳ.
- **ಕಲಾಮಂದಿರ:** ಬೆಳಗ್ಗೆ 11 ಮತ್ತು ಸಂಜೆ 7ಕ್ಕೆ, ರೂಪಾಂತರ–ಕನ್ನಡ ನಾಟಕ, ಪರಿಕಲ್ಪನೆ–ಕಲಿಯುವ ಮನೆ ಮಕ್ಕಳು, ವಿನ್ಯಾಸ ಮತ್ತು ನಿರ್ದೇಶನ: ರಾಜೇಶ್ ಮಾಧವನ್, ತಂಡ: ಕಲಿಯುವ ಮನೆ, ಮೈಸೂರು.

ಸುತ್ತೂರಿನಲ್ಲಿಂದು, ನಂಜನಗೂಡು ತಾಲೂಕು

- **ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ:** ಧನುರ್ಮಾಸದ ವಿಶೇಷ ಪೂಜೆ, ಸ್ಥಳ: ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃ ಗದ್ದುಗೆ, ಶ್ರೀ ಮಹೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ, ಶ್ರೀ ಸೋಮೇಶ್ವರ, ಶ್ರೀ ನಾರಾಯಣಸ್ವಾಮಿ ದೇವಸ್ಥಾನ, ಸುತ್ತೂರು ಶ್ರೀಕ್ಷೇತ್ರ, ಬೆಳಗ್ಗೆಯಿಂದ.

ಅಂತಿಮ ಹಂತದಲ್ಲಿ ಸಮಸ್ಯೆ ತಲೆದೋರಿ
ಪಿಎಸ್‌ಎಲ್‌ವಿ–ಸಿ62 ಮಿಷನ್ ವಿಫಲ

ನವದೆಹಲಿ: ಭಾರತದ ವಿಶ್ವಾಸಾರ್ಹ ಕಾರ್ಯನಿರತ ರಾಕೆಟ್ ಪೋಲಾರ್ ಸ್ಯಾಟಲೈಟ್ ಲಾಂಚ್ ವೆಹಿಕಲ್ (ಪಿಎಸ್‌ಎಲ್‌ವಿ–ಸಿ62) ಇಸ್ರೋ ಶ್ರೀಹರಿಕೋಟಾದಿಂದ ಉಡಾವಣೆಗೊಂಡಿತ್ತು. ಆದರೆ ಕೊನೆಯ ಹಂತದಲ್ಲಿ ಸಮಸ್ಯೆಗಳು ಕಂಡುಬಂದಿದ್ದು, ಇಸ್ರೋಗೆ ಹಿನ್ನಡೆಯಾಗಿದೆ.

ಈ ಕುರಿತು ಇಸ್ರೋ ಅಧ್ಯಕ್ಷರಾದ ವಿ. ನಾರಾಯಣನ್ ಪ್ರತಿಕ್ರಿಯಿಸಿದ್ದು, ಪಿಎಸ್‌ಎಲ್‌ವಿ–ಸಿ62 ಅನ್ನು ನಿಗದಿತ ಸಮಯಕ್ಕೆ ಉಡಾವಣೆ ಮಾಡಲಾಯಿತು. ಮೂರನೇ ಹಂತದ ವಿಭಜನೆವರೆಗೆ ಎಲ್ಲವೂ ಯೋಜನೆಯಂತೆ ನಡೆಯಿತು. ಆದರೆ ಮೂರನೇ ಹಂತದ ಅಂತ್ಯದಲ್ಲಿ ಸಮಸ್ಯೆಗಳು ಕಂಡುಬಂದವು. ಹಾರಾಟದ ಮಾರ್ಗದಲ್ಲಿ ವ್ಯತ್ಯಯ ಉಂಟಾಗಿದೆ. ಡೇಟಾವನ್ನು ವಿಶ್ಲೇಷಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದ ಮೊದಲ ಉಡಾವಣಾ ವೇದಿಕೆಯಿಂದ ಬೆಳಿಗ್ಗೆ 10:18ಕ್ಕೆ ರಾಕೆಟ್ ಉಡಾವಣೆಗೊಂಡಿತು. ಇದು 2026ರ ಮೊದಲ ಉಪಗ್ರಹ ಉಡಾವಣೆಯಾಗಿದ್ದು, ಪಿಎಸ್‌ಎಲ್‌ವಿ ಮೇಲಿನ ನಂಬಿಕೆಯನ್ನು ಮರುಸ್ಥಾಪಿಸುವ ಉದ್ದೇಶವನ್ನು ಇಸ್ರೋ ಹೊಂದಿತ್ತು.

2025ರ ಮೇನಲ್ಲಿ ನಡೆದ ಪಿಎಸ್‌ಎಲ್‌ವಿ–ಸಿ61 ಮಿಷನ್ ಕೂಡ ಮೂರನೇ ಹಂತದಲ್ಲಿ ಒತ್ತಡದ ಬದಲಾವಣೆಯಿಂದ



ತಾಂತ್ರಿಕ ದೋಷವನ್ನು ಎದುರಿಸಿತ್ತು. ಉಡಾವಣೆಗೆ ಮುನ್ನ ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಅವರು ಶನಿವಾರ ತಿರುಪತಿ ದೇವಾಲಯಕ್ಕೆ ಭೇಟಿ ನೀಡಿದ್ದರು.

ಪಿಎಸ್‌ಎಲ್‌ವಿ–ಸಿ62 ರಾಕೆಟ್‌ನಲ್ಲಿ EOS-N1 (ಅನ್ವೇಶ್) ಎಂಬ ಉನ್ನತ ಭೂಪರಿವೀಕ್ಷಣಾ ಉಪಗ್ರಹವಿದ್ದು, ಇದನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಅಭಿವೃದ್ಧಿಪಡಿಸಿದೆ. ಈ ಉಪಗ್ರಹವು ರಕ್ಷಣಾತ್ಮಕ ಉದ್ದೇಶಗಳ ಜೊತೆಗೆ ಕೃಷಿ, ನಗರ ಯೋಜನೆ ಮತ್ತು ಪರಿಸರ ಮೇಲ್ವಿಚಾರಣೆ ಸೇರಿದಂತೆ ನಾಗರಿಕ ಬಳಕೆಗೆ ಸಹ ಉಪಯುಕ್ತವಾಗಿದೆ.

ಈ ಮಿಷನ್ ಪಿಎಸ್‌ಎಲ್‌ವಿಯ 64ನೇ ಹಾರಾಟವಾಗಿದ್ದು, ಪಿಎಸ್‌ಎಲ್‌ವಿ–ಡಿಐ ರೂಪಾಂತರದ ಐದನೇ ಮಿಷನ್ ಆಗಿತ್ತು. ಜೊತೆಗೆ ಇಸ್ರೋ ತನ್ನ 101ನೇ ಕಕ್ಷಾ ಉಡಾವಣೆಯನ್ನು ಈ ಮೂಲಕ ಆಚರಿಸುವ ಗುರಿಯನ್ನೂ ಹೊಂದಿತ್ತು. ರಾಕೆಟ್ 260 ಟನ್ ತೂಕವಿದ್ದು, 44.4 ಮೀಟರ್ ಎತ್ತರ ಹೊಂದಿತ್ತು. ಇದು 505.291 ಕಿಲೋಮೀಟರ್ ಎತ್ತರದ ಕಕ್ಷೆ ತಲುಪಬೇಕಿತ್ತು.

EOS-N1 ಜೊತೆಗೆ, ದೇಶಿ ಮತ್ತು ಅಂತರರಾಷ್ಟ್ರೀಯ ವಾಣಿಜ್ಯ ಸಂಸ್ಥೆಗಳ 15 ಸಹ–ಪ್ರಯಾಣಿಕ ಉಪಗ್ರಹಗಳು ಮಿಷನ್‌ನಲ್ಲಿ ಸೇರಿದ್ದವು. ಇದರಲ್ಲಿ ಸ್ಪೇನ್‌ನ ಸ್ಟಾರ್ಟ್‌ಅಪ್ ಸಂಸ್ಥೆಯ Kestrel Initial Technology Demonstrator (KID) ಕೂಡ ಸೇರಿದೆ. ಈ ಕ್ಯಾಪ್ಸುಲ್ ಅನ್ನು ದಕ್ಷಿಣ ಪೆಸಿಫಿಕ್ ಮಹಾಸಾಗರದಲ್ಲಿ ಜಲಾವೃತಗೊಳಿಸುವ ಯೋಜನೆ ಇತ್ತು.

ಮಿಷನ್ ಯೋಜನೆಯ ಪ್ರಕಾರ, EOS-N1 ಮತ್ತು 14 ಉಪಗ್ರಹಗಳನ್ನು ಸೂರ್ಯ–ಸಮಸಮಯ ಕಕ್ಷೆ (Sun-synchronous orbit)ಯಲ್ಲಿ ಸ್ಥಾಪಿಸಬೇಕಿತ್ತು. ನಾಲ್ಕನೇ ಹಂತವು KID ಕ್ಯಾಪ್ಸುಲ್ ಅನ್ನು ಮರುಪ್ರವೇಶ ಪಥಕ್ಕೆ ತಳ್ಳಬೇಕಾಗಿತ್ತು.

ಚಂದ್ರಯಾನ–1, ಮಂಗಳಯಾನ, ಆದಿತ್ಯ–ಎಲ್1, ಆಸ್ಟ್ರೋಸಾಟ್ ಸೇರಿದಂತೆ ಹಲವು ಯಶಸ್ವಿ ಮಿಷನ್‌ಗಳನ್ನು ನೆರವೇರಿಸಿರುವ ಪಿಎಸ್‌ಎಲ್‌ವಿ, 2017ರಲ್ಲಿ ಒಂದೇ ಮಿಷನ್‌ನಲ್ಲಿ 104 ಉಪಗ್ರಹಗಳನ್ನು ಉಡಾವಣೆ ಮಾಡಿ ವಿಶ್ವದಾಖಲೆ ಬರೆದಿತ್ತು.

ಕುವೆಂಪು ನಿವಾಸ ಉದಯರವಿಗೆ ಸಚಿವ ಶಿವರಾಜ ತಂಗಡಗಿ ಭೇಟಿ

ಮುಖ್ಯಮಂತ್ರಿ ಸಿದ್ದರಾಮಯ್ಯರೊಂದಿಗೆ ಚರ್ಚಿಸಿ 'ಮ್ಯೂಸಿಯಂ' ವಿಚಾರದಲ್ಲಿ ಸೂಕ್ತ ತೀರ್ಮಾನ

ಮೈಸೂರು, ಜ.12(ಪಿಎಂ)– ಮೈಸೂರಿನ ರಾಷ್ಟ್ರಕವಿ ಕುವೆಂಪು ಅವರ ನಿವಾಸ 'ಉದಯರವಿ'ಯನ್ನು ಅವರ ಕುಟುಂಬಸ್ಥರು ಮ್ಯೂಸಿಯಂ ಆಗಿ ಪರಿವರ್ತಿಸಲು ಮುಂದಾಗಿದ್ದು, ಈ ನಡುವೆ ಸೋಮವಾರ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ಎಸ್. ತಂಗಡಗಿ, ಉದಯರವಿಗೆ ಭೇಟಿ ನೀಡಿದರು.

ವಾಣಿವಿಲಾಸಪುರಂನ 5ನೇ ಮುಖ್ಯರಸ್ತೆಯ 12 ಅಡ್ಡರಸ್ತೆಯಲ್ಲಿರುವ ಉದಯರವಿಗೆ ಇಲಾಖಾಧಿಕಾರಿಗಳೊಂದಿಗೆ ಭೇಟಿ ನೀಡಿದ ಸಚಿವ ಶಿವರಾಜ ತಂಗಡಗಿ ಅವರನ್ನು ಕುವೆಂಪು ಅಳಿಯ ಡಾ.ಚಿದಾನಂದ ಗೌಡ ಸ್ವಾಗತಿಸಿದರು. ಬಳಿಕ ಸಚಿವರು, ಡಾ.ಚಿದಾನಂದಗೌಡ ಹಾಗೂ ಅವರ ಕುಟುಂಬಸ್ಥರೊಂದಿಗೆ ಚರ್ಚೆ ನಡೆಸಿದರಲ್ಲದೆ, ಸದರಿ ನಿವಾಸದಲ್ಲಿ ಕುವೆಂಪು ಅವರು ಬಳಕೆ ಮಾಡುತ್ತಿದ್ದ ವಸ್ತುಗಳು, ಅವರು ಅಧ್ಯಯನ ಮಾಡುತ್ತಿದ್ದ ಕೊಠಡಿ ಸೇರಿದಂತೆ ಇಡೀ ನಿವಾಸ ವೀಕ್ಷಿಸಿದರು. ಈ ವೇಳೆ ಕುವೆಂಪು ಅವರು ಖರೀದಿಸಿದ್ದ ರೇಡಿಯೋದ ವಿಶೇಷತೆಯನ್ನು ಸಹ ಸಚಿವರಿಗೆ ಚಿದಾನಂದಗೌಡರು ಪರಿಚಯಿಸಿದರು.

ಬಳಿಕ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಸಚಿವರು, ಸರ್ಕಾರದಿಂದ ಮ್ಯೂಸಿಯಂ ಮಾಡುವ ಸಂಬಂಧ ಮೊದಲಿಗೆ ಮುಖ್ಯಮಂತ್ರಿಗಳ ಜೊತೆ ಚರ್ಚೆ ಮಾಡುತ್ತೇನೆ. ಈಗ ಯಾವುದನ್ನೂ ಹೇಳಲಾಗದು. ಸುಮ್ಮನೆ ಬಂದು ಹೋದರು ಎನ್ನುವಂತೆ ಆಗುವುದು ಬೇಡ. ಮುಖ್ಯಮಂತ್ರಿಗಳು ಒಪ್ಪಿಗೆ ಕೊಟ್ಟ ಮೇಲೆ ಚಿದಾನಂದಗೌಡರನ್ನು ಆಹ್ವಾನಿಸಿ ಮಾತನಾಡುತ್ತೇವೆ ಎಂದು ತಿಳಿಸಿದರು.

ನನಗೆ ವೈಯಕ್ತಿಕವಾಗಿ ಕುವೆಂಪು ಅವರ ಈ ನಿವಾಸವನ್ನು ಮ್ಯೂಸಿಯಂ ಮಾಡಬೇಕೆಂಬ ಆಸೆ ಇದೆ. ಎರಡು ಮೂರು ದಿನಗಳಲ್ಲಿ ಮುಖ್ಯಮಂತ್ರಿಗಳು ಬಜೆಟ್ ವಿಚಾರವಾಗಿ ಚರ್ಚೆ ಮಾಡುತ್ತಿದ್ದು, ಈ ವೇಳೆ ಸದರಿ ವಿಚಾರವನ್ನು ಮುಖ್ಯಮಂತ್ರಿಗಳಲ್ಲಿ ಪ್ರಸ್ತಾಪ ಮಾಡುತ್ತೇನೆ ಎಂದರು.

ಕುವೆಂಪು ಅವರು ನೆಲೆಸಿದ್ದ ಈ ನಿವಾಸ 90 ವರ್ಷಗಳಷ್ಟು ಹಳೆಯದು. ಕುಪ್ಪಳ್ಳಿಯಲ್ಲಿ ಈಗಾಗಲೇ ಅವರ ಮನೆ ಅಭಿವೃದ್ಧಿಯನ್ನು ಸರ್ಕಾರದಿಂದ ಮಾಡಲಾಗಿದೆ. ಮೈಸೂರು ನಿವಾಸವನ್ನು ಸರ್ಕಾರದಿಂದ ಮ್ಯೂಸಿಯಂ ಮಾಡುವ ಸಂಬಂಧ ಮುಖ್ಯಮಂತ್ರಿಗಳ ಜೊತೆ ಮಾತನಾಡುವವರೆಗೆ ಯಾವುದೇ ವಿಷಯ ಪ್ರಸ್ತಾಪಿಸುವುದಿಲ್ಲ ಎಂದು ಹೇಳಿ ನಿರ್ಗಮಿಸಿದರು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಕುವೆಂಪು ಅವರ ಅಳಿಯ ಡಾ.ಚಿದಾನಂದಗೌಡ, ಈ ಹಿಂದೆ ಸಿದ್ದರಾಮಯ್ಯನವರು ಸಿಎಂ ಆಗಿದ್ದಾಗ ಸರ್ಕಾರದಿಂದ ಪತ್ರ ಬಂದಿತ್ತು. ನಿವಾಸ ಕೊಡುವ ಸಂಬಂಧ ತಮ್ಮ ನಿಬಂಧನೆ ತಿಳಿಸುವಂತೆ ಪತ್ರದಲ್ಲಿ ಕೇಳಿದ್ದರು. ನಾವು ನಿವಾಸವನ್ನು ಸರ್ಕಾರದ ಸುಪರ್ದಿಗೆ ಕೊಡುವುದಾಗಿ ಪ್ರತಿಕ್ರಿಯಿಸಿದೆವು. ಕುವೆಂಪು ಅವರ ಸಂತತಿಗೆ ಸೇರಿದ ಮನೆಯಾದ ಕಾರಣ ಸದರಿ ನಿವಾಸ ಇರುವ ನಿವೇಶನದ ವಿಸ್ತೀರ್ಣದಷ್ಟು ಪರ್ಯಾಯ ನಿವೇಶನವನ್ನು ಮೈಸೂರಲ್ಲಿ ಕೊಡಬೇಕು. ಮನೆ ನಿರ್ಮಾಣ ವೆಚ್ಚ ನೀಡಬೇಕು. ಇದರಿಂದ ನಮಗೆ ಪರ್ಯಾಯವಾಗಿ ಮನೆ ನಿರ್ಮಾಣಕ್ಕೆ ಅವಕಾಶ ಆಗಲಿದ್ದು, ಆ ಬಳಿಕ ನಿವಾಸವನ್ನು ಸರ್ಕಾರದ ಸುಪರ್ದಿಗೆ ಕೊಡುವುದಾಗಿ ಹೇಳಿದ್ದೆವು ಎಂದರು.

ಅನಂತರದಲ್ಲಿ ನಿವಾಸಕ್ಕೆ ಅನೇಕ ಮಂತ್ರಿಗಳು ಭೇಟಿ ಸಹ ನೀಡಿದ್ದರು. ಈ ಸಂಬಂಧ ವಿಚಾರಿಸಲಾಗಿ ಕಡತ ಮುಖ್ಯಮಂತ್ರಿ ಬಳಿ ಇರುವ ಮಾಹಿತಿ ಬಂದಿತು. ಆ ಬಳಿಕ ಪ್ರಕ್ರಿಯೆ ಸ್ಥಗಿತವಾದಂತೆ ಕಾಣುತ್ತದೆ. ಯಾವುದೇ ಬೆಳವಣಿಗೆ ನಡೆಯಲಿಲ್ಲ. ಈ ಸರ್ಕಾರದ ಅವಧಿ ಬಳಿಕ ಬಂದ ಬಿಜೆಪಿ ಸರ್ಕಾರದವರು ಆಸಕ್ತಿ ತೋರಿದ್ದರು. ಅಧಿಕಾರಿಗಳು ಹಾಗೂ ಮಂತ್ರಿಗಳು ಭೇಟಿ ನೀಡಿದ್ದರು. ಆದರೆ, ಆಗಲೂ ಯಾವುದೇ ಬೆಳವಣಿಗೆ ಆಗಲಿಲ್ಲ ಎಂದು ತಿಳಿಸಿದರು.

ಕುವೆಂಪು ನಿವಾಸ ನೋಡಬೇಕೆಂದು ತುಂಬ ಜನ ಆಗಾಗ್ಗೆ ಭೇಟಿ ನೀಡುತ್ತಾರೆ. ಹಾಗಾಗಿ ನಾವು ಹಾಗೂ ಕುವೆಂಪು ಮೊಮ್ಮಕ್ಕಳು ಸೇರಿ ಮಾತನಾಡಿ ಖಾಸಗಿಯಾಗಿ ಟ್ರಸ್ಟ್ ಮಾಡಿಕೊಂಡು ಮ್ಯೂಸಿಯಂ ಮಾಡುವ ಉದ್ದೇಶದೊಂದಿಗೆ ಮುಂದುವರೆದಿದ್ದೇವೆ. ಅದಕ್ಕಾಗಿ ಔಟ್‌ಹೌಸ್ ಸಹ ನಿರ್ಮಾಣ ಮಾಡಲಾಗುತ್ತಿದೆ. ಅಲ್ಲಿಗೆ ನಾವು ಸ್ಥಳಾಂತರಗೊಂಡು ಇಡೀ ಉದಯರವಿ ನಿವಾಸವನ್ನು ಮ್ಯೂಸಿಯಂ ಮಾಡಬೇಕೆಂದು ಅಭಿಲಾಷೆ ಇದೆ ಎಂದು ವಿವರಿಸಿದರು.



ಕುವೆಂಪು ಅವರು ವಾಸವಿದ್ದ ಮೈಸೂರಿನ ಉದಯರವಿ ನಿವಾಸಕ್ಕೆ ಸೋಮವಾರ ಸಚಿವ ಶಿವರಾಜ ತಂಗಡಗಿ ತಮ್ಮ ಇಲಾಖೆಯ ಅಧಿಕಾರಿಗಳೊಂದಿಗೆ ಭೇಟಿ ನೀಡಿದರು. ಈ ವೇಳೆ ಕುವೆಂಪು ಅವರ ಅಳಿಯ ಡಾ.ಚಿದಾನಂದಗೌಡ ಹಾಗೂ ಇವರ ಪತ್ನಿ ತಾರಿಣಿ ಚಿದಾನಂದಗೌಡ ಸೇರಿದಂತೆ ಕುವೆಂಪು ಅವರ ಕುಟುಂಬಸ್ಥರು ಉಪಸ್ಥಿತರಿದ್ದರು.

> ಪುಣ್ಯಾತ್ಮರು ನೆಲೆಸಿದ್ದ ಜಾಗ ಇದು ಅದಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಅವರು ನಮ್ಮ ಆದರ್ಶ. ಅಂತಹವರು ಓಡಾಡಿದ ಜಾಗಕ್ಕೆ ಬೆಲೆ ಕಟ್ಟಲಾಗದು. ಬಹುರೂಪಿ ನಾಟಕೋತ್ಸವ ಉದ್ಘಾಟನಾ ಸಮಾರಂಭಕ್ಕೆ ಮೈಸೂರಿಗೆ ಬರುತ್ತಿದ್ದ ಹಿನ್ನೆಲೆಯಲ್ಲಿ ಇದೇ ವೇಳೆ ಕುವೆಂಪು ಅವರು ವಾಸವಿದ್ದ ಅವರ ಮೈಸೂರು ನಿವಾಸ ನೋಡಬೇಕು ಅನ್ನಿಸಿ ಇಲ್ಲಿಗೆ ಭೇಟಿ ನೀಡಿದೆ.
>
> -ಶಿವರಾಜ ತಂಗಡಗಿ, ಸಚಿವರು.

ಎಐ ಯುವತಿ ಮೋಹದ ಮೋಡಿ; ಯುವಕನ ಪೀಕಲಾಟ!

- 1.53 ಲಕ್ಷ ಹಣ ಸುಲಿಗೆ
- ವಂಚನೆಯ ಹೊಸ ವರಸೆ

ಬೆಂಗಳೂರು, ಜ.12(ಕೆಎಂಶಿ)– ಕೃತಕ ಬುದ್ಧಿಮತ್ತೆ (ಎಐ) ಯುವತಿಯ ಮೋಹಕ್ಕೆ ಬಿದ್ದು ಯುವಕನೊಬ್ಬ ಒಂದೂವರೆ ಲಕ್ಷ ರೂ. ಕಳೆದುಕೊಂಡು ಕೇಂದ್ರ ವಿಭಾಗದ ಸೆನ್ ಠಾಣೆ ಪೊಲೀಸರ ಮೊರೆ ಹೋಗಿದ್ದಾನೆ.

ನಗರದ 26 ವರ್ಷದ ಯುವಕನೊಬ್ಬ ಡೇಟಿಂಗ್ ಆ್ಯಪ್‌ನಲ್ಲಿ ಖಾತೆ ತೆರೆದಿದ್ದು, ಆತನ ಖಾತೆಗೆ ಇಶಾನಿ ಎಂಬ ಯುವತಿಯಿಂದ ಫ್ರೆಂಡ್ ರಿಕ್ವೆಸ್ಟ್ ಬಂದಿದೆ, ಬಳಿಕ ಮೊಬೈಲ್ ನಂಬರ್ ವಿನಿಮಯ ಮಾಡಿಕೊಂಡು, ಖಾಸಗಿ ವಿಚಾರಗಳನ್ನು ಚಾಟಿಂಗ್ ಮಾಡಿದ್ದರು. ಕೆಲವು ದಿನಗಳ ಹಿಂದೆ ಯುವತಿಯ ಮೊಬೈಲಿನಿಂದ ವಿಡಿಯೊ ಕಾಲ್ ಬಂದಿದ್ದು, ಅದರಲ್ಲಿ ಯುವತಿ ಬೆತ್ತಲಾಗಿದ್ದ ದೃಶ್ಯ ಇತ್ತು, ನಂತರ ನೀನು ಬಟ್ಟೆ ಬಿಚ್ಚು ಎಂದು ಯುವಕನ ಬಟ್ಟೆ ಬಿಚ್ಚಿಸಿದ್ದಳು, ಯುವಕ ಬೆತ್ತಲಾಗಿದ್ದನ್ನು ರೆಕಾರ್ಡ್ ಮಾಡಿಕೊಂಡಿದ್ದ ಆರೋಪಿಗಳು ಬಳಿಕ ಯುವಕನಿಗೆ ಆತನ ಬೆತ್ತಲೆ ಫೋಟೋಗಳನ್ನು ಕಳುಹಿಸಿ ಬ್ಲ್ಯಾಕ್‌ಮೇಲ್ ಮಾಡಿದ್ದಾರೆ.

ಯುವಕನಿಂದ ಹಂತ ಹಂತವಾಗಿ 1.53 ಲಕ್ಷ ರೂ. ವಸೂಲಿ ಮಾಡಿದ್ದು, ನೊಂದ ಯುವಕ ಕೊನೆಗೆ ಕೇಂದ್ರ ಸೆನ್ ಠಾಣೆಗೆ ದೂರು ನೀಡಿದ್ದಾನೆ, ಪ್ರಕರಣ ದಾಖಲು ಮಾಡಿಕೊಂಡ ಪೊಲೀಸರು, ಪ್ರಾಥಮಿಕ ತನಿಖೆಯಲ್ಲಿ ಎಐ ಯುವತಿ ಮೂಲಕ ಕೃತ್ಯ ಎಸಗಿರುವುದು ಬೆಳಕಿಗೆ ಬಂದಿದ್ದು, ಪ್ರಕರಣ ದಾಖಲಿಸಿ ಆರೋಪಿಗಳಿಗೆ ಪೊಲೀಸರು ಹುಡುಕಾಟ ನಡೆಸಿದ್ದಾರೆ.

ಮಕರ ಸಂಕ್ರಾಂತಿಯಂದು ಪ್ರಧಾನಿ ಮೋದಿ ಹೊಸ ಕಚೇರಿಗೆ ಸ್ಥಳಾಂತರ

ನವದೆಹಲಿ: ಪ್ರಧಾನಮಂತ್ರಿ ನರೇಂದ್ರ ಮೋದಿ ಮಕರ ಸಂಕ್ರಾಂತಿಯ ದಿನದಂದೇ ಹೊಸ ಕಚೇರಿಗೆ ಸ್ಥಳಾಂತರಗೊಳ್ಳಲಿದ್ದಾರೆ. 1947ರ ಬಳಿಕ, ಸ್ವತಂತ್ರ ಭಾರತದಲ್ಲಿ ಇದೇ ಮೊದಲ ಬಾರಿಗೆ ಪ್ರಧಾನಿಗಳ ಕಚೇರಿ ಬದಲಾವಣೆ ಆಗುತ್ತಿದೆ.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 'ಸೆಂಟ್ರಲ್ ವಿಸ್ಟಾ' ಯೋಜನೆ ಭಾಗವಾಗಿ ನಿರ್ಮಿಸಲಾದ 'ಸೇವಾ ತೀರ್ಥ' ಸಂಕೀರ್ಣಕ್ಕೆ ಪ್ರಧಾನಿ ಮೋದಿ ಅವರು ಜ.14ರ 'ಮಕರ ಸಂಕ್ರಾಂತಿ'ಯಂದೇ ಸ್ಥಳಾಂತರಗೊಳ್ಳುತ್ತಿದ್ದಾರೆ. ಈ ಸಂಕೀರ್ಣವನ್ನು ಪ್ರಧಾನಿ ಕಚೇರಿ, ಕ್ಯಾಬಿನೆಟ್ ಸಚಿವಾಲಯ ಹಾಗೂ ರಾಷ್ಟ್ರೀಯ ಭದ್ರತಾ ಮಂಡಳಿ ಸಚಿವಾಲಯ ಕಚೇರಿಗಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಪ್ರತಿಯೊಂದಕ್ಕೂ ಪ್ರತ್ಯೇಕ ಕಟ್ಟಡವನ್ನು ಮೀಸಲಿರಿಸಲಾಗಿದೆ.

ಪ್ರಧಾನಿಗಳ ಹೊಸ ಕಚೇರಿಗೆ 'ಸೇವೆ' ಎಂಬ ವಸ್ತುವಿಷಯವನ್ನಾಧರಿಸಿ 'ಸೇವಾ ತೀರ್ಥ–1' ಎಂದು ನಾಮಕರಣ ಮಾಡಲಾಗಿದೆ. ಜೊತೆಗೆ ಸೇವೆಯ ಮಹತ್ವವನ್ನು ಬಿಂಬಿಸುವ ಆಧುನಿಕ ಕಾರ್ಯಕ್ಷೇತ್ರಗಳು ಹಾಗೂ ಭವ್ಯ ಸಮಾರಂಭ ಕೊಠಡಿಗಳನ್ನೂ ಒಳಗೊಂಡಿದೆ. ಇನ್ನೂ ಕ್ಯಾಬಿನೆಟ್ ಸಚಿವಾಲಯಕ್ಕೆ ನಿರ್ಮಿಸಲಾದ ಕಚೇರಿಗೆ 'ಸೇವಾ ತೀರ್ಥ–2', ರಾಷ್ಟ್ರೀಯ ಭದ್ರತಾ ಸಲಹೆಗಾರರ ಕಚೇರಿಗೆ 'ಸೇವಾ ತೀರ್ಥ–3' ಎಂದು ನಾಮಕರಣ ಮಾಡಲಾಗಿದೆ.

1,189 ಕೋಟಿ ರೂ. ವೆಚ್ಚ: ಪ್ರಧಾನಿಗಳ ಕಚೇರಿಯನ್ನೊಳಗೊಂಡ



ಸಂಪೂರ್ಣ 'ಸೇವಾ ತೀರ್ಥ' ಸಂಕೀರ್ಣವನ್ನ 1,189 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದ್ದು, ಇದರ ಒಟ್ಟು ವಿಸ್ತೀರ್ಣ 2,26,203 ಚದರ ಅಡಿ ಇದೆ. ಇನ್ನೂ ಪ್ರಧಾನ ಮಂತ್ರಿಯವರ ಹೊಸ ಅಧಿಕೃತ ನಿವಾಸವನ್ನು 'ಕಾರ್ಯನಿರ್ವಾಹಕ ಎನ್‌ಕ್ಲೇವ್ ಭಾಗ–2' ಎಂದು ಹೆಸರಿಸಲಾಗಿದೆ.

ಪ್ರಧಾನಿಗಳ ಹಳೇ ಕಚೇರಿ ಏನಾ ಗುತ್ತೆ: ಪ್ರಧಾನ ಮಂತ್ರಿಗಳು ಹೊಸ ಕಚೇರಿಗೆ ಸ್ಥಳಾಂತರಗೊಳ್ಳುತ್ತಿದ್ದಂತೆ ದಕ್ಷಿಣ ಮತ್ತು ಉತ್ತರ ಬ್ಲಾಕ್‌ಗಳಲ್ಲಿರುವ ಕಚೇರಿಗಳನ್ನು ವಸ್ತು ಸಂಗ್ರಹಾಲಯಗಳನ್ನಾಗಿ ಬದಲಾವಣೆ ಮಾಡಲಾಗುತ್ತದೆ, ಯುಗೆ ಯುಗೀನ್ ಭಾರತ್ ಸಂಗ್ರಹಾಲಯ ಹೆಸರಿನಲ್ಲಿ ಸಾರ್ವಜನಿಕ ವಸ್ತುಸಂಗ್ರಹಾಲಯವಾಗಿ ಪರಿವರ್ತಿಸಲಾಗುತ್ತದೆ. ಯೋಜಿತ ವಸ್ತು ಸಂಗ್ರಹಾಲಯದ ಅಭಿವೃದ್ಧಿಗಾಗಿ 2024ರ ಡಿಸೆಂಬರ್ 19 ರಂದು ಫ್ರಾನ್ಸ್‌ನ ಮ್ಯೂಸಿಯಂ ಅಭಿವೃದ್ಧಿ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.

ಸತತ 2ನೇ ಗೆಲುವು: ಅಗ್ರಸ್ಥಾನಕ್ಕೇರಿದ ಆರ್‌ಸಿಬಿ

ನವಿ ಮುಂಬೈ, ಜ.12– ಬೌಲರ್‌ಗಳ ಕರಾರುವಾಕ್ ಬೌಲಿಂಗ್ ಪ್ರದರ್ಶನ ಹಾಗೂ ಗ್ರೇಸ್ ಹ್ಯಾರಿಸ್ ಮತ್ತು ಸ್ಮೃತಿ ಮಂದಾನ ಅವರ ಮಿಂಚಿನ ಬ್ಯಾಟಿಂಗ್ ನೆರವಿನಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಯುಪಿ ವಾರಿಯರ್ಸ್ ವಿರುದ್ಧ 9 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಆ ಮೂಲಕ ಟೂರ್ನಿಯಲ್ಲಿ ಸತತ 2ನೇ ಜಯ ದಾಖಲಿಸಿದ ಆರ್‌ಸಿಬಿ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದೆ.

ಇಲ್ಲಿನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ಸೋಮವಾರ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಯುಪಿ ವಾರಿಯರ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 143 ರನ್ ಗಳಿಸಿತು. ಇದಕ್ಕುತ್ತರವಾಗಿ ಆರ್‌ಸಿಬಿ ಕೇವಲ 12.1 ಓವರ್‌ಗಳಲ್ಲೇ 1 ವಿಕೆಟ್ ನಷ್ಟಕ್ಕೆ ಇನ್ನೂ 47 ರನ್ ಬಾಕಿ ಇರುವಂತೆಯೇ 145 ರನ್ ಗಳಿಸಿ ಜಯದ ನಗೆ ಬೀರಿತು.

ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಗ್ರೇಸ್ ಹ್ಯಾರಿಸ್ ಮತ್ತು ನಾಯಕಿ ಸ್ಮೃತಿ ಮಂದಾನ ಮೊದಲ ವಿಕೆಟ್‌ಗೆ 137 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಉತ್ತಮ ಆರಂಭ ಒದಗಿಸಿದರು. ಕೇವಲ 22 ಎಸೆತಗಳಲ್ಲಿ ಅರ್ಧಶತಕ ಸಿಡಿಸಿದ ಗ್ರೇಸ್ ಹ್ಯಾರಿಸ್ ಆರ್‌ಸಿಬಿ ಪರ ವೇಗದ ಅರ್ಧಶತಕ ಬಾರಿಸಿದರು. ಬಳಿಕ ತಮ್ಮ ಮಿಂಚಿನ ಬ್ಯಾಟಿಂಗ್ ಮುಂದುವರೆಸಿದ ಗ್ರೇಸ್ ಹ್ಯಾರಿಸ್ ತಂಡದ ಗೆಲುವಿಗೆ 7 ರನ್ ಅಗತ್ಯವಿದ್ದಾಗ ಶಿಖಾ ಪಾಂಡೆ ಅವರಿಗೆ ವಿಕೆಟ್ ಒಪ್ಪಿಸಿದರು. ಈ ವೇಳೆಗೆ ಅವರು 40 ಎಸೆತಗಳಲ್ಲಿ 10 ಬೌಂಡರಿ, 5 ಸಿಕ್ಸರ್ ಒಳಗೊಂಡ 85 ರನ್ ಗಳಿಸಿದರು.

ಮತ್ತೊಂದೆಡೆ ಉತ್ತಮ ಬ್ಯಾಟಿಂಗ್ ಪ್ರದರ್ಶನ ನೀಡಿದ ಸ್ಮೃತಿ ಮಂದಾನ 32 ಎಸೆತಗಳಲ್ಲಿ 9 ಬೌಂಡರಿ ಒಳಗೊಂಡ ಅಜೇಯ 47 ರನ್ ಗಳಿಸಿ ಕೇವಲ 3 ರನ್‌ಗಳಿಂದ ಅರ್ಧಶತಕದಿಂದ ವಂಚಿತರಾದರೂ ತಂಡಕ್ಕೆ ಗೆಲುವು ತಂದುಕೊಟ್ಟರು. ಉಳಿದಂತೆ ರಿಚಾ ಘೋಷ್ 4 ರನ್ ಗಳಿಸಿ ಅಜೇಯರಾಗುಳಿದರು. ಯುಪಿ ಪರ ಶಿಖಾ ಪಾಂಡೆ ಒಂದು ವಿಕೆಟ್ ಪಡೆದರು. ಇದಕ್ಕೂ ಮುನ್ನಾ ಮೊದಲು ಬ್ಯಾಟಿಂಗ್ ಮಾಡಿದ ಯುಪಿ ವಾರಿಯರ್ಸ್ ಪರ ದೀಪ್ತಿ ಶರ್ಮಾ 45, ದಿಯೋಂಡ್ರಾ ಡಾಟಿನ್ 40, ಮೆಗ್ ಲ್ಯಾನಿಂಗ್ 14, ಲಿಚ್ ಫೀಲ್ಡ್ 20, ಹರ್ಲಿನ್ ಡಿಯೋಲ್ 11 ರನ್ ಗಳಿಸಿದರು. ಆರ್‌ಸಿಬಿ ಪರ ಶ್ರೇಯಾಂಕಾ ಪಾಟೀಲ್, ನಡಿನ್ ಡಿ ಕ್ಲಾರ್ಕ್ ತಲಾ 2, ಲಾರೆನ್ ಬೆಲ್ ಒಂದು ವಿಕೆಟ್ ಪಡೆದರು. ಆರ್‌ಸಿಬಿ ಪರ ಉತ್ತಮ ಬ್ಯಾಟಿಂಗ್ ಪ್ರದರ್ಶನ ನೀಡಿದ ಗ್ರೇಸ್ ಹ್ಯಾರೀಸ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.



ಮೈಸೂರು ವಕೀಲರ ಸಂಘದಲ್ಲಿ ಸ್ವಾಮಿ ವಿವೇಕಾನಂದ ಜಯಂತಿ



ಮೈಸೂರು ವಕೀಲರ ಸಂಘದಲ್ಲಿ ಸೋಮವಾರ ಸ್ವಾಮಿ ವಿವೇಕಾನಂದರ ಜಯಂತಿ ಆಚರಿಸಲಾಯಿತು. ಮೈಸೂರಿನ ರಾಮಕೃಷ್ಣ ಆಶ್ರಮದ ನೈತಿಕ ಹಾಗೂ ಆಧ್ಯಾತ್ಮಿಕ ಶಿಕ್ಷಣ ವಿಭಾಗದ ಮುಖ್ಯಸ್ಥರಾದ ಶ್ರೀ ಸ್ವಾಮಿ ಮಹಾ ಮೇದಾನಂದ ಮಹಾರಾಜ್, ಸಂಘದ ಅಧ್ಯಕ್ಷ ಎಸ್.ಲೋಕೇಶ್, ಕಾರ್ಯದರ್ಶಿ ಎ.ಜಿ.ಸುಧೀರ್, ಪದಾಧಿಕಾರಿಗಳು ಹಾಗೂ ವಕೀಲರು ಪಾಲ್ಗೊಂಡಿದ್ದರು.

ಮೈಸೂರಿನ ಕಾಸ್ಮೋಸ್ ಪ್ಲಾನೆಟೋರಿಯಂಗೆ ನಿರ್ಮಲಾ ಸೀತಾರಾಮನ್ 5 ಕೋಟಿ ಅನುದಾನ

ಸಂಸದರ ನಿಧಿಯಿಂದ ನೆರವು ನೀಡಿದ ಸಚಿವರಿಗೆ ಸಂಸದ ಯದುವೀರ್ ಒಡೆಯರ್ ಧನ್ಯವಾದ




ಮೈಸೂರಿನ ಚಾಮುಂಡಿಬೆಟ್ಟ ತಪ್ಪಲಲ್ಲಿ ನಿರ್ಮಾಣವಾಗುತ್ತಿರುವ ಗುಮ್ಮಟ ತಾರಾಲಯ

ಮೈಸೂರು, ಜ.12– ಮೈಸೂರಿನ ಕಾಸ್ಮೋಸ್ ಪ್ಲಾನೆಟೋರಿಯಂ(ಗುಮ್ಮಟ ತಾರಾಲಯ) ಯೋಜನೆಗೆ ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಹೆಚ್ಚುವರಿ 5 ಕೋಟಿ ಅನುದಾನ ನೀಡಿದ್ದಾರೆ ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಒಡೆಯರ್ ತಿಳಿಸಿದ್ದಾರೆ.

ಮೈಸೂರು ವಿವಿಯ ಚಾಮುಂಡಿಬೆಟ್ಟ ತಪ್ಪಲಿನ ಕ್ಯಾಂಪಸ್‌ನಲ್ಲಿ ತಾರಾಲಯ ನಿರ್ಮಿಸಲಾಗುತ್ತಿದೆ. ಇದು ವಿಶ್ವದ ಮೊದಲ ಓರೆಯಾದ ಗುಮ್ಮಟಾಕೃತಿಯ ಎಲ್‌ಇಡಿ ತಾರಾಲಯವಾಗಲಿದೆ. ಇಲ್ಲಿ ಕಾಸ್ಮೋಲಜಿ ಎಜುಕೇಷನ್ ಅಂಡ್ ರೀಸರ್ಚ್ ಟ್ರೇನಿಂಗ್ ಸೆಂಟರ್ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದ್ದ ಸಚಿವರು, ಇದೀಗ ಐದು ಕೋಟಿ ಅನುದಾನವನ್ನು ಸಂಸದರ ನಿಧಿಯಿಂದ ಬಿಡುಗಡೆ ಮಾಡಿರುವುದು ಶ್ಲಾಘನೀಯ. ಯುವಜನತೆ ಭವಿಷ್ಯದ ಬಗ್ಗೆ ಕಾಳಜಿ ಹೊಂದಿರುವ ನಿರ್ಮಲಾ ಸೀತಾರಾಮನ್ ಅವರಿಗೆ ಧನ್ಯವಾದ ತಿಳಿಸುತ್ತೇನೆ ಎಂದಿದ್ದಾರೆ.



ನಿರ್ಮಲಾ



ಯದುವೀರ್

ಕಾಸ್ಮೋಸ್ ಪ್ಲಾನೆಟೇರಿಯಮ್ ಯೋಜನೆಯು ಕುತೂಹಲ, ಕಲಿಕೆ, ಸಂಶೋಧನೆ ಮತ್ತು ನಾವೀನ್ಯತೆಗೆ ಹೆಚ್ಚು ಒತ್ತು ನೀಡುತ್ತದೆ. ಈ ಕೇಂದ್ರವು ಮೈಸೂರಿನ ಪ್ರವಾಸಿ ತಾಣಗಳ ಪಟ್ಟಿಗೂ ಸೇರ್ಪಡೆಯಾಗಲಿದೆ. ಸ್ಥಳೀಯ ಅಭಿವೃದ್ಧಿಗೆ ಹೊಸ ಮಾರ್ಗಾವಕಾಶ ಒದಗಿಸುತ್ತದೆ. ಜ್ಞಾನದ ಕೇಂದ್ರವಾಗಿ ಮೈಸೂರಿನ ಪರಂಪರೆಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿದೆ. ಪ್ರಮುಖ ಪ್ರವಾಸಿ ಹಾಗೂ ಜ್ಞಾನ ಕೇಂದ್ರವಾಗಿ ಇದು ಹೊರಹೊಮ್ಮಲಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ಹರ್ಷ ವ್ಯಕ್ತಪಡಿಸಿದ್ದಾರೆ.

ಬಹುರೂಪಿ ಮಕ್ಕಳ ನಾಟಕೋತ್ಸವಕ್ಕೆ ಚಾಲನೆ

ರಂಗಭೂಮಿ ಮಕ್ಕಳಲ್ಲಿ ಧೈರ್ಯ, ಆಲೋಚನಾ ಶಕ್ತಿ ಬೆಳೆಸುತ್ತದೆ

ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮ ಅಭಿಮತ

ಮೈಸೂರು, ಜ.12(ಎಂಟಿವೈ)– ರಂಗಭೂಮಿ ಧೈರ್ಯ ಹಾಗೂ ಆಲೋಚನಾ ಶಕ್ತಿಯನ್ನು ಬೆಳೆಸುವ ಮಾಧ್ಯಮವಾಗಿದ್ದು, ಪೋಷಕರು ತಮ್ಮ ಮಕ್ಕಳನ್ನು ರಂಗಭೂಮಿಯತ್ತ ಕೊಂಡೊಯ್ಯಬೇಕು ಎಂದು ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮ ಸಲಹೆ ನೀಡಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಸೋಮವಾರ ಬಹುರೂಪಿ ಬಾಬಾ ಸಾಹೇಬ್ ರಾಷ್ಟ್ರೀಯ ನಾಟಕೋತ್ಸವದ ಅಂಗವಾಗಿ ಆಯೋಜಿಸಿದ್ದ ಬಹುರೂಪಿ ಮಕ್ಕಳ ನಾಟಕೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಶಾಲಾ–ಕಾಲೇಜು ಮಕ್ಕಳು ನಾಟಕ ನೋಡುವ ಹವ್ಯಾಸ ರೂಢಿಸಿಕೊಳ್ಳಬೇಕು. ನಾಟಕದಲ್ಲಿ ಅಭಿನಯಿಸುವುದರಿಂದ ಧೈರ್ಯ, ಹಂಚಿಕೊಳ್ಳುವ ಮನೋಭಾವ, ಸ್ನೇಹ, ಬದುಕುವ ರೀತಿ, ಅನಿಸಿದ್ದನ್ನು ಹೇಳುವ ಗುಣ ಮೈಗೂಡುತ್ತವೆ. ಹಾಗಾಗಿ ಮಕ್ಕಳು ನಾಟಕಗಳಲ್ಲಿ ಅಭಿನಯಿಸಬೇಕು. ಪೋಷಕರು ತಮ್ಮ ಮಕ್ಕಳ ಮನೋವಿಕಾಸಕ್ಕಾಗಿ ನಾಟಕ ನೋಡುವ ಹಾಗೂ ನಾಟಕದಲ್ಲಿ ಅಭಿನಯಿಸುವಂತೆ ಪ್ರೇರೇಪಿಸಬೇಕು ಎಂದರು.

ಮಕ್ಕಳು ನಾಟಕದಲ್ಲಿ ಅಭಿನಯಿಸಲು ವೇದಿಕೆ: ಯಾವುದೇ ಒಂದು ನಾಟಕ ನೋಡಿದರೆ, ನಾಟಕದಲ್ಲಿ ಅಭಿನಯಿಸಿದರೆ ಒಂದು ಪಠ್ಯ ಓದಿದಷ್ಟು ಜ್ಞಾನ ಸಂಪಾದಿಸಬಹುದು. ಈ ಹಿನ್ನೆಲೆಯಲ್ಲಿ ಶಾಲೆಗಳಲ್ಲಿ ಮಕ್ಕಳು ನಾಟಕಗಳಲ್ಲಿ ಅಭಿನಯಿಸಲು ವೇದಿಕೆ ಕಲ್ಪಿಸಲು ಪೂರಕವಾಗಿ ಕ್ರಮ ಕೈಗೊಳ್ಳಬೇಕು. ನಾಟಕವನ್ನು ಕೇವಲ ಕಣ್ಣಿನಿಂದ ನೋಡಿದರಷ್ಟೇ ಸಾಲದು. ಯಾರೇ ಆಗಲೀ ನಾಟಕವನ್ನು ಮನಸ್ಸಿನಿಂದ, ಹೃದಯದಿಂದ ನೋಡಬೇಕು. ಆಗ ಅದರ ನೀತಿ, ಸಾರಾಂಶ, ಪ್ರಭಾವ ನಮ್ಮ ಮೇಲಾಗುತ್ತದೆ. ಅಲ್ಲದೆ, ಜೀವನದ ಪಾಠ, ಯೋಚನೆ ಮಾಡುವ ಶಕ್ತಿಯನ್ನು ಕಲಿಸುತ್ತದೆ. ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಜೀವನ ಕುರಿತು ನಾಟಕ ಪ್ರದರ್ಶನ ಆಯೋಜಿಸಿದರೆ ಮಕ್ಕಳಿಗೆ ಅವರ ಜೀವನ ವಿಧಾನವನ್ನು ಅತ್ಯಂತ ಪರಿಣಾಮಕಾರಿಯಾಗಿ ಮನದಟ್ಟು ಮಾಡಿಕೊಡಬಹುದಾಗಿದೆ. ಮಕ್ಕಳು ನಾಟಕ ನೋಡಿದ ನಂತರ ಅದರಲ್ಲಿ ಅಡಕವಾಗಿರುವ ವಿಚಾರಗಳ ಕುರಿತು ಚರ್ಚೆ ಮಾಡಬೇಕು. ಆಗ ಮನಸ್ಸು ವಿಕಾಸವಾಗುತ್ತದೆ. ಮನಸ್ಸು ಅರಳಬೇಕಾದರೆ ನಾಟಕ ನೋಡಬೇಕು ಎಂದು ತಿಳಿಸಿದರು.

ಸಿನಿಮಾ ಕ್ಷೇತ್ರ ಬರೀ ಕನಸನ್ನು ಕಾಣುವಂತೆ ಮಾಡಿ ಕಲ್ಪನಾ ಲೋಕಕ್ಕೆ ಕೊಂಡೊಯ್ಯುತ್ತದೆ. ಈ ಸಾಲಿನ ಬಹುರೂಪಿ ನಾಟಕೋತ್ಸವವನ್ನು ಬಾಬಾ ಸಾಹೇಬ್ ಆಶಯದಲ್ಲಿ ನಡೆಸಲಾಗುತ್ತಿದೆ. ಅಂಬೇಡ್ಕರ್ ಅವರ ಚಿಂತನೆ, ಆಶಯ, ಸಂವಿಧಾನ, ಸಮಾನತೆ, ಸ್ವಾತಂತ್ರ್ಯ, ಸಹೋದರತೆ ಹಾಗೂ ಇನ್ನಿತರ ಮೌಲ್ಯಗಳನ್ನು ನಾಟಕ, ಚಲನಚಿತ್ರದ ಮೂಲಕ ಬಹುರೂಪಿಯಲ್ಲಿ ಜನರಿಗೆ ಮನವರಿಕೆ ಮಾಡಿಕೊಡಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ರಂಗಸಮಾಜದ ಸದಸ್ಯ ಮಹಾಂತೇಶ್ ಗಜೇಂದ್ರಗಡ ಅವರು ಉತ್ತರ ಕರ್ನಾಟಕದ ಶಂಭು ಬಿರಾದರ ಅವರು ಬರೆದಿರುವ ನಾವು ಎಳೆಯರು ಪದ್ಯವನ್ನು ಮಕ್ಕಳಿಗೆ ಓದಿ, ಶುಭ ಕೋರಿದರು.

ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಡಾ.ಜಾಹೀದಾ ಅವರು ಮಾತನಾಡಿ ಮಕ್ಕಳ ರಂಗಭೂಮಿಯಿಂದ ನಾಟಕ ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಲು ಸಾಧ್ಯವಿದೆ ಎಂದರು.

ಕಾರ್ಯಕ್ರಮದಲ್ಲಿ ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಉಪ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಮಕ್ಕಳ ನಾಟಕೋತ್ಸವದ ಸಂಚಾಲಕ ಅರಸೀಕೆರೆ ಯೋಗಾನಂದ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

> ಬಹುರೂಪಿ ಮಕ್ಕಳ ನಾಟಕೋತ್ಸವ ಜ.17ರವರೆಗೆ ನಡೆಯಲಿದೆ. ಪ್ರತಿದಿನ ಬೆಳಗ್ಗೆ 11 ಗಂಟೆ ಹಾಗೂ ಸಂಜೆ 7.30ಕ್ಕೆ ನಾಟಕ ಪ್ರದರ್ಶನವಿರುತ್ತದೆ. ಜ.13ರಂದು 'ರೂಪಾಂತರ' (ಕನ್ನಡ), ಜ.14 'ಸೂರ್ಯಚಂದ್ರ (ಕನ್ನಡ), ಜ.15ರಂದು 'ತಾರಾಸ್ ಟ್ರಿಯೋ' (ಇಂಗ್ಲಿಷ್, ಹಿಂದಿ), ಜ.1 6ರಂದು 'ಅಂಬೇಡ್ಕರ್ ಕ ಬಚ್ಚನ್' (ಹಿಂದಿ), ಜ.17ರಂದು 'ಕಿಷ್ಕಿಂದ' (ತಮಿಳು) ಪ್ರದರ್ಶನಗೊಳ್ಳಲಿವೆ.





ಮೈಸೂರಿನ ಕಲಾಮಂದಿರದಲ್ಲಿ ಸೋಮವಾರ ಆರಂಭವಾದ ಬಹುರೂಪಿ ಬಾಬಾ ಸಾಹೇಬ್ ಮಕ್ಕಳ ನಾಟಕೋತ್ಸವಕ್ಕೆ ಹಿರಿಯ ರಂಗಕರ್ಮಿ ರಾಮೇಶ್ವರಿ ವರ್ಮ ವಿವಿಧ ವೇಷಧಾರಿ ಮಕ್ಕಳೊಂದಿಗೆ ವೇದಿಕೆಗೆ ಆಗಮಿಸುವ ಮೂಲಕ ಚಾಲನೆ ನೀಡಿದರು. ಬಲಚಿತ್ರದಲ್ಲಿ ಮಕ್ಕಳ ನಾಟಕೋತ್ಸವದಲ್ಲಿ ಪಾಲ್ಗೊಂಡಿದ್ದ ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳನ್ನು ಕಾಣಬಹುದು.

ನಕ್ಕರೆ ಅದೇ ಸ್ವರ್ಗ

ಒಬ್ಬ ಭಕ್ತ ದೇವರನ್ನು ಕುರಿತು ಬಹಳ ದಿನಗಳಿಂದಲೂ ಪ್ರಾರ್ಥಿಸುತ್ತಿದ್ದ. ಇದನ್ನು ನೋಡಿದ ದೇವರು ಅವನ ಮುಂದೆ ಪ್ರತ್ಯಕ್ಷನಾಗಿ...

ದೇವರು : ಭಕ್ತ! ನಿನಗೆ ಎಂಥ ವರ ಬೇಕು ಕೇಳು ಕೊಡುತ್ತೇನೆ.

ಭಕ್ತ : ದೇವರೇ, ನಾನೇ ಒಬ್ಬ ವರ, ನನಗೆ ಬೇಕಾಗಿರುವುದು ವರ ಅಲ್ಲ, ವಧು... ವಧು... ಮಹಾಪ್ರಭು!

ಮೈಸೂರು ಮಿತ್ರ

ಮಂಗಳವಾರ, ಜನವರಿ 13, 2026

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಸೋಲು ಎಂಬುದು ಜಾಣ್ಮೆಯಿಂದ ಹೆಜ್ಜೆ ಇಡಲು ಕಲಿಸುವ, ಎಚ್ಚರಿಕೆಯ ಘಟನೆಯೇ ಹೊರತು ಮತ್ತಿನ್ನೇನೂ ಅಲ್ಲ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅನ್ಯಾಯದಿಂದ ಗಳಿಸಿದ್ದು, ಅಸಡ್ಡಾಳಾಗಿ ಹೋಯ್ತು.

ನಿಮ್ಮ ಪತ್ರಗಳು

ಊಬರ್ ಬೈಕ್ ಸೇವೆಯಿಂದ ತೊಂದರೆ ತಪ್ಪಿಸಿ

ಮಾನ್ಯರೆ,



ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಮುಂಜಾನೆ ವೇಳೆ ಊಬರ್ ಬೈಕ್ ಸೇವೆಯಿಂದ ಹಲವು ಪ್ರಯಾಣಿಕರಿಗೆ ತೊಂದರೆಯಾಗುತ್ತಿದೆ. ಅದರಲ್ಲೂ ಮೈಸೂರಿನಿಂದ ಬೆಂಗಳೂರಿಗೆ ಸಾರಿಗೆ ಬಸ್‌ನಲ್ಲಿ ತೆರಳುವ ಬಹುತೇಕ ಜನ ಮನೆಯಿಂದ ಗ್ರಾಮಾಂತರ ಬಸ್ ನಿಲ್ದಾಣ ಹಾಗೂ ರೈಲ್ವೆ ನಿಲ್ದಾಣಕ್ಕೆ ತೆರಳಲು ಈ ಬೈಕ್ ಸೇವೆಯನ್ನೇ ಅವಲಂಬಿಸಿದ್ದಾರೆ. ಆದರೆ ಮುಂಜಾನೆ ಅದರಲ್ಲೂ ಸೋಮವಾರ ದಿನಗಳಂದು ಸರಿಯಾದ ಸಮಯಕ್ಕೆ ಬಾರದೆ ಸುಮಾರು 20 ನಿಮಿಷ ತಡ ಮಾಡಿ ಆ ನಂತರ ಬೈಕ್ ಸವಾರನೇ ಕ್ಯಾನ್ಸಲ್ ಮಾಡುತ್ತಾರೆ. ಪರಿಣಾಮ ಸಕಾಲಕ್ಕೆ ನಿಲ್ದಾಣ ತಲುಪಲಾಗದೆ ಬಸ್ಸು, ರೈಲುಗಳು ಮಿಸ್ ಆಗಿ, ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿದೆ. ಆದ್ದರಿಂದ ಊಬರ್ ಬೈಕ್ ಟ್ಯಾಕ್ಸಿಗಳು ಸರಿಯಾಗಿ ಶಿಸ್ತಿನ ಪಾಲಿಸಬೇಕಾಗಿದೆ.

ಇಂದು(ಜ.12) ಮುಂಜಾನೆ 4.30ಕ್ಕೆ ಕುವೆಂಪುನಗರದಿಂದ ಮೈಸೂರಿನ ರೈಲ್ವೆ ನಿಲ್ದಾಣಕ್ಕೆ ಬೈಕ್ ಟ್ಯಾಕ್ಸಿ ಬುಕ್ ಮಾಡಿದಾಗ ರವಿ ಎಂಬುವವರು ಬುಕಿಂಗ್ ಪಡೆದರು. ಪಿಕ್ ಅಪ್ ಸಮಯ 5 ನಿಮಿಷ ಎಂದು ತೋರಿಸಿತು. ಆದರೆ ಇವರು ಸುಮಾರು 20 ನಿಮಿಷಗಳವರೆಗೆ ಕಾಲ್ ಮಾಡಿದರು ಸಹ ಪಿಕ್ ಮಾಡಲಿಲ್ಲ. ಅನಂತರ ಅವರೇ ಬುಕಿಂಗ್ ಕ್ಯಾನ್ಸಲ್ ಮಾಡಿದರು. ಇದರಿಂದ ಸರಿಯಾದ ಸಮಯಕ್ಕೆ ತಲುಪಲಾಗದೆ ನಷ್ಟವಾಯಿತು. ಕೆಲವರು ಗ್ರಾಹಕರನ್ನು ಪಿಕ್ ಮಾಡಿ ಡ್ರಾಪ್ ಮಾಡುತ್ತಿರುವಾಗಲೇ ಮತ್ತೊಬ್ಬರ ಬುಕಿಂಗ್ ಪಡೆಯುತ್ತಾರೆ. ಹೆಚ್ಚು ಟ್ರಿಪ್ ಮಾಡುವ ಆತುರದಲ್ಲಿ ವೇಗ ಮಿತಿ ಸೇರಿದಂತೆ ಯಾವುದೇ ಸಂಚಾರ ನಿಯಮ ಪಾಲಿಸುವುದಿಲ್ಲ. ಸಂಬಂಧಪಟ್ಟವರು ಈ ಬಗ್ಗೆ ಕ್ರಮ ವಹಿಸಿ, ಸಾರ್ವಜನಿಕರಿಗೆ ತೊಂದರೆ ತಪ್ಪಿಸುವಂತೆ ಮನವಿ. **–ನಾಗೇಶ್, ಮಾನಸಗಂಗೋತ್ರಿ, ಮೈಸೂರು.**

ಮೊದಲು ರಸ್ತೆ ಗುಂಡಿ ಮುಚ್ಚಿಸಿ




ಮಾನ್ಯರೆ,

ನಗರದಲ್ಲಿ ಸುಗಮ ಸಂಚಾರಕ್ಕಾಗಿ ನಿರ್ಮಿಸಿದ್ದ ರಸ್ತೆಗಳೆಲ್ಲ ಗುಂಡಿ ಬಿದ್ದು ವಾಹನ ಸವಾರರು ಪರದಾಡುವಂತಾಗಿದೆ. ರಸ್ತೆ ಗುಂಡಿಗಳಿಂದ ಜನರು ರೋಸಿ ಹೋಗಿದ್ದಾರೆ. ನಗರ ಕೇಂದ್ರ ಬಸ್ ನಿಲ್ದಾಣ ಹಾಗೂ ಫೈಲೈಟ್ ರಸ್ತೆಗಳು ಸೇರಿದಂತೆ ಪ್ರಮುಖ ರಸ್ತೆಗಳು ಅಡ್ಡ ರಸ್ತೆಗಳು ರಸ್ತೆ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಸಂಬಂಧ ಪಟ್ಟ ಅಧಿಕಾರಿಗಳು ವಿಫಲರಾಗಿದ್ದಾರೆ. ಗುಂಡಿಗಳನ್ನು ತಪ್ಪಿಸಲು ಹೋಗಿ ಸವಾರರು ಬೀಳುವುದು ಹಿಂಬದಿಯಿಂದ ಬರುವ ವಾಹನಗಳು ಡಿಕ್ಕಿ ಹೊಡೆಯುವುದು ಸಾಮಾನ್ಯವಾಗಿದೆ. ಗುಂಡಿಗಳಿಂದಾಗಿ ಸಂಚಾರ ಅಸ್ತವ್ಯಸ್ತಗೊಂಡು ಟ್ರಾಫಿಕ್ ಜಾಮ್ ಹೆಚ್ಚಾಗುತ್ತಿದೆ. ಮಣ್ಣು ಹಾಕಿದ ರಸ್ತೆಗಳಲ್ಲಿ ಧೂಳು ಹೆಚ್ಚಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ನಗರದ ಮುಖ್ಯ ರಸ್ತೆಯಲ್ಲಿ ಹಲವು ಕಾರಣಗಳಿಂದ ಹಳ್ಳ ತೋಡಿರುವುದು ಹಾಗೂ ಕಳಪೆ ಕಾಮಗಾರಿಗಳಿಂದಾಗಿ ಈ ಅಧ್ವಾನ ಸೃಷ್ಟಿಯಾಗಿದೆ.ರಾತ್ರಿ ಸಮಯದಲ್ಲಿ ದ್ವಿಚಕ್ರ ವಾಹನ ಸವಾರರು ಸಂಚರಿಸಲು ಪರದಾಡುವಂತಾಗಿದೆ. ಕೂಡಲೇ ಸಂಬಂಧ ಪಟ್ಟ ಅಧಿಕಾರಿಗಳು ಮೈಸೂರಿನ ರಸ್ತೆಬಿದ್ದ ಗುಂಡಿಗಳನ್ನು ಮುಚ್ಚಿಸಲು ಕ್ರಮ ಕೈಗೊಳ್ಳಬೇಕು. ಬೃಹತ್ ಮೈಸೂರು ಮಹಾನಗರಪಾಲಿಕೆ ರಚನೆ ಸಂಬಂಧ ಸರ್ಕಾರ ಅಧಿಸೂಚನೆ ಪ್ರಕಟಿಸಿದೆ. ಆದರೆ ರಸ್ತೆಗಳ ದುಸ್ಥಿತಿ ಸ್ಥಳೀಯ ಸಂಸ್ಥೆಯ ಆಡಳಿತವನ್ನು ಅಣಕಿಸುತ್ತವೆ. ನಗರ ವಿಸ್ತಾರವಾದರೆ ಯಾವ ರೀತಿಯಲ್ಲಿ ನಿರ್ವಹಿಸುತ್ತಾರೋ ಎಂದು ಆತಂಕವೂ ಉಂಟಾಗುತ್ತದೆ. **–ಮಹಾದೇವ, ಮೈಸೂರು.**

ಸಿಗ್ನಲ್‌ಗಳಲ್ಲಿ ಆಂಬುಲೆನ್ಸ್‌ಗೆ ದಾರಿ ಕೊಡಿ

ಮಾನ್ಯರೆ,

ಸಂಚಾರ ನಿಯಮಗಳ ಪಾಲನೆಯ ಬಗ್ಗೆ ಎಷ್ಟೇ ಜಾಗೃತಿ ಮೂಡಿಸಿದರೂ ಜನರಲ್ಲಿ ಜವಾಬ್ದಾರಿಯುತ ವರ್ತನೆ ಕಂಡುಬರುತ್ತಿಲ್ಲ ಎಂಬುದು ತುಂಬಾ ವಿಷಾದನೀಯ. ಅದರಲ್ಲೂ ಸಿಗ್ನಲ್‌ಗಳಲ್ಲಿ ಒಂದಿಷ್ಟು ಜಾಗ ಬಿಡದೆ ವಾಹನ ನಿಲ್ಲಿಸಿಕೊಂಡಿರುತ್ತಾರೆ. ಹಿಂದೆ ಆಂಬುಲೆನ್ಸ್ ಸೈರನ್ ಮಾಡುತ್ತಿದ್ದರೂ ಕದಲುವುದಿಲ್ಲ. 'ರೆಡ್ ಸಿಗ್ನಲ್' ಇದೆ, ಕ್ರಾಸ್ ಮಾಡಿದರೆ ದಂಡ ಬೀಳುತ್ತದೆ ಎಂಬ ಕಾರಣಕ್ಕೆ 'ಗ್ರೀನ್ ಸಿಗ್ನಲ್' ಬರುವವರೆಗೂ ಮುಂದೆ ಹೋಗುವುದಿಲ್ಲ. ಇದನ್ನು ನಿಯಮ ಪಾಲನೆ ಎನ್ನುವುದೋ ಅಥವಾ ಒಂದು ಜೀವದ ಜೊತೆ ಚೆಲ್ಲಾಟ ಎನ್ನುವುದೋ ತಿಳಿಯದು.



ಸಾವು–ಬದುಕಿನ ನಡುವೆ ಹೋರಾಡುತ್ತಿರುವ ರೋಗಿಯ ಆರ್ತನಾದಕ್ಕೆ ಸ್ಪಂದಿಸದ ನಮ್ಮ ಅಸಡ್ಡೆಯ ಮನೋಭಾವವು, ಸಮಾಜದಲ್ಲಿ ಮರೆಯಾಗುತ್ತಿರುವ ಮಾನವೀಯ ಮೌಲ್ಯಗಳಿಗೆ ಸಾಕ್ಷಿಯಾಗಿದೆ. ಆಂಬುಲೆನ್ಸ್ ಶಬ್ದ ಕೇಳಿಸಿದ ಕೂಡಲೇ, ರೆಡ್ ಸಿಗ್ನಲ್ ಇದ್ದರೂ ಅದನ್ನು ದಾಟಿ ತುರ್ತು ವಾಹನಕ್ಕೆ ದಾರಿ ಮಾಡಿಕೊಡುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯ. ಈ ವಿಚಾರದಲ್ಲಿ ನಗರ ಪೊಲೀಸ್ ಆಯುಕ್ತರು ಅಧಿಕೃತ ಸುತ್ತೋಲೆ ಮತ್ತು ಪತ್ರಿಕಾ ಪ್ರಕಟಣೆ ಹೊರಡಿಸಿ, ವಾಹನ ಸವಾರರಿಗೆ ಸ್ಪಷ್ಟನೆ ನೀಡಬೇಕು. ಆಂಬುಲೆನ್ಸ್‌ಗೆ ದಾರಿ ಮಾಡಿಕೊಡಲು ಸಿಗ್ನಲ್ ದಾಟಿದರೆ ದಂಡ ವಿಧಿಸುವುದಿಲ್ಲ ಎಂದು ಜಾಗೃತಿ ಮೂಡಿಸಬೇಕು.

ಬಹುತೇಕ ಸಿಗ್ನಲ್‌ಗಳಲ್ಲಿ ಪೊಲೀಸರು ಕಾಣಿಸುವುದಿಲ್ಲ. ಸಣ್ಣಪುಟ್ಟ ಅಪಘಾತಗಳಾದಾಗ ಮಧ್ಯಸ್ಥಿಕೆ ದೌಡಾಯಿಸುವ ಪೊಲೀಸರು, ಆಂಬುಲೆನ್ಸ್ ಸಂಚಾರ ವೇಳೆ ಸಿಗ್ನಲ್‌ಗಳಲ್ಲಿ ದಾರಿ ಮಾಡಿಕೊಡುವುದಕ್ಕೆ ಆದ್ಯತೆ ನೀಡಬೇಕು. ಸುರಕ್ಷಿತ ಸಂಚಾರ ದೃಷ್ಟಿಯಿಂದ ನಿಯಮ ಪಾಲನೆ ಕಡ್ಡಾಯ. ಇದಕ್ಕಿಂತ ಅಮೂಲ್ಯವಾದ ಜೀವ ರಕ್ಷಣೆ ಮುಖ್ಯ. **–ಬಿ.ಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.**



ಡಾ. ಗುಬ್ಬಿಗೂಡು ರಮೇಶ್
ಮೊ. 97429 34512

ದೀಪ ಸಾಲು

ಕೃಷ್ಣನ ಮುಗುಳ್ನಗೆ; ವಿನೋದದ ಉತ್ತರ







ಈ ಜೀವನವೆಂಬ ಮ್ಯಾರಥಾನ್‌ನಲ್ಲಿ ನಾವೆಲ್ಲಾ ಓದಿ, ನೋಡಿ, ಕೇಳಿ, Inspire ಆಗೋದು ಯಾಕೆ ಗೊತ್ತ? ನಾವಂದುಕೊಂಡ ಯಾವುದಾದರೂ ಒಂದೊಂದರಲ್ಲಿ ಯಶಸ್ಸು ಕಾಣಬೇಕು ಎನ್ನುವ ಆಶಯದಿಂದ.

ನಮ್ಮ ನಮ್ಮ Identityಯ ಮೂಲಕ ಈ ಜಗತ್ತಿನಲ್ಲಿ ನಮ್ಮದೊಂದು ಶಾಶ್ವತ ಮುದ್ರೆ ಒತ್ತಿ, ನಾವು ನಮ್ಮ ದಾರಿಯಲ್ಲಿ ನಡೆದು ಸಾಧಕರಾಗಬೇಕು. ಎಲ್ಲರೂ ಮೆಚ್ಚುವಂತೆ ನಾವಿರಬೇಕು ಎಂದುಕೊಳ್ಳುವ ಅಸಂಖ್ಯಾತ ಮನಸ್ಸುಗಳು ನಮ್ಮ ಸುತ್ತಲೂ ಇವೆ. ಆದರೆ ತಾವು ಅಂದುಕೊಂಡಂತೆ ಎಲ್ಲವೂ ನಡೆದು ಹೋಗಿ ಬದುಕಿನಲ್ಲಿ ಒಂದು ಸಾಧನೆಯ ಔನ್ನತ್ಯವನ್ನು ಕಂಡುಕೊಂಡ ಅನೇಕರು ಮತ್ತೇನನ್ನ ಯೋಚಿಸಬಹುದು ಎನ್ನುವ ವಿಲಕ್ಷಣವಾದ ಪ್ರಶ್ನೆ ಯಾವತ್ತಾದರೂ ನಿಮ್ಮನ್ನ ಕಾಡಿದೆಯಾ? ಆದರೆ ಅದು ಸತ್ಯ.

ತೇನ್‌ಸಿಂಗ್ ಹಿಮಾಲಯ ಹತ್ತಿ ಗೌರಿಶಂಕರ ಶಿಖರದ ಮೇಲೆ ಬಾವುಟ ನೆಟ್ಟು, ವಿಜಯದ ನಗೆ ಬೀರಿದ ಮೇಲೂ, ಗೌರಿಶಂಕರದ ನೆತ್ತಿಯ ಮೇಲೆ ಆಕಾಶ ನಗುತಿತ್ತಲ್ಲ! ಅದು ಆತನ ಇgoವನ್ನು ಕೆಣಕಲಿಲ್ಲವೆ? ಬುದ್ಧ ಜಗತ್ತಿಗೆ ಆಸೆಯೇ ದುಃಖದ ಮೂಲ–ಎಂಬುದರ ಅರಿವಿನ ಪೂರ್ಣಪಾಠ ಹೇಳಿದ ಮೇಲೂ ಜನಕಲ್ಯಾಣದ ಮೋಹಪಾಶಕ್ಕೆ ಸಿಕ್ಕ ಮೇಲೂ ಬುದ್ಧ ನಗುತ್ತಲೇ ಇದ್ದ. ಇದು ವಿಚಿತ್ರ ಅಲ್ಲವೇ? ಇಂಥ ಪ್ರಶ್ನೆ ಕೇಳಿಕೊಳ್ಳಲಿಕ್ಕೆ ದೊಡ್ಡ ಚಿಂತಕರಾಗಬೇಕಿಲ್ಲ. ನಮ್ಮ ಬದುಕಿನ ಏಕಾಂತದ ಕ್ಷಣಗಳನ್ನು ಎಣಿಸುತ್ತಾ ಕೂತಾಗ ಇಂತಹ ವಿಲಕ್ಷಣ ಪ್ರಶ್ನೆಗಳು ನಮ್ಮನ್ನ ಕಾಡುತ್ತವೆ.

ಆಗ ನಮ್ಮಲ್ಲಿ ಹುಟ್ಟುವ ವಿವೇಕ ವರ್ತುಲದಲ್ಲಿ ಇಂತಹ ಅನೇಕ ವಿಲಕ್ಷಣ ಪ್ರಶ್ನೆಗಳಿಗೆ ಉತ್ತರ ಹುಡುಕುವ ಪದಬಂಧ ಸೃಷ್ಟಿಯಾಗುತ್ತದೆ. ಎಷ್ಟೇ ಆಗಲಿ ಮನುಷ್ಯ ನೂರು ಭಾವನೆಗಳ ಸರದಾರ. ಅವುಗಳ ಹಕ್ಕು ಮಂಡಿಸುವ ಹಮ್ಮೀರ! ಕೆಲವೊಮ್ಮೆ ಏರುತ್ತಾನೆ. ಅದೇ ಅವರ ಸಾಧನೆ! ಕೆಲವೊಮ್ಮೆ ಎಡವುತ್ತಾನೆ ಅದೇ ಅವನ ವೇದನೆ! ಈ ಸಾಧನೆ ಮತ್ತು ವೇದನೆಗಳ ನಡುವೆ ನಾವೇ ಹಾಕಿ ಕೊಳ್ಳುವ ಇgo ಎಂಬ ಈ ಅಹಮಿಕೆಯ ಕಿರೀಟ ಒಮ್ಮೊಮ್ಮೆ ನಮ್ಮನ್ನು ಬಾಳೆಯಂತೆ ಬಾಗಿಸುತ್ತದೆ. ಇಲ್ಲದಿದ್ದರೆ ಅದೇ ಸಾಧನೆಯೆಂಬ ಅಹಮಿಕೆ ದೇಹಕ್ಕಂಟಿದ ವ್ರಣದಂತೆ ಬಾಧಿಸುತ್ತದೆ. ಹೀಗೆ ಬಾಗಿದ ಮತ್ತು ಬಾಧಿಸಿದ ಪ್ರಸಂಗವೊಂದು ಜಗತ್ತಿಗೇ ಗೀತೋಪದೇಶ ಮಾಡಿದ ಕೃಷ್ಣನ ಆಸುಪಾಸಿನಲ್ಲಿ ನಡೆಯುತ್ತದೆ ಅದು ಬಹಳ ತಮಾಷೆ, ಅದೇ ನಮ್ಮ ತರ್ಕದ ಪ್ರಶ್ನೆಗೆ ಉತ್ತರದ ಹುಡುಕಾಟ.

ಸಾಕ್ಷಾತ್ ಕೃಷ್ಣನ ಬೆರಳ ತುದಿಯಲ್ಲೇ ಸದಾ ಇರುತ್ತಿದ್ದ, ಕೃಷ್ಣನ ಆಜ್ಞಾನುವರ್ತಿಯಾಗಿ, ಸಕಲ ದಿಗ್ವಿಜಯಗಳ ಸ್ಪಷ್ಟ ಸಂದೇಶದಂತೆ ಕಂಗೊಳಿಸಿದ ಸುದರ್ಶನ (ಚಕ್ರ) ತನ್ನಸಾಧನೆ, ತನ್ನ ಅದಮ್ಯ ಶಕ್ತಿಯ ಬಗ್ಗೆ ತಾನೇ ಅಭಿಮಾನಪಟ್ಟುಕೊಂಡು ತನ್ನ ಶಕ್ತಿಯ ಮುಂದೆ, ತನ್ನ ಸಾಹಸ ಪ್ರಹಾರದ ಪ್ರವೃತ್ತಿಯ ಮುಂದೆ ಈ ಭೂ ಮಂಡಲದೊಳಗೆ ತನ್ನನ್ನ ಮೀರಿಸುವವರು ಯಾರಿದ್ದಾರೆ? ಎಂಬ ಅಹಮಿಕೆ ಸುದರ್ಶನನ ತಲೆಯಲ್ಲಿ ಬಂದು ಬಿಡುತ್ತದೆ. ಅದನ್ನ ಹೇಗಾದರೂ ಮಾಡಿ ಕೃಷ್ಣನ ಬಳಿ ನಿವೇದಿಸಿಕೊಂಡು ತಾನು ತನ್ನ ಪರಾಕ್ರಮದ ಮುಂದೆ ಇಡೀ ಭೂಮಂಡಲದಲ್ಲೇ ಯಾರು ಇಲ್ಲ! ತನ್ನ ಸರಿಸಮ ಇಲ್ಲಿ ಯಾರಿದ್ದಾರೆ? ಹಾಗಂತ ಸ್ವತಃ ಕೃಷ್ಣನ ಬಾಯಲ್ಲಿ ಹೇಳಿಸಿಕೊಂಡರೆ ತನ್ನ ಸಾರ್ಥಕ್ಯ ಇನ್ನೂ ಹೆಚ್ಚಾದೀತು ಎಂಬ ನಿರೀಕ್ಷೆಯೊಂದಿಗೆ ಒಮ್ಮೆ ಸಾಕ್ಷಾತ್ ಕೃಷ್ಣ ಪರಮಾತ್ಮನಲ್ಲಿ ಹೇಳಿಯೇ ಬಿಟ್ಟಿತು ಸುದರ್ಶನ.

ಪರಮಾತ್ಮ ಜಗತ್ತಿನಲ್ಲಿ ನಿನ್ನ ಕೈ ಬೆರಳುಗಳಿಂದ ಪ್ರಯೋಗಿಸಲ್ಪಟ್ಟ ನಾನು ಅಂದರೆ ಈ ಸುದರ್ಶನ ಚಕ್ರಕ್ಕಿಂತ, ಶಕ್ತಿಯುತ ಆಯುಧ ಯಾವುದಾದರೂ ಇದೆಯೇ? ನನಗೆ ಸರಿಸಾಟಿ ಯಾರು? ಎಂದು ಪ್ರಶ್ನೆ ಕೇಳುತ್ತದೆ. ಕೃಷ್ಣ ಸುದರ್ಶನನ ಪ್ರಶ್ನೆಗೆ ಉತ್ತರ ಹೇಳುವಷ್ಟರಲ್ಲಿ ವಾಯುವೇಗದಲ್ಲಿ ಬಂದ ಗರುಡನಿಗೂ ಅಂದು ಏಕೋ ಕಾಣೆ ಆವತ್ತೇ ಒಂದು ಪ್ರಶ್ನೆ ಹೊಳೆದಿದೆ. ಮಹಾ ಕಾವ್ಯಗಳಿಂದ ಹಿಡಿದು ಮಹಾರಥಿಗಳ ದಿವ್ಯಾಸ್ತ್ರಗಳ ವೇಗಕ್ಕಿಂತ ವಾಯುವೇಗದಲ್ಲಿ ಪ್ರವಹಿಸಿ ಗೆಲುವಿನ ದಿಕ್ಕು ತಲುಪುವವನು ನಾನು, ಗರುಡಪುರಾಣ–ವೆಂಬ ಮಹಾ ಕಾವ್ಯಕ್ಕೆ ನಾಮಾಂಕಿತನಾದ ನಾನು ಮತ್ತು ನನ್ನ ಶಕ್ತಿ ಸಾಮಾನ್ಯವೆ! ಜಗತ್ತಿನ ಆಸಾಮಾನ್ಯ ಶಕ್ತಿವಂತರಲ್ಲಿ ಗರುಡನಾದ ನಾನು ಅಗ್ರಗಣ್ಯನೇ ಸರಿ! ಎನಿಸತೊಡಗಿದೆ ಅಲ್ಲವೇ ಪರಮಾತ್ಮ ಎನ್ನುತ್ತದೆ. ಕೂಡಲೇ ಇದಕ್ಕೆ ಉತ್ತರ ಪಡೆದುಕೊಳ್ಳುವ ಮಹದಾಸೆಯಿಂದ ಸಾಕ್ಷಾತ್ ಕೃಷ್ಣ ಪರಮಾತ್ಮನಲ್ಲಿ ಗರುಡ ತನ್ನಪ್ರಶ್ನೆಯನ್ನು ಮತ್ತೆ ಮತ್ತೆ ನಿವೇದಿಸಿಕೊಂಡಿದೆ. ಪರಮಾತ್ಮ ವಾಯುವೇಗದಲ್ಲಿ ಹೊರಟು ಅಪ್ರತಿಮವಾದ ಕೆಲಸವನ್ನು ಕ್ಷಣ ಮಾತ್ರದಲ್ಲೇ ಗುರಿ ತಲುಪಿ ಸಾಧಿಸಿ ಬರುವ ಛಲ ನನಗಿಲ್ಲವೇ ಎನ್ನುವ ಪ್ರಶ್ನೆ ಕೇಳಿ ಉತ್ತರಕ್ಕಾಗಿ ಕಾಯುತ್ತಿದೆ ಗರುಡ. ಅಷ್ಟರಲ್ಲೇ ಅಲ್ಲಿಗೆ ಬಂದ ಕೃಷ್ಣನ ಅಂತರಂಗದ ಸಾಧ್ವಿ ಸತ್ಯಭಾಮೆ ಪರಮಾತ್ಮನಲ್ಲಿಗೆ ಬಂದು ಎಂದೂ ಕೇಳದ ಒಂದು ಪ್ರಶ್ನೆಯನ್ನ ಕೇಳುತ್ತಾಳೆ; ಸ್ವಾಮಿ ನಾನು ನನ್ನನ್ನು ಅಪ್ರತಿಮ ಸೌಂದರ್ಯವತಿ ಎಂದು ಕೊಳ್ಳಬಹುದೆ? ಸಾಕ್ಷಾತ್ ಜಾನಕೀ ರೂಪವನ್ನು ಹೋಲುತ್ತೇನೆಂದು ಕೊಳ್ಳಲೇ? ಎಂಬ ತಾರ್ಕಿಕ ಪ್ರಶ್ನೆಯನ್ನು ಹಾಕಿ ಉತ್ತರವನ್ನು ನಿರೀಕ್ಷಿಸುವ ಸತ್ಯ ಭಾಮೆಯ ತುಂಟ ಪ್ರಶ್ನೆಗೆ ಕೃಷ್ಣ ನಗುತ್ತಾನೆ.

> ಸಾಧಕರಾದವರು ಏರಿದ ಎತ್ತರಕ್ಕೆ, ಹಾರಿದ ಅಗಲಕ್ಕೆ, ನಿಂತ ನೆಲಕ್ಕೆ ನೆಲೆ ನಿಂತ ಮೇಲೆ, ವಿನಯ, ವಿಶ್ವಾಸ, ಸಪ್ರೇಮ, ಸ್ವನೀತಿ, ಸಂಪದಗಳು ಮೇಳವಿಸಿ ಬಾಳೆಯಂತೆ ಬಾಗಬೇಕೇ ಹೊರತು ವ್ರಣದಂತೆ ಬಾಧಿಸಿ ಅದು ರೋದಿಸಬಾರದು. ಎಲ್ಲವೂ ಕೈಗೂಡಿದ ಮೇಲೆ ಇತಿಮಿತಿಯಲ್ಲಿ ಬದುಕು ಸೊಗಸು! ಅಹಮಿಕೆಗಳು ತುಸು ಕಹಿಗನಸು–ಹೀಗೆ ಅನೇಕರು ಬದುಕಿನಲ್ಲಿ ಅಂತಸ್ತು, ಅಧಿಕಾರ, ಕೀರ್ತಿ, ಯೌವ್ವನ, ಸೌಂದರ್ಯ, ಒಂದೇ ಎರಡೇ ಸಕಲ ಭೂಮಂಡಲದಲ್ಲೇ ಪ್ರಸಿದ್ಧರಾದರೂ ತೃಪ್ತರಾಗದೆ ಪರಿತಪಿಸಿದವರನ್ನು ಈ ಜಗತ್ತಿನ ಚರಿತ್ರೆ ಕಂಡಿದೆ.

ಅದರಲ್ಲಡಗಿರುವ ಇgo centric–ಅಂಶದ ಪರಿಮಾಣವನ್ನು ತೂಕ ಹಾಕಿದ ಕೃಷ್ಣ ಪ್ರಶ್ನೆ ಹಾಕಿದ ಸುದರ್ಶನ, ಗರುಡ, ಸತ್ಯಭಾಮೆಯರಿಗೆ ಒಂದೇ ತರಹದ ಪ್ರಶ್ನೆ ಎದ್ದಿದೆ, ಸುದರ್ಶನನಿಗೆ ತನ್ನ ಶಕ್ತಿ, ಗರುಡ ನಿಗೆ ತನ್ನ ವೇಗ, ಸತ್ಯಭಾಮೆಗೆ ಜಾನಕಿಯನ್ನ ಹೋಲುವ ಅಪ್ರತಿಮ ತೇಜಸ್ಸು–ಹೀಗೆ ಅವರವರ Identity ಹಾಗೂ ಸಾಧನೆ ಮತ್ತು ಶೋಧನೆಗಳ ಬಗ್ಗೆ ಅವರವರಿಗೆ ಹುಟ್ಟಿದ ಅಹಮಿಕೆಯ ಪ್ರಶ್ನೆಗಳಿಗೆ **ಉತ್ತರಿಸಬೇಕಾದ ಸಂದರ್ಭ** ಸೃಷ್ಟಿಯಾಗುತ್ತದೆ ಕೃಷ್ಣನಿಗೆ.

ಆಗ ಕೃಷ್ಣನಿಗೆ ನೆನಪಾಗುವ ಪಾತ್ರವೇ ರಾಮಾಯಣದ ಆಂಜನೇಯ, ರಾಮಭಕ್ತ ಹನುಮಂತ. ಲಂಕೆಯಲ್ಲಿದ್ದ ಸೀತೆಗೆ ಉಂಗುರ ಕೊಟ್ಟು ರಾಮನ ಅಭಯ ನೀಡಿ ಸೀಮೋಲಂಘನ–ಮಾಡುವ ಶಕ್ತಿಯಾರಿಗಿದೆ ಎಂದು ವಾನರ ಸೇನೆ ಸಮುದ್ರ ತೀರದಲ್ಲಿ ಚರ್ಚಿಸಿದ ಸಂದರ್ಭವದು. ಸಂಪಾತಿ ಹೇಳಿದ ಸೀತಾ ವನವಾಸದ ಮುಕ್ತಿಗೆ ಸಮುದ್ರ ಹಾರಲು ತಯಾರಾದ ವಾನರಸೇನೆ ತಮ್ಮ ತಮ್ಮ **ಶಕ್ತಿಸಂಚಯನದ ಪರಿಮಾಣದ** ಲೆಕ್ಕ ಹೇಳುತ್ತಿತ್ತು.

ಗಜ ತಾನು ಹತ್ತು ಯೋಜನ ಹಾರಬಲ್ಲೆ ಎಂದ, ಗವಾಕ್ಷ 20 ಯೋಜನ, ಗವಯ ಮೂವತ್ತು ಯೋಜನ ಶರಭ ನಲವತ್ತು ಯೋಜನ, ಗಂಧ ಮಾದನ–50 ಯೋಜನ, ಮಹಿಂದ–60 ಯೋಜನ ದ್ವಿವಿಧ–70 ಯೋಜನ, ಸುಸೇಷಣ–80 ಯೋಜನ, ಅಂಗದ 100 ಯೋಜನ... ಹೀಗೆ ವಾನರ ಸೇನೆ ತಮ್ಮ ತಮ್ಮ ಶಕ್ತಿ ಸಾಮರ್ಥ್ಯದ ಬಗ್ಗೆ ಮಾತಾಡುತ್ತಿದ್ದರೆ ಇಡೀ ಸಮುದ್ರವನ್ನು ಹಾರಬಲ್ಲ ತಾಕತ್ತಿದ್ದ ಹನುಮಂತ ಆಕಾಶದ ಕಡೆ ನೋಡುತ್ತಾ ಕಲ್ಲು ಬಂಡೆಯಂತೆ ಒಬ್ಬನೇ ಕುಳಿತಿದ್ದ, ಕಡೆಗೆ ಸಮುದ್ರ ಹಾರಿದ್ದು ಹನುಮಂತನೆ! ಸೀತೆಯನ್ನ ಸಂಧಿಸಿದ್ದು ಹನುಮಂತನೆ! ಆದರೆ ತನ್ನೊಳಗಿನ ಶಕ್ತಿಯನ್ನ ಅರಿಯದೇ ಕುಳಿತ ವಿನಮ್ರ ರಾಮಭಕ್ತ ಹನುಮ ಇಲ್ಲಿ ಕೃಷ್ಣನಿಗೆ ನೆನಪಾದ. ಅಹಮಿಕೆಯ ಪ್ರಶ್ನೆಗಳಿಗೆ ಹನುಮಂತನೇ ಸೂಕ್ತ ಉತ್ತರ ಎಂದೆನಿಸಿ ಗರುಡ, ಸುದರ್ಶನ, ಸತ್ಯಭಾಮೆ ಮೂವರನ್ನೂ ಒಂದು ಪ್ರಹಸನಕ್ಕೆ ಸಿದ್ಧವಾಗುವಂತೆ ಹೇಳಿದ ಕೃಷ್ಣ.

ತಾನು ರಾಮನಂತೆ ಪರಕಾಯ ಪ್ರವೇಶ ಮಾಡಿ ಸತ್ಯಭಾಮೆಯನ್ನ ಸೀತೆಯಂತೆ ತನ್ನ ಪಕ್ಕದಲ್ಲೇ ಕುಳ್ಳಿರಿಸಿಕೊಂಡು ಸುದರ್ಶನನನ್ನು ಬಾಗಿಲಿಗೆ ಕಾವಲು ಹಾಕಿ, ಹನುಮಂತನನ್ನು ಕರೆತರಲು ಗರುಡನನ್ನು ಕಳುಹಿಸಿದ. ಕ್ಷಣಾರ್ಧದಲ್ಲಿ ರಾಮನ ರೂಪದಲ್ಲಿದ್ದ ಕೃಷ್ಣನ ಮುಂದೆ ಹನುಮಂತ ಪ್ರತ್ಯಕ್ಷನಾದ. ಹಾಗೆ ಬಂದವನೇ ರಾಮನ ರೂಪದಲ್ಲಿದ್ದ ಕೃಷ್ಣನಿಗೆ ಭಕ್ತಿ ಪೂರ್ವಕವಾಗಿ ನಮಸ್ಕರಿಸಿದ.

ಕೃಷ್ಣ ಕೇಳಿದ ಹನುಮಂತನಿಗೆ, ನಿನ್ನನ್ನ ಕರೆತರಲು ಬಂದ ನಮ್ಮ ವಾಯುವೇಗದ ಗರುಡ ನಿನಗೆ ಸಿಗಲಿಲ್ಲವೆ? ಎಂದು. ಕೂಡಲೇ ಹನುಮಂತ, ಗರುಡ ಹಿಂದೆ ಎಲ್ಲೋ ಬರುತ್ತಿರಬೇಕು ಪ್ರಭು, ನಿನ್ನನ್ನು ಕಾಣುವ ಅತಿ ಆಸೆಯಿಂದ ನಾನು ಬೇಗ ಬಂದುಬಿಟ್ಟೆ ಎಂದ, ಗರುಡನ ವಾಯುವೇಗಕ್ಕಿಂತ ಮತ್ತೊಬ್ಬರಿದ್ದಾರೆಂಬ ಉತ್ತರ ಅಷ್ಟೊತ್ತಿಗಾಗಲೇ ಗರುಡನಿಗೆ ಸಿಕ್ಕಿ ಹೋಗಿತ್ತು.

ಇನ್ನು ಬಾಗಿಲಿನಲ್ಲಿ ನಮ್ಮ ಸುದರ್ಶನ ನಿನ್ನನ್ನು ತಡೆಯಲಿಲ್ಲವೇ? ಎಂಬ ಕೃಷ್ಣನ ಮುಗುಳು ನಗೆಯ ಮರು ಪ್ರಶ್ನೆಗೆ ಹನುಮಂತ ಹೇಳಿದ, ಹೌದು ಪ್ರಭು ನಿನ್ನ ಅನುಮತಿ ಕೇಳಿ ಬಂದು ನಂತರ ನನ್ನನು ನಿನ್ನ ಬಳಿಗೆ ಬಿಡುತ್ತೇನೆಂದು ಹೇಳಿದ ಸುದರ್ಶನ! ಆದರೆ ನನಗೆ ನಿನ್ನನ್ನು ಕಾಣುವ ತವಕ ಹೆಚ್ಚಾಗಿ ಅಷ್ಟು ಸಮಯ ನಾನು ಕಾಯಲಾರೆ ಎನ್ನಿಸಿ. ಸಮಯ ವ್ಯರ್ಥ ಮಾಡದೆ ನನ್ನನು ತಡೆಯಲು ಬಂದ ಸುದರ್ಶನನನ್ನೇ ನುಂಗಿಬಿಟ್ಟೆ ಎಂದ ಹನುಮಂತ. ಅಲ್ಲಿಗೆ ಸುದರ್ಶನನಿಗೂ ಜಗತ್ತಿನಲ್ಲಿ ತಾನೇ ಶಕ್ತಿವಂತ ಎಂಬ ಬೀಗುವಿಕೆಗೆ ಹನುಮಂತನ ಹೊಟ್ಟೆಯಲ್ಲಿ ಉತ್ತರ ಸಿಕ್ಕಿತು.

ಇನ್ನು ಸಾಧ್ವಿ ಸತ್ಯಭಾಮೆಯನ್ನು ಸೀತೆಯ ರೂಪದಲ್ಲಿ ಕಂಡ ಹನುಮಂತ ಕೂಡಲೇ ಗುರುತಿಸಿ ಜಾನಕಿಯ ತೇಜಸ್ವಿ ಗೌರವರ್ಣದ ಪ್ರಭೆ ಎಲ್ಲಿ ಹೋಯಿತು ಪ್ರಭು, ತಾಯಿ ಜಾನಕಿ ಎಲ್ಲಿ? ಎಂದು ಕೇಳಿಯೆ ಬಿಟ್ಟ, ಅಲ್ಲಿಗೆ ಸತ್ಯಭಾಮೆಯ ಪ್ರಶ್ನೆಗೆ ಉತ್ತರ ಸಿಕ್ಕಿತ್ತು. ಅದಕ್ಕೇ ಕುಮಾರವ್ಯಾಸ ಬರೆದದ್ದು **ತಿಳಿಯ ಹೇಳುವೆ ಕೃಷ್ಣ ಕಥೆಯನು ಇಳೆಯ ಜಾಣರು ಮೆಚ್ಚುವಂತಿರೆ ನೆಲಕೆ ಪಂಚಮ ಶೃತಿಯನೊರೆವೆ** ಎಂದು.

ಹೀಗೆ ಸಾಧಕರಾದವರು ಏರಿದ ಎತ್ತರಕ್ಕೆ, ಹಾರಿದ ಅಗಲಕ್ಕೆ, ನಿಂತ ನೆಲಕ್ಕೆ ನೆಲೆ ನಿಂತ ಮೇಲೆ, ವಿನಯ, ವಿಶ್ವಾಸ, ಸ್ವಪ್ರೇಮ, ಸ್ವನೀತಿ, ಸಂಪದಗಳು ಮೇಳವಿಸಿ ಬಾಳೆಯಂತೆ ಬಾಗಬೇಕೇ ಹೊರತು ವ್ರಣದಂತೆ ಬಾಧಿಸಿ ಅದು ರೋಧಿಸಬಾರದು. ಎಲ್ಲವೂ ಕೈಗೂಡಿದ ಮೇಲೆ ಇತಿಮಿತಿಯಲ್ಲಿ ಬದುಕು ಸೊಗಸು! ಅಹಮಿಕೆ ಗಳು ತುಸು ಕಹಿಗನಸು–

ಹೀಗೆ ಅನೇಕರು ಬದುಕಿನಲ್ಲಿ ಅಂತಸ್ತು, ಅಧಿಕಾರ, ಕೀರ್ತಿ, ಯೌವ್ವನ, ಸೌಂದರ್ಯ, ಒಂದೇ ಎರಡೇ ಸಕಲ ಭೂಮಂಡಲದಲ್ಲೇ ಪ್ರಸಿದ್ಧರಾದರೂ ತೃಪ್ತರಾಗದೆ ಪರಿತಪಿಸಿದವರನ್ನು ಈ ಜಗತ್ತಿನ ಚರಿತ್ರೆ ಕಂಡಿದೆ. ಆದರೆ ಇಲ್ಲಿ ಪ್ರಾಸಂಗಿಕವಾಗಿ ತನ್ನವರನ್ನೂ ಬಿಡದೆ ಕಾಡಿದ ಪ್ರಶ್ನೆಗಳಿಗೆ ವಿನೋದದಿಂದಲೇ ಉತ್ತರಿಸಿದ ಕೃಷ್ಣನ ಮುಗುಳ್ನಗೆ ಉತ್ತರದ ಸೊಬಗಿಗೆ ತಲೆದೂಗದವರಾರು? ಏನಂತೀರಿ?.

ಮೈಸೂರಿಗೆ ಅವಶ್ಯವಿರುವ ಯೋಜನೆಗಳ ಪ್ರಸ್ತಾವನೆ ಸಿದ್ಧಪಡಿಸಿ

- ಅಧಿಕಾರಿಗಳಿಗೆ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸೂಚನೆ
- ಬಜೆಟ್‌ನಲ್ಲಿ ಸೇರಿಸಲು ಅವಕಾಶ ಆಗುವಂತೆ ಯೋಜನೆ ರೂಪಿಸಿ

ಮೈಸೂರು, ಜ.12(ಎಂಕೆ)– ಮೈಸೂರಿನ ಅಭಿವೃದ್ಧಿ ಮತ್ತು ಸಾರ್ವಜನಿಕರಿಗೆ ಅವಶ್ಯವಿರುವ ಯೋಜನೆಗಳ ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ಮೈಸೂರು ಜಿಪಂ ಸಭಾಂಗಣದಲ್ಲಿ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸೋಮವಾರ ಸಭೆ ನಡೆಸಿದ ಅವರು, ರಾಜ್ಯದಲ್ಲಿ ಪ್ರಸಕ್ತ ಹಣಕಾಸು ವರ್ಷದ ಬಜೆಟ್ ಸಿದ್ಧತಾ ಕಾರ್ಯ ನಡೆಯುತ್ತಿದ್ದು, ಅವಶ್ಯವಿರುವ ಯೋಜನೆಗಳ ಪ್ರಸ್ತಾವನೆಯನ್ನು ಮುಖ್ಯ ಮಂತ್ರಿಗಳಿಗೆ ಸಲ್ಲಿಸುವಂತೆ ತಿಳಿಸಿದರು.

ಯೋಜನೆಗಳ ಪ್ರಾಮುಖ್ಯತೆಯ ಬಗ್ಗೆ ವಿವರಿಸಿ, ಆಯವ್ಯಯದಲ್ಲಿ ಸೇರಿಸಿದರೆ, ಅನುದಾನ ಬಿಡುಗಡೆಯಾಗುವುದಲ್ಲದೆ ಯೋಜನೆ ಸಫಲವಾಗಿ, ಅಭಿವೃದ್ಧಿ ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು ಎಂದರು.

ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಹೊಸ'ದಾಗಿ ಆಗಬೇಕಾಗಿರುವ ಹಾಸ್ಟೆಲ್ ಕಟ್ಟಡಗಳ ವಿವರ ಸಲ್ಲಿಸಬೇಕು. ಆಶ್ರಮ ಶಾಲೆಗಳಲ್ಲಿ ಬಹುತೇಕ ಹೊರಗುತ್ತಿಗೆ ನೌಕರರು ಕೆಲಸ ಮಾಡುತ್ತಿದ್ದು, ನೇಮಕಾತಿ ಪ್ರಕ್ರಿಯೆ ಮತ್ತು ಹಾಡಿ ಪ್ರದೇಶದ ಜನರಿಗೆ ಹೆಚ್.ಡಿ.ಕೋಟೆ, ಪಿರಿಯಾಪಟ್ಟಣ ಹಾಗೂ ಹುಣಸೂರು ತಾಲೂಕಿನಲ್ಲಿ ಕೌಶಲಾಧಾರಿತ ತರಬೇತಿ ಕೇಂದ್ರಗಳನ್ನು ತೆರೆಯಬೇಕಿದೆ ಎಂದು ಹೇಳಿದರು.

ಮೈಸೂರು ನಗರದಲ್ಲಿ ಕಳೆದ 15 ವರ್ಷದಿಂದ 390 ಸಾರಿಗೆ ಬಸ್‌ಗಳ ಸಂಚರಿಸುತ್ತಿದ್ದು, ಜನಸಂಖ್ಯೆ ಹೆಚ್ಚಳಕ್ಕೆ ಅನುಗುಣವಾಗಿ ಬಸ್‌ಗಳು ಸಂಖ್ಯೆಯೂ ಹೆಚ್ಚಾಗಬೇಕು. ಹಾಗೆಯೇ ಡಿಪೋಗಳ ಅವಶ್ಯಕತೆ ಇದ್ದು, ಈ ಕುರಿತು ಮಾಹಿತಿ ನೀಡುವಂತೆ ಸಾರಿಗೆ ನಿಗಮದ ಅಧಿಕಾರಿಗಳಿಗೆ ಸೂಚಿಸಿದರು.

ಅಲ್ಪಸಂಖ್ಯಾತ ಹಾಗೂ ಇನ್ನಿತರೆ ಯಾವುದೇ ಸಮುದಾಯದ ವಿದ್ಯಾರ್ಥಿಗಳು ವಿದ್ಯಾಭ್ಯಾಸದಿಂದ ವಂಚಿತರಾಗಬಾರದು. ಈ ನಿಟ್ಟಿನಲ್ಲಿ ಅಗತ್ಯವಿರುವ ವಸತಿ ಶಾಲೆಗಳು, ಸ್ಪರ್ಧಾತ್ಮಕ ಪರೀಕ್ಷೆಗಳು ಹಾಗೂ ಇನ್ನಿತರೆ ಅಗತ್ಯತೆಗಳ ಬಗ್ಗೆ ಪಸ್ತಾವನೆ ಸಿದ್ಧಪಡಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಮಾತನಾಡಿ, ಅಧಿಕಾರಿಗಳು ಜಿಲ್ಲೆಯಲ್ಲಿ ಅವಶ್ಯವಿರುವ ಯೋಜನೆಗಳ ಕುರಿತು ಕ್ರೋಢೀಕೃತ ವರದಿಯನ್ನು ಶೀಘ್ರದಲ್ಲಿ ಕಚೇರಿಗೆ ಸಲ್ಲಿಸುವಂತೆ ತಿಳಿಸಿದರು. ಸಭೆಯಲ್ಲಿ ನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಜಿಪಂ ಸಿಇಓ ಎಸ್.ಯುಕೇಶ್‌ಕುಮಾರ್, ಎಂಡಿಎ ಆಯುಕ್ತ ರಕ್ಷಿತ್ ಮತ್ತಿತರರಿದ್ದರು.



ಮೈಸೂರು ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ ಇನ್ನಿತರರು ಉಪಸ್ಥಿತರಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವಿವೇಕಾನಂದರ ಜಯಂತಿ ಅಂಗವಾಗಿ ವಿಶೇಷ ಉಪನ್ಯಾಸ



ಮೈಸೂರಿನ ರಾಮಕೃಷ್ಣ ವಿದ್ಯಾಕೇಂದ್ರ ಪದವಿ ಪೂರ್ವ ಕಾಲೇಜಿನಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ಅಂಗವಾಗಿ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಕಾಲೇಜಿನ ಕಾರ್ಯಕಾರಿ ಸಮಿತಿ ಸದಸ್ಯ ಸುಂದರಂ ಮಾತನಾಡಿದರು.

ಮೈಸೂರು, ಜ.12– ಮೈಸೂರಿನ ರಾಮಕೃಷ್ಣನಗರದ ರಾಮಕೃಷ್ಣ ವಿದ್ಯಾಕೇಂದ್ರ ಪದವಿ ಪೂರ್ವ ಕಾಲೇಜಿನಲ್ಲಿ ಸ್ವಾಮಿ ವಿವೇಕಾನಂದರ ಜಯಂತಿಯ ಅಂಗವಾಗಿ ವಿಶೇಷ ಉಪನ್ಯಾಸವನ್ನು ಏರ್ಪಡಿಸಲಾಗಿತ್ತು.

ರಾಮಕೃಷ್ಣ ಆಶ್ರಮದ ಸ್ವಾಮಿ ಪರಮಹಂಸಾನಂದಜೀ ಮಹಾರಾಜ್ ಮಾತನಾಡಿ, ಮನಸ್ಸು ಗೊಂದಲಗಳ ಗೂಡಾಗಬಾರದು. ನಿಮ್ಮಲ್ಲಿರುವ ಸಮಸ್ಯೆಗಳನ್ನು ನೀವು ಗುರುತಿಸಿಕೊಳ್ಳುವ ಸಾಮರ್ಥ್ಯವಿದ್ದರೆ, ನಿಮ್ಮ ಸಮಸ್ಯೆ ಅರ್ಧ ಪರಿಹಾರವಾದಂತೆ. ಛಲ, ಶ್ರದ್ಧೆ, ಪ್ರಾಮಾಣಿಕತೆಯಿಂದ ಏನನ್ನಾದರೂ ಸಾಧಿಸಬಹುದು. ಸ್ವಾಮಿ ವಿವೇಕಾನಂದರ ಬಗ್ಗೆ ಓದಿದರೆ ಸಾಕಷ್ಟು ಮೌಲ್ಯಗಳು ತಿಳಿಯುತ್ತವೆ ಎಂದು ಸಲಹೆ ನೀಡಿದರು.

ಕಾಲೇಜಿನ ಕಾರ್ಯಕಾರಿ ಸಮಿತಿ ಸದಸ್ಯ ಸುಂದರಂ ಮಾತನಾಡಿ, ಏಳಿ ಎದ್ದೇಳಿ, ಗುರಿ ಮುಟ್ಟುವವರೆಗೆ ನಿಲ್ಲದಿರಿ ಎಂಬ ಸ್ವಾಮಿ ವಿವೇಕಾನಂದರ ಘೋಷವಾಕ್ಯವನ್ನು ಸದಾ ಸ್ಮರಿಸಿಕೊಳ್ಳಬೇಕು. ಜೀವನದಲ್ಲಿ ಗುರಿ ಹೊಂದಿರಬೇಕು. ಆ ಗುರಿಯನ್ನು ನಿರ್ದಿಷ್ಟ ಸಮಯದೊಳಗೆ ಸಾಧಿಸಲು ಕಾರ್ಯೋನ್ಮುಖರಾಗಬೇಕು. ಇಲ್ಲವಾದರೆ ಗುರಿ ಕನಸಾಗಿಯೇ ಉಳಿಯುತ್ತದೆಯೇ ಹೊರತು ಸಾಕಾರವಾಗುವುದಿಲ್ಲ. ಆತ್ಮವಿಶ್ವಾಸವಿದ್ದಾಗ ಯಾವ ಸೋಲೂ ನಮ್ಮನ್ನು ಭಯಪಡಿಸುವುದಿಲ್ಲ. ವಿದ್ಯೆ ನಮ್ಮ ಶಕ್ತಿ ಅದನ್ನು ಗಳಿಸಲು ಏಕಾಗ್ರತೆ ಇರಬೇಕು ಎಂದು ಕಿವಿಮಾತು ಹೇಳಿದರು.


ಕಾರ್ಯಕ್ರಮದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಪ್ರೊ.ಜಿ.ಚಂದ್ರಶೇಖರ್, ಪ್ರಾಂಶುಪಾಲ ಸಿ.ಶಿವಪ್ಪ, ಬೋಧಕ–ಬೋಧಕೇತರರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶಿಕ್ಷಣ ಕ್ಷೇತ್ರಕ್ಕೆ ಸಿದ್ದರಾಮಯ್ಯ ಸರ್ಕಾರದ ಆದ್ಯತೆ

ಶಾಸಕ ಜಿ.ಟಿ.ದೇವೇಗೌಡರ ಶ್ಲಾಘನೆ

ಮೈಸೂರು,ಜ.12(ಎಂಟಿವೈ)– ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿದರೆ ದೇಶ ಅಭಿವೃದ್ಧಿ ಸಾಧ್ಯವಾಗಲಿದ್ದು, ರಾಜ್ಯದಲ್ಲಿ ಏಕಕಾಲದಲ್ಲಿ 300ಕ್ಕೂ ಹೆಚ್ಚು ಕೆಪಿಎಸ್ ಶಾಲೆ ಆರಂಭಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮುಂದಾಗಿರುವುದು ಉತ್ತಮ ಬೆಳವಣಿಗೆ ಎಂದು ಶಾಸಕ ಜಿ.ಟಿ.ದೇವೇಗೌಡ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಹೊರವಲಯದ ಸಿದ್ದಲಿಂಗಪುರದ ಬಳಿಯಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಭಾಂಗಣದಲ್ಲಿ ಜಿ.ಪಂ., ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿ ವತಿಯಿಂದ ಸೋಮವಾರ ಆಯೋಜಿಸಿದ್ದ 'ರಾಜ್ಯ ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಶಿಕ್ಷಕರ ಸಹಪಠ್ಯ ಚಟುವಟಿಕೆ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ಶಿಕ್ಷಣಕ್ಕೆ ಆದ್ಯತೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಕ್ರಮ ಕೈಗೊಂಡಿರುವುದು ಶ್ಲಾಘನೀಯ. ಒಂದೆಡೆ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರು ಹೆಚ್ಚು ಹೆಚ್ಚು ಮಕ್ಕಳನ್ನು ಹಡೆಯುವಂತೆ ಕರೆ ನೀಡಿದ್ದರೆ, ಮತ್ತೊಂದೆಡೆ ಕಲ್ಯಾಣ ಕರ್ನಾಟಕದಲ್ಲಿ ಸಿದ್ದರಾಮಯ್ಯ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಕರ್ನಾಟಕ ಪಬ್ಲಿಕ್ ಶಾಲೆ ತೆರೆಯಲು ಚಾಲನೆ ನೀಡಿದ್ದಾರೆ. ರಾಜ್ಯದಲ್ಲಿ ಏಕಕಾಲದಲ್ಲಿ 300 ಪಬ್ಲಿಕ್ ಶಾಲೆಗಳನ್ನು ತೆರೆಯುತ್ತಿರುವುದು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ದೊಡ್ಡ ಮಟ್ಟದ ಕೊಡುಗೆಯಾಗಿದೆ ಎಂದರು.



ಮೈಸೂರಿನ ಸಿದ್ಧಲಿಂಗಪುರ ಸಮೀಪದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಸಭಾಂಗಣದಲ್ಲಿ ನಡೆದ ರಾಜ್ಯ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲೆ ಶಿಕ್ಷಕರ ಸಹಪಠ್ಯ ಚಟುವಟಿಕೆ ಕಾರ್ಯಕ್ರಮವನ್ನು ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಈ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ, ಅಂದು ಶಿಕ್ಷಣ ಸಚಿವರಾಗಿದ್ದ ಗೋವಿಂದೇಗೌಡರು ಒಂದು ಲಕ್ಷ ಶಿಕ್ಷಕರನ್ನು ನೇಮಕಾತಿ ಮಾಡಿದರು. ಪಾರದರ್ಶಕವಾಗಿ ಶಿಕ್ಷಕರ ನೇಮಕಾತಿ ಮಾಡಿದ್ದು ಇತಿಹಾಸವಾಗಿದೆ. ಯಾವುದೇ ಶಿಕ್ಷಣ ಸಂಸ್ಥೆಯಲ್ಲಾದರೂ ಸರಿ ಮುಖ್ಯ ಶಿಕ್ಷಕರು ಸಹ ಶಿಕ್ಷಕರೊಂದಿಗೆ ಪ್ರೀತಿ ವಿಶ್ವಾಸದಿಂದ ಇರಬೇಕು. ಪಾಠದೊಂದಿಗೆ ಪಠ್ಯೇತರ ಚಟುವಟಿಕೆಗಳನ್ನು ನಡೆಸಬೇಕು ಎಂದರು.

ಲಂಚ ಇಲ್ಲದ ಕ್ಷೇತ್ರ ಎಂದರೆ ಅದು ಶಿಕ್ಷಣ ಕ್ಷೇತ್ರ. ಲಂಚಯಿಲ್ಲದೇ ಪ್ರಾಮಾಣಿಕವಾಗಿ ಈ ದೇಶಕ್ಕೆ ಉತ್ತಮ ಪ್ರಜೆಗಳನ್ನು, ದೇಶದ ಭವಿಷ್ಯದ ರೂವಾರಿಗಳನ್ನು ತಯಾರು ಮಾಡುವವರು ಗುರುಗಳು. ಪ್ರಾಥಮಿಕ ಶಿಕ್ಷಣದಲ್ಲಿ ತಂದೆ–ತಾಯಿ ಮಕ್ಕಳನ್ನು ಹೇಗೆ ಪ್ರೀತಿಯಿಂದ ಕಲಿಸುತ್ತಾರೋ ಅಷ್ಟೇ ಪ್ರೀತಿಯಿಂದ ಶಾಲೆಯಲ್ಲಿ ಶಿಕ್ಷಣ ನೀಡುವವರು ಶಿಕ್ಷಕರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಯುವಕರಿಗೆ ಸ್ಫೂರ್ತಿ ತುಂಬಿದ ಮಹಾನ್ ವ್ಯಕ್ತಿ ಸ್ವಾಮಿ ವಿವೇಕಾನಂದರು. 1893ರಲ್ಲಿ ರಾಮಕೃಷ್ಣ ಆಶ್ರಮದ ವತಿಯಿಂದ ಶಿಕ್ಷಣ ಸಂಸ್ಥೆಗಳನ್ನು ಆರಂಭ ಮಾಡಿದ್ದು ಸ್ವಾಮಿ ವಿವೇಕಾನಂದರು. ಇಡೀ ಪ್ರಪಂಚದಾದ್ಯಂತ ರಾಮಕೃಷ್ಣ ಪರಮಹಂಸ ಅವರ ಹೆಸರಿನಲ್ಲಿ ಇಂದು ಆಧ್ಯಾತ್ಮಿಕ ಶಿಕ್ಷಣ ಸಂಸ್ಥೆಗಳು ನಡೆಯುತ್ತಿರುವುದು ಹೆಮ್ಮೆಯ ವಿಷಯ ಎಂದರು.

> ಈ ಹಿಂದೆ ನಾನು ಜಿ.ಪಂ. ಅಧ್ಯಕ್ಷನಾಗಿದ್ದ ವೇಳೆ ಹೆಚ್.ಡಿ ಕೋಟೆ ಭಾಗದ ಮುಸ್ಲಿಂ ಸಮುದಾಯದ ಶಿಕ್ಷಕಿಯೊಬ್ಬರನ್ನು ವರ್ಗಾವಣೆ ಮಾಡಿಸುವಂತೆ ಆಕೆಯ ಪತಿ ಕವರ್‌ನಲ್ಲಿ ಹತ್ತು ಸಾವಿರ ರೂ. ನೀಡಿದ್ದರು. ನಾನು ಆತನನ್ನು ಕರೆಸಿ ಹಣ ವಾಪಸ್ಸು ನೀಡಿ, ವರ್ಗಾವಣೆ ಮಾಡಿಸಿಕೊಟ್ಟಿದ್ದೆ.
> –ಜಿ.ಟಿ.ದೇವೇಗೌಡ

ಕಾರ್ಯಕ್ರಮದಲ್ಲಿ ಡಿಡಿಪಿಐ ಉದಯ್ ಕುಮಾರ್, ಶಿಕ್ಷಕರ ಕಲ್ಯಾಣ ನಿಧಿ ಉಪ ನಿರ್ದೇಶಕ ಜಯಪ್ರಕಾಶ್, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಸಿದ್ದಬಸಪ್ಪ, ಶಿಕ್ಷಣಾಧಿಕಾರಿಗಳ ಸಂಘದ ರಾಜ್ಯಾಧ್ಯಕ್ಷ ಕೆ.ಜಿ. ಆಂಜನಪ್ಪ, ಎಸ್‌ಸಿ–ಎಸ್‌ಟಿ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ವೆಂಕಟೇಶಯ್ಯ ಹಾಗೂ ಜಿಲ್ಲೆಯ ಎಲ್ಲಾ ಶಿಕ್ಷಕರ ಸಂಘದ ಪದಾಧಿಕಾರಿ, ಬಿಇಓ ಉಪಸ್ಥಿತರಿದ್ದರು.

ವಿವಿಧ ವಿಭಾಗಗಳಲ್ಲಿ 7 ಸ್ಪರ್ಧೆ ಜರುಗಲಿದ್ದು, ರಾಜ್ಯದ ಶೈಕ್ಷಣಿಕ ವಿಭಾಗದ 35 ಜಿಲ್ಲೆಗಳಲ್ಲಿ ನಡೆದ ಸ್ಪರ್ಧೆಯಲ್ಲಿ ಮೊದಲ ಬಹುಮಾನ ಪಡೆದ ಶಿಕ್ಷಕರು ಮೈಸೂರಲ್ಲಿ ನಡೆಯುತ್ತಿರುವ ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದು, ಸೋಮವಾರ ಪ್ರಾಥಮಿಕ ಶಾಲೆಯ ಶಿಕ್ಷಕರ ಸ್ಪರ್ಧೆ ಜರುಗಿತು. ಮಂಗಳವಾರ(ಜ.13) ಪ್ರೌಢಶಾಲೆಯ ಶಿಕ್ಷಕರ ಸ್ಪರ್ಧೆ ನಡೆಯಲಿದೆ.

ಶ್ರೀ ಸ್ವಾಮಿ ವಿವೇಕಾನಂದ ಜನ್ಮ ದಿನೋತ್ಸವ



ಸ್ವಾಮಿ ವಿವೇಕಾನಂದರ ಜಯಂತಿ ಹಿನ್ನೆಲೆಯಲ್ಲಿ ಮೈಸೂರಿನ ಒಂಟಿಕೊಪ್ಪಲು ಚೆಲುವಾಂಬ ಉದ್ಯಾನದಲ್ಲಿರುವ ಸ್ವಾಮಿ ವಿವೇಕಾನಂದರ ಪ್ರತಿಮೆಗೆ ನಗರ ಮತ್ತು ಗ್ರಾಮಾಂತರ ಬಿಜೆಪಿ ಎಸ್‌ಟಿ ಮೋರ್ಚಾ ವತಿಯಿಂದ ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಲಾಯಿತು. ಜಿಲ್ಲಾ ಗ್ರಾಮಾಂತರ ಮೀನುಗಾರರ ಪ್ರಕೋಷ್ಠ ಸಂಚಾಲಕ ಡಿ.ಮಹೇಶ ನಾಯಕ, ನಗರ ಎಸ್‌ಟಿ ಮೋರ್ಚಾ ಅಧ್ಯಕ್ಷ ಎಂ.ರಾಮಕೃಷ್ಣ, ಪ್ರಧಾನ ಕಾರ್ಯದರ್ಶಿಗಳಾದ ನಾರಾಯಣ ಲೋಲಪ್ಪ, ಕೃಷ್ಣನಾಯಕ, ಗ್ರಾಮಾಂತರ ಅಧ್ಯಕ್ಷ ಮುದ್ದುಕೃಷ್ಣ, ಪ್ರಧಾನ ಕಾರ್ಯದರ್ಶಿ ಎಡತಲೆ ಸಿದ್ದರಾಜು, ನಗರ ಕಾರ್ಯದರ್ಶಿ ಮರಿಸ್ವಾಮಿ ನಾಯಕ, ನಗರ ಪಾಲಿಕೆ ಮಾಜಿ ಸದಸ್ಯರಾದ ಗುರುವಿನಾಯಕ, ಪ್ರಕಾಶ್ ಮತ್ತಿತರರಿದ್ದರು.

ಸ್ವಾಮಿ ವಿವೇಕಾನಂದರ ಜಯಂತಿ



ಸ್ವಾಮಿ ವಿವೇಕಾನಂದರ ಜಯಂತ್ಯುತ್ಸವವನ್ನು ಸ್ನಾತಕ ಗ್ರಂಥಾಲಯದಲ್ಲಿ ಆಚರಿಸಲಾಯಿತು. ಈ ವೇಳೆ ಗ್ರಂಥಪಾಲಕರಾದ ಡಾ.ವೈ.ಎಲ್.ಸೋಮಶೇಖರ್, ಕೆ.ಮಂಜುಳಾ, ಎಸ್.ಪ್ರಸಾದ್, ಎಸ್.ಸೌಮ್ಯ, ರಾಜೇಶ್ವರಿ, ಚಿಕ್ಕಣ್ಣ, ಬೀರೇಶ್, ಶಶಿಧರ್, ಕುಮಾರ್, ಅಶ್ವಿನಿ, ಪ್ರೇಮ, ಕವಿತಾ ಮತ್ತಿತರರಿದ್ದರು.



ಸ್ವಾಮಿ ವಿವೇಕಾನಂದ ಜಯಂತಿ ಅಂಗವಾಗಿ ಮೈಸೂರು ವಿವೇಕಾನಂದ ವೃತ್ತದಲ್ಲಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ಬಳಿಕ ಸಿಹಿ ವಿತರಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿ ಬಿ.ಎಂ. ರಘು, ಚಾಮುಂಡೇಶ್ವರಿ ನಗರ ಮಂಡಲ ಅಧ್ಯಕ್ಷ ರಾಕೇಶ್ ಭಟ್, ಕೊರಿಯರ್ ವೆಂಕಟೇಶ್, ಕೆಎಮ್‌ಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ನಂದೀಶ್ ನಾಯಕ್, ಆನಂದ್, ಶಿವರಾಜ್, ರಾಘವೇಂದ್ರ, ಪ್ರದೀಪ್ ಹಾಗೂ ಇನ್ನಿತರರು ಹಾಜರಿದ್ದರು.

ಆಧುನಿಕ ಬೇಸಾಯ ಪದ್ಧತಿ ತರಬೇತಿ

ಮೈಸೂರು, ಜ.12– ಮೈಸೂರು ನಾಗನಹಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಜ.19ರಿಂದ 21ರವರೆಗೆ 'ತೋಟಗಾರಿಕಾ ಬೆಳೆಗಳಲ್ಲಿ ಸೂಕ್ಷ್ಮ ನೀರಾವರಿ ಹಾಗೂ ಆಧುನಿಕ ಬೇಸಾಯ ಪದ್ಧತಿಗಳ ಅಳವಡಿಕೆ' ಬಗ್ಗೆ ರೈತ/ರೈತ ಮಹಿಳೆಯರಿಗೆ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಆಸಕ್ತರು ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರ ದೂ.ಸಂಖ್ಯೆ 6362654040ಗೆ ಕರೆ ಮಾಡಿ ಹೆಸರು ನೋಂದಾಯಿಸಿಕೊಳ್ಳಬಹುದು.

ಭಾಗವಹಿಸುವವರಿಗೆ ಊಟ ಮತ್ತು ವಸತಿ ವ್ಯವಸ್ಥೆ ಒದಗಿಸಲಾಗುವುದು. ತರಬೇತಿಗೆ ಬರುವಾಗ ಎಫ್‌ಐಡಿ ಸಂಖ್ಯೆ, ಆಧಾರ್, ರೇಷನ್ ಕಾರ್ಡ್ ಮತ್ತು ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿಗಳನ್ನು ತಪ್ಪದೇ ತರಬೇಕು. ಜಿಲ್ಲೆಯ 45 ಜನರಿಗೆ ಮಾತ್ರ ಅವಕಾಶವಿದ್ದು, ಮೊದಲು ನೋಂದಣಿ ಮಾಡಿದವರಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ವಾಮಿ ವಿವೇಕಾನಂದ ಜಯಂತಿ; ವಿದ್ಯಾರ್ಥಿಗಳ ಮೆರವಣಿಗೆ

ಮೈಸೂರು, ಜ.12(ಎಸ್‌ಪಿಎನ್)– ಸ್ವಾಮಿ ವಿವೇಕಾನಂದ ಅವರ 163ನೇ ಜಯಂತಿ ಪ್ರಯುಕ್ತ ರಾಮಕೃಷ್ಣಾಶ್ರಮ ವಿದ್ಯಾಸಂಸ್ಥೆ, ಒಂಟಿಕೊಪ್ಪಲು ಪ್ರೌಢಶಾಲಾ ವಿದ್ಯಾರ್ಥಿಗಳು ಸೇರಿದಂತೆ ಇತರೆ ಶಾಲೆಯ ವಿದ್ಯಾರ್ಥಿಗಳು ಮೆರವಣಿಗೆ ನಡೆಸಿದರು.

ಮೈಸೂರು ಚೆಲುವಾಂಬ ಉದ್ಯಾನವನದ ಮುಂಭಾಗದಲ್ಲಿರುವ ಸ್ವಾಮಿ ವಿವೇಕಾನಂದರ ಪ್ರತಿಮೆಗೆ ಮಾಲಾರ್ಪಣೆ ಬಳಿಕ ಕಾಳಿದಾಸ ರಸ್ತೆ, ಟೆಂಪಲ್ ರೋಡ್, ವಿವಿ ಪೊಲೀಸ್ ಠಾಣೆ ಮುಂಭಾಗ ಹಾದು, ಮೆರವಣಿಗೆ ರಾಮಕೃಷ್ಣಾಶ್ರಮ ವಿದ್ಯಾಶಾಲೆ ತಲುಪಿತು.

ಮೆರವಣಿಗೆಯಲ್ಲಿ ರಾಮಕೃಷ್ಣ ವಿದ್ಯಾಶಾಲೆಯ ವಿದ್ಯಾರ್ಥಿಗಳ ಬ್ಯಾಂಡ್ ವಾದನ ಸಾರ್ವಜನಿಕರ ಗಮನ ಸೆಳೆಯಿತು. ವಿದ್ಯಾರ್ಥಿಗಳು ಶಿಸ್ತು ಬದ್ಧ ಮೆರವಣಿಗೆ ನಡೆಸಿದರು. ಈ ವೇಳೆ ಸ್ವಾಮಿ ವಿವೇಕಾನಂದರ ಕುರಿತಾದ ಯುವ ಜನರ ಪ್ರೇರಣಾದಾಯಕವಾಗಿರುವ ಸಂದೇಶಗಳ ಫಲಕ ಹಿಡಿದ ವಿದ್ಯಾರ್ಥಿಗಳು ಜನರಲ್ಲಿ ಜಾಗೃತಿ ಮೂಡಿಸಿದರು.



ಸ್ವಾಮಿ ವಿವೇಕಾನಂದ ಅವರ 163ನೇ ಜಯಂತಿ ಪ್ರಯುಕ್ತ ರಾಮಕೃಷ್ಣಾಶ್ರಮದ ಸ್ವಾಮಿ ಮುಕ್ತಿದಾನಂದ ಜೀ ಮಹಾರಾಜ್ ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು.

ಇದಕ್ಕೂ ಮುನ್ನ ಮೈಸೂರು ರಾಮಕೃಷ್ಣಾಶ್ರಮದ ಸ್ವಾಮಿ ಮುಕ್ತಿದಾನಂದ ಜೀ ಅವರು ಸ್ವಾಮಿ ವಿವೇಕಾನಂದರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಮೆರವಣಿಗೆಗೆ ಚಾಲನೆ ನೀಡಿದರು. ಬಳಿಕ ಮಾತನಾಡಿ, ಸ್ವಾಮಿ ವಿವೇಕಾನಂದರು ಜ.12ರಂದು ಜನಿಸಿದರು. ಈ ದಿನವನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ಯುವ ದಿನವೆಂದು ಆಚರಿಸುತ್ತಿದೆ. ಈ ಆಚರಣೆಯನ್ನು ನಾವು–ನೀವೆಲ್ಲರೂ ಸೇರಿ ಆಚರಣೆ ಮಾಡೋಣ, ನಮ್ಮ ದೇಶದ ಐಕ್ಯತೆ, ಸಮಗ್ರತೆ ಕಾಪಾಡಲು ಪ್ರತಿಯೊಬ್ಬರ ಕೊಡುಗೆಯೂ ಮುಖ್ಯ ಎಂದರು.

ಈ ವೇಳೆ ಸ್ವಾಮಿ ಯುಕ್ತೇಶಾನಂದರು, ಸ್ವಾಮಿ ಮಹಾಮೇದಾನಂದ ಜೀ ಸೇರಿದಂತೆ ಇತರರು ಉಪಸ್ಥಿತರಿದ್ದರು.

ದಸರಾ ವಸ್ತುಪ್ರದರ್ಶನದಲ್ಲಿ ರಾಷ್ಟ್ರೀಯ ಯುವ ದಿನಾಚರಣೆ

ಮೈಸೂರು, ಜ.12(ಎಂಕೆ)– ಮೈಸೂರು ದಸರಾ ವಸ್ತುಪ್ರದರ್ಶನ ಆವರಣದಲ್ಲಿರುವ ಸ್ವಾಮಿ ವಿವೇಕಾನಂದರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಸಿಹಿ ಹಂಚುವ ಮೂಲಕ ರಾಷ್ಟ್ರೀಯ ಯುವ ದಿನ ಆಚರಿಸಲಾಯಿತು.

ಈ ವೇಳೆ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಮಾತನಾಡಿ, ಸ್ವಾಮಿ ವಿವೇಕಾನಂದರ ಸಂದೇಶಗಳು ಪಾಲಿಸುವಲ್ಲಿ ಯುವ ಸಮೂಹ ಮುಂದಾಗಬೇಕು. ದುಶ್ಚಟಗಳಿಗೆ ಬಲಿಯಾಗದೆ ಉನ್ನತ ಶಿಕ್ಷಣ ಪಡೆದು ದೇಶದ ಆಸ್ತಿಯಾಗಿ ರೂಪುಗೊಳ್ಳಬಹುದು ಎಂದು ಆಶಿಸಿದರು.

ಸ್ವಾಮಿ ವಿವೇಕಾನಂದರು ಯುವ ಭಾರತ ನಿರ್ಮಾಣದ ಕನಸು ಕಂಡಿದ್ದರು. ಏಳಿ... ಏದ್ದೇಳಿ... ಗುರಿ ಮುಟ್ಟುವವರೆಗೂ ನಿಲ್ಲದಿರಿ ಎಂಬ ಸಂದೇಶ ನೀಡಿ ಯುವ ಸಮೂಹಕ್ಕೆ ಸ್ಫೂರ್ತಿಯಾದರು. ವಿವೇಕಾನಂದರು ಕಂಡ ಕನಸು, ನನಸಾಗಬೇಕಾದರೆ ಯುವ ಸಮೂಹ ದೇಶಕ್ಕಾಗಿ ಒಗ್ಗೂಡಬೇಕು. ದೇಶದ ಅಭಿವೃದ್ಧಿಗಾಗಿ ಕೆಲಸ ಮಾಡಬೇಕು ಎಂದು ತಿಳಿಸಿದರು.



ಮೈಸೂರು ದಸರಾ ವಸ್ತುಪ್ರದರ್ಶನ ಆವರಣದಲ್ಲಿ ರಾಷ್ಟ್ರೀಯ ಯುವ ದಿನ ಆಚರಿಸಲಾಯಿತು.

ನಗರಪಾಲಿಕೆ ಮಾಜಿ ಸದಸ್ಯರಾದ ಸೈಯದ್ ಹಸ್ರದ್ ಉಲ್ಲಾ, ಸುಹೇಲ್ ಬೇಗ್, ಪತ್ರಕರ್ತ ಟಿ. ಗುರುರಾಜ್, ಮುಖಂಡರಾದ ರಘುರಾಜೇ ಅರಸ್, ಜಿ.ರಾಘವೇಂದ್ರ, ಗಾಂಧಿನಗರ ರಾಕೇಶ್, ಎಸ್.ಎನ್ ರಾಜೇಶ್, ನಿರೂಪಕ ಅಜಯ್ ಶಾಸ್ತ್ರಿ, ನಸ್ರುಲ್ಲಾ, ಒಂಟಿಕೊಪ್ಪಲು ಗುರುರಾಜ್, ಕೈಸರ್ ಅಹಮದ್, ತಬ್ರೇಜ್ ಪಾಷಾ, ನಾಗೇಶ್, ಮಹೇಂದ್ರ ಉಪಸ್ಥಿತರಿದ್ದರು.

ಮನೆಗಳ್ಳನ ಬಂಧನ; ಚಿನ್ನಾಭರಣ ವಶ

ಮೈಸೂರು, ಜ.12(ಎಸ್‌ಪಿಎನ್)–ಮನೆಗಳ್ಳತನ ಸಂಬಂಧ ಓರ್ವ ಆರೋಪಿಯನ್ನು ಕುವೆಂಪು ನಗರ ಠಾಣಾ ಪೊಲೀಸರು ಬಂಧಿಸಿದ್ದಾರೆ.



ಜ.6ರಂದು ಆಂಧ್ರಪ್ರದೇಶದ ಈಸ್ಟ್ ಗೋದಾವರಿ ಜಿಲ್ಲೆಯ ಪಾಲಂ ಗ್ರಾಮಕ್ಕೆ ತೆರಳಿ ಓರ್ವ ಆರೋಪಿಯನ್ನು ಬಂಧಿಸಿದ್ದು, ಈತನ ಬಂಧನದಿಂದಾಗಿ 3 ಮನೆ ಕಳವು ಪ್ರಕರಣ ಬೆಳಕಿಗೆ ಬಂದಿದೆ. ಈತನಿಂದ 20 ಗ್ರಾಂ ಚಿನ್ನಾಭರಣ, 310 ಗ್ರಾಂ ಬೆಳ್ಳಿ ಪದಾರ್ಥ ಹಾಗೂ ಕೃತ್ಯಕ್ಕೆ ಬಳಸಿದ್ದ ಒಂದು ಕಾರನ್ನು ವಶಕ್ಕೆ ಪಡೆದು ಹೆಚ್ಚಿನ ತನಿಖೆ ಮುಂದುವರೆಸಿದ್ದಾರೆ. ಈ ಆರೋಪಿಯ ವಿರುದ್ಧ ಹುಬ್ಬಳ್ಳಿ, ಮಂಗಳೂರು ಪೊಲೀಸ್ ಠಾಣೆ ಹಾಗೂ ಆಂಧ್ರಪ್ರದೇಶದ ವಿವಿಧ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

ಇಬ್ಬರ ಬಂಧನ; 3 ದ್ವಿಚಕ್ರ ವಾಹನ ವಶ

ಮೈಸೂರು, ಜ.12(ಎಸ್‌ಪಿಎನ್)– ದ್ವಿಚಕ್ರ ವಾಹನ ಕಳವು ಪ್ರಕರಣದಲ್ಲಿ ಭಾಗಿಯಾಗಿದ್ದ ಇಬ್ಬರು ಆರೋಪಿಗಳನ್ನು ಲಷ್ಕರ್ ಠಾಣಾ ಪೊಲೀಸರು ಜ.4ರಂದು ಬಂಧಿಸಿದ್ದಾರೆ.

ಬಂಧಿತರಿಂದ ಲಷ್ಕರ್ ಠಾಣಾ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿದ್ದ ಸುಜುಕಿ ಬರ್ಗ್‌ಮನ್ ಕಂಪನಿಯ 3 ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದಾರೆ. ಈ ಪತ್ತೆ ಕಾರ್ಯದಿಂದಾಗಿ ಲಷ್ಕರ್, ಉದಯಗಿರಿ ಹಾಗೂ ನರಸಿಂಹರಾಜ ಪೊಲೀಸ್ ಠಾಣೆಗಳ ತಲಾ ಒಂದೊಂದು ದ್ವಿ ಚಕ್ರ ವಾಹನ ಕಳವು ಪ್ರಕರಣಗಳು ಪತ್ತೆಯಾಗಿವೆ.

'ವಿವೇಕ ವಾಹಿನಿ ರಥಯಾತ್ರೆ'ಗೆ ಚಾಲನೆ



'ವಿವೇಕ ವಾಹಿನಿ ರಥಯಾತ್ರೆ'ಗೆ ಬಿಜೆಪಿ ನಗರಾಧ್ಯಕ್ಷ ಹಾಗೂ ಮಾಜಿ ಶಾಸಕ ಎಲ್.ನಾಗೇಂದ್ರ ಸೋಮವಾರ ಚಾಲನೆ ನೀಡಿದರು.

ಮೈಸೂರು, ಜ.12(ಎಂಕೆ)– ಮೈಸೂರಿನ ರಾಮಕೃಷ್ಣನಗರದ ಶ್ರೀ ರಾಮಕೃಷ್ಣ ಪರಮಹಂಸ ವೃತ್ತದಲ್ಲಿ ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಯುವ ಮೋರ್ಚಾ ವತಿಯಿಂದ 'ವಿವೇಕ ವಾಹಿನಿ ರಥಯಾತ್ರೆ' ನಡೆಸಲಾಯಿತು.

ಶ್ರೀ ರಾಮಕೃಷ್ಣಪರಮಹಂಸ ವೃತ್ತದಿಂದ ಆರಂಭವಾದ ರಥಯಾತ್ರೆ ರಾಮಕೃಷ್ಣನಗರದ ಇ ಮತ್ತು ಎಫ್ ಬ್ಲಾಕ್ ನಡುವಿನ ಪ್ರಮುಖ ರಸ್ತೆಗಳು, ದಟ್ಟಗಳ್ಳಿ, ನಿವೇದಿತಾ ನಗರ, ಶಾರದಾದೇವಿನಗರ, ಜನತಾನಗರ ಹಾಗೂ ಬೋಗಾದಿ 2ನೇ ಹಂತದ ಪ್ರಮುಖ ರಸ್ತೆಗಳಲ್ಲಿ ರಥಯಾತ್ರೆ ಸಾಗಿತು. ರಥಯಾತ್ರೆಯ ಮಾರ್ಗದುದ್ದಕ್ಕೂ ಶ್ರೀ ರಾಮಕೃಷ್ಣ ಪರಮಹಂಸರ ಹಾಗೂ ಸ್ವಾಮಿ ವಿವೇಕಾನಂದರ ಕುರಿತಾದ ಹಾಡುಗಳು, ಸ್ವಾಮಿ ವಿವೇಕಾನಂದರ ಭಾಷಣಗಳನ್ನು ಪ್ರಸಾರ ಮಾಡುವ ಮೂಲಕ ಸಾರ್ವಜನಿಕರಲ್ಲಿ ವಿವೇಕ ಜಾಗೃತಿ ಮೂಡಿಸಲಾಯಿತು.

ಬಿಜೆಪಿ ನಗರಾಧ್ಯಕ್ಷ ಹಾಗೂ ಮಾಜಿ ಶಾಸಕ ಎಲ್.ನಾಗೇಂದ್ರ 'ವಿವೇಕ ವಾಹಿನಿ ರಥಯಾತ್ರೆ' ಚಾಲನೆ ನೀಡಿದರು. ಶಾಸಕ ಟಿ.ಎಸ್.ಶ್ರೀವತ್ಸ, ಚಾಮುಂಡೇಶ್ವರಿ ನಗರ ಮಂಡಲದ ಅಧ್ಯಕ್ಷ ರಾಕೇಶ್ ಭಟ್, ಯುವ ಮೋರ್ಚಾ ಮಂಡಲ ಅಧ್ಯಕ್ಷ ಮಧು ಸೋಮಶೇಖರ್, ನಗರ ಯುವ ಮೋರ್ಚಾ ಅಧ್ಯಕ್ಷ ರಾಕೇಶ್‌ಗೌಡ, ಪ್ರಧಾನ ಕಾರ್ಯದರ್ಶಿಗಳಾದ ಬಿ.ಎಂರಘು, ರುದ್ರಮೂರ್ತಿ, ಮುಖಂಡರಾದ ಈರೇಗೌಡ, ಸಾಗರ್‌ಸಿಂಗ್, ಚಂದನ್‌ಗೌಡ, ಸಿ.ರಾಘವೇಂದ್ರ ಸೂರ್ಯಪ್ರಕಾಶ್ ಮತ್ತಿತರರಿದ್ದರು.

ಯುವ ಜನತೆಗೆ ಸಂಸ್ಕಾರ ಕಲಿಸುವುದು ಅನಿವಾರ್ಯ

ಶಾಸಕ ಶ್ರೀವತ್ಸ ಅಭಿಮತ

ಮೈಸೂರು, ಜ.12(ಎಸ್‌ಪಿಎನ್)– ಇಂದಿನ ಯುವ ಜನತೆಗೆ ಓದಿನ ಜೊತೆಗೆ ಸಂಸ್ಕಾರವನ್ನೂ ನೀಡಬೇಕು. ಇಲ್ಲದಿದ್ದರೆ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಸಾಧ್ಯತೆಯಿದೆ ಎಂದು ಶಾಸಕ ಟಿ.ಎಸ್. ಶ್ರೀವತ್ಸ ಆತಂಕ ವ್ಯಕ್ತಪಡಿಸಿದರು.

ಮೈಸೂರು ವಿವೇಕಾನಂದನಗರ ವೃತ್ತದಲ್ಲಿ ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನ ಮತ್ತು ವಿವೇಕಾನಂದ ಜಯಂತ್ಯೋತ್ಸವ ಸಮಿತಿ ಸಹಯೋಗದೊಂದಿಗೆ ನಡೆದ 'ರಾಷ್ಟ್ರೀಯ ಯುವ ದಿನ' ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಮಾತನಾಡಿದರು.

ಮೈಸೂರಿನ ಪೂರ್ಣ ಚೇತನ ವಿದ್ಯಾಸಂಸ್ಥೆಯಲ್ಲಿ 8ನೇ ತರಗತಿ ವ್ಯಾಸಂಗ ಮಾಡುತ್ತಿರುವ ಮಹೇಶ್ ಕುಮಾರ್, ಸ್ವಾಮಿ ವಿವೇಕಾನಂದರ ಕುರಿತು 14 ಗಂಟೆ 4 ನಿಮಿಷ ನಿರರ್ಗಳವಾಗಿ ಮಾತನಾಡಿ, ದಾಖಲೆ ಮಾಡಿದ್ದಾರೆ. ಈ ವಿದ್ಯಾರ್ಥಿಯ ಸಾಧನೆಗೆ ಎಲ್ಲರೂ ಪ್ರೋತ್ಸಾಹಿಸಬೇಕು ಎಂದು ಸಲಹೆ ನೀಡಿದರು.



'ರಾಷ್ಟ್ರೀಯ ಯುವ ದಿನ' ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದ ಭಾವಚಿತ್ರಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಸೇರಿದಂತೆ ಇತರರು ಪುಷ್ಪಾರ್ಚನೆ ಮಾಡಿದರು.

ಕಳೆದೊಂದು ವರ್ಷದಿಂದ ಮೈಸೂರಿನಲ್ಲಿ ನಡೆಯುತ್ತಿರುವ ಡ್ರಗ್ಸ್ ಸಂಬಂಧಿತ ಪ್ರಕರಣಗಳನ್ನು ಗಮನಿಸಿದರೆ, ಯುವ ಸಮೂಹ ಸಂಸ್ಕಾರದಿಂದ ದೂರಾಗುತ್ತಿರುವುದು ಸ್ಪಷ್ಟವಾಗಿದೆ. ಹಾಗಾಗಿ ನಮ್ಮ ಯುವಕರು ವ್ಯಸನಿಗಳಾಗದಂತೆ ತಡೆಗಟ್ಟಲು ಪೋಷಕರು ಎಚ್ಚರವಹಿಸಬೇಕು. ಇಂತಹ ದುಶ್ಚಟಗಳಿಂದ ಯುವ ಜನರನ್ನು ದೂರವಿಡಲು ಸ್ವಾಮಿ ವಿವೇಕಾನಂದರ ತತ್ವಗಳನ್ನು ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಅಸಹಿಷ್ಣುತೆ, ದ್ವೇಷವನ್ನು ಬಿಟ್ಟು ಎಲ್ಲ ಭಾರತೀಯರು ಒಂದಾಗಬೇಕೆಂಬ ಸಮಾನತೆ ಸಂದೇಶ ಸಾರಿದ ಸ್ವಾಮಿ ವಿವೇಕಾನಂದರ ವಿಚಾರಧಾರೆಯನ್ನು ಮೈಗೂಡಿಸಿ ಕೊಳ್ಳಬೇಕಾಗಿದೆ. ಎಲ್ಲ ಧರ್ಮ, ಧರ್ಮೀಯರನ್ನು ಗೌರವಿಸಿ, ಪ್ರೀತಿಸಬೇಕೆಂಬ ಚಿಂತನೆ ಬಿತ್ತಿದ ಸ್ವಾಮಿ ವಿವೇಕಾನಂದರು, ಅಸಮಾನತೆ, ಅಸ್ಪೃಶ್ಯತೆ ಆಚರಣೆ, ದಲಿತರ ಮೇಲಿನ ದೌರ್ಜನ್ಯವನ್ನು ಬಹಿರಂಗವಾಗಿ ಖಂಡಿಸಿದರು. ದಲಿತರು ಸಹ ಸಮಾಜ ಮುಖ್ಯವಾಹಿನಿಗೆ ಬರಬೇಕೆಂಬ ಆಶಯವನ್ನು ಹೊಂದಿದ್ದರು ಎಂದರು.

ಈ ವೇಳೆ ಶ್ರೀರಾಮಕೃಷ್ಣ ಆಶ್ರಮದ ಸ್ವಾಮಿ ಜಯಾನಂದಜಿ ಸಾನ್ನಿಧ್ಯ ವಹಿಸಿದ್ದರು. ಡಾ.ಎಸ್.ಪಿ.ಯೋಗಣ್ಣ, ತೇಜಸ್ ಲೋಕೇಶ್ ಗೌಡ, ಪದಾಧಿಕಾರಿಗಳಾದ ಕೆಂಪಲಿಂಗರಾಜು, ಬಸವಣ್ಣ, ಪುರುಷೋತ್ತಮ್, ಬೂಕನಕೆರೆ ವಿಜೇಂದ್ರ, ಲಿಂಗಪ್ಪ, ರಘುರಾವ್ ಗೌಡ, ಕೆ.ವಿ.ವಾಸು, ಪುಟ್ಟೇಗೌಡ ಮತ್ತಿತರರು ಉಪಸ್ಥಿತರಿದ್ದರು. ವಿದ್ಯಾರ್ಥಿ ಮಹೇಶ್‌ಕುಮಾರ್ ಮುಖ್ಯ ಭಾಷಣ ಮಾಡಿದರು. ಇದಕ್ಕೂ ಮುನ್ನ ಕೆ.ಆರ್.ವಿಧಾನಸಭಾ ಬಿಜೆಪಿ ಯುವ ಮೋರ್ಚಾ ಕಾರ್ಯಕರ್ತರು ರಾಷ್ಟ್ರೀಯ ಯುವ ದಿನ ಅಂಗವಾಗಿ ಪಂಜಿನ ಮೆರವಣಿಗೆ ನಡೆಸಿದರು.

ಮೈಸೂರು ಮಿತ್ರ

ವಿವೇಕಾನಂದರ ಮೌಲ್ಯಗಳನ್ನು ಅಳವಡಿಸಿಕೊಳ್ಳಿ

ಜಿಲ್ಲಾಧಿಕಾರಿ ಡಾ.ಕುಮಾರ್

ಮಂಡ್ಯ, ಜ.12– ಸ್ವಾಮಿ ವಿವೇಕಾನಂದರ ಆದರ್ಶ, ಚಿಂತನೆಗಳು, ಮೌಲ್ಯಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡು ದೇಶಕ್ಕೆ ಮಾದರಿ ವ್ಯಕ್ತಿಗಳಾಗಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ತಿಳಿಸಿದರು.

ಜಿಲ್ಲಾಡಳಿತ, ಜಿಪಂ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮಂಡ್ಯ, ಮೈ ಭಾರತ್ ಕೇಂದ್ರ, ಮಂಡ್ಯ ವಿಶ್ವವಿದ್ಯಾಲಯ, ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಗಣಕ ವಿಜ್ಞಾನ ವಿಭಾಗದ ಸಂಯುಕ್ತಾಶ್ರದಲ್ಲಿ ಸ್ವಾಮಿ ವಿವೇಕಾನಂದರ 163ನೇ ಜನ್ಮ ದಿನೋತ್ಸವದ ಅಂಗವಾಗಿ ಮಂಡ್ಯ ವಿವಿಯಲ್ಲಿ ನಡೆದ ರಾಷ್ಟ್ರೀಯ ಯುವ ದಿನವನ್ನು ಸ್ವಾಮಿ ವಿವೇಕಾನಂದರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದ ಅವರು, ದೇಶದಲ್ಲಿ ಪ್ರತಿ ಸಾವಿರ ವರ್ಷಗಳಿಗೆ ಒಬ್ಬರು ಮಹಾನ್ ವ್ಯಕ್ತಿ ಜನಿಸುತ್ತಾರೆ. ಅಂತಹವರಲ್ಲಿ ಸ್ವಾಮಿ ವಿವೇಕಾನಂದರು ಒಬ್ಬರು ಎಂದರು.

ಎಷ್ಟು ವರ್ಷ ಬದುಕಿದ್ದರು ಎನ್ನುವುದು ಮುಖ್ಯವಲ್ಲ. ಬದುಕಿದ್ದ ಅವಧಿಯಲ್ಲಿ ಸಮಾಜಕ್ಕೆ ಅವರು ಏನು ಕೊಡುಗೆ ನೀಡಿದರು ಎನ್ನುವುದು ಮುಖ್ಯ. ಇಡೀ ವಿಶ್ವ ಭಾರತವನ್ನು ಅತ್ಯಂತ ಘನತೆ ಮತ್ತು ಗೌರವದಿಂದ ನೋಡುವಂತೆ ಮಾಡಿದವರು ಸ್ವಾಮಿ ವಿವೇಕಾನಂದರು ಎಂದರು.



ರಾಷ್ಟ್ರೀಯ ಯುವ ದಿನ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಸ್ವಾಮಿ ವಿವೇಕಾನಂದರನ್ನು ವಿಶ್ವಗುರು ಎಂದು ಕರೆಯಲಾಗುತ್ತದೆ. ಭಾರತದ ಸನಾತನ ಸಂಸ್ಕೃತಿಯನ್ನು ವಿಶ್ವಕ್ಕೆ ಸಾರಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಸ್ವಾಮಿ ವಿವೇಕಾನಂದರು ಸಂತ, ಚಿಂತಕ ಮತ್ತು ತತ್ವಜ್ಞಾನಿಯಾಗಿ ಭಾರತೀಯ ಸಂಸ್ಕೃತಿ ಪರಂಪರೆಗೆ ತನ್ನದೇ ಆದ ಕೊಡುಗೆ ನೀಡಿದ್ದಾರೆ. ಅವರ ಚಿಂತನೆ, ಆದರ್ಶಗಳು ನಮ್ಮ ಜೊತೆ ಇಂದಿಗೂ ಜೀವಂತವಾಗಿವೆ ಎಂದರು.

ಸ್ವಾಮಿ ವಿವೇಕಾನಂದರು ನಂಬಿದ್ದ ಶಕ್ತಿ ಎಂದರೆ ಅದು ಭಾರತದ ಯುವ ಶಕ್ತಿ. ಯುವ ಸಮೂಹ ಸರಿ ದಾರಿಯಲ್ಲಿ ಹೋದರೆ ಮಾತ್ರ ಈ ದೇಶವನ್ನು ಸಮೃದ್ಧ ದೇಶವಾಗಿ ನಿರ್ಮಿಸಬಹುದು ಎಂಬ ಕನಸು ಕಂಡಿದ್ದರು. 1893 ಸೆ.11 ರಂದು ಚಿಕಾಗೋ ವಿಶ್ವ ಧರ್ಮ ಸಮ್ಮೇಳನದಲ್ಲಿ ಭಾರತದ ಸಂಸ್ಕೃತಿ, ಪರಂಪರೆಯನ್ನು ಎತ್ತಿ ಹಿಡಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಯುವ ಪೀಳಿಗೆ ಇತಿಹಾಸ ತಿಳಿಯಬೇಕು. 1890ರಲ್ಲಿ ಭಾರತ ಬಿಟ್ಟು 1893 ರವರೆಗೆ ವಿಶ್ವದ ಎಲ್ಲಾ ಸಮ್ಮೇಳನಗಳಲ್ಲಿ ಭಾಗಿಯಾಗಿ ಪ್ರವಚನಗಳನ್ನು ನೀಡಿ ಭಾರತದ ಸಂಸ್ಕೃತಿಯ ಪ್ರತೀಕವಾಗಿ ವಿಶ್ವಕ್ಕೆ ಭಾರತ ಎಂದರೆ ಏನು ಎಂದು ತಿಳಿಸಿಕೊಟ್ಟ ಮಹಾನ್ ಚೇತನ ಸ್ವಾಮಿ ವಿವೇಕಾನಂದರು ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೋಭಾರಾಣಿ ಮಾತನಾಡಿ, ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು. ಇತಿಹಾಸ ತಿಳಿಯದವರು ಇತಿಹಾಸ ಸೃಷ್ಟಿಸಲಾರರು. ಯುವ ಜನತೆ ಇತಿಹಾಸವನ್ನು ಮೊದಲು ತಿಳಿದುಕೊಳ್ಳಬೇಕು. ಮುಂದಿನ ಯುವ ಜನಾಂಗ ಸ್ವಾಮಿ ವಿವೇಕಾನಂದರ ಆದರ್ಶ, ಮೌಲ್ಯಗಳನ್ನು ತಿಳಿದು ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮಂಡ್ಯ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ.ಕೆ.ಶಿವಚಿತ್ತಪ್ಪ, ಅರ್ಕೇಶ್ವರ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಡಾ.ಮನು ಗೊರವಾಲೆ, ಮೂಡಾ ಆಯುಕ್ತ ಹಾಗೂ ಮಂಡ್ಯ ವಿವಿ ಕುಲಪತಿ ಕೃಷ್ಣಕುಮಾರ್, ಎನ್‌ಎಸ್‌ಎಸ್ ಸಂಯೋಜಕರಾದ ಡಾ.ಪ್ರಮೀಳಾ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಓಂಪ್ರಕಾಶ್ ಇತರರಿದ್ದರು.

ನಾಲೆ ಆಧುನೀಕರಣ ಕಾಮಗಾರಿಗೆ 400 ಕೋಟಿ ಬಿಡುಗಡೆ

ಸದ್ಯದಲ್ಲೇ ಕಾಮಗಾರಿ ಆರಂಭ: ಶಾಸಕ ಪಿ.ಎಂ.ನರೇಂದ್ರಸ್ವಾಮಿ ಭರವಸೆ

ಮಳವಳ್ಳಿ, ಜ.12– ವಿಶ್ವೇಶ್ವರಯ್ಯ ಮುಖ್ಯ ನಾಲೆಗೆ ಸೇರಿದ ಉಪನಾಲೆ ಮತ್ತು ಸೀಳು ನಾಲೆಗಳ ಆಧುನೀಕರಣಕ್ಕೆ ಸರ್ಕಾರದಿಂದ 400 ಕೋಟಿ ರೂ. ಬಿಡುಗಡೆಯಾಗಿದ್ದು, ಸದ್ಯದಲ್ಲೇ ಕಾಮಗಾರಿಗೆ ಚಾಲನೆ ನೀಡಿ ಸಂಪೂರ್ಣವಾಗಿ ನೀರಿನ ಸಮಸ್ಯೆ ಬಗೆಹರಿಸಲಾಗುವುದು ಎಂದು ಶಾಸಕ ಪಿ.ಎಂ.ನರೇಂದ್ರಸ್ವಾಮಿ ಭವರಸೆ ನೀಡಿದರು.

ತಾಲೂಕಿನ ಚಿಕ್ಕಮೂಲಗೂಡು ಕೆರೆ ಸಮೀಪ ಸೇತುವೆ ಮರು ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಇಂದು 9.7 ಕೋಟಿ ರೂ.ಗಳ ಅಭಿವೃದ್ಧಿ ಯೋಜನೆಗೆ ಚಾಲನೆ ನೀಡಲಾಗಿದೆ. ಮುಂಬರುವ ದಿನಗಳಲ್ಲಿ ಸರ್ಕಾರದಿಂದ ವಿಶೇಷ ಅನುದಾನ ತಂದು ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲಾಗುವುದು. ಜೊತೆಗೆ 400 ಕೋಟಿ ರೂ. ವೆಚ್ಚದಲ್ಲಿ ಉಪ ಮತ್ತು ಸೀಳು ನಾಲೆಗಳನ್ನು ಅಭಿವೃದ್ಧಿ ಪಡಿಸುವುದರ ಜೊತೆಗೆ ಜಮೀನಿಗೆ ಹೋಗುವ ರಸ್ತೆಗಳನ್ನು ಸಂಪೂರ್ಣವಾಗಿ ಅಭಿವೃದ್ಧಿ ಪಡಿಸಲಾಗುವುದು ಎಂದರು.



ಸೇತುವೆ ಮರು ನಿರ್ಮಾಣ ಕಾಮಗಾರಿಗೆ ಶಾಸಕ ನರೇಂದ್ರಸ್ವಾಮಿ ಚಾಲನೆ ನೀಡಿದರು.

ಮುಂಬರುವ ದಿನಗಳಲ್ಲಿ ಸುಮಾರು 600 ಕೋಟಿಗೂ ಹೆಚ್ಚು ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಾಗುವುದು. ಗ್ಯಾರಂಟಿ ಯೋಜನೆಗಳಿಂದ ಕುಟುಂಬ ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗಿದೆ. ನುಡಿದಂತೆ ನಡೆದ ಸರ್ಕಾರ ಎಂಬ ಹೆಗ್ಗಳಿಕೆಗೆ ಕಾಂಗ್ರೆಸ್ ಸರ್ಕಾರ ಪಾತ್ರವಾಗಿದೆ ಎಂದರು.

ತಾಲೂಕಿನ ಸುಜ್ಜಲ್ಲೂರು ಗ್ರಾಮದಲ್ಲಿ ಸಿಎಸ್‌ಆರ್ ಅನುದಾನದಲ್ಲಿ ನವೀಕರಣಗೊಂಡ ಶಾಲಾ ಕಟ್ಟಡ, ಅಡುಗೆ ಕೋಣೆ ಮತ್ತು ಗಣಕ ಯಂತ್ರದ ಕೊಠಡಿಗಳನ್ನು ಶಾಸಕ ನರೇಂದ್ರಸ್ವಾಮಿ ಉದ್ಘಾಟಿಸಿದರು. ಬೆಂಡರವಾಡಿಯಲ್ಲಿ ಜಿಪಂ ಅನಿರ್ಬಂಧಿತ ಯೋಜನೆಯಡಿ ನೂತನ ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕೆ ಶಂಕು ಸ್ಥಾಪನೆ ನೆರವೇರಿಸಿದರು. ಮಿಕ್ಕೆರೆ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಪಿ.ರಾಜು, ಮನ್‌ಮುಲ್ ನಿರ್ದೇಶಕ ಕೃಷ್ಣೇಗೌಡ, ಆರ್.ಎನ್.ವಿಶ್ವಾಸ್, ಟಿಎಪಿಸಿಎಂಎಸ್ ನಿರ್ದೇಶಕ ಕೆ.ಜೆ.ದೇವರಾಜು, ಮುಖಂಡರಾದ ಸಿದ್ದೇಗೌಡ, ಮಾಧು, ಮಹೇಶ್, ಮೊಳ್ಳೇಗೌಡ, ರಾಜಣ್ಣ, ಹನುಮಂತಯ್ಯ, ಶಿವಮೂರ್ತಿ, ಮಹದೇವಸ್ವಾಮಿ, ಮಧು, ಶಿವಕುಮಾರ್, ಮಂಜು, ರಾಮಲಿಂಗಣ್ಣ, ದೊಡ್ಡಣ್ಣ, ರುದ್ರ, ಶಿವಕುಮಾರ್, ಮಹದೇವಸ್ವಾಮಿ, ಶಿವಮೂರ್ತಿ, ಸಿದ್ದೇಗೌಡ, ರಾಮಚಂದ್ರು ಸೇರಿದಂತೆ ಇತರರಿದ್ದರು.

ದಾಯಾದಿಗಳ ಕಲಹ ಕೊಲೆಯಲ್ಲಿ ಅಂತ್ಯ

ಮೂವರ ಬಂಧನ: ಪಾಂಡವಪುರ ಠಾಣೆಯಲ್ಲಿ ಪ್ರಕರಣ ದಾಖಲು

ಪಾಂಡವಪುರ, ಜ.12– ಜಮೀನು ವಿಚಾರವಾಗಿ ದಾಯಾದಿಗಳ ನಡುವೆ ನಡೆದ ಕಲಹ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ತಾಲೂಕಿನ ಚಿಕ್ಕಾಡೆ ಗ್ರಾಮದಲ್ಲಿ ಸೋಮವಾರ ನಡೆದಿದೆ.



ಕೃಷ್ಣೇಗೌಡ

ಗ್ರಾಮದ ನಿವಾಸಿ ಕೃಷ್ಣೇಗೌಡ (62) ಹತ್ಯೆಗೀಡಾದವರು. ಅದೇ ಗ್ರಾಮದ ರಾಜು ಅಲಿಯಾಸ್ ಅರುಣ, ಆತನ ತಮ್ಮ ಕಿರಣ್ ಹಾಗೂ ತಾಯಿ ಸುನೀತಾ ಕೊಲೆ ಆರೋಪಿಗಳು. ಚಿಕ್ಕಾಡೆ ಗ್ರಾಮದ ಹೊರವಲಯದಲ್ಲಿ ಇಬ್ಬರಿಗೂ ಸೇರಿದ ಜಮೀನಿದ್ದು, ಜಮೀನು ಒತ್ತುವರಿ ವಿಚಾರವಾಗಿ ಇಬ್ಬರ ನಡುವೆ ಆಗಾಗ್ಗೆ ಜಗಳ ನಡೆದು ರಾಜಿ, ಸಂಧಾನ ಮಾಡಲಾಗಿತ್ತು ಎನ್ನಲಾಗಿದೆ. ಆದರೂ, ಇದೇ ವಿಚಾರವಾಗಿ ಸೋಮವಾರವೂ ಕಲಹ ಏರ್ಪಟ್ಟಿದ್ದು, ಈ ವೇಳೆ ಆರೋಪಿಗಳು ದೊಣ್ಣೆಗಳಿಂದ ಕೃಷ್ಣೇಗೌಡರ ಮೇಲೆ ಹಲ್ಲೆ ನಡೆಸಿದ್ದಾರೆ. ಈ ವೇಳೆ ತಲೆ ಮತ್ತು ಕಿವಿ ಭಾಗಕ್ಕೆ ಬಲವಾದ ಪೆಟ್ಟು ಬಿದ್ದ ಪರಿಣಾಮ ಅವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪಾಂಡವಪುರ ಠಾಣೆ ಪೊಲೀಸರು ಪರಿಶೀಲನೆ ನಡೆಸಿ ರಾಜು, ಆತನ ತಮ್ಮ ಕಿರಣ್ ಹಾಗೂ ತಾಯಿ ಸುನೀತಾ ಅವರನ್ನು ವಶಕ್ಕೆ ಪಡೆದಿದ್ದಾರೆ.

ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೋಭಾರಾಣಿ, ಅಪರ ಪೊಲೀಸ್ ವರಿಷ್ಠಾಧಿಕಾರಿ ಬೋರಲಿಂಗಯ್ಯ ಭೇಟಿ ನೀಡಿ ಪರಿಶೀಲಿಸಿದರು. ಪಾಂಡವಪುರ ಪೊಲೀಸ್ ಇನ್ಸ್‌ಪೆಕ್ಟರ್ ಶರತ್‌ಕುಮಾರ್ ಮಹಜರು ನಡೆಸಿದರು. ಬಳಿಕ ಮರಣೋತ್ತರ ಪರೀಕ್ಷೆಗಾಗಿ ಶವವನ್ನು ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ರವಾನಿಸಿದರು. ಮೃತರ ಪುತ್ರ ಶಶಿಕುಮಾರ್ ನೀಡಿದ ದೂರಿನ ಮೇರೆಗೆ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಕೆ.ಆರ್.ಪೇಟೆ: ಮಾದಾರ ಮಹಾಸಭಾ ಪದಾಧಿಕಾರಿಗಳ ಸಭೆ

ಕೆ.ಆರ್.ಪೇಟೆ, ಜ.12– ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ಮಾದಾರ ಮಹಾಸಭಾ ಮಂಡ್ಯ ಜಿಲ್ಲಾ ಘಟಕ ಹಾಗೂ ಕೆ.ಆರ್.ಪೇಟೆ ತಾಲೂಕು ಘಟಕದ ಪದಾಧಿಕಾರಿಗಳ ಸಭೆ ನಡೆಯಿತು.

ಮಾದಾರ ಮಹಾಸಭಾ ರಾಜ್ಯ ಸಮಿತಿ ಸದಸ್ಯ ಎನ್.ಆರ್.ಚಂದ್ರಶೇಖರ್ ಮಾತನಾಡಿ, ರಾಜ್ಯ ಮಾದಾರ ಮಹಾಸಭಾ ರಾಜ್ಯದಲ್ಲಿ ಪ.ಜಾತಿಯಲ್ಲಿ ನಂ.1 ಸ್ಥಾನದಲ್ಲಿರುವ ಮಾದಿಗ ಸಮುದಾಯದ ಹಿತರಕ್ಷಣೆಗಾಗಿ ನೋಂದಾಯಿಸಿ ಅಸ್ತಿತ್ವಕ್ಕೆ ತರಲಾಗಿದೆ. ರಾಜ್ಯ ಸಮಿತಿಯಲ್ಲಿ ಕರ್ನಾಟಕ ಮಾದಾರ ಮಹಾಸಭಾ ರಾಜ್ಯಾಧ್ಯಕ್ಷರಾಗಿ ಸಚಿವ ಕೆ.ಹೆಚ್.ಮುನಿಯಪ್ಪ, ಉಪಾಧ್ಯಕ್ಷರಾಗಿ ಗೋವಿಂದ ಕಾರಜೋಳ, ಮಾಜಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಪ್ರಧಾನ ಕಾರ್ಯದರ್ಶಿಗಳಾಗಿ ಮಾಜಿ ಸಚಿವ ಹೆಚ್.ಆಂಜನೇಯ, ಆರ್.ಬಿ.ತಿಮ್ಮಾಪೂರ, ಸಂಘಟನಾ ಕಾರ್ಯದರ್ಶಿಗಳಾಗಿ ತಿಮ್ಮರಾಯಪ್ಪ, ಆಲ್ಕೋಡ್ ಹನುಮಂತಪ್ಪ ಸೇರಿದಂತೆ ಎಲ್ಲಾ ಪಕ್ಷಗಳ ಮಾಜಿ, ಹಾಲಿ ಶಾಸಕರು ಪದಾಧಿಕಾರಿಗಳಾಗಿದ್ದಾರೆ. ಹಾಗಾಗಿ ಸಾಮಾನ್ಯ ಸದಸ್ಯತ್ವ 500 ರೂ. ಇದ್ದು ಪ್ರತಿಯೊಬ್ಬರೂ ಕಡ್ಡಾಯವಾಗಿ ಸದಸ್ಯತ್ವ ಪಡೆದು ತಮ್ಮ ಅಭಿವೃದ್ಧಿ ಜೊತೆಗೆ ಸಮುದಾಯದ ಅಭಿವೃದ್ಧಿಗೆ ಸಹಕಾರ ನೀಡಬೇಕು. ಪ್ರತಿ ತಾಲೂಕಿನಿಂದ ಕನಿಷ್ಠ 2 ಸಾವಿರ ಸದಸ್ಯತ್ವ ಗುರಿ ಹೊಂದಲಾಗಿದೆ ಎಂದರು.



ಪ್ರವಾಸಿ ಮಂದಿರದಲ್ಲಿ ಮಾದಾರ ಮಹಾಸಭಾ ಪದಾಧಿಕಾರಿಗಳ ಸಭೆ ನಡೆಯಿತು.

ಸಭೆಯಲ್ಲಿ ಮಾದಾರ ಮಹಾಸಭಾ ಮಂಡ್ಯ ಜಿಲ್ಲಾಧ್ಯಕ್ಷ ಕಾಂತರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಾಮನಹಳ್ಳಿ ಮಂಜು, ತಾಲೂಕು ಅಧ್ಯಕ್ಷ ಆರ್.ಟಿ.ಉಮೇಶ್ ಜಿಪಂ ಮಾಜಿ ಅಧ್ಯಕ್ಷ ಆರ್.ಕೆ.ಕುಮಾರ್, ಪುರಸಭಾ ಸದಸ್ಯ ಹೆಚ್.ಎಂ.ಪುಟ್ಟರಾಜು, ನಿವೃತ್ತ ಮುಖ್ಯ ಶಿಕ್ಷಕ ಮಾಸ್ಟರ್ ಶಿವಣ್ಣ, ತಾಲೂಕು ಮಹಾಸಭಾ ಪ್ರಧಾನ ಕಾರ್ಯದರ್ಶಿ ಆರ್.ಕೆ.ಧನಂಜಯ, ಉಪಾಧ್ಯಕ್ಷ ವಕೀಲ ಎನ್.ಆರ್.ಪ್ರಸನ್ನ ಕುಮಾರ್, ಖಜಾಂಚಿ ಹೆಚ್.ಆರ್.ಪುಟ್ಟರಾಜು, ಪದಾಧಿಕಾರಿಗಳಾದ ಸುರೇಶ್, ಸೊಸೈಟಿ ಹರೀಶ್, ಧರ್ಮ, ವೀಣಾ, ರಮೇಶ್, ಸುಧಾಕರ್, ಕೃಷ್ಣಯ್ಯ, ಶ್ರೀಧರ್, ಮಹಾದೇವ್ ಇತರರಿದ್ದರು.

ನಾಳೆ ಲೋಕಾಯುಕ್ತರಿಂದ ದೂರು, ಅಹವಾಲು ಸ್ವೀಕಾರ

ಮಂಡ್ಯ, ಜ.12– ಶ್ರೀರಂಗಪಟ್ಟಣ ತಾಲೂಕು ಕಚೇರಿ ಆವರಣದಲ್ಲಿ ಮಂಡ್ಯ ಲೋಕಾಯುಕ್ತ ಅಧಿಕಾರಿಗಳು ಜ.14 ರಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 1.30ರವರೆಗೆ ಸಾರ್ವಜನಿಕರಿಂದ ದೂರು/ಅಹವಾಲು ಸ್ವೀಕಾರ ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರ ಕುಂದು ಕೊರತೆ ಸಭೆ ನಡೆಸುವರು. ಸಭೆಯಲ್ಲಿ ಮಂಡ್ಯ ಲೋಕಾಯುಕ್ತ ಡಿವೈಎಸ್‌ಪಿ ಸುನೀಲ್ ಕುಮಾರ್ ಹೆಚ್.ಟಿ, ಇನ್ಸ್‌ಪೆಕ್ಟರ್‌ಗಳಾದ ರವಿಕುಮಾರ್ ಎಂ.ಲೇಪಾಕ್ಷ, ಮೂರ್ತಿ ಆರ್.ಜಿ, ಬ್ಯಾಟರಾಯಗೌಡ ಬಿ.ಪಿ ಅವರು ಪಾಲ್ಗೊಳ್ಳಲಿದ್ದಾರೆ. ಸಾರ್ವಜನಿಕರು ಲೋಕಾಯುಕ್ತ ಅಧಿಕಾರಿಗಳನ್ನು ಖುದ್ದಾಗಿ ಭೇಟಿ ಮಾಡಿ ಸರ್ಕಾರಿ ಮತ್ತು ಅರೆ ಸರ್ಕಾರಿ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಸರ್ಕಾರಿ ಕೆಲಸ ಮಾಡಿಕೊಡಲು ಅನಗತ್ಯ ವಿಳಂಬ ಮಾಡಿದ ಬಗ್ಗೆ ಹಾಗೂ ಭ್ರಷ್ಟಾಚಾರದ ಬಗ್ಗೆ ದೂರು/ಅಹವಾಲು ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಜ.16, ಸುಗ್ಗಿ ಸಂಭ್ರಮ, ಸಾಧಕರಿಗೆ ಸನ್ಮಾನ

ಭಾರತೀನಗರ, ಜ.12– ಇಲ್ಲಿಗೆ ಸಮೀಪದ ಚಿಕ್ಕರಸಿನಕೆರೆಯಲ್ಲಿ ಪುನಿ ಗೆಳೆಯರ ಬಳಗ ಹಾಗೂ ಚಿಕ್ಕರಸಿನಕೆರೆ ಗ್ರಾಮಸ್ಥರ ವತಿಯಿಂದ ಜ.16 ರಂದು ಸಂಜೆ 5 ಗಂಟೆಗೆ ಸಂಕ್ರಾಂತಿ ಹಬ್ಬದ ಪ್ರಯುಕ್ತ ಸುಗ್ಗಿ ಸಂಭ್ರಮ ಹಾಗೂ ಸಾಧಕರು, ಕಲಾವಿದರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪುನಿ ಗೆಳೆಯರ ಬಳಗದ ಸಂತೋಷ್ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಕ್ರಾಂತಿ ಪ್ರಯುಕ್ತ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಲಾವಿದರು ಮತ್ತು ಗ್ರಾಮಸ್ಥರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದ ಆಯೋಜಕ ರಾಕೇಶ್ ಮಾತನಾಡಿ, ಕಾರ್ಯಕ್ರಮದಲ್ಲಿ ಗೌಡಗೆರೆ ಶ್ರೀಚಾಮುಂಡೇಶ್ವರಿ ಕ್ಷೇತ್ರದ ಧರ್ಮದರ್ಶಿ ಶ್ರೀಮಲ್ಲೇಶ್ ಗುರೂಜಿ, ಕೆ.ಎಂ.ದೊಡ್ಡಿ ಇನ್ಸ್‌ಪೆಕ್ಟರ್ ಅನಿಲ್ ಕುಮಾರ್, ಮಳವಳ್ಳಿ ತಾಲೂಕು ಆಡಳಿತಾಧಿಕಾರಿ ಡಾ.ವೀರಭದ್ರಪ್ಪ, ಹರಿಕಥೆ ವಿದ್ವಾಂಸ ಶಿವಾರ ಉಮೇಶ್, ಮೂಳೆ ಮತ್ತು ನರರೋಗ ತಜ್ಞರಾದ ಡಾ.ಉಮೇಶ್ ಚೌಡಯ್ಯ, ಡಾ.ಮೌರ್ಯ, ಬೆಂಗಳೂರು ಜನಧ್ವನಿ ನಿರಾಶ್ರಿತ ಆಶ್ರಮದ ಮಹೇಶ್, ನಿವೃತ್ತ ಮುಖ್ಯಶಿಕ್ಷಕ ಶಂಕರಯ್ಯ ಸೇರಿದಂತೆ ಹಲವು ಮುಖಂಡರನ್ನು ಸನ್ಮಾನಿಸಲಾಗುವುದು ಎಂದರು.

ಈ ವೇಳೆ ಪುನಿ ಗೆಳೆಯರ ಬಳಗದ ಭರತ್, ಅಜಯ್, ಪ್ರವೀಣ್, ಸುದೀಪ್, ವಿಕಾಸ್ ಸೇರಿದಂತೆ ಹಲವರಿದ್ದರು.

ಸಿ.ಎನ್.ರಾಮಕೃಷ್ಣೇಗೌಡ ನಿಧನ



ಕೆ.ಆರ್.ಪೇಟೆ, ಜ.12– ತಾಲೂಕಿನ ಚಿಕ್ಕತಾರಹಳ್ಳಿ ಗ್ರಾಮದ ಹಿರಿಯ ಮುಖಂಡ ರಾಮಕೃಷ್ಣೇಗೌಡ(70) ಸೋಮವಾರ ರಾತ್ರಿ ನಿಧನರಾದರು.

ಮೃತರು ಪತ್ನಿ, ತಾಪಂ ಮಾಜಿ ಅಧ್ಯಕ್ಷೆ ಪುಟ್ಟತಾಯಮ್ಮ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ 2 ಗಂಟೆಗೆ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಒಂದನೇ ಪುಟದಿಂದ

ಐತಿಹಾಸಿಕ ಸುತ್ತೂರು ಜಾತ್ರೆ ಆರಂಭ

ಭೇದವಿಲ್ಲದೆ ಸರ್ವಧರ್ಮಗಳ ಎಲ್ಲರಿಗೂ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಅಂತರ್ಜಾತಿ, ವಿಶೇಷ ಚೇತನರು ಹಾಗೂ ಹೊರ ರಾಜ್ಯಗಳ ವಧು–ವರರು ದಾಂಪತ್ಯ ಜೀವನಕ್ಕೆ ಕಾಲಿಡುತ್ತಿದ್ದಾರೆ. ಈಗಾ ಗಲೇ ವಿವಾಹ ನೋಂದಣಿ ಪ್ರಕ್ರಿಯೆ ನಡೆಸ ಲಾಗಿದೆ. ವಧುವಿಗೆ ಸೀರೆ, ಕುಪ್ಪಸ, ಮಾಂಗಲ್ಯ ಹಾಗೂ ಕಾಲುಂಗುರ, ವರನಿಗೆ ಪಂಚೆ, ವಲ್ಲಿ, ಶರ್ಟ್ ನೀಡಲಾಗುತ್ತದೆ. ಈ ಬಾರಿ ವಿವಾಹದಲ್ಲಿ 130ಕ್ಕೂ ಹೆಚ್ಚು ಜೋಡಿ ವಿವಾಹವಾಗುತ್ತಿದ್ದಾರೆ. ಇದುವರೆಗೆ ಸುತ್ತೂರು ಮಠದ ವತಿಯಿಂದ ನಡೆಸಿದ ಸಾಮೂಹಿಕ ವಿವಾಹದಲ್ಲಿ 3360ಕ್ಕೂ ಹೆಚ್ಚು ಮಂದಿ ಸತಿ–ಪತಿಗಳಾಗಿದ್ದಾರೆ. ವಧು–ವರರು ವಿವಾಹದ ದೃಢೀಕರಣ ಪತ್ರ ಹಾಗೂ ನೋಂದಣಿ ಪತ್ರಗಳನ್ನು ಸಲ್ಲಿಸಿ ಸರ್ಕಾರ ನೀಡುವ ಪ್ರೋತ್ಸಾಹ ಧನ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ವಿವಿಧ ಸ್ಪರ್ಧೆ: ಜಾತ್ರಾ ಮಹೋತ್ಸವದ ಅಂಗವಾಗಿ ಜ.15ರಂದು ರಂಗೋಲಿ ಸ್ಪರ್ಧೆ, ಜ.16 ರಿಂದ ಮೂರು ದಿನ ಸೋಬಾನೆ ಪದ ಸ್ಪರ್ಧೆ, ಜ.17ರಂದು ಮಹಿಳೆಯರಿಗೆ ರಾಗಿ ಬೀಸುವ ಸ್ಪರ್ಧೆ ಆಯೋಜಿಸಲಾಗಿದೆ. ಜ.18 ರಂದು 1ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಬೇರೆ ಬೇರೆ ವಿಭಾಗಗಳಲ್ಲಿ, ಸ್ಥಳದಲ್ಲೇ ವಿವಿಧ ವಿಷಯಗಳ ಕುರಿತು ಚಿತ್ರ ರಚಿಸುವ ರಾಜ್ಯಮಟ್ಟದ ಮಕ್ಕಳ ಚಿತ್ರಕಲಾ ಸ್ಪರ್ಧೆ ಮತ್ತು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಗಾಳಿಪಟ ಸ್ಪರ್ಧೆ ಆಯೋಜಿಸಲಾಗಿದೆ. ರಾಜ್ಯ ಹಾಗೂ ಹೊರರಾಜ್ಯ ಕಲಾವಿದರುಗಳ ಕಲಾಕೃತಿಗಳ ಪ್ರದರ್ಶನ, ಮಾರಾಟ ಹಾಗೂ ಸ್ಥಳದಲ್ಲೇ ಸಾರ್ವಜನಿಕರ ಭಾವಚಿತ್ರ ರಚನೆ ಮಾಡಿ ಮಾರಾಟ ಮಾಡುವ ವ್ಯವಸ್ಥೆ ಇರುತ್ತದೆ ಎಂದು ವಿವರಿಸಿದರು.

ಕುಸ್ತಿ ಪಂದ್ಯಾವಳಿ: ಜ.19ರಂದು ರಾಷ್ಟ್ರಮಟ್ಟದ ನಾಡ ಕುಸ್ತಿ ಪಂದ್ಯಗಳು ನಡೆಯಲಿವೆ. ಈ ಬಾರಿ ಎರಡು ಮಾರ್ಪಿಟ್ ಕುಸ್ತಿಗಳಿರುತ್ತವೆ. ರಾಷ್ಟ್ರಮಟ್ಟದ ಕುಸ್ತಿ ಸ್ಪರ್ಧೆಯಲ್ಲಿ ವಿಜೇತರಿಗೆ 'ಸುತ್ತೂರು ಕೇಸರಿ' ಹಾಗೂ ಸ್ಥಳೀಯ ಉತ್ತಮ ಕುಸ್ತಿ ಸ್ಪರ್ಧೆ ವಿಜೇತರಿಗೆ ಸುತ್ತೂರು ಕುಮಾರ ಪ್ರಶಸ್ತಿ ನೀಡಲಾಗುತ್ತದೆ. ಈ ವರ್ಷದಿಂದ ನಂಜನಗೂಡು ತಾಲೂಕಿನ ಕುಸ್ತಿ ಪಟುಗಳಿಗೆ ಸುತ್ತೂರು ಕಿಶೋರ ಪ್ರಶಸ್ತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ದೋಣಿ ವಿಹಾರ, ದೇಸಿ ಆಟ: ಸಾರ್ವಜನಿಕರ ಮನೋರಂಜನೆಗಾಗಿ ಜಾತ್ರೆಯ ಎಲ್ಲ ದಿನಗಳಲ್ಲಿ ದೋಣಿ ವಿಹಾರ ಏರ್ಪಡಿಸಲಾಗಿದೆ. ಪುರುಷರಿಗೆ ಜ.17 ರಂದು, ಮಹಿಳೆಯರಿಗೆ ಜ. 18 ರಂದು, ಜೆಎಸ್‌ಎಸ್ ಸಂಸ್ಥೆಯ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜ.17ರಿಂದ 19ರವರೆಗೆ ಸ್ಪರ್ಧೆಗಳು ನಡೆಯಲಿವೆ. ದೇಸಿ ಆಟಗಳಾದ ಕೆಸರುಗದ್ದೆ ಓಟ, ಹಗ್ಗ–ಜಗ್ಗಾಟ, ಕುಂಟೆ ಬಿಲ್ಲೆ, ಅಳಿಗುಳಿ ಮನೆ, ಆಣೆಕಲ್ಲು, ಚದುರಂಗ, ಬುಗುರಿ, ಚೌಕಬಾರದ ಜತೆಗೆ 50 ಕೆಜಿ ಭಾರದ ಚೀಲ ಹೊತ್ತು ಓಡುವುದು, ಕಲ್ಲುಗುಂಡು ಎತ್ತುವುದು, ತುಂಬಿದ ಬಿಂದಿಗೆಯನ್ನು ತಲೆಯ ಮೇಲೆ ಹೊತ್ತು ಓಡುವ ಸ್ಪರ್ಧೆ ಆಯೋಜಿಸಲಾಗಿದೆ. ವಿಜೇತರಾದವರಿಗೆ ನಗದು ಬಹುಮಾನ, ನೆನಪಿನ ಕಾಣಿಕೆ ಹಾಗೂ ಪ್ರಶಸ್ತಿಪತ್ರ ನೀಡಲಾಗುತ್ತದೆ.

55ನೇ ದನಗಳ ಪರಿಷೆ: ಪ್ರತಿ ಬಾರಿಯ ದನಗಳ ಜಾತ್ರೆ ಏರ್ಪಡಿಸಲಾಗಿದ್ದು, ರೈತರು ಎತ್ತು, ಹಸು, ಹೋರಿಗಳನ್ನು ಕೊಳ್ಳಲು ಹಾಗೂ ಮಾರಾಟ ಮಾಡಲು ಅವಕಾಶವಿರುತ್ತದೆ. ಪಶುಪಾಲನಾ ಹಾಗೂ ಪಶುವೈದ್ಯಕೀಯ ಇಲಾಖೆ ವತಿಯಿಂದ ಪಶುಗಳಿಗೆ ಉಚಿತ ಆರೋಗ್ಯ ತಪಾಸಣೆಯೂ ಇದೆ. ಉತ್ತಮ ರಾಸುಗಳಿಗೆ ಬಹುಮಾನ ನೀಡಿ ಪ್ರೋತ್ಸಾಹಿಸಲಿದ್ದಾರೆ ಎಂದರು.

ಕಪಿಲಾರತಿ: ಜ.19ರ ತೆಪ್ಪೋತ್ಸವದಂದು ಕಪಿಲಾರತಿ ಏರ್ಪಡಿಸಲಾಗಿದೆ. ಇದಕ್ಕಾಗಿ ವಿಶೇಷ ನೂತನ ತೆಪ್ಪ ಸಿದ್ಧಪಡಿಸಲಾಗಿದ್ದು, ತೆಪ್ಪದ ಸುತ್ತಲೂ 16 ನಂದಿಗಳನ್ನು ಸ್ಥಾಪಿಸಲಾಗಿದೆ. ಆಕರ್ಷಕ ವಿನ್ಯಾಸದ 8 ಕಂಬಗಳು, ಚಿತ್ರಗಳನ್ನು ಒಳಗೊಂಡ ಭವ್ಯ ಮಂಟಪವಿದೆ. ಮೋಟಾರ್ ಚಾಲಿತ ಈ ತೆಪ್ಪಕ್ಕೆ ವಿಶೇಷ ದೀಪಾಲಂಕಾರ ಮಾಡಲಾಗುತ್ತದೆ. ಜೆಎಸ್‌ಎಸ್ ಅಂತರಸಂಸ್ಥೆಗಳ ಸಾಂಸ್ಕೃತಿಕ ಮೇಳದಲ್ಲಿ 3,500ಕ್ಕೂ ಹೆಚ್ಚು ವಿದ್ಯಾರ್ಥಿಗಳು



ಭಾಗವಹಿಸಲಿದ್ದಾರೆ. ಭರತನಾಟ್ಯ, ಸಾಮೂಹಿಕ ನೃತ್ಯ, ಶಾಸ್ತ್ರೀಯ ಸಂಗೀತ, ವಚನಾಧಾರಿತ ನೃತ್ಯ, ಸಾಮೂಹಿಕ ಗಾಯನ ಸ್ಪರ್ಧೆಗಳ ಮೂಲಕ ಸುಮಾರು 400ಕ್ಕೂ ಹೆಚ್ಚು ಕಾರ್ಯಕ್ರಮ ಆಯೋಜಿಸಲಾಗಿದೆ. ಗದ್ದುಗೆಯ ಆವರಣದಲ್ಲಿ ನಗರ ಪ್ರದೇಶಗಳ ವೃತ್ತಿಪರ ಹಾಗೂ ಹವ್ಯಾಸಿ ಕಲಾವಿದರಿಂದ ಗಾಯನ, ನೃತ್ಯ ಹಾಗೂ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ರೈತರಿಗಾಗಿ ಕೃಷಿ ಬ್ರಹ್ಮಾಂಡ: ಮೈಸೂರಿನ ಪ್ರಾದೇಶಿಕ ಬೆಳೆಗಳಾದ ನಂಜನಗೂಡು ರಸಬಾಳೆ, ಮೈಸೂರು ವೀಳ್ಯದೆಲೆ, ಮೈಸೂರು ಮಲ್ಲಿಗೆ ಹಾಗೂ ಈರನಗೆರೆ ಬದನೆ ಬೆಳೆಗಳ ಪ್ರಾತ್ಯಕ್ಷಿಕೆ ಇರಲಿದೆ. ಬಳ್ಳಿ, ಸಸಿಗಳ ಲೋಕ, ಕಸಿ ಟಮ್ಯಾಟೋ, ಬದನೆ ಬೆಳೆ, ವೈವಿಧ್ಯಮಯ ಪುಷ್ಪ ಪ್ರದರ್ಶನವನ್ನು ಪ್ರಾತ್ಯಕ್ಷಿಕೆ ಸಹಿತ ಏರ್ಪಡಿಸಲಾಗಿದೆ. ಒಂದು ಎಕರೆ ಕೃಷಿ ಬ್ರಹ್ಮಾಂಡದಲ್ಲಿ ನೆರಳುಮನೆಯಲ್ಲಿ ಬೆಳೆದ ಹಲವಾರು ದೇಸಿ ಹಾಗೂ ವಿದೇಶಿ ತರಕಾರಿಗಳು, ಏಕದಳ, ದ್ವಿದಳ ಧಾನ್ಯಗಳು, ಎಣ್ಣೆಕಾಳುಗಳು, ವಾಣಿಜ್ಯ ಬೆಳೆಗಳು, ಮೇವಿನ ಬೆಳೆಗಳು, ವಿವಿಧ ಫಲಪುಷ್ಪಗಳು, ತೋಟಗಾರಿಕೆ ಬೆಳೆಗಳು, ರೇಷ್ಮೆಕೃಷಿ, ಹನಿ ಮತ್ತು ತುಂತುರು ನೀರಾವರಿ ಪದ್ಧತಿಗಳನ್ನು ಅನುಸರಿಸಿ ಬೆಳೆದಿರುವ ಸುಮಾರು 300 ಬೆಳೆಗಳು ಹಾಗೂ ವಿವಿಧ ತಳಿಗಳ ಪ್ರಾತ್ಯಕ್ಷಿಕೆ ಮತ್ತು ಪ್ರದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಕೃಷಿ ಅಭಿವೃದ್ಧಿ ಇಲಾಖೆಗಳು, ವಿಶ್ವವಿದ್ಯಾನಿಲಯಗಳು ಹಾಗೂ ಖಾಸಗಿ ಉಪಕರಣಗಳ ಮಾರಾಟಗಾರರು ವಸ್ತುಪ್ರದರ್ಶನದಲ್ಲಿ ಪಾಲ್ಗೊಳ್ಳಲಿದ್ದಾರೆ. ಕೃಷಿ ಯಂತ್ರೋಪಕರಣಗಳ ಪ್ರದರ್ಶನ ಹಾಗೂ ಮಾರಾಟದ ವ್ಯವಸ್ಥೆಯೂ ಇದ್ದು, ದೇಸಿ ತಳಿಗಳ ಹಸು, ಕುರಿ, ಮೇಕೆ, ಕೋಳಿಗಳ ಪ್ರದರ್ಶನಕ್ಕೂ ಅವಕಾಶ ಕಲ್ಪಿಸಲಾಗಿದೆ. ಜತೆಗೆ ಜ.18ರಂದು ಕೃಷಿಯಲ್ಲಿ ಮಹಿಳೆ: ಸುಸ್ಥಿರ ಅಭಿವೃದ್ಧಿ ಮತ್ತು ಆಹಾರ ಭದ್ರತೆ ಕುರಿತು ವಿಚಾರಸಂಕಿರಣ ಏರ್ಪಡಿಸಲಾಗಿದೆ. ಮಹಿಳೆಯರಿಗಾಗಿ ಕೃಷಿ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಪ್ರಭಾತ್ ಪೇರಿ: 15ರಿಂದ 20ರವರೆಗೆ ಪ್ರತಿದಿನ ಬೆಳಗ್ಗೆ ಮೇಗಳಾಪುರ, ಮಾಧವಗೆರೆ, ಸುತ್ತೂರು, ಕೀಳನಪುರ, ಹದಿನಾರು, ಹೊಸಕೋಟೆ, ಡಣಾಯಕನಪುರ ಗ್ರಾಮಗಳಲ್ಲಿ ಸ್ನೇಹ–ಸೌಹಾರ್ದ–ಶಾಂತಿ ಪ್ರಾರ್ಥನಾ ಸಂಚಲನದ ಪ್ರಭಾತ್ ಪೇರಿ ನಡೆಯಲಿದೆ. ನಂತರ ಓರ್ವ ಶ್ರೀಗಳು ಧ್ವಜಾರೋಹಣ ನೆರವೇರಿಸುತ್ತಾರೆ, ಮತ್ತೊಬ್ಬರು ಧರ್ಮಸಂದೇಶ ನೀಡುತ್ತಾರೆ.

ಸುದ್ದಿಗೋಷ್ಠಿಯಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಶಿವಕುಮಾರಸ್ವಾಮಿ, ಆಡಳಿತಾಧಿಕಾರಿ ಉದಯಶಂಕರ್ ಇದ್ದರು.



3 ವರ್ಷ ಜೈಲು

ಜಮಾವಣೆ, ಅಭಿಪ್ರಾಯ ಸಂಗ್ರಹಿಸುವುದು, ಬಹಿಷ್ಕಾರಕ್ಕೆ ಪ್ರತ್ಯಕ್ಷ, ಪರೋಕ್ಷ ಸಹಾಯ, ಒತ್ತಡ, ಪ್ರಚೋದನೆ ನೀಡುವವರನ್ನೂ ಅಪರಾಧಿಗಳೆಂದು ಪರಿಗಣಿಸಿ ಜೈಲು ಅಥವಾ ದಂಡ ಅಥವಾ ಎರಡನ್ನೂ ವಿಧಿಸಲು ಕೂಡಾ ಈ ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.

ಈ ಕಾಯ್ದೆಯ ಅನ್ವಯ, ಬಹಿಷ್ಕಾರಕ್ಕೆ ಒಳಗಾದವರು ಪೊಲೀಸ್ ಠಾಣೆ ಅಥವಾ ನ್ಯಾಯಾಧೀಶರಿಗೆ ದೂರು ನೀಡ ಬಹುದು. ಪ್ರಥಮ ದರ್ಜೆ ನ್ಯಾಯಾಧೀಶರಿಗೆ ವಿಚಾರಣೆಯ ಅಧಿಕಾರ ನೀಡಲಾಗಿದೆ. ನೇರವಾಗಿ ಸಲ್ಲಿಕೆಯಾದ ದೂರಿನ ತನಿಖೆ ನಡೆಸುವಂತೆ ನ್ಯಾಯಾಧೀಶರು ಆದೇಶ ನೀಡಬಹುದು. ಸಂತ್ರಸ್ತರಿಗೆ ಸಹಾಯ ಒದಗಿಸಲು ಮತ್ತು ದಂಡದ ಮೊತ್ತವನ್ನು ಪರಿಹಾರವಾಗಿ ನೀಡಲು ನಿರ್ದೇಶನ ನೀಡಬಹುದು. ಸಾಮಾಜಿಕ ಬಹಿಷ್ಕಾರದಂತಹ ನಿರ್ಧಾರ ತೆಗೆದುಕೊಳ್ಳಲು ನಡೆಸುವ ಸಭೆಗಳ ಕುರಿತು ಮಾಹಿತಿ ಬಂದರೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ನಿಷೇಧಿಸಿ ಆದೇಶಿಸಬಹುದು. ಸಾಮಾಜಿಕ ಬಹಿಷ್ಕಾರ ತಡೆ ಅಧಿಕಾರಿಗಳಾಗಿ ಗ್ರೂಪ್ 'ಎ' ಅಧಿಕಾರಿಗಳನ್ನು ಸರ್ಕಾರ ನಿಯೋಜಿಸಲಿದೆ.

25 ಕೋಟಿ ನೆರವು


ಪ್ರಸಕ್ತ ಸಾಲಿನಲ್ಲಿ ವಿಶ್ರಾಂತಿ ವೇತನಕ್ಕೆ ಪುನಃ ಹೆಚ್ಚುವರಿ ಅನುದಾನ ಕೋರ ಬಾರದು. ಪಿಂಚಣಿ ಪಾವತಿಯ ಉದ್ದೇಶಕ್ಕೆ ಮಾತ್ರವೇ ಇದನ್ನು ಬಳಸಬೇಕು. ಹೊಸ ತಾಂತ್ರಿಕ ಕೋರ್ಸ್ ಪ್ರಾರಂಭಿಸಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಿಕೊಳ್ಳಬೇಕು. ವಿದ್ಯಾರ್ಥಿಗಳಿಗೆ ಡಿಜಿಟಲ್ ಅಂಕಪಟ್ಟಿ ನೀಡಬೇಕು. ಅನುಪಯುಕ್ತ ಕಟ್ಟಡ ಬಾಡಿಗೆಗೆ ಕೊಡಬೇಕು. ಕಡಿಮೆ ದಾಖಲಾತಿ ಇರುವ ಕೋರ್ಸ್ ಮುಚ್ಚಬೇಕು. ಸೌರವಿದ್ಯುತ್ ಚಾವಣಿ ಅಳವಡಿಸಿಕೊಳ್ಳಬೇಕು. ಅನಗತ್ಯ ವೆಚ್ಚಗಳಿಗೆ ಕಡಿವಾಣ ಹಾಕಬೇಕು ಎಂಬಿತ್ಯಾದಿ ಷರತ್ತುಗಳನ್ನು ವಿಶ್ವವಿದ್ಯಾಲಯಗಳಿಗೆ ವಿಧಿಸಲಾಗಿದೆ.

ಸಿಎಂ ಸ್ಥಾನ ಬಿಡಲ್ಲ

ಮುಂದಿನದು ಯುಗಾದಿ ನೋಡಿಕೊಂಡು ಹೇಳಬೇಕು ಎಂದಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒತ್ತಡದಲ್ಲಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಕೋಡಿಮಠದ ಡಾ.ಶಿವಾನಂದ ಶಿವಯೋಗಿ ರಾಜೇಂದ್ರಶ್ರೀಗಳು, ಆತ ಒಳ್ಳೆಯ ಕಾರ್ಯಕರ್ತ, ಸಂಘಟನೆಯ ಮನುಷ್ಯ, ಹೋರಾಟಗಾರ. ಆದರೆ ಇಲ್ಲಿ ಸಂಘಟನೆ ಪ್ರಶ್ನೆ ಬರುವುದಿಲ್ಲ. ಸಿದ್ದರಾಮಯ್ಯ ಸಿಎಂ ಸ್ಥಾನ ಬಿಟ್ಟು ಕೊಡ್ತಾರಾ, ಇಲ್ಲವಾ, ಅನ್ನೋದನ್ನ ನೋಡಿ ಹೇಳ್ತೇನೆ ಎಂದರು.

ಬಹುರೂಪಿ ನಾಟಕೋತ್ಸವಕ್ಕೆ ಚಾಲನೆ

'ಸತೀಶ್ ನೀವು ಸ್ವಲ್ಪ ಪೋಲಿಟಿಲೈಸ್ ಮಾಡಿಸುತ್ತಿದ್ದೀರಿ ಅನ್ನಿಸುತ್ತಿಲ್ಲವೇ' ಎಂದು ಕೇಳಿದರು. ಅದಕ್ಕೆ ನಾನು, ಗೆಳೆಯ ಎಷ್ಟೋ ಜನರ ಮನಸ್ಸಿನಲ್ಲಿರುವ ಪ್ರಶ್ನೆಯನ್ನು ನೀನು ಕೇಳಿದೆ. ಬಾಬಾ ಸಾಹೇಬ್ ಅವರ ಆಶಯದೊಂದಿಗೆ ನಾವು ಮಾಡುವುದು ರಾಜಕಾರಣವಾದರೆ ಆ ಸಾಂಸ್ಕೃತಿಕ ರಾಜಕಾರಣವನ್ನು ನಾನು ಮಾಡುತ್ತೇನೆ ಎಂದು ಹೇಳಿದೆ ಎಂದರು. ಏಕೆಂದರೆ ಸಂಸ್ಕೃತಿ ಮನರಂಜನೆಯಲ್ಲ. ಅದಿರುವುದು ಪ್ರಜ್ಞೆ ರೂಪಿಸಲು. ನಾವಿಂದು ಬಾಬಾ ಸಾಹೇಬರ ಗುರುತುಗಳನ್ನು ಕಟ್ಟಿಕೊಳ್ಳದೇ ಹೋದರೆ, ಅದನ್ನು ಈಗ ಶುರುವಾಗಿರುವ ಪೋಲಿಟಿಕ್ಸ್ ಆಫ್ ಎನ್‌ಕ್ರೋಚ್‌ಮೆಂಟ್ (ಒತ್ತುವರಿ) ಗೊತ್ತಿಲ್ಲದಂತೆ ಒತ್ತುವರಿ ಮಾಡುತ್ತದೆ. ಯಾವುದೇ ವ್ಯಕ್ತಿ ಹಾಗೂ ಪ್ರಜ್ಞೆಯನ್ನು ಎದುರಿಸಲು ಸಾಧ್ಯವಾಗದಿದ್ದರೆ, ನಿಧಾನವಾಗಿ ಆ ವ್ಯಕ್ತಿ ಮತ್ತು ಪ್ರಜ್ಞೆಯನ್ನು ಒತ್ತುವರಿ ಮಾಡಿ ತಮ್ಮದಾಗಿಸಿಕೊಳ್ಳುವ ರಾಜಕಾರಣ ಈ ದೇಶದಲ್ಲಿ ನಡೆಯುತ್ತಲೇ ಬಂದಿದೆ. ಅದನ್ನು ಸಮರ್ಥವಾಗಿ ಎದುರಿಸಲು ಈ ರೀತಿಯ ಸಾಂಸ್ಕೃತಿಕ ಗುರುತುಗಳನ್ನು ಬಾಬಾ ಸಾಹೇಬರ ಹೆಸರಿನಲ್ಲಿ ದಿಟ್ಟವಾಗಿ ಕಟ್ಟಬೇಕು. ಅದನ್ನೇ ಈ ನಾಟಕೋತ್ಸವದಲ್ಲಿ ಮಾಡಲಾಗುತ್ತಿದೆ ಎಂದು ಹೇಳಿದರು.



ಸೋಮವಾರ ಸಂಜೆ ಪ್ರದರ್ಶನಗೊಂಡ ನಾಟಕವೊಂದರ ದೃಶ್ಯ ಕಾಣಬಹುದು.

24 ನಾಟಕ ಪ್ರದರ್ಶನ: ಈ ಬಾರಿಯ ಬಹುರೂಪಿಯಲ್ಲಿ 24 ನಾಟಕಗಳು ಪ್ರದರ್ಶನಗೊಳ್ಳುತ್ತಿದ್ದು, ಈ ಪೈಕಿ ಬೇರೆ ಬೇರೆ ಭಾಷೆಗಳ 12 ನಾಟಕಗಳಲ್ಲಿ ಬಾಬಾ ಸಾಹೇಬರ ಜೀವನ, ಕೊಡುಗೆ, ಸಂಶೋಧನೆ ಹಾಗೂ ಚಳವಳಿಗಳನ್ನು ಅನಾವರಣಗೊಳಿಸಲಾಗುತ್ತಿದೆ. ಬಾಬಾ ಸಾಹೇಬರು ಭಾರತಕ್ಕೆ ಮಾತ್ರ ಸೀಮಿತವಲ್ಲ. ಅವರು ಜಾಗತಿಕ ಪ್ರಜ್ಞೆ. ಇಡೀ ಜಗತ್ತಿನಲ್ಲಿ ಕೀಳರಿಮೆ, ಶೋಷಣೆ ತಾರತಮ್ಯ ಇರುವಕಡೆಗಳಲ್ಲೆಲ್ಲಾ ಬಾಬಾ ಸಾಹೇಬರ ಚಿಂತನೆಗಳು ಬೆಳಕಾಗಿ ಕಾಣುತ್ತಿದೆ. ಬಾಬಾ ಸಾಹೇಬರ ಆಶಯದಲ್ಲಿ ಈ ಉತ್ಸವ ನಡೆಸಲು ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಅನುದಾನ ಘೋಷಣೆ ಮಾಡಿತು. ವಿವಿಧ ರಾಜ್ಯಗಳ ನೂರಾರು ಕಲಾವಿದರು ನಾಟಕಗಳನ್ನು ಪ್ರದರ್ಶನ ಮಾಡುತ್ತಿದ್ದಾರೆ. ಮಕ್ಕಳಿಗಾಗಿ 6 ನಾಟಕಗಳು ಬಾಬಾ ಸಾಹೇಬರ ಆಶಯದಲ್ಲಿ ಪ್ರದರ್ಶನಗೊಳ್ಳುತ್ತಿವೆ ಎಂದು ವಿವರಿಸಿದರು.

ಬಹುರೂಪಿ ರಂಗಗೌರವ ಪ್ರದಾನ: ಇದೇ ವೇಳೆ 'ಬೆಳ್ಳಿ ಬಹುರೂಪಿ ರಂಗಗೌರವ'ವನ್ನು ಭಾರತದ ರಂಗಭೂಮಿಯ ಹೆಸರಾಂತ ಹಿರಿಯ ನಟಿ ಪದ್ಮಶ್ರೀ ಪುರಸ್ಕೃತರಾದ ಮಣಿಪುರ ಮೂಲದ ಹೈಸ್ನಾಂ ಸಾವಿತ್ರಿ ಅವರಿಗೆ ಪ್ರದಾನ ಮಾಡಲಾಯಿತು. ಅಲ್ಲದೆ, ರಂಗ ಸಂಚಿಕೆ ಬಿಡುಗಡೆ ಮಾಡಲಾಯಿತು. ಸಭಾ ಕಾರ್ಯಕ್ರಮಕ್ಕೂ ಮುನ್ನ ಪುಸ್ತಕ ಹಾಗೂ ಕರಕುಶಲ ಮೇಳ ಉದ್ಘಾಟಿಸಲಾಯಿತು. ಜೊತೆಗೆ ಬಾಬಾ ಸಾಹೇಬರ ಛಾಯಾಚಿತ್ರ ಪ್ರದರ್ಶನ ಹಾಗೂ ಚಿತ್ರಕಲಾ ಪ್ರದರ್ಶನಕ್ಕೂ ಚಾಲನೆ ನೀಡಲಾಯಿತು. ಜ.18ರವರೆಗೆ ನಾಟಕೋತ್ಸವ ನಡೆಯಲಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸರ್ಕಾರದ ಕಾರ್ಯದರ್ಶಿ ಜೆ.ಮಂಜುನಾಥ್, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೈಸೂರು ವಿಭಾಗದ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ರಂಗ ಸಮಾಜದ ಸದಸ್ಯ ಹೆಚ್.ಎಸ್.ಸುರೇಶ್‌ಬಾಬು, ರಂಗಾಯಣದ ಉಪನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ಮತ್ತಿತರರು ಹಾಜರಿದ್ದರು.

ಹೊಸ ದಿಕ್ಕು!

ಜನವರಿ 16 ರಿಂದ 22 ರೊಳಗೆ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನೂ ದೆಹಲಿಗೆ ಕರೆಸಿಕೊಂಡು ಅಧಿಕಾರ ಹಂಚಿಕೆಗೆ ಸಂಬಂಧಿಸಿದಂತೆ ಚರ್ಚೆ ಮಾಡುವ ಸಾಧ್ಯತೆ ಇದೆ ಎನ್ನಲಾಗಿದೆ. ಈ ಮಧ್ಯೆ ತಮಿಳುನಾಡು ಪ್ರವಾಸದ ಮಾರ್ಗಮಧ್ಯೆ ಮೈಸೂರಿನ ವಿಮಾನ ನಿಲ್ದಾಣದಲ್ಲಿ ರಾಹುಲ್ ಗಾಂಧಿ ಅವರನ್ನು ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಭೇಟಿಯಾಗುತ್ತಿರುವುದು ಮಹತ್ವ ಪಡೆದಿದೆ. ಸಂಕ್ರಾಂತಿ ನಂತರ ದೆಹಲಿಯಲ್ಲಿ ಅಧಿಕಾರ ಹಂಚಿಕೆ ಸೂತ್ರದ ಬಗ್ಗೆ ನಡೆಯಬಹುದಾದ ಸಭೆಗೆ ಪೂರ್ವಭಾವಿಯಾಗಿ ಮೈಸೂರಲ್ಲಿ ಚರ್ಚಿಸಿ, ಉಭಯ ನಾಯಕರಿಗೂ ಸೂಚನೆ ನೀಡಬಹುದು. ಒಟ್ಟಾರೆ ಜ.16ರಿಂದ 22ರೊಳಗೆ ಅಧಿಕಾರ ಹಂಚಿಕೆ ಹಾಗೂ ಸಂಪುಟ ಪುನಾರಚನೆಗೊಂದಲಕ್ಕೆ ಹೈಕಮಾಂಡ್ ತೆರೆ ಎಳೆಯಲು ನಿರ್ಧರಿಸಿದೆ.

ಏರ್‌ಪೋರ್ಟ್‌ನಲ್ಲಿ ವೀರೇಂದ್ರ ಪಾಟೀಲ್‌ಗೆ ಕೊಕ್ ಕೊಡಲಾಗಿತ್ತು...!

ರಾಹುಲ್ ಗಾಂಧಿಯವರನ್ನು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ವಿಮಾನ ನಿಲ್ದಾಣದಲ್ಲಿ ಭೇಟಿಯಾಗುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರಾಸಂಗಿಕವಾಗಿ ಕೆಲ ರಾಜಕೀಯ ವಿಶ್ಲೇಷಕರು ವೀರೇಂದ್ರ ಪಾಟೀಲ್ ಕಾಲಘಟ್ಟವನ್ನು ನೆನಪಿಸಿಕೊಂಡಿದ್ದಾರೆ. 1990ರಲ್ಲಿ ರಾಜೀವ್ ಗಾಂಧಿ ರಾಜ್ಯಕ್ಕೆ ಭೇಟಿ ನೀಡಿ, ದೆಹಲಿಗೆ ವಾಪಸ್ಸಾಗುವಾಗ ವಿಮಾನ ನಿಲ್ದಾಣದಲ್ಲೇ ಮುಖ್ಯ ಮಂತ್ರಿ ವೀರೇಂದ್ರ ಪಾಟೀಲ್ ಅವರಿಗೆ ಕೊಕ್ ನೀಡಿ, ಬಳಿಕ ಬಂಗಾರಪ್ಪ ಅವರನ್ನು ಗದ್ದುಗೆಯಲ್ಲಿ ಕೂರಿಸಿದ್ದರು. ಆಗ ಡಿ.ಕೆ.ಶಿವಕುಮಾರ್ ಬಂಗಾರಪ್ಪನವರ ಅತ್ಯಂತ ವಿಶ್ವಾಸಾರ್ಹ ಅತ್ಯಾಪ್ತ ಯುವ ನಾಯಕ.

ಜೊತೆ ರಾಹುಲ್ ಗಾಂಧಿ ಮಿನಿ ಮೀಟಿಂಗ್!

ನಡೆಸಿದ ಮುಖ್ಯಮಂತ್ರಿ ದಾಖಲೆ ನಿರ್ಮಿಸಿದ ನಂತರ ಸಿದ್ದರಾಮಯ್ಯ ಪದತ್ಯಾಗ ಮಾಡುತ್ತಾರೆ ಎಂಬ ಚರ್ಚೆ ನಡುವೆಯೇ ಅವರು ಸಚಿವ ಸಂಪುಟ ಪುನರ್‌ರಚನೆ ಹಾಗೂ ಬಜೆಟ್ ಮಂಡನೆಯತ್ತ ಚಿತ್ತ ಹರಿಸಿದ್ದಾರೆ. ಇತ್ತ ಸಂಕ್ರಾಂತಿ ನಂತರ ಅಧಿಕಾರ ಲಭಿಸಲಿದೆ ಎಂದು ಡಿ.ಕೆ.ಶಿವಕುಮಾರ್ ಪರೋಕ್ಷವಾಗಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಹಾಗಾಗಿ ಈ ಉಭಯ ನಾಯಕರು ರಾಹುಲ್ ಗಾಂಧಿ ಮುಂದೆ ತಮ್ಮ ತಮ್ಮ ಹಕ್ಕೊತ್ತಾಯ ಮಂಡಿಸುವ ಸಾಧ್ಯತೆಯೂ ಇದೆ.

ಚರ್ಚೆಯಾದರೂ ತೀರ್ಮಾನವಿಲ್ಲ: ಅಧಿಕಾರ ಹಸ್ತಾಂತರದ ವಿಚಾರವಾಗಿ ರಾಜ್ಯದಲ್ಲಿ ನಡೆದಿರುವ ವಿದ್ಯಮಾನಗಳ ಬಗ್ಗೆ ರಾಹುಲ್‌ಗಾಂಧಿ ಚರ್ಚೆ ನಡೆಸಿದರೂ, ಕರ್ನಾಟಕದವರೇ ಆದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅನುಪಸ್ಥಿತಿಯಲ್ಲಿ ಯಾವುದೇ ನಿರ್ಣಯಕ್ಕೆ ಬರುವ ಸಾಧ್ಯತೆ ಕಡಿಮೆ. ಇಂತಹ ಮಹತ್ವದ ವಿಚಾರದ ಬಗ್ಗೆ ವಿಮಾನ ನಿಲ್ದಾಣದಲ್ಲಿ ಚರ್ಚಿಸುವುದಿಲ್ಲ. ಬದಲಾಗಿ ವಿಬಿ–ಜಿ ರಾಮ್–ಜಿ ಕಾಯ್ದೆ ವಿರುದ್ಧ ಹಮ್ಮಿಕೊಂಡಿರುವ ಹೋರಾಟ, ಜೂನ್ 30ರೊಳಗೆ ಗ್ರೇಟರ್ ಬೆಂಗಳೂರು ಅಥಾರಿಟಿ(ಜಿಬಿಎ) ಚುನಾವಣೆ ನಡೆಸಲು ಸುಪ್ರೀಂ ಆದೇಶಿಸಿರುವುದು ಇನ್ನಿತರ ವಿಚಾರಗಳ ಬಗ್ಗೆ ಸಮಾಲೋಚನೆ ನಡೆಸಬಹುದು ಎಂಬುದು ಕಾಂಗ್ರೆಸ್‌ನ ಕೆಲ ನಾಯಕರ ಅಭಿಪ್ರಾಯ. ಆದರೆ ರಾಹುಲ್ ಗಾಂಧಿ ಮೈಸೂರು ಭೇಟಿ ತೀವ್ರ ಕುತೂಹಲ ಸೃಷ್ಟಿಸಿರುವುದಂತೂ ನಿಜ.

ಶಾಸಕ ಹರೀಶ್‌ಗೌಡರ ವಿರುದ್ಧ ಇಲ್ಲ-ಸಲ್ಲದ ಆರೋಪ;

ಡಾ.ಸುಶ್ರುತ್‌ಗೌಡರಿಗೆ ಕಾಂಗ್ರೆಸ್ ಮುಖಂಡರ ತರಾಟೆ



ಮೈಸೂರಿನ ಚಾಮರಾಜ ಕ್ಷೇತ್ರದ ಇಂದಿರಾಗಾಂಧಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಜ.12(ಜಿಎಲ್‌ಯು)- ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡರ ಬಗ್ಗೆ ಆರೋಪ ಮಾಡುವ ಡಾ.ಸುಶ್ರುತ್‌ಗೌಡರು ಮೊದಲು ವಿಷಯ ತಿಳಿದುಕೊಳ್ಳಬೇಕು. ಇಲ್ಲ-ಸಲ್ಲದ ಆರೋಪ ಮಾಡಬಾರದು ಎಂದು ಕ್ಷೇತ್ರದ ಇಂದಿರ ಗಾಂಧಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು ಎಚ್ಚರಿಸಿದ್ದಾರೆ.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕಾರಣದಲ್ಲಿ ಬಹಳ ಉನ್ನತ ಮಟ್ಟಕ್ಕೆ ಹೋಗಬೇಕೆನ್ನುವ ಭರದಲ್ಲಿ ಇಲ್ಲ ಸಲ್ಲದ ಆರೋಪ ಮಾಡಬಾರದು ಎಂದು ಸಲಹೆ ನೀಡಿದರು.

ಈಗ ತಾನೆ ರಾಜಕೀಯದಲ್ಲಿ ಹೆಜ್ಜೆ ಇಡುತ್ತಿರುವ ಡಾ.ಸುಶ್ರುತ್‌ಗೌಡರು, ಇನ್ನು ಮುಂದಾದರೂ ಎಚ್ಚರಿಕೆಯಿಂದ ಮಾತನಾಡಬೇಕು. ಶಾಸಕ ಹರೀಶ್‌ಗೌಡರ ಬಗ್ಗೆ ತಿಳಿದುಕೊಂಡು ಹೇಳಿಕೆಗಳನ್ನು ನೀಡಬೇಕು ಎಂದರು.

ಹರೀಶ್ ಗೌಡ ಅವರು ಶಾಸಕರಾಗಿ ಆಯ್ಕೆಯಾದ ನಂತರ ಚಾಮರಾಜ ಕ್ಷೇತ್ರಕ್ಕೆ ಸರ್ಕಾರದಿಂದ ಬಹಳಷ್ಟು ಅನುದಾನ ತಂದು ಹಲವು ಜನಪರ ಯೋಜನೆ ಕಾರ್ಯಗತಗೊಳಿಸಿದ್ದಾರೆ. ಈ ಮೂಲಕ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು.

ಉದ್ಯೋಗ ಮೇಳ, ಆರೋಗ್ಯ ಮೇಳ, ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್ ಟಾಪ್ ವಿತರಣೆ ಸೇರಿದಂತೆ ಹಲವು ಜನೋಪಯೋಗಿ ಕೆಲಸ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಹರೀಶ್‌ಗೌಡರ ಬಗ್ಗೆ ಆಧಾರ ರಹಿತ ಆರೋಪ ಮಾಡಬಾರದು ಎಂದು ಡಾ.ಸುಶ್ರುತ್ ಗೌಡರಿಗೆ ಸಲಹೆ ನೀಡಿದರು.

ದೇವರಾಜ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗಭೂಷಣ್, ಎಸ್‌ಸಿ ವಿಭಾಗದ ಅಧ್ಯಕ್ಷ ಕೆ.ರಮೇಶ್ ಇನ್ನಿತರರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಕಾಂಗ್ರೆಸ್‌ನಿಂದ ನರೇಗಾ ಬಚಾವೋ ಕ್ರಾಂತಿಕಾರಿ ಚಳವಳಿ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹೇಳಿಕೆ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಸೋಮವಾರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮೈಸೂರು, ಜ.12(ಜಿಎಲ್‌ಯು)- ಕೇಂದ್ರದಲ್ಲಿದ್ದ ಡಾ.ಮನಮೋಹನ್ ಸಿಂಗ್ ನೇತೃತ್ವದ ಯುಪಿಎ ಸರ್ಕಾರ ಜಾರಿಗೊಳಿಸಿದ್ದ ಮನರೇಗಾ ಯೋಜನೆ ರದ್ದು ಮಾಡಿ ವಿಬಿ ಜಿ ರಾಮ್ ಜಿ ಜಾರಿಗೊಳಿಸಿರುವ ಕೇಂದ್ರದ ಎನ್‌ಡಿಎ ಸರ್ಕಾರದ ವಿರುದ್ಧ ನರೇಗಾ ಬಚಾವೋ ಕ್ರಾಂತಿಕಾರಿ ಚಳವಳಿಯನ್ನು ಮೈಸೂರು ಸೇರಿದಂತೆ ರಾಜ್ಯಾದ್ಯಂತ ನಡೆಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ತಿಳಿಸಿದರು.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯುಪಿಎ ಸರ್ಕಾರದ ಮಹತ್ವಾಕಾಂಕ್ಷೆಯ ಮನರೇಗಾ (ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ) ಕಾಯ್ದೆ ರದ್ದುಗೊಳಿಸಿ, ಜನ ವಿರೋಧಿಯಾದ ವಿಬಿ ಜಿ ರಾಮ್ ಜಿ (ವಿಕಸಿತ್ ಭಾರತ್ ಗ್ಯಾರಂಟಿ ಫಾರ್ ರೋಜ್‌ಗಾರ್ ಅಜೀವಿಕ್ ಮಿಷನ್) ಜಾರಿಗೊಳಿಸಿದೆ ಎಂದು ಕಿಡಿಕಾರಿದರು.

ಅಧಿಕಾರ ವಿಕೇಂದ್ರೀಕರಣ ಗೊಳಿಸಿದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಗ್ರಾಮ ರಾಜ್ಯದ ಪರಿಕಲ್ಪನೆಯನ್ನು ಮರೆ ಮಾಡಿದ್ದಾರೆ. ರಾಜ್ಯ ಸರ್ಕಾರಗಳ ಅಭಿಪ್ರಾಯ ಪಡೆಯದೆ ಏಕಪಕ್ಷೀಯವಾಗಿ ಜಿ ರಾಮ್ ಜಿ ಕಾಯ್ದೆ ಜಾರಿ ಮಾಡಿದ್ದಾರೆ. ಈ ಮೂಲಕ ಸಂವಿಧಾನದ ನಿಯಮಗಳನ್ನು ಸ್ಪಷ್ಟವಾಗಿ ಉಲ್ಲಂಘಿಸಿದ್ದು, ಸರ್ವಾಧಿಕಾರ ಧೋರಣೆ ತಳೆದಿದ್ದಾರೆ ಎಂದು ಸಚಿವ ಡಾ.ಮಹದೇವಪ್ಪ ಆಕ್ರೋಶ ವ್ಯಕ್ತಪಡಿಸಿದರು.

ಬರಗಾಲವಿದ್ದಾಗ ದೇಶದ ಗ್ರಾಮೀಣ ಭಾಗದ 19.28 ಕೋಟಿ ಜನರು ನರೇಗಾ ಯೋಜನೆಯಿಂದ ಬದುಕು ಕಟ್ಟಿಕೊಂಡಿದ್ದರು. ಇವರಲ್ಲಿ ಶೇ.53ರಷ್ಟು ಮಹಿಳೆಯರ ಜೀವನಕ್ಕೆ ಇದೇ ಆಧಾರವಾಗಿತ್ತು. ಕರ್ನಾಟಕದ 71.18 ಲಕ್ಷ ಜನರು ಉದ್ಯೋಗ ಪಡೆದಿದ್ದರು. ಇವರಲ್ಲಿ 36.75 ಲಕ್ಷ ಮಹಿಳೆಯರೇ ಆಗಿದ್ದರು. ಆದರೆ ಈಗ ಜಿ ರಾಮ್ ಜಿ ಕರಾಳ ಶಾಸನದಿಂದ ಇವರ ಬದುಕು ಬೀದಿಗೆ ಬೀಳಲಿದೆ ಎಂದು ದೂರಿದರು.

ನರೇಗಾ ಯೋಜನೆಯಲ್ಲಿ ಕೇಂದ್ರ ಸರ್ಕಾರ ಶೇ.90ರಷ್ಟು ಹಣ ನೀಡುತ್ತಿತ್ತು. ಕೇವಲ 10ರಷ್ಟು ಹಣವನ್ನು ಮಾತ್ರ ರಾಜ್ಯ ಸರ್ಕಾರ ನೀಡುತ್ತಿತ್ತು. ಆದರೆ ಈಗ ಶೇಕಡ 60ರಷ್ಟು ಹಣವನ್ನು ರಾಜ್ಯ ಸರ್ಕಾರ ಭರಿಸಬೇಕಾಗಿದೆ. ಶೇ.40ರಷ್ಟು ಹಣವನ್ನು ಮಾತ್ರ ಕೇಂದ್ರ ಸರ್ಕಾರ ನೀಡುತ್ತದೆ. ಇದರಿಂದ ರಾಜ್ಯ ಸರ್ಕಾರಗಳ ಆರ್ಥಿಕ ಪರಿಸ್ಥಿತಿಯನ್ನು ದುಸ್ಥಿತಿಗೆ ಇಳಿಸುತ್ತಿದೆ. ಅಲ್ಲದೆ ಶೇ.17ರಷ್ಟಿರುವ ಪರಿಶಿಷ್ಟ ಜಾತಿ ಹಾಗೂ ಶೇ.11ರಷ್ಟಿರುವ ಪರಿಶಿಷ್ಟ ಪಂಗಡದ ಬದುಕಿಗೆ ಜಿ ರಾಮ್ ಜಿ ಕಾಯ್ದೆ ಬೆಂಕಿ ಇಟ್ಟಿದೆ ಎಂದು ಆತಂಕ ವ್ಯಕ್ತಪಡಿಸಿದರು.

ನರೇಗಾದಲ್ಲಿ ಪ್ರತಿ ವರ್ಷ 100 ದಿನ ಉದ್ಯೋಗ ಖಾತ್ರಿ ಇತ್ತು. ಆದರೆ ಜಿ ರಾಮ್ ಜಿ ಕಾಯ್ದೆಯಲ್ಲಿ ಕೃಷಿ ಚಟುವಟಿಕೆ ಸಂದರ್ಭದಲ್ಲಿ 60 ದಿನ ಕೆಲಸ ನೀಡುವುದಿಲ್ಲ, ಜೊತೆಗೆ ಉದ್ಯೋಗ ಹಕ್ಕಿಲ್ಲದಿರುವುದರಿಂದ ಉದ್ಯೋಗಕ್ಕೆ ಖಾತ್ರಿಯೇ ಇರುವುದಿಲ್ಲ. ಅಲ್ಲದೆ ಕೇಂದ್ರ ಸರ್ಕಾರದ ನಿರ್ಧಾರದ ಮೇಲೆ ಗ್ರಾಮ ಪಂಚಾಯಿತಿಗಳ ಕಾಮಗಾರಿಗಳು ಅವಲಂಬಿತವಾಗಲಿದೆ. ಕೂಲಿ ಕಾರ್ಮಿಕರು ಗುತ್ತಿಗೆದಾರರ ಅಡಿಯಲ್ಲಿ ಕೆಲಸ ಮಾಡಬೇಕಾದ ಅನಿವಾರ್ಯತೆ ಉಂಟಾಗಬಹುದು ಎಂದು ಆತಂಕಿಸಿದರು.

ಮಹಿಳೆಯರು, ದಲಿತರು ಹಾಗೂ ಶೂದ್ರರ ಕೈಯಲ್ಲಿ ಹಣ, ಆಸ್ತಿ ಇರಬಾರದೆಂಬ ಮನುಸ್ಮೃತಿಯಂತೆ ಕೇಂದ್ರ ಸರ್ಕಾರ ಜನವಿರೋಧಿಯಾದ ಇಂತಹ ತೀರ್ಮಾನ ಕೈಗೊಳ್ಳುತ್ತಿದೆ ಎಂದು ಡಾ.ಮಹದೇವಪ್ಪ ಆರೋಪಿಸಿದರು. ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್, ಮಾಧ್ಯಮ ವಕ್ತಾರ ಮಹೇಶ್, ಮುಖಂಡ ಭಾಸ್ಕರ್, ಸೋಮಶೇಖರ್ ಪತ್ರಿಕಾಗೋಷ್ಠಿಯಲ್ಲಿದ್ದರು.

ಬಳ್ಳಾರಿಯ ಬಿಜೆಪಿ ಸಮಾವೇಶ ಹಾಸ್ಯಾಸ್ಪದ

ರಿಪಬ್ಲಿಕ್ ಆಫ್ ಬಳ್ಳಾರಿ ಮಾಡಿಕೊಂಡು ಅಲ್ಲಿ ಸಂಪತನ್ನು ಲೂಟಿ ಮಾಡಿ ಜೈಲು ಶಿಕ್ಷೆಯನ್ನು ಅನುಭವಿಸಿದ್ದ ಬಿಜೆಪಿ ನಾಯಕರು ಈಗ ಜ.17ರಂದು ಬಳ್ಳಾರಿಯಲ್ಲಿ ಸಮಾವೇಶ ಮಾಡುತ್ತಿರುವುದು ಹಾಸ್ಯಾಸ್ಪದ ಎಂದು ಡಾ.ಮಹದೇವಪ್ಪ ಗೇಲಿ ಮಾಡಿದರು. ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಇಡೀ ಬಳ್ಳಾರಿಯನ್ನು ಏಕ ಚಕ್ರಾಧಿಪತ್ಯದ ಆಡಳಿತ ನಡೆಸಿದರು. ಬಳ್ಳಾರಿಯ ಸಂಪತ್ತನ್ನು ಗುಡಿಸಿ ಗುಂಡಾಂತರ ಮಾಡಿದ್ದರು. ಆದರೆ ಈಗ ಅದು ಯಾವ ಮುಖ ಇಟ್ಟುಕೊಂಡು ಸಮಾವೇಶ, ಪಾದಯಾತ್ರೆ ಮಾಡುತ್ತಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪ್ರಶ್ನಿಸಿದರು.

ಆಂಧ್ರ ಮಾದರಿ ಖಾಸಗಿ ಮೀಸಲಾತಿ: ಆಂಧ್ರ ಮಾದರಿಯಲ್ಲಿ ಖಾಸಗಿ ಕಂಪನಿಗಳಿಗೆ ಕನ್ನಡಿಗರಿಗೆ ಮೀಸಲಾತಿ ನೀಡುವುದಕ್ಕೆ ಬಯೋಕಾನ್ ಮುಖ್ಯಸ್ಥೆ ಕಿರಣ್ ಮುಂಜುಂದಾರ್ ಅವರು ವಿರೋಧ ವ್ಯಕ್ತಪಡಿಸಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದರು. ಯಾರು ಏನೇ ವಿರೋಧ ಮಾಡಿದರೂ ಸರ್ಕಾರ ಜನ ಪರವಾಗಿ ಕೆಲಸ ಮಾಡಲಿದೆ ಎಂದು ತಿಳಿಸಿದರು.

ಶೀಘ್ರ ದಸರಾ ಲೆಕ್ಕ: ಈ ಬಾರಿಯ ಮೈಸೂರು ದಸರಾ ಮಹೋತ್ಸವದ ಬಜೆಟ್ ಲೆಕ್ಕ ಪತ್ರವನ್ನು ಶೀಘ್ರವೇ ಸಾರ್ವಜನಿಕರೆದುರು ಮಂಡಿಸಲಾಗುವುದು ಎಂದು ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹೇಳಿದರು.

ಮಾದಕ ವಸ್ತುಗಳಿಗೆ ದಾಸರಾಗದಂತೆ ಕೆಆರ್‌ಎಸ್ ಪಕ್ಷದಿಂದ ಜಾಗೃತಿ ಜಾಥಾ

ದೇಶದಲ್ಲಿ ವಿವೇಕಾನಂದರ ಪ್ರೇರಣೆ ಈಗಲೂ ಮುಂದುವರೆಯುತ್ತಿದೆ



ಮೈಸೂರಿನ ಪುರಭವನದಲ್ಲಿ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದಿಂದ ಜಾಗೃತಿ ಸಮಾವೇಶದಲ್ಲಿ ಪಕ್ಷದ ಗೌರವಾಧ್ಯಕ್ಷ ರವಿ ಕೃಷ್ಣಾರೆಡ್ಡಿ ಮಾತನಾಡಿದರು.

ಮೈಸೂರು,ಜ.12(ಜಿಎ)-ಮಾದಕ ವಸ್ತುಗಳಿಗೆ ದಾಸರಾಗದಂತೆ ಯುವ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಮೈಸೂರಿನಲ್ಲಿ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ ವತಿಯಿಂದ ಜಾಗೃತಿ ಸಮಾವೇಶ, ಜಾಗೃತಿ ಜಾಥ ನಡೆಸಲಾಯಿತು.

ಮೈಸೂರಿನ ಪುರಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಕೆಆರ್‌ಎಸ್ ಪಕ್ಷದ ಗೌರವಾಧ್ಯಕ್ಷ ರವಿ ಕೃಷ್ಣಾರೆಡ್ಡಿ ಮಾಲಾರ್ಪಣೆ ಸಲ್ಲಿಸಿ, ನಂತರ ಪುರಭವನದ ಆವರಣದಲ್ಲಿ ಜಾಗೃತಿ ಸಮಾವೇಶಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಕೆಆರ್‌ಎಸ್ ಪಕ್ಷವೂ ವಿವೇಕಾನಂದರ ಜಯಂತಿ ದಿನದಂದು ಪಕ್ಷದ ಯುವ ಘಟಕದಿಂದ ಡ್ರಗ್ಸ್ ಮುಕ್ತ ಜಾಥವನ್ನು ಹಮ್ಮಿಕೊಳ್ಳಲಾಗಿದೆ. ನಮ್ಮ ಪಕ್ಷ ಬಿಟ್ಟು ಬೇರೆ ಯಾವುದೇ ಪಕ್ಷಗಳು ಇದನ್ನು ಮಾಡುತ್ತಿಲ್ಲ. ಬೋಲೋ ಭಾರತ್ ಮಾತಾಕಿ ಎಂದು ಘೋಷಣೆ ಕೂಗಿಕೊಂಡು ಸ್ವಾರ್ಥ ರಾಜಕಾರಣ ಮಾಡುತ್ತಿದ್ದಾರೆ ಎಂದರು.

ವೀರ ಸನ್ಯಾಸಿ ವಿವೇಕಾನಂದರು ಯುವ ಜನರನ್ನು ಎಚ್ಚರಿಸಿ, ಭಾರತೀಯರಲ್ಲಿ ಸತ್ಯ, ನ್ಯಾಯಾ ಉಳಿಯಬೇಕೆಂದು ತಿಳಿಸಿದರು. ಕೇವಲ 39 ವರ್ಷ ಬದುಕಿ ದೇಶಕ್ಕೆ ನೀಡಿದ ಪ್ರೇರಣೆ ಇಂದಿಗೂ ಮುಂದುವರೆಯುತ್ತಿದೆ ಎಂದರು.

ಪಕ್ಷದಿಂದ ಕಳೆದ 7 ವರ್ಷಗಳಿಂದ ಲಂಚ ಮುಕ್ತದ ಬಗ್ಗೆ ಹೋರಾಟ ಮಾಡಲಾಗಿತ್ತು. ಇಂದು ಪ್ರಮುಖವಾಗಿ ಮಾದಕ ದ್ರವ್ಯ ಮುಕ್ತ ಮತ್ತು ಉದ್ಯೋಗಕ್ಕಾಗಿ ಸಮಾವೇಶವನ್ನು ನಡೆಸಲಾಗುತ್ತಿದೆ. ವಿದ್ಯಾರ್ಹತೆ ಇರುವವರಿಗೆ ಅವರ ವಿದ್ಯೆಗೆ ತಕ್ಕ ಉದ್ಯೋಗ ಸಿಗುತ್ತಿಲ್ಲ. ದೊಡ್ಡ ಕಾಲೇಜಿನಲ್ಲಿ ಪಾಠ ಮಾಡಬೇಕಾದ ವಿದ್ಯಾವಂತರು ಇಂದು ಪೊಲೀಸ್ ಕಾನ್ಸ್‌ಟೇಬಲ್ ಆಗುತ್ತಿದ್ದಾರೆ. ಉದ್ಯೋಗ ಭದ್ರತೆ ಇಲ್ಲದೇ ಕೆಲಸ ಮಾಡುತ್ತಿದ್ದಾರೆ. ಈ ಹಿಂದೆ ಜಮೀನ್ದಾರ್ ಜೀತದಾಳುಗಳನ್ನು ನೇಮಕ ಮಾಡುತ್ತಿದ್ದರೂ ಹಾಗೇ ನೇಮಕ ಮಾಡಿಕೊಳ್ಳುತ್ತಿದ್ದಾರೆ ಎಂದರು.

ಹಳ್ಳಿ ಸೇರಿದಂತೆ ಎಲ್ಲಡೆ ಡ್ರಗ್ಸ್ ಸಿಗುತ್ತಿದೆ. ಮೆಡಿಕಲ್ ಕಾಲೇಜುಗಳಲ್ಲಿ ಡ್ರಗ್ಸ್ ಸುಲಭವಾಗಿ ಸಿಗುತ್ತದೆ. ಈ ನಿಟ್ಟಿನಲ್ಲಿ ದೊಡ್ಡವರ ಮಕ್ಕಳು ಸಮಾಜಕ್ಕೆ ಕಂಟಕರಾಗುತ್ತಿದ್ದಾರೆ. ಈ ಡ್ರಗ್ಸ್ ಪಿಡುಗು ಮುಂದುವರೆದರೆ, ಮುಂದಿನ ದಿನಗಳಲ್ಲಿ ಮಕ್ಕಳು ಆಗುವುದಿಲ್ಲ ಸಾಕಷ್ಟು ಆರೋಗ್ಯ ಸಮಸ್ಯೆಗಳು ಎದುರಾಗುತ್ತದೆ ಎಂದರು.

ಪಕ್ಷದಲ್ಲಿರುವ ಸೇನಾನಿಗಳು ಈ ಎಲ್ಲಾ ಸಮಸ್ಯೆಗಳ ಬಗ್ಗೆ ಅಧ್ಯಯನ ಮಾಡಿ, ವಾಟ್ಸಪ್ ಯೂನಿವರ್ಸಿಟಿ ನಂಬಿ ಕೆಲಸ ಮಾಡಬೇಡಿ. ಅದಕ್ಕಾಗಿ ಮೊದಲು ಪಕ್ಷದವರು ಮಾದರಿಯಾಗಿರಬೇಕು. ದುಷ್ಟ ಚಟದಿಂದ ದೂರವಿರಿ. ಅವುಗಳನ್ನು ಅದನ್ನು ತ್ಯಜಿಸಿ, ಸಿಗರೇಟ್ ಸೇದುವನ್ನು ಬಿಡುವವರೆಗೂ ಹೇಳಿ ಮನವರಿಕೆ ಮಾಡಿ ಎಂದು ಕರೆ ನೀಡಿದರು.

ನಂತರ ಜಾಥಾ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಆರಂಭವಾಗಿ, ನಗರದ ವಿವಿಧ ರಸ್ತೆಗಳ ಮೂಲಕ ಬಸವೇಶ್ವರ ಪ್ರತಿಮೆ ಬಳಿ ಸಮಾರೋಪಗೊಂಡಿತ್ತು. ಈ ಸಂದರ್ಭದಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಸಿ.ಎನ್.ದೀಪಕ್, ರಘು ಜಾಣಗೆರೆ, ಜನಗಿ ವತ್ಸಲ, ಜಿಲ್ಲಾ ಉಸ್ತುವಾರಿ ರವಿ ಕುಮಾರ್, ಸೋಮಸುಂದರ್, ಮಂಜುನಾಥ್, ರಘುಪತಿ ಭಟ್ ನಾಗೇಂದ್ರ, ರವೀಂದ್ರ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

ಎನ್‌ಆರ್ ಗಾಲ್ಫ್ ಓಪನ್, ಮ್ಯಾಚ್ ಪ್ಲೇ ಚಾಂಪಿಯನ್‌ಶಿಪ್ ಯಶಸ್ವಿ

ಪ್ರಶಸ್ತಿಗೆ ರಾಜ್ಯ, ಹೊರರಾಜ್ಯದ ಗಾಲ್ಫ್ ಪಟುಗಳ ಸೆಣಸಾಟ



37ನೇ ಆವೃತ್ತಿಯ 'ಎನ್‌ಆರ್ ಗಾಲ್ಫ್ ಓಪನ್ ಮತ್ತು ಮ್ಯಾಚ್ ಪ್ಲೇ ಚಾಂಪಿಯನ್‌ಶಿಪ್' ವಿಜೇತರಿಗೆ ಆಕರ್ಷಕ ಟ್ರೋಫಿ ವಿತರಿಸಲಾಯಿತು. ಸೈಕಲ್‌ಪ್ಯೂರ್ ಅಗರಬತ್ತಿಯ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ, ಜಯಚಾಮರಾಜ ಒಡೆಯರ್ ಗಾಲ್ಫ್ ಕ್ಲಬ್ ಅಧ್ಯಕ್ಷ ಹೆಚ್.ಎಸ್.ಅರುಣ್ ಕುಮಾರ್ ಮತ್ತಿತರರಿದ್ದರು.

ಮೈಸೂರು, ಜ.12(ಎಂಕೆ)- ಮೈಸೂರಿನ ಜಯಚಾಮರಾಜ ಒಡೆಯರ್ ಗಾಲ್ಫ್ ಕ್ಲಬ್(ಜೆಡಬ್ಲ್ಯೂಜಿಸಿ) ನಲ್ಲಿ ನಡೆದ 37ನೇ ಆವೃತ್ತಿಯ 'ಎನ್‌ಆರ್ ಗಾಲ್ಫ್ ಓಪನ್ ಮತ್ತು ಮ್ಯಾಚ್ ಪ್ಲೇ ಚಾಂಪಿಯನ್‌ಶಿಪ್' ಪಂದ್ಯಾವಳಿ ಯಶಸ್ವಿಯಾಯಿತು.

ಸೀನಿಯರ್ಸ್ ಮತ್ತು ಸೂಪರ್ ಸೀನಿಯರ್ಸ್ ಸೇರಿದಂತೆ 16 ವಿಭಾಗಗಳಲ್ಲಿ ನಡೆದ ಮೂರು ದಿನದ ಚಾಂಪಿಯನ್‌ಶಿಪ್‌ನಲ್ಲಿ ಮೈಸೂರು, ಬೆಂಗಳೂರು, ಕೊಡಗು, ಚಿಕ್ಕಮಗಳೂರು, ಊಟಿ ಮತ್ತು ಕೊಡೈಕೆನಾಲ್‌ನ ಗಾಲ್ಫ್ ಪಟುಗಳು ಭಾಗವಹಿಸಿ ಪ್ರಶಸ್ತಿಗೆ ಸೆಣಸಾಡಿದರು.

ಚಾಂಪಿಯನ್ ಶಿಪ್‌ನ ಸಮಾರೋಪ ಸಮಾರಂಭದಲ್ಲಿ ವಿಜೇತ ಗಾಲ್ಫ್ ಪಟುಗಳಿಗೆ ಆಕರ್ಷಕ ಟ್ರೋಫಿ ನೀಡಿ ಅಭಿನಂದಿಸಲಾಯಿತು. ಈ ವೇಳೆ ಸೈಕಲ್ ಪ್ಯೂರ್ ಅಗರಬತ್ತಿಯ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ ಮಾತನಾಡಿ, 'ಎನ್‌ಆರ್ ಗಾಲ್ಫ್ ಓಪನ್ ಮತ್ತು ಮ್ಯಾಚ್ ಪ್ಲೇ ಚಾಂಪಿಯನ್‌ಶಿಪ್‌ನ 37 ಆವೃತ್ತಿ ಯಶಸ್ವಿಯಾಗಿದ್ದು, ಗಾಲ್ಫ್ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಚಾಂಪಿಯನ್ ಶಿಪ್ ಆಯೋಜಿಸುತ್ತಿದ್ದೇವೆ. ಈ ಪಂದ್ಯಾವಳಿಯು ಗಾಲ್ಫ್ ಕ್ರೀಡಾಪಟುಗಳಿಗೆ ಅತ್ಯುತ್ತಮ ವೇದಿಕೆಯಾಗಿದೆ ಎಂದು ತಿಳಿಸಿದರು.


ಜಯಚಾಮರಾಜ ಒಡೆಯರ್ ಗಾಲ್ಫ್ ಕ್ಲಬ್ ಅಧ್ಯಕ್ಷ ಹೆಚ್.ಎಸ್.ಅರುಣ್‌ಕುಮಾರ್ ಮಾತನಾಡಿ, ಎನ್‌ಆರ್ ಗ್ರೂಪ್ ಸಹಕಾರದೊಂದಿಗೆ ಅನುಭವಿ ಗಾಲ್ಫ್ ಆಟಗಾರರಿಗೆ ಅವಕಾಶ ಮತ್ತು ಹೊಸ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಸಾಧ್ಯವಾಗುತ್ತಿದೆ. ಈ ಮೂಲಕ ಕರ್ನಾಟಕ ಮತ್ತು ದಕ್ಷಿಣ ಭಾರತದಾದ್ಯಂತ ಈ ಕ್ರೀಡೆಯನ್ನು ಬಲಪಡಿಸಲಾಗುತ್ತಿದೆ. ಎನ್‌ಆರ್ ಗ್ರೂಪ್ ಕ್ರಿಕೆಟ್, ಕಬಡ್ಡಿ, ಟೆನಿಸ್ ಮತ್ತು ಗಾಲ್ಫ್ ಸೇರಿದಂತೆ ವಿವಿಧ ಕ್ರೀಡೆಗಳಿಗೆ ಪ್ರೋತ್ಸಾಹ ನೀಡುವ ಮೂಲಕ ದೇಶದ ಪ್ರಮುಖ ಕ್ರೀಡಾ ಪೋಷಕ ಸಂಸ್ಥೆಯಾಗಿ ಬೆಳೆದಿರುವುದು ವಿಶೇಷವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಚಿವ ಜಮೀರ್ ಅಹಮ್ಮದ್ ಪುತ್ರ ಝೈದ್ ಖಾನ್ ನಟನೆಯ 'ಕಲ್ಟ್' ಚಿತ್ರ ಜ.23ಕ್ಕೆ ಬಿಡುಗಡೆ

ಮೈಸೂರು, ಜ.12(ಜಿಎ)-ಲೋಕಿ ಸಿನಿಮಾಸ್ ಬ್ಯಾನರ್ ಅಡಿ ನಿರ್ಮಾಣದ, ವಸತಿ ಸಚಿವ ಜಮೀರ್ ಅಹಮ್ಮದ್ ಖಾನ್ ಪುತ್ರ ನಟ ಝೈದ್ ಖಾನ್ ನಟಿಸಿರುವ 'ಕಲ್ಟ್' ಚಿತ್ರವು ರಾಜ್ಯದಾದ್ಯಂತ ಜ.23ರಂದು ತೆರೆ ಕಾಣಲಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ನಟ ಝೈದ್ ಖಾನ್ ಸ್ವತಃ ತಾವೇ ಈ ವಿಷಯ ತಿಳಿಸಿ, ಕಲ್ಟ್ ವಿಭಿನ್ನ ಕಥಾ ಹಂದರವನ್ನು ಹೊಂದಿರುವ ಚಿತ್ರವಾಗಿದ್ದು, ನಾನು ಮೂರು ರೀತಿಯ ಪಾತ್ರಗಳಲ್ಲಿ ಕಾಣಿಸಿಕೊಳ್ಳುತ್ತೇನೆ. ನಟಿ ರಚಿತಾ ರಾಮ್ ಅವರು ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ತಾರಾಗಣದಲ್ಲಿ ರಂಗಾಯಣ ರಘು, ಮಲೈಕಾ ಅಭಿನಯಿಸಿದ್ದಾರೆ ಎಂದರು.

ಈ ಹಿಂದೆ ಮಾಡಿದ್ದ ಚಿತ್ರಕ್ಕೂ ಇದಕ್ಕೂ ಸಾಕಷ್ಟು ವ್ಯತ್ಯಾಸವಿದೆ. ಇತ್ತೀಚಿನ ದಿನಗಳಲ್ಲಿ ಪ್ರೀತಿಯಿಂದ ಮೋಸ ಹೋಗುತ್ತಿರುವುದರ ಕುರಿತು ಚಿತ್ರ ಕಥೆ ಎಣೆಯಲಾಗಿದೆ. ಈಗಾಗಲೇ ಚಿತ್ರದ ಟೀಸರ್ ಮತ್ತು ಹಾಡುಗಳು ಬಿಡುಗಡೆಯಾಗಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಒಟ್ಟಾರೆ ಕುಟುಂಬ ಸಮೇತ ಚಿತ್ರವನ್ನು ನೋಡಬಹುದು ಎಂದರು.



ಝೈದ್ ಖಾನ್

ಚಿತ್ರಮಂದಿರಗಳ ಕೊರತೆಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಕರ್ನಾಟಕದಲ್ಲಿ ಚಿತ್ರಮಂದಿರಗಳ ಕೊರತೆ ಇರುವುದು ನಿಜ. ನಮ್ಮ ಚಿತ್ರ ಬಿಡುಗಡೆ ದಿನವೇ ದುನಿಯಾ ವಿಜಯ್ ಅವರ 'ಲ್ಯಾಂಡ್ ಲಾರ್ಡ್' ಚಿತ್ರವು ಬಿಡುಗಡೆ ಆಗುತ್ತಿರುವುದರಿಂದ ಇಬ್ಬರಿಗೂ ಸಮಾನವಾಗಿ ಹಂಚಿಕೆಯಾಗಿದೆ. ಸಾಮಾನ್ಯ ಜನರು ಟಿಕೆಟ್ ದರ ಹೆಚ್ಚಳವಿರುವುದರಿಂದ ಮಲ್ಟಿಪ್ಲೆಕ್ಸ್‌ಗೆ ಹೋಗಿ ಚಿತ್ರ ನೋಡುವುದು ಕಡಿಮೆ. ಇದನ್ನು ಅರಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏಕರೂಪ ಟಿಕೆಟ್ ನೀತಿ ಜಾರಿ ಮಾಡಲು ಮುಂದಾದಾಗ ಕೆಲವರು ತಡೆಯಾಜ್ಞೆ ತಂದರು. ಬೇರೆ ರಾಜ್ಯಗಳಲ್ಲಿ ಇರುವ ರೀತಿ ಟಿಕೆಟ್ ದರ ಇಲ್ಲಿಯೂ ಬರುವಂತೆ ಮಾಡಬೇಕಿದೆ.

ರಾಜಕೀಯ ಪ್ರವೇಶ ವಿಚಾರವಾಗಿ ಪ್ರತಿಕ್ರಿಯಿಸಿ, ನನಗೆ ರಾಜಕೀಯ ಇಷ್ಟ ಇಲ್ಲ. ಈ ಹಿಂದೆಯೇ ಸಿದ್ದರಾಮಯ್ಯ ಅವರು 2023ರಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸಲು ಬಿ-ಫಾರಂ ನೀಡಿದ್ದರೂ. ನಾನು ಅದನ್ನು ತೆಗೆದು ನೋಡಲಿಲ್ಲ. ರಾಜಕೀಯಕ್ಕೆ ಬರಬೇಕು ಎಂದು ನಿರ್ಧರಿಸಿದರೆ, ರಾಜ್ಯದ ಕಿರಿಯ ಶಾಸಕನಾಗುತ್ತಿದ್ದೆ ಆದರೆ, ನನಗೆ ಅದು ಇಷ್ಟ ಇಲ್ಲ ಸಿನಿಮಾದಲ್ಲಿಯೇ ಮುಂದುವರೆಯುತ್ತೇನೆ ಎಂದು ಸ್ಪಷ್ಟಪಡಿಸಿದರು.

ಅರ್ಜಿ ಆಹ್ವಾನ

ಮೈಸೂರು: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮ ದಡಿಯಲ್ಲಿ ಹುಣಸೂರು ತಾಲೂಕಿನ ಕಿರಂಗೂರು ಮತ್ತು ಕೊತ್ತೆಗಾಲ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾಗಿ ಮಾಸಿಕ ರೂ.10000 ಗೌರವಧನದ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಸಮರ್ಥ ವಿಕಲಚೇತನ ವ್ಯಕ್ತಿಗಳು ಅರ್ಜಿ ನಮೂನೆಗಳನ್ನು ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿಯಲ್ಲಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಜ.26ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹುಣಸೂರು ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ದೇವರಾಜು, ಮೊ.ಸಂಖ್ಯೆ 9739644342ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.



ಪ್ರಶಸ್ತಿ ಪ್ರದಾನ

ಕರ್ನಾಟಕ ಮಾನವ ಹಕ್ಕುಗಳ ಸಂರಕ್ಷಣಾ ಸಂಸ್ಥೆ ಮತ್ತು ಡಾ.ನಾಗಲಕ್ಷ್ಮಿ ಚೌಧರಿ ಜನಸೇವಾ ಸಂಸ್ಥೆಯಿಂದ ರಾಜರಾಜೇಶ್ವರಿನಗರ ಕ್ಷೇತ್ರ ಘಟಕದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಗೂ ಕವಿ ಉದಂತ ಶಿವಕುಮಾರ್ ಅವರಿಗೆ 'ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಸೇವಾರತ್ನ-2026' ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ವೇಳೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಸಿ.ಎಂ.ಗಣೇಶಗೌಡರು, ಕನ್ನಡ ಸಂಘರ್ಷ ಸಮಿತಿ ಪ್ರಧಾನ ಕಾರ್ಯದರ್ಶಿ ತಾ.ಸಿ.ತಿಮ್ಮಯ್ಯ, ಲೇಖಕ ಹಾಗೂ ಉಪನ್ಯಾಸಕ ಡಾ.ಶಿವರಾಜ್ ಬ್ಯಾಡರಹಳ್ಳಿ, ಕಸಾಪ ಸದಸ್ಯರಾದ ನಾಗರಾಜ್ ಉಪಸ್ಥಿತರಿದ್ದರು.

ದೇಶ - ವಿದೇಶ

ಪ್ರಯಾಣಿಕ ಅಸ್ವಸ್ಥ; ವಿಮಾನ ಎಮರ್ಜೆನ್ಸಿ ಲ್ಯಾಂಡಿಂಗ್

ನವದೆಹಲಿ: ದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಿಜಯವಾಡಕ್ಕೆ ತೆರಳುತ್ತಿದ್ದ ಏರ್ ಇಂಡಿಯಾ ವಿಮಾನದಲ್ಲಿ ಮೆಡಿಕಲ್ ಎಮರ್ಜೆನ್ಸಿ ಎದುರಾಗಿದ್ದು, ತಕ್ಷಣ ಪೈಲಟ್ ವಿಮಾನವನ್ನು ಜೈಪುರದಲ್ಲಿ ತುರ್ತು ಲ್ಯಾಂಡಿಂಗ್ ಮಾಡಿದ್ದಾರೆ



ಎಂದು ವರದಿಯಾಗಿದೆ. ಇಂದು ಬೆಳಗ್ಗೆ ಏರ್ ಇಂಡಿಯಾ ವಿಮಾನ AI-2571 ದೆಹಲಿಯಿಂದ ವಿಜಯ ವಾಡಕ್ಕೆ ಹೊರಟಿತ್ತು ಆದರೆ ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ವಿಮಾನದಲ್ಲಿದ್ದ ಓರ್ವ ಪ್ರಯಾಣಿಕ ಅಸ್ವಸ್ಥರಾಗಿದ್ದು, ತಕ್ಷಣ ಸಿಬ್ಬಂದಿ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಅಧಿಕಾರಿಗಳ ಅನುಮತಿ ಪಡೆದ ಬಳಿಕ ವಿಮಾನವನ್ನು ಜೈಪುರಕ್ಕೆ ತಿರುಗಿಸಿದ್ದು, ಬೆಳಗ್ಗೆ 6.45ಕ್ಕೆ ವಿಮಾನವನ್ನು ಜೈಪುರ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿಸಲಾಗಿದೆ. ಬಳಿಕ ಅಸ್ವಸ್ಥಗೊಂಡ ಪ್ರಯಾಣಿಕ ನನ್ನು ತುರ್ತು ಚಿಕಿತ್ಸೆಗಾಗಿ ಆಂಬ್ಯುಲೆನ್ಸ್‌ನಲ್ಲಿ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ನಂತರ ವಿಮಾನವನ್ನು ವಿಜಯವಾಡಕ್ಕೆ ಪ್ರಯಾಣಿಸಿದೆ.

ಭಾರತ-ಪಾಕ್ ಸೇರಿದಂತೆ 8 ಯುದ್ಧ ನಿಲ್ಲಿಸಿಯೂ ನೊಬೆಲ್ ಸಿಕ್ಕಿಲ್ಲ

ವಾಷಿಂಗ್ಟನ್: 'ಭಾರತ-ಪಾಕಿಸ್ತಾನ ಸೇರಿದಂತೆ 8 ಯುದ್ಧಗಳನ್ನು ನಿಲ್ಲಿಸಿದ್ದೇನೆ. ಆದರೂ ನನಗೆ ನೊಬೆಲ್ ಶಾಂತಿ ಪ್ರಶಸ್ತಿ ಸಿಕ್ಕಿಲ್ಲ' ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.



ಆ ಎಲ್ಲ ಯುದ್ಧಗಳನ್ನು ಇತ್ಯರ್ಥಗೊಳಿಸುವುದು ಅತ್ಯಂತ ಕಷ್ಟಕರವಾಗಿತ್ತು. ಭಾರತ-ಪಾಕಿಸ್ತಾನ ಯುದ್ಧ ಮುಂದುವರಿಸುವ ಇರಾದೆಯಲ್ಲಿದ್ದವು. ಅತ್ಯಂತ ಕಠಿಣ ಎಂಟು ಸಂಘರ್ಷಗಳನ್ನು ನಿಲ್ಲಿಸಿದ್ದೇನೆ. ಈ ಪೈಕಿ ಕೆಲವು ಯುದ್ಧ 30 ವರ್ಷಕ್ಕೂ ಅಧಿಕ ಕಾಲ ನಡೆಯುತ್ತಿತ್ತು' ಎಂದಿದ್ದಾರೆ.

ಇದೇ ಸಂದರ್ಭದಲ್ಲಿ 2009ರಲ್ಲಿ ಮಾಜಿ ಅಧ್ಯಕ್ಷ ಬರಾಕ್ ಒಬಾಮ ಅವರಿಗೆ ನೊಬೆಲ್ ಶಾಂತಿ ಪ್ರಶಸ್ತಿ ನೀಡಿರುವುದನ್ನು ಟ್ರಂಪ್ ಟೀಕಿಸಿದ್ದಾರೆ. ಇದನ್ನು ನೆನಪಿಡಿ, ಬೇರೆ ಯಾರಿಂದಲೂ ಸಾಧ್ಯವಾಗದ್ದನ್ನು ನಾನು ಮಾಡಿದ್ದೇನೆ. ಎಂಟು ಯುದ್ಧಗಳನ್ನು ನಿಲ್ಲಿಸಿದ್ದೇನೆ. ಅದು ಬೇರೆ ಯಾರಿಂದಲೂ ಸಾಧ್ಯವಾಗಲಿಲ್ಲ. ಆದರೂ ನೊಬೆಲ್ ಶಾಂತಿ ಪ್ರಶಸ್ತಿ ದೊರಕಿಲ್ಲ. ಆದರೆ ಏನೂ ಮಾಡದೆಯೇ ಒಬಾಮ ಅವರಿಗೆ ಪ್ರಶಸ್ತಿ ದೊರಕಿತ್ತು. ಅದನ್ನೇಕೆ ಪಡೆದರು ಎಂದು ಸ್ವತಃ ಒಬಾಮ ಅವರಿಗೂ ಗೊತ್ತಿಲ್ಲ. ಆ ಪ್ರಶ್ನೆಗೆ ಉತ್ತರಿಸಲು ಅವರಿಂದ ಸಾಧ್ಯವಾಗಲಿಲ್ಲ ಎಂದಿದ್ದಾರೆ. ಕಳೆದೊಂದು ವಾರದಲ್ಲಿ ಮೂರನೇ ಸಲ ಭಾರತ ಹಾಗೂ ಪಾಕಿಸ್ತಾನದ ನಡುವಣ ಯುದ್ಧ ಕೊನೆಗೊಳಿಸಿದ್ದೇನೆ ಎಂದು ಟ್ರಂಪ್ ಪುನರುಚ್ಚರಿಸಿದ್ದಾರೆ.

ಗಿಗ್ ಕಾರ್ಮಿಕನಾದ ಎಎಪಿ ನಾಯಕ ರಾಘವ್!



ನವದೆಹಲಿ: ಇತ್ತೀಚೆಗೆ ಗಿಗ್ ಕಾರ್ಮಿಕರು ಉತ್ತಮ ವೇತನ ದರ ಹಾಗೂ ಹತ್ತು ನಿಮಿಷದಲ್ಲಿ ಡೆಲಿವರಿ ಆಯ್ಕೆಯಂತಹ ಆಫರ್‌ಗಳನ್ನು ತೆಗೆದು ಹಾಕುವಂತೆ 40 ಸಾವಿರಕ್ಕೂ ಹೆಚ್ಚು ಜನ ಪ್ರತಿಭಟನೆ ನಡೆಸಿದ್ದರು. ಇದರ ನಡುವೆ ಎಎಪಿಯ ಯುವ ನಾಯಕ ಮತ್ತು ರಾಜ್ಯಸಭಾ ಸಂಸದ ರಾಘವ್ ಚಡ್ಡಾ, ಅಖಾಡಕ್ಕಿಳಿದು ಜನಸಾಮಾನ್ಯರ ಬದುಕು ಗಿಗ್ ಕಾರ್ಮಿಕರ ಸಮಸ್ಯೆ ಅರಿಯಲು ಪ್ರಯತ್ನಿಸಿದ್ದಾರೆ.

ಬ್ಲಿಂಕಿಟ್ ಟೀ ಶರ್ಟ್ ಮತ್ತು ಜಾಕೆಟ್ ಧರಿಸಿ ವಸತಿ ಸಮುಚ್ಚಯಗಳು, ಲಿಫ್ಟ್‌ಗಳು ಮತ್ತು ಕಾರಿಡಾರ್‌ಗಳ ಮೂಲಕ ಸಾಗಿ ಗ್ರಾಹಕರ ಮನೆ ಬಾಗಿಲಿಗೆ ಆರ್ಡರ್‌ಗಳನ್ನು ತಲುಪಿಸಿರುವ ವಿಡಿಯೋ ಅನ್ನು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದು, ಅದರಲ್ಲಿ ಮುಂದುವರೆಯುವುದು ಎಂದು ಬರೆದು ಕುತೂಹಲ ಹುಟ್ಟಿಸಿದ್ದಾರೆ. ಗಿಗ್ ಕಾರ್ಮಿಕರು ನಿತ್ಯ ಅನುಭವಿಸುವ ನೋವು ಮತ್ತು ಅವರ ದಿನವನ್ನು ಬದುಕಿದ್ದೇನೆ ಎಂದು ವಿಡಿಯೋಗೆ ಶೀರ್ಷಿಕೆ ಕೊಟ್ಟಿದ್ದಾರೆ.

ಕಳೆದ ತಿಂಗಳು ಹಿಮಾಂಶು ಎಂಬ ಬ್ಲಿಂಕಿಟ್ ಡೆಲಿವರಿ ಪಾರ್ಟ್‌ನರ್ ಸುಮಾರು 15 ಗಂಟೆಗಳ ಕಾಲ ದುಡಿದು 28 ಡೆಲಿವರಿಗಳನ್ನು ಪೂರೈಸಿದ ನಂತರ ಕೇವಲ 762.57 ರೂ. ಗಳಿಸಿರುವುದು ಕಂಡುಬಂದಿತ್ತು. ಅಂದರೆ ಗಂಟೆಗೆ ಕೇವಲ 52 ರೂ. ಮಾತ್ರ ಆದಾಯ ಬಂದಿತ್ತು. ಇದರಲ್ಲಿ ಬಹುಪಾಲು ಆರ್ಡರ್ ಪೇಮೆಂಟ್ ಆಗಿದ್ದು, ಇನ್ಸೆಂಟಿವ್ ಮೊತ್ತ ತೀರಾ ಕಡಿಮೆಯಿತ್ತು ಎಂದು ಬರೆದುಕೊಂಡಿದ್ದ ರಾಘವ್ ಚಡ್ಡಾ ಅವರ ಪೋಸ್ಟ್ ವೈರಲ್ ಆಗಿತ್ತು.

ಯುದ್ಧಕ್ಕೂ ಸಿದ್ಧ, ಮಾತುಕತೆಗೂ ಬದ್ಧ: ಅಮೆರಿಕಕ್ಕೆ ಇರಾನ್ ಸ್ಪಷ್ಟ ಸಂದೇಶ

ಟೆಹರಾನ್: 'ನಾವು ಯುದ್ಧಕ್ಕೆ ತಯಾರಿದ್ದೇವೆ. ಹಾಗೆಯೇ, ಮಾತುಕತೆ ನಡೆಸಲೂ ಸಿದ್ಧರಿದ್ದೇವೆ' ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರ್ಗ್‌ಚಿ ಹೇಳಿದ್ದಾರೆ.



ಪ್ರತಿಭಟನಾಕಾರರ ಮೇಲೆ ದಾಳಿ ಮಾಡಿದರೆ ಸೇನಾ ಕಾರ್ಯಾಚರಣೆ ಮೂಲಕ ಮಧ್ಯಪ್ರವೇಶಿಸುವುದಾಗಿ ಬೆದರಿಕೆ ಒಡ್ಡಿದ ಬೆನ್ನಲ್ಲೇ, ಇರಾನ್ ನಾಯಕತ್ವವು ಮಾತುಕತೆಗೆ ಮನವಿ ಮಾಡಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾನುವಾರ ಹೇಳಿದ್ದರು. ಇದಕ್ಕೆ ಅಬ್ಬಾಸ್ ಪ್ರತಿಕ್ರಿಯಿಸಿದ್ದಾರೆ. ಇರಾನ್‌ನಲ್ಲಿ ಹಣ ದುಬ್ಬರ, ಏರುತ್ತಿರುವ ಜೀವನ ವೆಚ್ಚದ ವಿರುದ್ಧ ಎರಡು ವಾರಗಳಿಂದ ನಡೆಯುತ್ತಿರುವ ಪ್ರತಿಭಟನೆಯು ಹಿಂಸಾ ಸ್ವರೂಪ ಪಡೆದುಕೊಂಡಿದೆ. ಇದುವರೆಗೆ 200ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ಇದರಲ್ಲಿ, 40 ಮಂದಿ ಭದ್ರತಾ ಸಿಬ್ಬಂದಿ ಎನ್ನಲಾಗಿದೆ.

ಅಂತರರಾಷ್ಟ್ರೀಯ ಮಾನವ ಹಕ್ಕು ಸಂಘಟನೆಗಳು ಇರಾನ್‌ನಲ್ಲಿ ಹತ್ಯಾಕಾಂಡ ನಡೆಯುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ್ದವು. ಈ ಕುರಿತು ಮಾತನಾಡಿದ್ದ ಟ್ರಂಪ್, 'ಇರಾನ್ ನಾಯಕರು ಕರೆ ಮಾಡಿದ್ದರು. ಸಭೆಗೆ ಸಿದ್ಧತೆ ನಡೆಯುತ್ತಿದೆ' ಎಂದು ತಿಳಿಸಿದ್ದರು. ಇದೀಗ ಅಬ್ಬಾಸ್ ನೀಡಿರುವ ಹೇಳಿಕೆ ಜಾಗತಿಕ ಶಾಂತಿ ದೃಷ್ಟಿಯಿಂದ ಮಹತ್ವ ಪಡೆದುಕೊಂಡಿದೆ. ದೇಶದಾದ್ಯಂತ ಪರಿಸ್ಥಿತಿ ನಿಯಂತ್ರಣದಲ್ಲಿದೆ. ಆದರೆ, ಪ್ರತಿಭಟನೆಗಳು ಹಿಂಸಾಚಾರ ಹಾಗೂ ರಕ್ತಪಾತಕ್ಕೆ ತಿರುಗಿರುವುದು ಸಂಘರ್ಷದಲ್ಲಿ ಟ್ರಂಪ್ ಮಧ್ಯಪ್ರವೇಶಿಸಲು ನೆಪವಾಗಿದೆ ಎಂದಿದ್ದಾರೆ.

ಜಮ್ಮು-ಕಾಶ್ಮೀರ: ಗಡಿಯುದ್ದಕ್ಕೂ ಹಾರಾಡಿದ ಪಾಕ್ ಡ್ರೋನ್‌ಗಳು

ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ಸಾಂಬಾ, ರಾಜೌರಿ ಮತ್ತು ಪೂಂಛ್ ಪ್ರದೇಶಗಳಲ್ಲಿರುವ ಅಂತರರಾಷ್ಟ್ರೀಯ ಗಡಿ ಮತ್ತು ನಿಯಂತ್ರಣಾ ರೇಖೆಯುದ್ದಕ್ಕೂ (ಎಲ್‌ಒಸಿ) ಹಲವು ಪ್ರದೇಶಗಳಲ್ಲಿ ಶಂಕಿತ ಪಾಕಿಸ್ತಾನಿ ಡ್ರೋನ್‌ಗಳು ಕಂಡುಬಂದಿವೆ. ಪಾಕಿಸ್ತಾನದ ಕಡೆಯಿಂದಲೇ ಬಂದ ಎಲ್ಲ ಡ್ರೋನ್‌ಗಳು ಕೆಲವು ನಿಮಿಷ ಗಡಿ ಪ್ರದೇಶದಲ್ಲಿ ಹಾರಾಟ ನಡೆಸಿ, ವಾಪಸ್ ಆಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದರ ಬೆನ್ನಲ್ಲೇ, ಭದ್ರತಾ ಪಡೆಗಳು ಪ್ರಮುಖ ಪ್ರದೇಶಗಳಲ್ಲಿ ಕಾರ್ಯಾಚರಣೆ ಆರಂಭಿಸಿವೆ. ನೌಶೇರಾ ಸೆಕ್ಟರ್‌ನ ಗಾನಿಯಾ-ಕಲ್ಸಿಯಾನ್‌ನದಲ್ಲಿ ಹಾರಾಡುತ್ತಿದ್ದ ಡ್ರೋನ್‌ಗಳ ಮೇಲೆ ಸೇನಾ ಪಡೆಗಳು ಮಷಿನ್ ಗನ್ ಬಳಸಿ ದಾಳಿ ಮಾಡಿವೆ.



ಅದೇ ವೇಳೆ ರಾಜೌರಿ ಜಿಲ್ಲೆಯ ಖಬ್ಬರ್ ಗ್ರಾಮದಲ್ಲೂ ಕೆಲಹೊತ್ತು ಡ್ರೋನ್‌ಗಳು ಹಾರಾಡಿವೆ. ಅದಕ್ಕೂ ಮೊದಲು ಗಡಿ ನಿಯಂತ್ರಣಾ ರೇಖೆಯುದ್ದಕ್ಕೂ ಇರುವ ತೈನ್‌ನಿಂದ ಮಂಕೋಟ್ ಸೆಕ್ಟರ್‌ವರೆಗೆ ಡ್ರೋನ್‌ನಂತಹ ವಸ್ತು ಬರುತ್ತಿರುವುದು ಕಂಡುಬಂದಿದೆ. ರಾಮಗಢ ಸೆಕ್ಟರ್‌ನ ಛಕ್ ಬಾರ್ದಲ್‌ನಲ್ಲಿ ಇದೇ ರೀತಿಯ ವಸ್ತುಗಳು ಹಾರಾಟ ನಡೆಸಿರುವುದು ಕಂಡು ಬಂದಿದೆ. ಸಾಂಬಾ ಜಿಲ್ಲೆಯ ಅಂತಾರಾಷ್ಟ್ರೀಯ ಗಡಿಯಲ್ಲಿರುವ ಘಗ್ವಾಲ್‌ನ ಪಲೂರಾ ಗ್ರಾಮದಲ್ಲಿ ಪಾಕಿಸ್ತಾನಿ ಡ್ರೋನ್‌ಗಳು ಕಳುಹಿಸಿದ್ದ ಶಸ್ತ್ರಾಸ್ತ್ರಗಳನ್ನು ಭದ್ರತಾ ಪಡೆಗಳು ಜನವರಿ 9ರಂದು ವಶಕ್ಕೆ ಪಡೆದಿದ್ದವು.

ಮೈಸೂರು ಮಿತ್ರ ಮಂಗಳವಾರ 13 ಜನವರಿ 2026

ತಿಂಗಳ ಅಂತ್ಯಕ್ಕೆ ರಾಜ್ಯದ ಎನ್‌ಎಚ್–275 ಹೆದ್ದಾರಿ ಕಾಮಗಾರಿಗೆ ಚಾಲನೆ: ಯದುವೀರ್

ಮಡಿಕೇರಿ, ಜ.12–ರಾಜ್ಯದ ಎನ್‌ಎಚ್–275 ಹೆದ್ದಾರಿ ಸುರಕ್ಷತೆಗಾಗಿ ಕೇಂದ್ರ ಸರ್ಕಾರದಿಂದ 94.08 ಕೋಟಿ ರೂ.ಗಳ ಬೃಹತ್ ಯೋಜನೆಗೆ ತಾಂತ್ರಿಕ ಅನುಮೋದನೆ ನೀಡಿ ಹಣಬಿಡುಗಡೆ ಮಾಡಲಾಗಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಅತ್ಯಂತ ಜನನಿಬಿಡ ಹೆದ್ದಾರಿಗಳಲ್ಲಿ ಒಂದಾದ ಬಂಟ್ವಾಳ–ಬೆಂಗಳೂರು ವಿಭಾಗ ರಸ್ತೆಯ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯವು ಭರ್ಜರಿ ಕೊಡುಗೆ ನೀಡಿದ್ದು, ಹೆದ್ದಾರಿಯ ಆಯ್ದ ಭಾಗಗಳಲ್ಲಿ ರಕ್ಷಣಾತ್ಮಕ ಗೋಡೆಗಳ ನಿರ್ಮಾಣ ಮತ್ತು ಸುರಕ್ಷತಾ ಕಾಮಗಾರಿ ಗಳಿಗಾಗಿ 94.08 ಕೋಟಿ ರೂಪಾಯಿಗಳ ಆರ್ಥಿಕ ಮತ್ತು ತಾಂತ್ರಿಕ ಮಂಜೂರಾತಿ ಯನ್ನು ನೀಡಿ ಆದೇಶ ಹೊರಡಿಸಿದೆ ಎಂದು ಸಂಸದರ ಪತ್ರಿಕಾ ಹೇಳಿಕೆ ತಿಳಿಸಿದೆ.

ಬಂಟ್ವಾಳ ಮತ್ತು ಬೆಂಗಳೂರು ನಡುವಿನ ಈ ಘಟ್ಟ ಪ್ರದೇಶದ ರಸ್ತೆಯು ಮಳೆಗಾಲದಲ್ಲಿ ಪದೇ–ಪದೇ ಭೂಕುಸಿತಕ್ಕೆ ತುತ್ತಾಗುತ್ತಿತ್ತು. ಇದನ್ನು ತಡೆಗಟ್ಟಲು ಮತ್ತು ಪ್ರಯಾಣಿಕರ ಸುರಕ್ಷತೆಯನ್ನು ಖಚಿತಪಡಿಸಲು ಸಂಪಾಜೆಯಿಂದ ಕುಶಾಲ ನಗರವರೆಗಿನ ವ್ಯಾಪ್ತಿಯಲ್ಲಿ ಈ ಕಾಮಗಾರಿಯನ್ನು ಕೈಗೆತ್ತಿ ಕೊಳ್ಳಲಾಗುತ್ತಿದೆ. ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗದಂತೆ ಏಕಕಾಲಕ್ಕೆ 3 ಕಿಮೀಗಿಂತ ಹೆಚ್ಚು ಉದ್ದದ ಕಾಮಗಾರಿ ನಡೆಸದಂತೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ.



ಯದುವೀರ್

ಈ ಹೆದ್ದಾರಿಯ ಆಯ್ದ ಭಾಗಗಳಲ್ಲಿ ರಕ್ಷಣಾತ್ಮಕ ಗೋಡೆಗಳ ನಿರ್ಮಾಣ ಮತ್ತು ಸುರಕ್ಷತಾ ಕಾಮಗಾರಿಗಳಿಗಾಗಿ 94.08 ಕೋಟಿ ರೂಪಾಯಿಗಳ ಆರ್ಥಿಕ ಮತ್ತು ತಾಂತ್ರಿಕ ಮಂಜೂರಾತಿಯನ್ನು ನೀಡಿ ಆದೇಶ ಹೊರಡಿಸಿದ್ದು, ಯೋಜನೆಯ ಹಿನ್ನೆಲೆ ಮತ್ತು ಉದ್ದೇಶ ಬಂಟ್ವಾಳ ಮತ್ತು ಬೆಂಗ ಳೂರು ನಡುವಿನ ಈ ಘಟ್ಟ ಪ್ರದೇಶದ ರಸ್ತೆಯು ಮಳೆಗಾಲದಲ್ಲಿ ಪದೇ–ಪದೇ ಭೂಕುಸಿತಕ್ಕೆ ತುತ್ತಾಗುತ್ತಿತ್ತು. ಇದನ್ನು ತಡೆಗಟ್ಟಲು ಮತ್ತು ಪ್ರಯಾಣಿಕರ ಸುರಕ್ಷತೆಯನ್ನು ಖಚಿತಪಡಿಸಲು ಸಂಪಾಜೆಯಿಂದ ಕುಶಾಲ ನಗರವರೆಗೆ ವ್ಯಾಪ್ತಿಯಲ್ಲಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದರು.

ಪ್ರಮುಖ ಕಾಮಗಾರಿಗಳು: ಸಚಿವಾಲಯದ ತಾಂತ್ರಿಕ ವರದಿಯ ಪ್ರಕಾರ, ಯೋಜನೆಯು ರಕ್ಷಣಾತ್ಮಕ ಗೋಡೆಗಳು: ಒಟ್ಟು 1,650 ಮೀಟರ್ ಉದ್ದದ ಆರ್‌ಸಿಸಿ ಕ್ಯಾಂಟಿಲಿವರ್ ರಿಟೈನಿಂಗ್ ವಾಲ್ ಮತ್ತು ಕಣಿವೆಯ ಬದಿಯಲ್ಲಿ ವಿಶೇಷವಾಗಿ 110 ಮೀಟರ್ ಉದ್ದದ ಪ್ರೆಶರ್ ರಿಲೀಫ್ ಗೋಡೆಗಳನ್ನು ನಿರ್ಮಿಸಲಾಗುವುದು.

ರಸ್ತೆ ಸುರಕ್ಷತೆಯನ್ನು ಹೆಚ್ಚಿಸಲು 17 ಆಯ್ದ ಸ್ಥಳಗಳಲ್ಲಿ ಒಟ್ಟು 1,690 ಮೀಟರ್ ಉದ್ದದ ರಸ್ತೆಯನ್ನು ವಿಸ್ತರಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಮೋರಿಗಳ ಪುನರ್ನಿರ್ಮಾಣ: ಕಿಮೀ 77.750 ಮತ್ತು 89.670 ರಲ್ಲಿ ಹಳೆಯದಾದ ಎರಡು ಬಾಕ್ಸ್ ಮೋರಿಗಳನ್ನು ಮರುನಿರ್ಮಾಣ ಮಾಡಲಾಗುವುದು.

ಸುರಕ್ಷತಾ ಕ್ರಮಗಳು: ರಕ್ಷಣಾತ್ಮಕ ಕ್ರಾಶ್ ಬ್ಯಾರಿಯರ್‌ಗಳು ಮತ್ತು ಆಧುನಿಕ ಸಂಚಾರ ಸೂಚನಾ ಫಲಕಗಳನ್ನು ಅಳವಡಿಸಲಾಗುವುದು ಎಂದರು.


94.08 ಕೋಟಿ ರೂ.(ಜಿಎಸ್‌ಟಿ ಮತ್ತು ನಿರ್ವಹಣಾ ವೆಚ್ಚಗಳು ಸೇರಿ). ವೆಚ್ಚದ ಯೋಜನೆಯು ಮಳೆಗಾಲವನ್ನೂ ಒಳಗೊಂಡಂತೆ 18 ತಿಂಗಳುಗಳಲ್ಲಿ ಪೂರ್ಣಗೊಳ್ಳಲಿದೆ.

ನಿರ್ವಹಣೆ: ಗುತ್ತಿಗೆದಾರರು ಕಾಮಗಾರಿ ಮುಗಿದ ನಂತರ ಮುಂದಿನ 10 ವರ್ಷಗಳ ಕಾಲ ರಸ್ತೆಯ ದೋಷ ಹೊಣೆಗಾರಿಕೆ ಮತ್ತು ನಿರ್ವಹಣೆ ನೋಡಿಕೊಳ್ಳಬೇಕಾಗುತ್ತದೆ. ಯೋಜನೆಯ ಗುಣಮಟ್ಟ ಕಾಪಾಡಲು ಸಚಿವಾಲಯವು ಹಲವು ಷರತ್ತುಗಳನ್ನು ವಿಧಿಸಿದೆ ಕಾಮಗಾರಿ ಆರಂಭಿಸುವ ಮುನ್ನ ಮತ್ತು ನಂತರ ನೆಟ್‌ವರ್ಕ್ ಸರ್ವೆ ವೆಹಿಕಲ್ (ಎನ್‌ಎಸ್‌ವಿ) ಮೂಲಕ ರಸ್ತೆಯ ಗುಣಮಟ್ಟವನ್ನು ದಾಖಲಿಸುವುದು ಕಡ್ಡಾಯಗೊಳಿಸಿದೆ ಎಂದಿದ್ದಾರೆ.

ಹುಲಿ ದಾಳಿಗೆ ಗಬ್ಬದ ಹಸು ಬಲಿ

ಮಡಿಕೇರಿ, ಜ.12–ಕೊಟ್ಟಿಗೆಯಲ್ಲಿ ಕಟ್ಟಿ ಹಾಕಿದ್ದ ಗಬ್ಬದ ಹಸುವಿನ ಮೇಲೆ ಹುಲಿ ದಾಳಿ ಮಾಡಿ ಕೊಂದಿರುವ ಘಟನೆ ಪೊನ್ನಂಪೇಟೆ ತಾಲೂಕಿನ ಪೊನ್ನಪ್ಪಸಂತೆ ಗ್ರಾಪಂ ವ್ಯಾಪ್ತಿಯಲ್ಲಿ ಸಂಭವಿಸಿದೆ.

ಪೊನ್ನಪ್ಪಸಂತೆ ಗ್ರಾಪಂ ವ್ಯಾಪ್ತಿಯ ಬೆಸಗೂರು ಗ್ರಾಮದ ಕೊಕ್ಕಲೆಮಾಡ ದಾದಾ ಸೋಮಯ್ಯ ಎಂಬವರಿಗೆ ಸೇರಿದ ಗಬ್ಬದ ಹಸುವಿನ ಮೇಲೆ ಸೋಮವಾರ ಬೆಳಗಿನ ಜಾವ ಹುಲಿ ದಾಳಿ ಮಾಡಿ ಹಸುವನ್ನು ಕೊಂದು ಹಾಕಿದೆ. ಮನೆಯ ಪಕ್ಕದ ಕೊಟ್ಟಿಗೆಯಲ್ಲಿ ಎಂದಿನಂತೆ ಕಟ್ಟಿ ಹಾಕಿದ್ದ ರಾಸುಗಳು ಕೂಗುವ ಶಬ್ದ ಕೇಳಿ ಮಾಲೀಕ ದಾದಾ ಸೋಮಯ್ಯ ಮನೆಯಿಂದ ಹೊರ ಬಂದು ನೋಡಿದಾಗ ಹುಲಿ ದಾಳಿ ಮಾಡಿ ಕೊಂದು ಹಾಕಿರುವುದು ಕಂಡು ಬಂದಿದೆ. ಪೊನ್ನಂಪೇಟೆ ಉಪ ವಲಯ ಅರಣ್ಯಾಧಿಕಾರಿ ಕೆ.ಜಿ. ದಿವಾಕರ್ ಅವರಿಗೆ ಮಾಹಿತಿ ನೀಡಿದ ಮೇರೆಗೆ ಕೂಡಲೇ ವಲಯ ಅರಣ್ಯಾ ಧಿಕಾರಿ ಗಂಗಾಧರ್ ಹಾಗೂ ಆರ್‌ಆರ್‌ಟಿ ತಂಡದೊಂದಿಗೆ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಹುಲಿ ದಾಳಿಗೆ ಹಸು ಸಾವನ್ನಪ್ಪಿರುವುದು.

ಆರ್‌ಆರ್‌ಟಿ ಸಿಬ್ಬಂದಿ ತಂಡ ಹುಲಿಯ ಹೆಜ್ಜೆ ಗುರುತು ಪತ್ತೆ ಹಚ್ಚಲು ಬೆಸಗೂರು ಗ್ರಾಮದ ಭದ್ರಕಾಳಿ ದೇವರ ಕಾಡು ಹಾಗೂ ನಲ್ಲೂರು ಗ್ರಾಮದ ಅಯ್ಯಪ್ಪ ದೇವರ ಕಾಡು ಹಾಗೂ ಇನ್ನಿತರ ಕಡೆಗಳಲ್ಲಿ ಕೂಂಬಿಂಗ್ ಕಾರ್ಯಾಚರಣೆ ನಡೆಸಿದಾಗ ಹೆಜ್ಜೆ ಗುರುತು ಕಂಡು ಬಂದಿದೆ. ಹುಲಿಯ ಹೆಜ್ಜೆಯ ಗುರುತನ್ನು ಆಧರಿಸಿ ಚಲನವಲನ ವೀಕ್ಷಿಸಲು ಸಿ.ಸಿ ಕ್ಯಾಮೆರಾ ಹಾಗೂ ಹುಲಿ ಸೆರೆಗೆ ಬೋನ್ ಅಳವಡಿಸಲಾಗಿದೆ. ಬಾಳಲೆ ಪಶು ವೈದ್ಯಾಧಿಕಾರಿ ಭವಿಷ್ಯತ್ ಕುಮಾರ್ ಅವರು ಹಸುವಿನ ಕಳೇಬರದ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಹೂಳಲಾಯಿತು.

ವಲಯ ಅರಣ್ಯಾಧಿಕಾರಿ ಗಂಗಾಧರ್, ಉಪವಲಯ ಅರಣ್ಯಾಧಿಕಾರಿ ಕೆ.ಜಿ ದಿವಾಕರ್, ಗಸ್ತು ಅರಣ್ಯಪಾಲಕ ಅಣ್ಣಯ್ಯ ಹಾಗೂ ಆರ್.ಆರ್.ಟಿ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಕಾಫಿ ತೋಟಗಳಲ್ಲಿ ಕಾಫಿ ಕೊಯಿಲು ಕಾರ್ಯ ಭರದಿಂದ ಸಾಗುತ್ತಿದ್ದು, ಹುಲಿ ಹಾವಳಿಯಿಂದ ಜೀವ ಭಯದಲ್ಲಿ ಕಾಫಿ ಕುಯಿಲು ಕೆಲಸಕ್ಕೆ ಬರಲು ಕಾರ್ಮಿಕರು ಹಿಂದೇಟು ಹಾಕುತ್ತಿರುವ ಪರಿಸ್ಥಿತಿ ಬೆಸಗೂರು, ನಲ್ಲೂರು, ಕಿರುಗೂರು ಪೊನ್ನಪ್ಪಸಂತೆ, ಬೆಳ್ಳೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಸೃಷ್ಟಿಯಾಗಿದೆ.

ಕುವೆಂಪು ಬಡಾವಣೆ ಹಿತರಕ್ಷಣಾ ವೇದಿಕೆಯ ವಾರ್ಷಿಕೋತ್ಸವ



ಕುಶಾಲನಗರ, ಜ.12–ಇಲ್ಲಿನ ಪುರಸಭಾ ವ್ಯಾಪ್ತಿಯ ಮುಳ್ಳುಸೋಗೆಯ ಕುವೆಂಪು ಬಡಾವಣೆಯ ಹಿತರಕ್ಷಣಾ ವೇದಿಕೆಯ ವಾರ್ಷಿಕೋತ್ಸವವು ಬಡಾವಣೆಯ ಉದ್ಯಾನವನದಲ್ಲಿ ಬಡಾವಣೆಯ ಹಿತರಕ್ಷಣಾ ಸಮಿತಿ ಅಧ್ಯಕ್ಷ ಎಂ.ಕೆ.ದಯಾನಂದ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಕುವೆಂಪು ಬಡಾವಣೆಯಲ್ಲಿ 90 ಮನೆಗಳಿದ್ದು ಎಲ್ಲಾ ಸಮುದಾಯದವರು ಒಗ್ಗಟ್ಟಿನಿಂದ ಇದ್ದೇವೆ. ಮಳೆಗಾಲದ ಪ್ರವಾಹ ನಿಯಂತ್ರಣಕ್ಕಾಗಿ 4 ಕೋಟಿ ವೆಚ್ಚದಲ್ಲಿ ಕಾವೇರಿ ನದಿಯಂಚಿನಲ್ಲಿ ತಡೆ ಗೋಡೆ ನಿರ್ಮಾಣವಾಗಿದೆ. ಹಾಗೆಯೇ ಬಡಾವಣೆಯ ಪ್ರವೇಶ ದ್ವಾರದಲ್ಲಿ ಸ್ವಾಗತ ಕಮಾನು ಹಾಗೂ ಕುವೆಂಪು ಪುತ್ಥಳಿ ನಿರ್ಮಾಣ ಮಾಡುವ ಚಿಂತನೆ ಹೊಂದಲಾಗಿದೆ ಎಂದರು.

ವಾರ್ಷಿಕೋತ್ಸವದ ಅಂಗವಾಗಿ ಬಡಾವಣೆಯ ಕುಟುಂಬಗಳ ಮಕ್ಕಳಿಗೆ ಕಾಳು ಹೆರಕುವುದು, 50 ರಿಂದ 500 ಮೀಟರ್ ವರೆಗಿನ ಓಟದ ಸ್ಪರ್ಧೆ, ಮೆಮೋರಿ ಪರೀಕ್ಷೆ, ರಸಪ್ರಶ್ನೆ ನಡೆಯಿತು. ಹಾಗೆಯೇ ಪುರುಷರು ಮತ್ತು ಮಹಿಳೆಯರಿಗೆ ನಡೆದ ಸ್ಪರ್ಧೆ ವಿಜೇತರಿಗೆ ನಗದು ಬಹುಮಾನ ನೀಡಲಾಯಿತು. ಕಾರ್ಯಕ್ರಮದಲ್ಲಿ ಬಡಾವಣೆಯ ಕಾರ್ಯದರ್ಶಿ ಬೀನಾ ಅನಿಲ್ ಕುಮಾರ್, ಖಜಾಂಚಿ ಬಿ.ಎಂ. ರವೀಂದ್ರ, ಸಲಹೆಗಾರರಾದ ಕೆ.ಜಿ.ಚಂದ್ರಶೇಖರ್, ನಿರ್ದೇಶಕರಾದ ಸಿ.ಕೆ.ಹೇಮಂತ್, ಅಮರಾವತಿ, ಪ್ರಕಾಶ್ ಇದ್ದರು.

ಶ್ರೀ ಚಾಮುಂಡೇಶ್ವರಿ ಕಲಾಭವನಕ್ಕೆ ನಾಳೆ ಭೂಮಿಪೂಜೆ

ಮಡಿಕೇರಿ: ದೇವರಕೊಲ್ಲಿಯಲ್ಲಿರುವ ಶ್ರೀ ಚಾಮುಂಡೇಶ್ವರಿ ದೇವಾಲಯದಲ್ಲಿ ಉದ್ದೇಶಿತ ಶ್ರೀ ಚಾಮುಂಡೇಶ್ವರಿ ಕಲಾಭವನಕ್ಕೆ ಭೂಮಿಪೂಜೆ ಮತ್ತು ಮಕರ ಸಂಕ್ರಾಂತಿ ಪೂಜಾಮಹೋತ್ಸವ ಜ.14 ರಂದು ಜರುಗಲಿದೆ. ಅಂದು ಬೆಳಿಗ್ಗೆ 10.45 ಗಂಟೆಗೆ ದೇವಾಲಯದ ಆವರಣದಲ್ಲಿ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ.ಶ್ಯಾಮ್ ಭಟ್ ಕಲಾ ಮಂದಿರಕ್ಕೆ ಭೂಮಿಪೂಜೆ ನೆರವೇರಿಸುವರು. 11 ಗಂಟೆಗೆ ಸಭೆಯನ್ನು ಶಾಸಕ ಎ.ಎಸ್. ಪೊನ್ನಣ್ಣ ಉದ್ಘಾಟಿಸಲಿದ್ದು, ಟಿ.ಶ್ಯಾಮ್ ಭಟ್, ದೇವಾಲಯದ ಅಧ್ಯಕ್ಷ ಬಿ.ಜೆ. ಯಶೋಧರ, ಪತ್ರಕರ್ತರ ಸಂಘದ ಅಧ್ಯಕ್ಷ ಹೆಚ್.ಟಿ. ಅನಿಲ್, ಮೈಸೂರಿನ ಉದ್ಯಮಿ ನರೇಶ ಚೆರಿಯಮನೆ, ಮದೆನಾಡು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ, ಅಧ್ಯಕ್ಷ ಧನಂಜಯ್ ಅಗೋಳಿಕಜೆ, ಶ್ರೀ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆಯ ಸಂಪಾಜೆ ವಲಯಾಧಿಕಾರಿ ಸಂತೋಷ್ ಕುಮಾರ್, ದೇವಾಲಯದ ಉಪಾಧ್ಯಕ್ಷ ಕೆ.ಆರ್. ರಾಜು ಹಾಜರಿರುತ್ತಾರೆ. ಮಧ್ಯಾಹ್ನ 12.30 ಗಂಟೆಗೆ ಮಹಾಪೂಜೆ, ಪ್ರಸಾದ ವಿತರಣೆ ಜರುಗಲಿದ್ದು, ಮಧ್ಯಾಹ್ನ 1 ಗಂಟೆಯಿಂದ ಅನ್ನಸಂತರ್ಪಣೆ ಜರುಗಲಿದೆ ಎಂದು ದೇವಾಲಯದ ಪ್ರಕಟಣೆ ತಿಳಿಸಿದೆ.

ಹತ್ಯಾಕಾಂಡದಲ್ಲಿ ಮಡಿದ ಹಿರಿಯರಿಗೆ ಸಿಎನ್‌ಸಿ ಗೌರವ ನಮನ



1785ರ ದುರಂತ ಹತ್ಯಾಕಾಂಡದಲ್ಲಿ ಮೃತಪಟ್ಟ ಹಿರಿಯರಿಗೆ ಗೌರವ ನಮನ ಸಲ್ಲಿಸಿತು.

ಮಡಿಕೇರಿ: ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ದೇವಟ್‌ಪರಂಬ್ ಕೊಡವ ನರಮೇಧ ಸ್ಥಳಕ್ಕೆ ಭೇಟಿ ನೀಡಿ 1785ರ ದುರಂತ ಹತ್ಯಾಕಾಂಡದಲ್ಲಿ ಮೃತಪಟ್ಟ ಹಿರಿಯರಿಗೆ ಗೌರವ ನಮನ ಸಲ್ಲಿಸಿತು.

ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ, ಗುರು ಹಿರಿಯರನ್ನು ಸ್ಮರಿಸಿ ದುರಂತ ಇತಿಹಾಸದ ಬಗ್ಗೆ ವಿಷಾದ ವ್ಯಕ್ತಪಡಿಸಿದರು. ಕೊಡವ ಜನರ ವಿರುದ್ಧದ ಈ ದೌರ್ಜನ್ಯಕ್ಕೆ ನ್ಯಾಯ ಮತ್ತು ಅಂತರರಾಷ್ಟ್ರೀಯ ಮನ್ನಣೆಯನ್ನು ಪಡೆಯುವ ಸಿಎನ್‌ಸಿಯ ಬದ್ಧತೆಯನ್ನು ಪುನರುಚ್ಚರಿಸುವುದಾಗಿ ತಿಳಿಸಿದರು.

ದೇವಟ್‌ಪರಂಬ್ ದುರಂತ ಕೊಡವ ನರಮೇಧವು 1785ರ ಡಿ.12ರಂದು ಸಂಭವಿಸಿತು. ಸಾವಿರಾರು ಮುಗ್ಧ ಕೊಡವ ಯೋಧರು ಮತ್ತು ಅವರ ಕುಟುಂಬಗಳನ್ನು ಟಿಪ್ಪು ಸುಲ್ತಾನನ ನೇತೃತ್ವದ ಮೈಸೂರು ಸುಲ್ತಾನರ ಸೈನ್ಯವು ಫ್ರೆಂಚ್ ಈಸ್ಟ್ ಇಂಡಿಯಾ ಕಂಪನಿಯ ಸೈನಿಕರೊಂದಿಗೆ ಸೇರಿಕೊಂಡು ಕ್ರೂರವಾಗಿ ಹತ್ಯೆ ಮಾಡಿತು. ಕೊಡವ ಯೋಧರಿಂದ 31 ಬಾರಿ ಸೋಲಿಸಲ್ಪಟ್ಟ ಟಿಪ್ಪು, ಮೋಸಗೊಳಿಸುವ ಶಾಂತಿ ಒಪ್ಪಂದವನ್ನು ರೂಪಿಸಿ ಕೊಡವ ಜನರನ್ನು ಆಹ್ವಾನಿಸಿ ಕ್ರೂರ ನರಮೇಧದಲ್ಲಿ ಹತ್ಯೆ ಮಾಡುವ ಮೂಲಕ ಇಡೀ ಕೊಡವ ಯೋಧ ಜನಾಂಗವನ್ನು ನಿರ್ಮೂಲನೆ ಮಾಡಲು ಸಂಚು ರೂಪಿಸಿದನು ಎಂದು ಆರೋಪಿಸಿದರು. ಕಲಿಯಂಡ ಮೀನಾ ಪ್ರಕಾಶ್, ನಂದಿ ನೆರವಂಡ ರೇಖಾ ನಾಚಪ್ಪ, ಕಲಿಯಂಡ ಪ್ರಕಾಶ್, ಮಂದಪಂಡ ಮನೋಜ್ ಮಂದಣ್ಣ, ಅಪ್ಪಾರಂಡ ಪ್ರಸಾದ್, ಮಂದಪಂಡ ಸೂರಜ್, ಅಪ್ಪಾರಂಡ ತಿಮ್ಮಯ್ಯ ಹಾಗೂ ಶರತ್ ಅಹುಜಾ ಅವರು ಪಾಲ್ಗೊಂಡು ಗೌರವ ನಮನ ಸಲ್ಲಿಸಿದರು.

ಕ್ರಿಕೆಟ್ ಪಂದ್ಯಾವಳಿ ಲೋಗೋ ಅನಾವರಣ

ಮಡಿಕೇರಿ: ಪತ್ರಕರ್ತರ ಸಂಘದ ಕ್ಷೇಮಾಭಿವೃದ್ಧಿ ಸಮಿತಿ ವತಿಯಿಂದ ಜ.18 ರಂದು ನಡೆಯಲಿರುವ ಸಂಕ್ರಾಂತಿ ಸಂಭ್ರಮ ಕ್ರಿಕೆಟ್ ಪಂದ್ಯಾವಳಿಯ ಲೋಗೋವನ್ನು ಅನಾವರಣ ಮಾಡಲಾಯಿತು.

ಪತ್ರಕರ್ತರ ಸಂಘದ ಅಧ್ಯಕ್ಷ ಹೆಚ್.ಟಿ. ಅನಿಲ್ ಸ್ಥಾಪಕಾಧ್ಯಕ್ಷ ಎಸ್.ಎ.ಮುರಳೀಧರ್, ಪ್ರಧಾನ ಕಾರ್ಯದರ್ಶಿ ಸುರೇಶ್ ಬಿಳಿಗೇರಿ, ಖಜಾಂಚಿ ಟಿ.ಕೆ.ಸಂತೋಷ್, ಕ್ಷೇಮಾಭಿವೃದ್ಧಿ ಸಮಿತಿ ಅಧ್ಯಕ್ಷ ಜಿ.ವಿ. ರವಿಕುಮಾರ್, ಕಾರ್ಯದರ್ಶಿ ಅರುಣ್ ಕೂರ್ಗ್ ಸೇರಿದಂತೆ ಸಂಘದ ನಿರ್ದೇಶಕರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲ್ಪಟ್ಟಿರುವ ಸಂಕ್ರಾಂತಿ ಸಂಭ್ರಮ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇದೇ ಮೊದಲ ಬಾರಿಗೆ ಶಾಸಕಾಂಗ ವರ್ಸಸ್ ಕಾರ್ಯಾಂಗದ ನಡುವೆ ಸೌಹಾರ್ದ ಪಂದ್ಯಾವಳಿ ನಡೆಯಲಿದೆ. ಪಂದ್ಯಾವಳಿಯಲ್ಲಿ ಕೊಡಗು ಪತ್ರಕರ್ತರ ಸಂಘದ ಹೊನ್ನು, ಸುಗ್ಗಿ, ಸಿರಿ, ಸಮೃದ್ಧಿ ಹೆಸರಿನ 4 ತಂಡಗಳು ಭಾಗವಹಿಸಲಿವೆ.

ವಿಬಿ ಜಿ ರಾಮ್–ಜಿ ಯೋಜನೆ ಬಗ್ಗೆ ಕಾಂಗ್ರೆಸ್ ಅಪಪ್ರಚಾರ

ಕೇಂದ್ರ ರೈಲ್ವೆ ರಾಜ್ಯ ಉಸ್ತುವಾರಿ ಸಚಿವ ವಿ.ಸೋಮಣ್ಣ ಆರೋಪ



ಸುದ್ದಿಗೋಷ್ಠಿಯಲ್ಲಿ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಮಾತನಾಡಿದರು.

> **ಉದ್ಯೋಗ ಖಾತರಿಯನ್ನು 100 ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ಯೋಜನೆಯಡಿ ಪಾರದರ್ಶಕತೆ ತರುವ ಸಲುವಾಗಿ ಡಿಜಿಟಲ್ ವ್ಯವಸ್ಥೆಗೆ ರೂಪಾಂತರಿಸಲಾಗುತ್ತಿದೆ. ಇದರಿಂದಾಗಿ ಯೋಜನೆಯಲ್ಲಿ ಸಾಕಷ್ಟು ಸುಧಾರಣೆ ಕಾಣಬಹುದು. ಆದರೆ ರಾಜ್ಯ ಸರ್ಕಾರ ಅನಗತ್ಯವಾಗಿ ಆರೋಪ ಮಾಡುತ್ತಿದೆ.**
> **–ವಿ.ಸೋಮಣ್ಣ, ಕೇಂದ್ರ ಸಚಿವರು.**

ಚಾಮರಾಜನಗರ, ಜ.12– 'ವಿಕಸಿತ ಭಾರತ' ಗ್ಯಾರಂಟಿ ಫಾರ್ ರೋಜ್ಗರ್ ಅಂಡ್ ಅಜೀವಿಕಾ ಮಿಷನ್ (ಗ್ರಾಮೀಣ್) (ವಿಬಿ ಜಿ ರಾಮ್ ಜಿ) ಯೋಜನೆ ಬಗ್ಗೆ ರಾಜ್ಯ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಪಪ್ರಚಾರ ಮಾಡುತ್ತಿದೆ ಎಂದು ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಆರೋಪಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಾತ್ಮ ಗಾಂಧೀಜಿ ಸ್ವರಾಜ್ಯದ ಕನಸು ಕಂಡಿದ್ದರು. ಅವರು ಕಂಡ ರಾಮ ರಾಜ್ಯದ ಪರಿಕಲ್ಪನೆಯಡಿ ಯೋಜನೆ ಜಾರಿಗೊಳಿಸಲಾಗಿದ್ದು, ರಾಮ್ ಎಂಬ ಹೆಸರಿಡಲಾಗಿದೆ ಎಂದು ಪ್ರಸ್ತುತ ಗಾಂಧಿ ಹೆಸರಿನ ಬದಲಿಗೆ ರಾಮ್ ಜೀ ಹೆಸರು ಸೇರಿಸಿರುವ ಕುರಿತು ಸಮರ್ಥನೆ ಮಾಡಿಕೊಂಡರು.

ದೇಶದಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಆರಂಭವಾಗಿ 2 ದಶಕ ಕಳೆದಿದೆ. ಕಾಲಕ್ಕೆ ತಕ್ಕಂತೆ ಯೋಜನೆಯಲ್ಲಿ ಬದಲಾವಣೆ ಮಾಡುವುದು ಅಗತ್ಯವಿದ್ದು, ಆ ಕಾರಣಕ್ಕೆ ಬದಲಾವಣೆ ಮಾಡಲಾಗಿದೆ. ಈವರೆಗೆ ಕೇಂದ್ರ ಸರ್ಕಾರವೇ ಪೂರ್ಣ ಪ್ರಮಾಣದಲ್ಲಿ ಅನುದಾನ ನೀಡುತ್ತಿತ್ತು. ಇನ್ನು ಮುಂದೆ ಕೇಂದ್ರ ಶೇ.60 ರಷ್ಟು ಹಣ ನೀಡಿದರೆ, ರಾಜ್ಯ ಸರ್ಕಾರ ಶೇ.40ರಷ್ಟು ಹಣ ಒದಗಿಸಿ ಯೋಜನೆ ಜಾರಿ ಮಾಡಬೇಕಿದೆ. ರಾಜ್ಯ ಸರ್ಕಾರದ ಹೊಣೆಗಾರಿಕೆ ಹೆಚ್ಚಿಸುವುದು, ಮತ್ತಷ್ಟು ಪಾರದರ್ಶಕ ಹಾಗೂ ಶಾಶ್ವತವಾಗಿ ಗುಣಮಟ್ಟದ ಕಾಮಗಾರಿ ನಿರ್ಮಾಣದ ಗುರಿ ಹೊಂದಿದೆ ಎಂದರು.

ಗ್ರಾಪಂಗಳೇ ಕೇಂದ್ರ ಬಿಂದು: ಹೊಸ ಯೋಜನೆಯಲ್ಲಿ ಗ್ರಾಪಂಗಳೇ ಕೇಂದ್ರ ಬಿಂದುಗಳಾಗಲಿದೆ. ಗ್ರಾಪಂಗಳನ್ನು ವಿಕಸಿತ ಗ್ರಾಪಂಗಳನ್ನಾಗಿಸಲು ಸಹಕಾರಿಯಾಗಿದೆ. ನರೇಗಾದಲ್ಲಿದ್ದ ವಿಕೇಂದ್ರೀಕೃತ ಪದ್ಧತಿ ಹೊಸ ಯೋಜನೆಯಲ್ಲಿ ಸಂಘಟಿತ, ಕೇಂದ್ರೀಕೃತ ಪ್ರಕ್ರಿಯೆಯಾಗಿ ರೂಪುಗೊಳ್ಳಲಿದೆ. ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಪಿಡಿಓಗಳಿಗೆ ಹೆಚ್ಚಿನ ಜವಾಬ್ದಾರಿ ಲಭಿಸಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್ ಕುಮಾರ್, ಶಾಸಕ ಎಂ.ಆರ್.ಮಂಜುನಾಥ್, ಮಾಜಿ ಸಚಿವ ಎನ್.ಮಹೇಶ್, ಮಾಜಿ ಶಾಸಕರಾದ ಎಸ್.ಬಾಲರಾಜು, ಪ್ರೊ.ಮಲ್ಲಿಕಾರ್ಜುನಪ್ಪ, ಕೇಂದ್ರ ಪರಿಹಾರ ಸಮಿತಿ ಅಧ್ಯಕ್ಷ ಎಂ.ರಾಮಚಂದ್ರ, ರಾಜ್ಯ ವಕ್ತಾರ ಮಹೇಶ್ ಹಾಜರಿದ್ದರು.

ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ಅಳವಡಿಸಿಕೊಳ್ಳಿ

ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನ



ಕಾರ್ಯಕ್ರಮವನ್ನು ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನ ಉದ್ಘಾಟಿಸಿದರು.

ಚಾಮರಾಜನಗರ, ಜ.12– ವಿದ್ಯಾರ್ಥಿಗಳು ಸ್ವಾಮಿ ವಿವೇಕಾನಂದರ ಆದರ್ಶ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಚೂಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನ ತಿಳಿಸಿದರು.

ನಗರದ ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯದ ಸಭಾಂಗಣದಲ್ಲಿಂದು ಮೈ ಭಾರತ್ ಕೇಂದ್ರ, ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯ ಬಿಎಡ್ ಕಾಲೇಜು, ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಸಹಯೋಗದಲ್ಲಿ ನಡೆದ 163ನೇ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಹಾಗೂ ರಾಷ್ಟ್ರೀಯ ಯುವ ದಿನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ ಎಂಬ ಸಂದೇಶದಿಂದ ಯುವ ಜನರಲ್ಲಿ ಜಾಗೃತಿ ಮೂಡಿಸಿದ ಸ್ವಾಮಿ ವಿವೇಕಾನಂದರು ಯುವ ಪೀಳಿಗೆಗೆ ಮಾದರಿಯಾಗಿದ್ದಾರೆ. ಅವರ ಸಂದೇಶ ಮೌಲ್ಯಯುತ ವಿಚಾರಧಾರೆಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದರು.

ಚಾಮರಾಜನಗರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಕೆ.ರವಿಕುಮಾರ್ ಮಾತನಾಡಿ, ವಿವೇಕಾನಂದರು ಭಾರತದ ಪ್ರಸಿದ್ಧ ಮತ್ತು ಪ್ರಭಾವಶಾಲಿ ತತ್ವ ಜ್ಞಾನಿಗಳಲ್ಲಿ ಒಬ್ಬರು. ಯುವ ಜನತೆಗೆ ಸ್ಫೂರ್ತಿಯ ಚಿಲುಮೆಯಾಗಿದ್ದರು. ಪ್ರಖರ ಚಿಂತನೆ, ಜ್ಞಾನದಿಂದ ಸಮಾಜವನ್ನು ತಿದ್ದುವ ಅವರ ಸಂದೇಶಗಳು ಗಮನಾರ್ಹವಾಗಿವೆ. ವಿದ್ಯಾರ್ಥಿಗಳು ಸತತವಾಗಿ ಜ್ಞಾನ ಸಂಪಾದಿಸಬೇಕು ಎಂದರು.

ಸರ್ವ ಧರ್ಮಗಳ ಸಮ್ಮೇಳನದಲ್ಲಿ ವಿವೇಕಾನಂದರು ಮಾತನಾಡಿದ ಬಗ್ಗೆ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ. ವಿವೇಕಾನಂದ ಅವರು ಕರ್ಮ ಯೋಗ, ರಾಜ ಯೋಗ, ಜ್ಞಾನ ಯೋಗ, ಭಕ್ತಿ ಯೋಗದಂತಹ ಅನೇಕ ಕೃತಿಗಳನ್ನು ರಚಿಸಿದ್ದಾರೆ. ಸಾಧಕರು, ಮಹಾನ್ ನಾಯಕರ ಕುರಿತ ಕೃತಿಗಳನ್ನು ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಓದಬೇಕು ಎಂದು ಬಿ.ಕೆ. ರವಿಕುಮಾರ್ ಸಲಹೆ ನೀಡಿದರು.

ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಅಧ್ಯಕ್ಷ ಜಿ.ಬಂಗಾರು, ಮೈ ಭಾರತ್ ಕೇಂದ್ರದ ಸಹನ, ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯ ಬಿಎಡ್ ಕಾಲೇಜಿನ ಪ್ರಾಂಶುಪಾಲ ಪ್ರೊ.ಕೆ.ಸಿ.ಬಸವಣ್ಣ ಮಾತನಾಡಿದರು. ರಸಪ್ರಶ್ನೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಜೆಎಸ್‌ಎಸ್ ಬಿಎಡ್ ಕಾಲೇಜಿನ ಉಪನ್ಯಾಸಕರಾದ ಯೋಗೇಶ್, ಶಿವಶಂಕರ ರಾಜ ಅರಸ್, ಸಿದ್ದರಾಜು, ಶ್ರೀಧರ್, ಶಿವಕುಮಾರ್ ಇತರರಿದ್ದರು.

ಮದ್ಯದಂಗಡಿ ರದ್ದತಿಗೆ ಒತ್ತಾಯಿಸಿ ಪ್ರತಿಭಟನೆ



ಮದ್ಯದಂಗಡಿ ರದ್ದತಿಗೆ ಒತ್ತಾಯಿಸಿ ಭೋಗಾಪುರ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಜ.12– ತಾಲೂಕಿನ ಭೋಗಾಪುರ ಮುಖ್ಯ ರಸ್ತೆಯಲ್ಲಿ ಎಂಎಸ್‌ಐಎಲ್ ಅಂಗಡಿ ರದ್ದುಪಡಿಸುವಂತೆ ಒತ್ತಾಯಿಸಿ ಭೋಗಾಪುರ ಗ್ರಾಪಂ ವ್ಯಾಪ್ತಿಯ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಗ್ರಾಮದ ಗೇಟ್ ಬದಿ ಆರಂಭಿಸಲು ಸಿದ್ಧಗೊಂಡಿರುವ ಮದ್ಯದಂಗಡಿ ಮುಂಭಾಗ ಶಾಮಿಯಾನ ಹಾಕಿ ಪ್ರತಿಭಟನೆ ನಡೆಸಿ ಬೇಡ ಬೇಡ ಸಾರಾಯಿ ಅಂಗಡಿ ಎಂದು ಅಬಕಾರಿ ಇಲಾಖೆ, ಜಿಲ್ಲಾಡಳಿತ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮುಖಂಡ ಪು.ಶ್ರೀನಿವಾಸನಾಯಕ, ಎಪಿಎಂಸಿ ಮಾಜಿ ಅಧ್ಯಕ್ಷ ಡಿ.ನಾಗೇಂದ್ರ ಮಾತನಾಡಿ, ಭೋಗಾಪುರ ಮುಖ್ಯ ರಸ್ತೆಯಲ್ಲಿ ತೆರೆಯಲು ಉದ್ದೇಶಿರುವ ಎಂಎಸ್‌ಐಎಲ್ ಮದ್ಯದಂಗಡಿಯನ್ನು ರದ್ದುಪಡಿಸುವಂತೆ ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಅಧಿಕಾರಿಗಳು ಸನ್ನದುದಾರರ ಪರವಾಗಿ ಕೆಲಸ ಮಾಡುತ್ತಿದ್ದಾರೆ ಹೊರತು ಗ್ರಾಮಸ್ಥರಿಗೆ ಸ್ಪಂದಿಸುತ್ತಿಲ್ಲ ಕ್ಷೇತ್ರದ ಶಾಸಕರು, ಸಂಸದರು, ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಕೂಡ ಬೇಡ ಎಂದು ಹೇಳಿದ್ದಾರೆ. ಮದ್ಯದಂಗಡಿ ರದ್ದು ಪಡಿಸುವ ತನಕ ನಿರಂತರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

ಅಬಕಾರಿ ಡಿವೈಎಸ್ಪಿ ಜಯದೇವು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿ, ಕಳೆದ 6 ತಿಂಗಳ ಹಿಂದೆ ಮದ್ಯದಂಗಡಿ ಆರಂಭವಾಗಬೇಕಿತ್ತು ಸಾರ್ವಜನಿಕರ ದೂರಿನನ್ವಯ ಆರಂಭ ಮಾಡಿರಲಿಲ್ಲ. ಇಂದು ಗ್ರಾಮಸ್ಥರು ವಿರೋಧ ವ್ಯಕ್ತಪಡಿಸಿದ್ದೀರಿ. ಇದನ್ನು ಇಲಾಖೆಯ ಜಿಲ್ಲಾಧಿಕಾರಿಗಳಿಗೆ, ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಅಂಗಡಿ ರದ್ದುಪಡಿಸುವುದಾಗಿ ಭರವಸೆ ನೀಡಿದ ನಂತರ ಪ್ರತಿಭಟನಾನಿರತರು ಪ್ರತಿಭಟನೆ ಕೈ ಬಿಟ್ಟರು. ಈ ವೇಳೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಹನೂರಿಗೆ ಜಿಲ್ಲಾಧಿಕಾರಿ ಶ್ರೀರೂಪ ಭೇಟಿ

ಸಮಸ್ಯೆ ಬಗೆಹರಿಸುವಂತೆ ರೈತ ಮುಖಂಡರಿಂದ ಮನವಿ

ಹನೂರು, ಜ.12– ಇದೇ ಮೊದಲ ಬಾರಿಗೆ ಪಟ್ಟಣಕ್ಕೆ ಆಗಮಿಸಿದ ನೂತನ ಜಿಲ್ಲಾಧಿಕಾರಿ ಶ್ರೀರೂಪ ಅವರಿಗೆ ಸಮಸ್ಯೆ ಬಗೆಹರಿಸುವಂತೆ ರೈತ ಮುಖಂಡರು ಮನವಿ ಸಲ್ಲಿಸಿದರು.

ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿ ಗೃಹದಲ್ಲಿ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿದ ರೈತ ಮುಖಂಡರು, ಪಟ್ಟಣ ವ್ಯಾಪ್ತಿಯ ಉಲ್ಲೇಪುರ ಧ್ರುವ ಪೌಲ್ಟ್ರಿ ಫಾರಂನಲ್ಲಿ ಅನಧಿಕೃತವಾಗಿ 33 ಸಾವಿರ ಕೋಳಿಗಳನ್ನು ಸಾಕಣೆ ಮಾಡಲಾಗುತ್ತಿದೆ. ಇದರಿಂದ ಸುತ್ತಮುತ್ತಲ ರೈತರು ತಮ್ಮ ಜಮೀನಿನಲ್ಲಿ ಬೆಳೆ ಬೆಳೆಯಲು ಆಗುತ್ತಿಲ್ಲ. ಅಲ್ಲದೇ ದುರ್ವಾಸನೆಯಿಂದಾಗಿ ಜಮೀನಿಗೂ ತೆರಳಲು ಸಾಧ್ಯವಾಗದಂತಾಗಿದೆ. ಜೊತೆಗೆ ಸಮೀಪದಲ್ಲೇ ಏಕಲವ್ಯ ಹಾಗೂ ಮೊರಾರ್ಜಿ ವಸತಿ ಶಾಲೆಗಳು ಇರುವುದರಿಂದ ಸುತ್ತಮುತ್ತಲಿನ ಪ್ರದೇಶ ಅನೈರ್ಮಲ್ಯದಿಂದ ಕೂಡಿದ್ದು, ನೊಣಗಳ ಕಾಟ ಹೆಚ್ಚಾಗಿ ಜನ ಜಾನುವಾರು ಹೈರಾಣಾಗಿದ್ದಾರೆ. ಹೀಗಾಗಿ ಧ್ರುವ ಪೌಲ್ಟ್ರಿ ಫಾರಂ ತೆರವುಗೊಳಿಸುವಂತೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ ಎಂದು ರಾಜ್ಯ ರೈತ ಸಂಘ ಹಸಿರು ಸೇನೆ ತಾಲೂಕು ಘಟಕ ಅಧ್ಯಕ್ಷ ಮಾದಪ್ಪ ಹಾಗೂ ಜಿಲ್ಲಾ ಸಂಘದ ಕಾರ್ಯದರ್ಶಿ ವಿನೇಶ್ ಕುಮಾರ್, ಉಪಾಧ್ಯಕ್ಷ ಅಮೋಘ ಸೇರಿದಂತೆ ರೈತ ಮುಖಂಡರು ದೂರೆ ಇನ್ನಿತರು ದೂರು ಸಲ್ಲಿಸಿದರು.



ಜಿಲ್ಲಾಧಿಕಾರಿ ಶ್ರೀರೂಪ ಅವರಿಗೆ ರೈತ ಮುಖಂಡರು ಮನವಿ ಸಲ್ಲಿಸಿದರು.

ಈ ವೇಳೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಕರೆ ಮಾಡಿದ ಜಿಲ್ಲಾಧಿಕಾರಿಗಳು ಧ್ರುವ ಪೌಲ್ಟ್ರಿ ಫಾರಂ ಬಗ್ಗೆ ಸಂಪೂರ್ಣ ಮಾಹಿತಿ ನೀಡುವ ಜೊತೆಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ತಾಲೂಕು ಘಟಕ ಅಧ್ಯಕ್ಷ ಅಮ್ಜದ್ ಖಾನ್, ತಾಲೂಕಿನ ಜ್ವಲಂತ ಸಮಸ್ಯೆಗಳನ್ನು ಪರಿಶೀಲಿಸಿ. ಗಡಿಭಾಗ ಗೋಪಿನಾಥಂ ಅರಣ್ಯದಂಚಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ನಿವಾಸಿಗಳ ಮೇಲೆ ಅರಣ್ಯ ಅಧಿಕಾರಿಗಳು ದೌರ್ಜನ್ಯ ನಡೆಸುತ್ತಿದ್ದಾರೆ. ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಮೂಲ ಸೌಕರ್ಯ ಪಡೆಯಲು ಅರಣ್ಯ ಇಲಾಖೆ ಅಧಿಕಾರಿಗಳು ತೊಡಕುಂಟು ಮಾಡುತ್ತಿದ್ದಾರೆ. ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದೆ. ಈ ಸಂಬಂಧ 2 ಸಾವಿರ ರೈತ ಮುಖಂಡರು ಪಾದಯಾತ್ರೆ ಮೂಲಕ ಬೆಂಗಳೂರಿಗೆ ತೆರಳುತ್ತಿದ್ದೇವೆ ಎಂದ ಅಮ್ಜದ್, ಇಲ್ಲಿನ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹರಿಸುವಂತೆ ಮನವಿ ಸಲ್ಲಿಸಿದರು.

ನಾನು ಹೊಸದಾಗಿ ಬಂದಿರುವುದರಿಂದ ಹಂತ ಹಂತವಾಗಿ ಜಿಲ್ಲೆಯ ಸಮಸ್ಯೆಗಳನ್ನು ಪರಿಹರಿಸಲಾಗುವುದು ಎಂದು ಡಿಸಿ ಶ್ರೀರೂಪ ತಿಳಿಸಿದರು.

ಜಿಪಂ ಸಿಇಓ ಮೊನರೋತ್ ಅವರಿಗೆ ಭಾರತೀಯ ಕಿಸಾನ್ ಸಂಘಟನೆ ಜಿಲ್ಲಾ ಉಪಾಧ್ಯಕ್ಷ ಶಿವಲಿಂಗ ಪ್ರಸಾದ್ ಹಾಗೂ ಬಂಡಳ್ಳಿ ಸದಾಶಿವ ಅವರು, ಬಂಡಳ್ಳಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ. ಪಶು ಆಸ್ಪತ್ರೆಯಲ್ಲಿ ಮೂಲ ಸೌಲಭ್ಯಗಳಿಲ್ಲ. ಮಳೆ ಇಲ್ಲದೆ ಕೆರೆ ಕಟ್ಟೆಗಳು ಬರಿದಾಗಿವೆ. 1200 ಅಡಿ ಬೋರ್‌ವೆಲ್ ಕೊರೆಸಿದರೂ ನೀರು ಸಿಗುತ್ತಿಲ್ಲ. ಹೀಗಾಗಿ ಕೆರೆ ಕಟ್ಟೆಗಳಿಗೆ ನೀರು ತುಂಬಿಸಿ ಅಂತರ್ಜಲ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದರು.

ಈ ವೇಳೆ ತಹಸೀಲ್ದಾರ್ ಚೈತ್ರಾ ಹಾಗೂ ಹಾಗೂ ರೈತ ಮುಖಂಡರು ಉಪಸ್ಥಿತರಿದ್ದರು.

ಜ.26, ಓಂಕಾರ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ

ಭಕ್ತರಿಗೆ ಅಗತ್ಯ ಮೂಲ ಸೌಕರ್ಯ ಕಲ್ಪಿಸುವಂತೆ ಶಾಸಕರ ಸೂಚನೆ

ಬೇಗೂರು, ಜ.12– ಓಂಕಾರ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಜ.26ರಂದು ನಡೆಯುವ ಹಿನ್ನೆಲೆಯಲ್ಲಿ ಓಂಕಾರ ಸಿದ್ದೇಶ್ವರ ಸ್ವಾಮಿ ಶ್ರೇಯೋಭಿವೃದ್ಧಿ ಸೇವಾ ಸಮಿತಿ ವತಿಯಿಂದ ಜಾತ್ರೆ ಪೂರ್ವಭಾವಿ ಸಭೆ ದೇವಾಲಯದ ಆವರಣದಲ್ಲಿ ನಡೆಯಿತು.

ಸಭೆ ಉದ್ಘಾಟಿಸಿ ಮಾತನಾಡಿದ ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್, ಜಾತ್ರಾ ಮಹೋತ್ಸವಕ್ಕೆ ನಂಜನಗೂಡು ಮತ್ತು ಗುಂಡ್ಲುಪೇಟೆ ತಾಲೂಕುಗಳ 33 ಗ್ರಾಮಗಳ ಜನತೆ ಸೇರುವುದರಿಂದ ಜಾತ್ರೆಗೆ ಆಗಮಿಸುವ ಭಕ್ತರಿಗೆ ಮೂಲ ಸೌಕರ್ಯ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಾತ್ರಾ ಮಹೋತ್ಸವಕ್ಕೆ ನಾಲ್ಕೈದು ತೇರುಗಳು ಆಗಮಿಸುವುದರಿಂದ ತಿರುವಿನ ರಸ್ತೆಗಳಲ್ಲಿ ವಿದ್ಯುತ್ ಲೈನ್‌ಗಳನ್ನು ತೆಗೆದು ಹಾಕಿ ತೇರು ಸಂಚರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಚೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು. ಪೊಲೀಸ್ ಅಧಿಕಾರಿಗಳು ವಾಹನ ನಿಲುಗಡೆಗೆ ಸೂಕ್ತ ಸ್ಥಳ ನಿಗದಿಪಡಿಸಬೇಕು. ಅಹಿತಕರ ಘಟನೆ ನಡೆದಂತೆ ಸೂಕ್ತ ಬಂದೋಬಸ್ತ್ ಕೈಗೊಳ್ಳಬೇಕು ಎಂದರು.

ಬೇಗೂರು–ಹೊಸಪುರ ರಸ್ತೆಯಿಂದ ದೇವಸ್ಥಾನಕ್ಕೆ ಸಿಸಿ ರಸ್ತೆ ಮತ್ತು ಕಂದಾಯ ಇಲಾಖೆ ಅಧೀನದಲ್ಲಿರುವ ದೇವಸ್ಥಾನದ ಜಾಗವನ್ನು ಸಮಿತಿಗೆ ಖಾತೆ ಮಾಡಿಸಿ ಕೊಡುವುದಾಗಿ ತಿಳಿಸಿದ ಅವರು, ದೇವಾಲಯದ ಅಭಿವೃದ್ಧಿಗೆ ಸರ್ಕಾರದಿಂದ ವಿಶೇಷ ಅನುದಾನ ಕೊಡಿಸುವುದಾಗಿ ಭರವಸೆ ನೀಡಿದರು.

ತಹಸೀಲ್ದಾರ್ ತನ್ಮಯ್ ಮಾತನಾಡಿದರು. ಎಇಇ ಸಂಧ್ಯಾ, ಎಸ್‌ಐ ನವೀನ್, ಎಪಿಎಂಸಿ ಅಧ್ಯಕ್ಷ ನಾಗರಾಜು, ಸೇವಾ ಸಮಿತಿ ಅಧ್ಯಕ್ಷ ರಾಜು, ಸದಸ್ಯ ನೀಲಕಂಠಪ್ಪ, ರಾಜಪ್ಪ, ಅರೇಪುರ ರಾಜಪ್ಪ, ಗೌರಿಶಂಕರ, ದೊರೆಸ್ವಾಮಿ, ಅಂಕಯ್ಯ, ಪ್ರಕಾಶ್, ನಾಗರಾಜು, ಚಿನ್ನಸ್ವಾಮಿ, ಸಿದ್ದನಾಯ್ಕ, ಕಾರ್ಯದರ್ಶಿ ಪುಟ್ಟಣ್ಣ, ಗ್ರಾಪಂ ಅಧ್ಯಕ್ಷೆ ಮಂಜುಳಾ, ಉಪಾಧ್ಯಕ್ಷ ರವೀಶ್, ಬಸವರಾಜು ಇತರರಿದ್ದರು.



ಪೂರ್ವಭಾವಿ ಸಭೆಯನ್ನು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಉದ್ಘಾಟಿಸಿದರು.

ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬದ್ಧ

ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ವಿಶ್ವಾಸ



ಚಾಮುಂಡೇಶ್ವರಿ ಕ್ಷೇತ್ರದ ನಾಗವಾಲ ಗ್ರಾಮದಲ್ಲಿ 15 ಲಕ್ಷ ವೆಚ್ಚದ ಕೃಷಿ ಪತ್ತಿನ ಸಹಕಾರ ಸಂಘದ ಕಟ್ಟಡ ನಿರ್ಮಾಣಕ್ಕೆ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಗುದ್ದಲಿಪೂಜೆ ನೆರವೇರಿಸಿದರು. ಶಾಸಕ ಜಿ.ಟಿ.ದೇವೇಗೌಡ, ಜಿಪಂ ಮಾಜಿ ಅಧ್ಯಕ್ಷರಾದ ಕೆ.ಮರೀಗೌಡ, ಕೂರ್ಗಳ್ಳಿ ಮಹದೇವ, ಮುಖಂಡರಾದ ನಾಗವಾಲ ನರೇಂದ್ರ, ರಾಕೇಶ್ ಪಾಪಣ್ಣ ಇನ್ನಿತರರಿದ್ದಾರೆ.

ಮೈಸೂರು, ಜ.12– ಚಾಮುಂಡೇಶ್ವರಿ ಕ್ಷೇತ್ರದ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬದ್ಧರಾಗಿದ್ದು, ಕ್ಷೇತ್ರಕ್ಕೆ ಹೆಚ್ಚಿನ ಅನುದಾನವನ್ನು ನೀಡಲಿದ್ದಾರೆಂದು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ತಿಳಿಸಿದರು.

ಚಾಮುಂಡೇಶ್ವರಿ ಕ್ಷೇತ್ರದ ನಾಗವಾಲ ಗ್ರಾಮದಲ್ಲಿ 15 ಲಕ್ಷ ವೆಚ್ಚದ ಕೃಷಿ ಪತ್ತಿನ ಸಹಕಾರ ಸಂಘದ ಕಟ್ಟಡ ನಿರ್ಮಾಣಕ್ಕೆ ಗುದ್ದಲಿಪೂಜೆ ಹಾಗೂ 40 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣವಾಗಿರುವ ಬಸವ ಭವನವನ್ನು ಉದ್ಘಾಟಿಸಿ ಮಾತನಾಡಿದ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಚಾಮುಂಡೇಶ್ವರಿ ಕ್ಷೇತ್ರ ರಾಜಕೀಯವಾಗಿ ಮರುಜನ್ಮ ನೀಡಿದ ಕ್ಷೇತ್ರವಾಗಿದ್ದು 2 ಬಾರಿ ಮುಖ್ಯಮಂತ್ರಿಯಾಗಲು ಕಾರಣವಾಗಿದೆ. ಆದ್ದರಿಂದ ಚಾಮುಂಡೇಶ್ವರಿ ಕ್ಷೇತ್ರದ ಜನರ ಋಣ ತೀರಿಸಲು ಸಾಧ್ಯವಿಲ್ಲ. ನಾಗವಾಲ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಜನರಿಗೆ ಅನುಕೂಲವಾಗಲೆಂದು ನಾಗವಾಲವನ್ನು ಬೃಹತ್ ಮೈಸೂರು ಮಹಾನಗರಪಾಲಿಕೆಗೆ ಸೇರಿಸಿದ್ದೇವೆ. ಎಐಸಿಸಿ ಅಧ್ಯಕ್ಷ ಮಲ್ಲಿ ಕಾರ್ಜುನ ಖರ್ಗೆಯವರು ಬಸವಭವನ ನಿರ್ಮಾಣಕ್ಕೆ 35 ಲಕ್ಷ ರೂ. ಅನುದಾನ ನೀಡಿದ್ದಾರೆ. ಶಾಸಕರಾದ ಜಿ.ಟಿ. ದೇವೇಗೌಡರು ಸಿದ್ದರಾಮಯ್ಯ ಅವರ ಒಡನಾಡಿಗಳಾಗಿದ್ದು, ಕ್ಷೇತ್ರದ ಅಭಿವೃದ್ಧಿಯ ವಿಚಾರದಲ್ಲಿ ಯಾವುದೇ ರಾಜಕೀಯ ಮಾಡಿಲ್ಲ ಎಂದ ಅವರು, ಕಾಂಗ್ರೆಸ್ ಮುಖಂಡರಾದ ನರೇಂದ್ರ ಅವರ ತೀವ್ರ ಆಸಕ್ತಿಯಿಂದ ನಾಗವಾಲ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಹೊಂದುತ್ತಿದೆ. ನಿಮ್ಮ ಪ್ರೀತಿ ಅಭಿಮಾನ ಸಿದ್ದರಾಮಯ್ಯನವರು ಹಾಗೂ ನನ್ನ ಮೇಲೆ ಇರಲಿ ಎಂದು ಮನವಿ ಮಾಡಿದರು.

ಶಾಸಕ ಜಿ.ಟಿ.ದೇವೇಗೌಡರು ಮಾತನಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಚಾಮುಂಡೇಶ್ವರಿ ಕ್ಷೇತ್ರದಿಂದ ಗೆದ್ದು ನಿರಂತರವಾಗಿ 2 ಬಾರಿ ಉಪಮುಖ್ಯಮಂತ್ರಿ, 2 ಬಾರಿ ವಿರೋಧಪಕ್ಷದ ನಾಯಕ, 2 ಬಾರಿ ಮುಖ್ಯಮಂತ್ರಿಯಾಗಿ ದಾಖಲೆ ನಿರ್ಮಿಸಿ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಕಾರಣರಾಗಿದ್ದಾರೆ. ನಾಗವಾಲ ಗ್ರೇಟರ್ ಮೈಸೂರಿಗೆ ಸೇರಿಕೊಂಡಿದೆ. ಎಲ್ಲರಿಗೂ ಚಾಮುಂಡೇಶ್ವರಿ ಒಳ್ಳೆಯದು ಮಾಡಲಿ ಎಂದು ಹೇಳಿದರು.


ಸಮಾರಂಭದಲ್ಲಿ ಜಿಪಂ ಮಾಜಿ ಅಧ್ಯಕ್ಷರಾದ ಕೆ.ಮರೀಗೌಡ, ಕೂರ್ಗಳ್ಳಿ ಮಹದೇವ, ಜಿಪಂ ಮಾಜಿ ಸದಸ್ಯರಾದ ರಾಕೇಶ್ ಪಾಪಣ್ಣ, ಅರುಣ್‌ಕುಮಾರ್, ಗ್ರಾಪಂ ಅಧ್ಯಕ್ಷೆ ಕಾಮಾಕ್ಷಮ್ಮ, ಎಂಸಿಡಿಸಿಸಿ ಬ್ಯಾಂಕ್ ನಿರ್ದೇಶಕ ಕೆಂಚಪ್ಪ, ಗ್ರಾಪಂ ಮಾಜಿ ಅಧ್ಯಕ್ಷ ನಾಗವಾಲ ನರೇಂದ್ರ ಮಹೇಶ್, ಆನಂದೂರು ರಾಮೇಗೌಡ, ಮುಖಂಡರಾದ ಕರೀಗೌಡ, ಸುರೇಶ್, ಡಾ.ಪ್ರಕಾಶ್, ಕುಮಾರ್, ಚಿಕ್ಕಣ್ಣ, ರಾಮಸ್ವಾಮಿ, ಮಹಾದೇವ, ಹರೀಶ್ ಮೊಗಣ್ಣ ಯದುಕುಮಾರ್, ಮುಖ್ಯಮಂತ್ರಿಗಳ ವಿಶೇಷಾಧಿಕಾರಿ ವಿಜಯ್, ಪ್ರದೀಪ್ ಕುಮಾರ್, ನಾಗರಾಜ್ ಹಾಜರಿದ್ದರು.

'ನಶೆ ಮುಕ್ತ ಮೈಸೂರು' ಮಾಡಲು ಆಗ್ರಹಿಸಿ ಕನ್ನಡ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ

ಮೈಸೂರು, ಜ.12(ಜಿಎ)–ಮೈಸೂರು ನಗರದಲ್ಲಿ ಹೆಚ್ಚಾಗುತ್ತಿರುವ ಅಪರಾಧ ಪ್ರಕರಣಕ್ಕೆ ಕಾರಣವಾಗಿರುವ ಮಾದಕ ವಸ್ತುಗಳ ಅಕ್ರಮ ಮಾರಾಟವನ್ನು ತಡೆದು 'ನಶೆ ಮುಕ್ತ ಮೈಸೂರು' ಮಾಡಬೇಕೆಂದು ಆಗ್ರಹಿಸಿ ಕನ್ನಡ ಸಂಘಟನೆಗಳ ಒಕ್ಕೂಟದ ವತಿಯಿಂದ ಮೈಸೂರಿನಲ್ಲಿ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಅಗ್ರಹಾರ ವೃತ್ತದ ಬಳಿ ಪ್ರತಿಭಟನಾ ಧರಣಿ ನಡೆಸಿದ ಕನ್ನಡ ಪರ ಹೋರಾಟಗಾರರು, ಮಾದಕ ವಸ್ತುಗಳ ಪೂರೈಕೆ ಹಾಗೂ ಬಳಕೆ ವಿರುದ್ಧ ವಿವಿಧ ಭಿತ್ತಿ ಪತ್ರಗಳನ್ನು ಪ್ರದರ್ಶಿಸಿದರು.

ಇತ್ತೀಚಿನ ದಿನಗಳಲ್ಲಿ ಮೈಸೂರು ನಗರದಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು ಹಾಡು ಹಗಲೇ ಕೊಲೆ ಸುಲಿಗೆ ನಡೆಯುತ್ತಿದೆ. ದಸರಾ ವೇಳೆ ಅಮಾಯಕ ಹೆಣ್ಣು ಮಗುವನ್ನು ಅಪಹರಿಸಿ ಅತ್ಯಾಚಾರ ಮಾಡಿ ಕೊಲೆ ಮಾಡಲಾಗಿದೆ. ಹೊರ ರಾಜ್ಯದಿಂದ ಬಂದು ಮಾದಕ ವಸ್ತುಗಳ ತಯಾರಿಕಾ ಘಟಕಗಳನ್ನು ಸ್ಥಾಪಿಸಿದರೂ ಇಲ್ಲಿನ ಪೊಲೀಸರ ಅರಿವಿಗೆ ಬಂದಿಲ್ಲ. ಅರಮನೆ ಮುಂಭಾಗ ಬಲೂನ್ ಗ್ಯಾಸ್ ಸಿಲೆಂಡರ್ ಸ್ಫೋಟಗೊಂಡು ಮೂವರು ಮೃತಪಟ್ಟಿದ್ದರು. ಇದರ ನೈಜ ಕಾರಣ ಇಂದಿಗೂ ತಿಳಿದು ಬಂದಿಲ್ಲ ಎಂದು ಪ್ರತಿಭಟನಾಕಾರರು ಆಪಾದಿಸಿದರು. ಇತ್ತೀಚೆಗೆ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿ ಮೇಲೆಯೇ ಮಾದಕ ವ್ಯಸನಿ ಯುವಕರು ಹಲ್ಲೆ ನಡೆಸಿದ್ದಾರೆ. ಇದಕ್ಕೆಲ್ಲ ಮಾದಕ ವಸ್ತುಗಳ ಮಾಫಿಯಾ ಕಾರಣ. ಪ್ರಭಾವಿ ವ್ಯಕ್ತಿಗಳೇ ಇಂತಹ ಧಂದೆಗಳಲ್ಲಿ ತೊಡಗಿರುವ ಶಂಕೆ ಇದೆ. ಆದ್ದರಿಂದ ಸರ್ಕಾರ ಮೈಸೂರು ನಗರವನ್ನು ನಶೆ ಮುಕ್ತ ಮೈಸೂರು ಮಾಡಲು ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.



'ನಶೆ ಮುಕ್ತ ಮೈಸೂರು' ಮಾಡಬೇಕೆಂದು ಆಗ್ರಹಿಸಿ ಕನ್ನಡ ಸಂಘಟನೆಗಳ ಒಕ್ಕೂಟದ ವತಿಯಿಂದ ಮೈಸೂರಿನ ಅಗ್ರಹಾರ ವೃತ್ತದಲ್ಲಿ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಕನ್ನಡ ಕ್ರಾಂತಿದಳದ ರಾಜ್ಯಾಧ್ಯಕ್ಷ ತೇಜಸ್ವಿ ನಾಗಲಿಂಗಸ್ವಾಮಿ, ಲಾರಿ ಮಾಲೀಕರ ಸಂಘದ ಅಧ್ಯಕ್ಷ ಕೋದಂಡರಾಮು, ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಡಾ.ಎಂ.ಲಿಂಗರಾಜು, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ರಕ್ಷಣಾ ಸಮಿತಿ ರಾಜ್ಯಾಧ್ಯಕ್ಷೆ ವಿ.ಪಿ.ಸುಶೀಲ, ಗ್ರಾಪಂ ಮಾಜಿ ಸದಸ್ಯೆ ಕಮಲ ನಟರಾಜು, ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಬಾಲಕೃಷ್ಣ, ಕನ್ನಡಾಂಬೆ ರಕ್ಷಣಾ ವೇದಿಕೆ ಅಧ್ಯಕ್ಷ ಬಿ.ಬಿ. ರಾಜಶೇಖರ್, ನಾಲಾಬೀದಿ ರವಿ, ಕಾವಲು ಪಡೆಯ ಅಧ್ಯಕ್ಷ ಮೋಹನ್‌ಕುಮಾರ್ ಗೌಡ, ಕನ್ನಡ ಕಲಾಕೂಟ ಅಧ್ಯಕ್ಷ ಎಂ.ಚಂದ್ರಶೇಖರ್, ಕರುನಾಡ ಯೋಗೇಶ್ ಮತ್ತಿತರರು ಉಪಸ್ಥಿತರಿದ್ದರು.

ಧರ್ಮಾತೀತ, ಜಾತ್ಯಾತೀತ ರಂಗಭೂಮಿ ನಮ್ಮ ಸಮಾಜವನ್ನು ಒಗ್ಗೂಡಿಸುತ್ತದೆ

ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಹಿರಿಯ ರಂಗಕರ್ಮಿ ಬಸವಲಿಂಗಯ್ಯ ಅಭಿಮತ



ಸಂಗೀತ ವಿವಿಯಲ್ಲಿ ನಡೆದ ಅಂತರ ರಾಷ್ಟ್ರೀಯ ಸಮ್ಮೇಳನವನ್ನು ಹಿರಿಯ ರಂಗಕರ್ಮಿ ಸಿ.ಬಸವಲಿಂಗಯ್ಯ ಉದ್ಘಾಟಿಸಿದರು.

ಮೈಸೂರು, ಜ.12(ಎಂಕೆ)– ಧರ್ಮಾತೀತ, ಜಾತ್ಯಾತೀತವಾಗಿರುವ ರಂಗಭೂಮಿಯು ಸಂವಿಧಾನ ಪೀಠಿಕೆಯ 'ವಿ ದ ಪೀಪಲ್ ಆಫ್ ಇಂಡಿಯಾ...' ಪೀಠಿಕೆಗೆ ಧ್ವನಿಗೂಡಿಸುವ ಮೂಲಕ ಸಮಾಜವನ್ನು ಒಗ್ಗೂಡಿಸುತ್ತದೆ ಎಂದು ಹಿರಿಯ ರಂಗಕರ್ಮಿ ಸಿ.ಬಸವಲಿಂಗಯ್ಯ ಹೇಳಿದರು.

ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ ಸಹಕಾರದೊಂದಿಗೆ ಆಯೋಜಿಸಿದ್ದ ರಂಗಭೂಮಿ ಮತ್ತು ಪ್ರದರ್ಶಕ ಕಲೆಗಳು ಕುರಿತು ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಕಲೆಗಳಲ್ಲಿ ಭೇದವಿಲ್ಲ. ರಂಗಭೂಮಿಯಂತೂ ಧರ್ಮಾತೀತ, ಜಾತ್ಯತೀತ ಹಾಗೂ ದೇಶಾತೀತ ಎಂದರು.

ದೇಶದಲ್ಲಿ ಹಲವು ಭಾಷೆ, ಪ್ರದರ್ಶಕ ಕಲೆಗಳಿವೆ. ನಮ್ಮ ಸಂಸ್ಕೃತಿಯ ಹಿರಿಮೆಯೇ ಇವುಗಳ ಮಿಶ್ರಣದಲ್ಲಿದೆ. ಎಲ್ಲಾ ಸಮಯದಲ್ಲೂ ಬೆಳಕನ್ನೇ ಶ್ರೇಷ್ಠವಾಗಿ ಕಾಣಲು ಸಾಧ್ಯವಿಲ್ಲ. ಬೆಳಕು ಸಮಾಜದಲ್ಲಿನ ಅಸಮಾನತೆ ತೋರುತ್ತದೆ. ಕತ್ತಲು ಎಲ್ಲವನ್ನೂ ಒಗ್ಗೂಡಿಸುತ್ತದೆ ಎಂಬ ಚಿಂತನೆಯೂ ಅಗತ್ಯವಾಗಿದ್ದು, ರಂಗಭೂಮಿ ಅಥವಾ ಕಲಾ ಕ್ಷೇತ್ರವು ಇಂತಹ ಆಲೋಚನೆಗೆ ಪ್ರೇರೇಪಿಸುತ್ತದೆ ಎಂದು ತಿಳಿಸಿದರು.


ಮಧ್ಯಪ್ರದೇಶದ ವಾಣಿಜ್ಯ ತೆರಿಗೆ ಇಲಾಖೆ ಆಯುಕ್ತ ಎಸ್.ಧನರಾಜು ಮಾತನಾಡಿ, ಕಲೆ, ಸಾಹಿತ್ಯ ನಮ್ಮನ್ನು ಒಗ್ಗೂಡಿಸುತ್ತದೆ. ದೇಶದ ವೈವಿಧ್ಯತೆ ಉಳಿಸುವುದು, ಇತರರ ವೈವಿಧ್ಯತೆ ಗೌರವಿಸುವುದು ನಮ್ಮ ಕರ್ತವ್ಯವಾಗಬೇಕು ಎಂದು ಪ್ರತಿಪಾದಿಸಿದರು.

ಸಂಗೀತ ವಿವಿ ಕುಲಪತಿ ಪ್ರೊ.ನಾಗೇಶ್ ವಿ.ಬೆಟ್ಟಕೋಟೆ ಮಾತನಾಡಿ, ಸಂಗೀತ ವಿವಿಯು ಸಂಶೋಧನೆಯಲ್ಲಿ ಹೊಸ ಆಯಾಮ ಕಂಡುಕೊಳ್ಳುವ ನಿಟ್ಟಿನಲ್ಲಿ 62 ದೇಶಗಳೊಂದಿಗೆ ಸಂಪರ್ಕ ಹೊಂದಿರುವ ಅಮೆರಿಕಾದ ಬೇಲರ್ ವಿಶ್ವವಿದ್ಯಾಲಯ ಹಾಗೂ ಸಂಗೀತ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡು ಅಂತರ ರಾಷ್ಟ್ರೀಯ ಸಮ್ಮೇಳನ ಆಯೋಜನೆ ಮಾಡಿದ್ದೇವೆ ಎಂದು ತಿಳಿಸಿದರು.

ಅಮೆರಿಕದ ಬೇಲರ್ ವಿಶ್ವವಿದ್ಯಾಲಯದ ವಸ್ತ್ರ ವಿನ್ಯಾಸಕಾರ್ತಿ ಪ್ರೊ.ಸಾರಾ ಮೋಷರ್, ವೇದಿಕೆ ಅಧ್ಯಕ್ಷ ರಾಜೇಶ್ ಹೆಚ್.ತಲಕಾಡು, ಸಂಗೀತ ವಿವಿ ಪರೀಕ್ಷಾಂಗ ಕುಲಸಚಿವ ಪ್ರೊ. ಎಂ.ಜಿ.ಮಂಜುನಾಥ್ ಮತ್ತಿತರರಿದ್ದರು.

ಆರ್ಥಿಕ ಕಾರಿಡಾರ್‌ಗೆ 4 ಗಿನ್ನಿಸ್ ದಾಖಲೆ: ಚಂದ್ರಬಾಬು ನಾಯ್ಡುಗೆ ನಿತಿನ್ ಗಡ್ಕರಿ ಅಭಿನಂದನೆ

ನವದೆಹಲಿ: ಗಿನ್ನಿಸ್ ವಿಶ್ವ ದಾಖಲೆ ಕಾರ್ಯಕ್ರಮದಲ್ಲಿ ವರ್ಚುವಲ್ ಆಗಿ ಮಾತನಾಡಿದ ಗಡ್ಕರಿ, ಶ್ರೀ ಸತ್ಯ ಸಾಯಿ ಜಿಲ್ಲೆಯಲ್ಲಿ ಕಾಮಗಾರಿ ನಡೆಯುತ್ತಿದ್ದ ವೇಳೆ ಸತ್ಯ ಸಾಯಿಬಾಬಾ ಅವರ ಆಶೀರ್ವಾದದೊಂದಿಗೆ ವಿಶ್ವ ದಾಖಲೆಗಳು ಸೃಷ್ಟಿಯಾದವು. ಚಂದ್ರಬಾಬು ನಾಯ್ಡು ಸೇರಿದಂತೆ ಕಾರಿಡಾರ್ ನಿರ್ಮಾಣದ ವೇಳೆ ಸಹಕರಿಸಿದ ಎಲ್ಲರಿಗೂ ಅಭಿನಂದನೆಗಳು ಎಂದರು.



ನಾವೀನ್ಯ ತಂತ್ರಗಳನ್ನು ಅಳವಡಿಸಿಕೊಳ್ಳುತ್ತ ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳದೇ, ವೇಗವಾಗಿ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲು ಕೇಂದ್ರವು ನಿರಂತರವಾಗಿ ಶ್ರಮಿಸುತ್ತಿದೆ ಎಂದರು. ಎನ್‌ಎಚ್ 544 ಜಿ ಆರ್ಥಿಕ ಕಾರಿಡಾರ್‌ನಲ್ಲಿ, 29 ಲೇನ್ ಕಿ.ಮೀ ಉದ್ದದ ರಸ್ತೆ ನಿರ್ಮಾಣದ ವೇಳೆ ಹೆಚ್ಚು ಸಮಯ ನಿರಂತರ ಕಾಮಗಾರಿ ಹಾಗೂ 24 ಗಂಟೆಗಳಲ್ಲಿ 10,600 ಟನ್ ಬಿಟುಮಿನಸ್ ಕಾಂಕ್ರೀಟ್ ಹಾಕುವ ಮೂಲಕ ಕಳೆದ ಜ.6ರಂದು ಎರಡು ದಾಖಲೆಗಳನ್ನು ನಿರ್ಮಿಸಲಾಯಿತು.

ಉದ್ಯಮಿ ಮೋಹಿಯುದ್ದೀನ್‌ಗೆ ಸನ್ಮಾನ...



ಜಯಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ 2.50 ಲಕ್ಷ ರೂ. ವೆಚ್ಚದಲ್ಲಿ ಆಟಿಕೆಗಳನ್ನು ಅಳವಡಿಸಿಕೊಟ್ಟ ಉದ್ಯಮಿ ಮೋಹಿಯುದ್ದಿನ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ನಿವೃತ್ತರಾದ ಶಿಕ್ಷಕರನ್ನು ಸನ್ಮಾನಿಸಲಾಯಿತು. ಸಮಾಜ ಸೇವಕ ಎಸ್.ಶ್ರೀಕಾಂತ್, ಕೆಎಎಸ್ ಅಧಿಕಾರಿ ಬರಡನಪುರ ಬಸವರಾಜು, ಶಿಕ್ಷಕರ ಸಂಘದ ಕಾರ್ಯದರ್ಶಿ ಸಾಲುಂಡಿ ದೊರೆಸ್ವಾಮಿ, ಮುಖಂಡರಾದ ಜವರನಾಯಕ, ಪಿಡಿಓ ಬಸವಣ್ಣ, ಜಯಪುರ ಗ್ರಾಪಂ ಅಧ್ಯಕ್ಷ ಎಂ.ಮಾದೇವಯ್ಯ, ಸದಸ್ಯರಾದ ಎಂ.ನಾಗರಾಜು, ರೇಣುಕಾ, ಬೈರೇಶ್, ಕಾರ್ಯದರ್ಶಿ ವೈ.ಕೆ.ಅನ್ನಪೂರ್ಣ, ಇಸಿಓ ಮಂಜುನಾಥ್, ಸಿಆರ್‌ಪಿ ಲಲಿತಾ, ಎಸ್‌ಡಿಎಂಸಿ ಅಧ್ಯಕ್ಷ ಬಾಲಸುಬ್ರಮಣ್ಯ, ಉಪಾಧ್ಯಕ್ಷೆ ಅಂಜಲಿ, ಉರ್ದು ಶಾಲೆ ಎಸ್‌ಡಿಎಂಸಿ ಅಧ್ಯಕ್ಷ ಸಯ್ಯದ್ ಸಮಿವುಲ್ಲಾ, ರಾಘವೇಂದ್ರ ವಿದ್ಯಾಪೀಠ ಪ್ರೌಢಶಾಲೆ ಮುಖ್ಯಶಿಕ್ಷಕ ಬಿ.ಸಿದ್ಧರಾಮು, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಪ್ರಭಾರ ಮುಖ್ಯ ಶಿಕ್ಷಕ ಕಿರಣ್‌ಕುಮಾರ್, ಜಯಪುರ ಕ್ಲಸ್ಟರ್ ಶಾಲೆಗಳ ಶಿಕ್ಷಕರು ಉಪಸ್ಥಿತರಿದ್ದರು.

ಅಭಿವೃದ್ಧಿ ಕಾಮಗಾರಿಗೆ ಚಾಲನೆ...



ಮೈಸೂರಿನ ವಾರ್ಡ್ ಸಂಖ್ಯೆ 25 ಹಾಗೂ 26ರಲ್ಲಿ 1 ಕೋಟಿ 35 ಲಕ್ಷ ರೂ.ಅನುದಾನದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಗುದ್ದಲಿ ಪೂಜೆ ನೆರವೇರಿಸಿದರು.

ಬಂಗಾಳದಲ್ಲಿ 2 ಶಂಕಿತ ನಿಫಾ ವೈರಸ್ ಪ್ರಕರಣ ಪತ್ತೆ

ಕೋಲ್ಕತ್ತಾ: ಪಶ್ಚಿಮ ಬಂಗಾಳದ ಬರಾಸತ್ ಆಸ್ಪತ್ರೆಯಲ್ಲಿ 2 ಶಂಕಿತ ನಿಫಾ ವೈರಸ್ ಪ್ರಕರಣಗಳು ಪತ್ತೆಯಾಗಿದೆ.

ಈ ಬಗ್ಗೆ ಜನರಲ್ಲಿ ಆತಂಕ ಹೆಚ್ಚಿದ ಬೆನ್ನಲ್ಲೇ ಪರಿಸ್ಥಿತಿ ಅವಲೋಕಿಸಲು ಬಂಗಾಳ ರಾಜ್ಯ ಸರ್ಕಾರದ ನಿಯೋಗ ಸೋಮವಾರ ಆಸ್ಪತ್ರೆಗೆ ಭೇಟಿ ಕೊಟ್ಟಿತು. ಜೊತೆಗೆ ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು ಕರ್ತವ್ಯ ನಿರ್ವಹಿಸುವಂತೆ ವೈದ್ಯರಿಗೆ ಸೂಚನೆ ನೀಡಲಾಯಿತು.

ವೈರಸ್ ಪತ್ತೆಯಾದ ಬೆನ್ನಲ್ಲೇ ಕೇಂದ್ರ ಆರೋಗ್ಯ ಕಾರ್ಯದರ್ಶಿಗಳು, ಪಶ್ಚಿಮ ಬಂಗಾಳ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿ ಅವರೊಂದಿಗೆ ಚರ್ಚಿಸಿದ್ದು, ಪರಿಸ್ಥಿತಿಗಳನ್ನ ಗಮನಿಸಿ ಕ್ರಮ ಕೈಗೊಳ್ಳುವಂತೆ ಹೇಳಿದ್ದಾರೆ.

ತಂತ್ರಜ್ಞಾನದಿಂದ ಶೇ.50ರಷ್ಟು ಹೃದ್ರೋಗ ಶಸ್ತ್ರಚಿಕಿತ್ಸೆ ಸುರಕ್ಷಿತ ನಿರ್ವಹಣೆ

ಜಯದೇವ ಹೃದ್ರೋಗ ಸಂಸ್ಥೆ ನಿರ್ದೇಶಕ ಡಾ.ದಿನೇಶ್ ಅಭಿಮತ



ಮೈಸೂರಲ್ಲಿ ಆಯೋಜಿಸಿದ್ದ ಮೈಸೂರು ವಾಲ್ವ್– 2.0 ವಿಚಾರ ಸಂಕಿರಣವನ್ನು ಜಯದೇವ ಹೃದ್ರೋಗ–ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ದಿನೇಶ್ ಉದ್ಘಾಟಿಸಿದರು.

ಮೈಸೂರು,ಜ.12(ಎಂಟಿವೈ)–ತಂತ್ರಜ್ಞಾನ ಅಳವಡಿಕೆಯಿಂದಾಗಿ ಪ್ರಸ್ತುತ ಶೇ.50ರಷ್ಟು ಹೃದ್ರೋಗ ಶಸ್ತ್ರಚಿಕಿತ್ಸೆಗಳನ್ನು ಸರಳ ಹಾಗೂ ರೋಗಿಗೆ ಹೆಚ್ಚು ತೊಡಕಾಗದಂತೆ ನಿರ್ವಹಿಸಲು ಸಾಧ್ಯವಾಗಿದೆ ಎಂದು ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಬಿ.ದಿನೇಶ್ ತಿಳಿಸಿದ್ದಾರೆ.

ಕಾರ್ಡಿಯಾಲಜಿ ಸೊಸೈಟಿ ಆಫ್ ಇಂಡಿಯಾ ಮೈಸೂರು ಶಾಖೆ ವತಿಯಿಂದ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಮೈಸೂರು ವಾಲ್ವ್– 2.0 ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ವಿಜ್ಞಾನ ಮತ್ತು ತಂತ್ರಜ್ಞಾನ ಬೆಳೆದಂತೆ ಕನಿಷ್ಠ ಆಕ್ರಮಣಕಾರಿ ವಿಧಾನಗಳು ಚಾಲ್ತಿಗೆ ಬರುತ್ತಿವೆ. ಹೃದಯದ ಟ್ರಾನ್ಸ್‌ಕ್ಯಾಥೆಟರ್ ಕವಾಟ ಬದಲಾವಣೆ ಶಸ್ತ್ರಚಿಕಿತ್ಸೆಗಳಿಗೆ ಇದು ಅನುಕೂಲವಾಗಿದೆ.

ಈ ತಂತ್ರಜ್ಞಾನಗಳು ಚಿಕ್ಕ ಛೇದನಗಳ ಮೂಲಕ ಶಸ್ತ್ರಚಿಕಿತ್ಸೆ ಮಾಡಲು ಅನುವು ಮಾಡಿಕೊಟ್ಟು, ನೋವು, ರಕ್ತಸ್ರಾವ, ಚೇತರಿಕೆ ಸಮಯ ಮತ್ತು ಆಸ್ಪತ್ರೆಯಲ್ಲಿ ಉಳಿಯುವ ಅವಧಿಯನ್ನು ಗಣನೀಯವಾಗಿ ಕಡಿಮೆ ಮಾಡಿವೆ. ಇದಲ್ಲದೇ ಇತ್ತೀಚೆಗೆ ಕೃತಕ ಬುದ್ಧಿಮತ್ತೆ ಬಳಕೆಯು ಶಸ್ತ್ರಚಿಕಿತ್ಸೆಗೂ ಮುನ್ನ ಸಿದ್ಧತೆ ಮಾಡಿಕೊಳ್ಳುವುದು, ರೋಗಿಯ ಅಪಾಯ ಮೌಲ್ಯಮಾಪನ, ಶಸ್ತ್ರಚಿಕಿತ್ಸೆಯ ಸಮಯದಲ್ಲಿ ನಿರ್ಧಾರ ತೆಗೆದುಕೊಳ್ಳುವಿಕೆ ಹಾಗೂ ನಂತರದ ಫಲಿತಾಂಶಗಳ ಮುನ್ಸೂಚನೆಯಲ್ಲಿ ಅತ್ಯಂತ ಉಪಯುಕ್ತವಾಗಿದೆ ಎಂದು ತಿಳಿಸಿದರು.

ಆಧುನಿಕ ತಂತ್ರಜ್ಞಾನಗಳಿಂದಾಗಿಯೇ ಇಂದಿನ ಸಂಕೀರ್ಣ ಹೃದಯ ಶಸ್ತ್ರಚಿಕಿತ್ಸೆಗಳು (ವಾಲ್ವ್ ಬದಲಾವಣೆ, ಬೈಪಾಸ್, ಕಾಂಜೆನಿಟಲ್ ದೋಷ ಸರಿಪಡಿಸುವಿಕೆ) ಇಷ್ಟು ಯಶಸ್ವಿಯಾಗಲು ಸಾಧ್ಯವಾಗಿದೆ. ಹೀಗಾಗಿ ತಾಂತ್ರಿಕತೆ ಹೃದ್ರೋಗ ಶಸ್ತ್ರಚಿಕಿತ್ಸೆಯಲ್ಲಿ ಕೇವಲ ಸಹಾಯಕವಲ್ಲ, ಅತ್ಯಗತ್ಯ ಘಟಕವಾಗಿ ಪರಿಣಮಿಸಿದೆ ಎಂದರು.

ಬಳಿಕ ಡಾ.ಎಂ.ಜಯರಂಗನಾಥ್ ಕಥೆಟರ್ ಪಲ್ಮನರಿ ವಾಲ್ವ್ ಶಸ್ತ್ರಚಿಕಿತ್ಸೆ ಕುರಿತು ಕೆಲ ಅಗತ್ಯ ಸಲಹೆ ಮತ್ತು ಮಾರ್ಗದರ್ಶನ ನೀಡಿದರು. ಬೆಂಗಳೂರು, ಚೆನ್ನೈ, ಕ್ಯಾಲಿಕಟ್, ಕೊಯಮತ್ತೂರು ಮತ್ತು ದೆಹಲಿ ಸೇರಿದಂತೆ ದೇಶದ ನಾನಾ ಭಾಗಗಳಿಂದ ತಜ್ಞರು ಕಾರ್ಯಕ್ರಮದಲ್ಲಿ ಭಾಗವಹಿಸಿ, ತಮ್ಮ ಅನುಭವ ಹಾಗೂ ಪರಿಣಿತಿ ಹಂಚಿಕೊಂಡರು. ಚೆನ್ನೈನ ಕಾವೇರಿ ಆಸ್ಪತ್ರೆಯ ಹಿರಿಯ ಇಂಟರ್‌ವೆನ್ಷನಲ್ ಕಾರ್ಡಿಯಾಲಜಿಸ್ಟ್ ಮತ್ತು ಸ್ಟ್ರಕ್ಚರಲ್ ಹಾರ್ಟ್ ಸ್ಪೆಷಲಿಸ್ಟ್ ಡಾ.ಅನಂತರಾಮನ್, ಜಯದೇವ ಆಸ್ಪತ್ರೆಯ ಹೃದ್ರೋಗ ತಜ್ಞರಾದ ಡಾ.ವೀಣಾ ನಂಜಪ್ಪ, ಮಣಿಪಾಲ್ ಆಸ್ಪತ್ರೆ ಕನ್ಸಲ್ಟೆಂಟ್ ಕಾರ್ಡಿಯಾಲಜಿಸ್ಟ್ ಡಾ.ಶಶಿರೇಖಾ, ಹಿರಿಯ ಹೃದ್ರೋಗ ತಜ್ಞ ಡಾ.ಆರ್.ಕೇಶವ ಇತರರು ಇದ್ದರು.

ಪಿಹೆಚ್.ಡಿ ಪದವಿ

ಮೈಸೂರು: ಡಾ.ವಿಜಯ್ ಶೇಷಾದ್ರಿ ಅವರ ಮಾರ್ಗದರ್ಶನದಲ್ಲಿ ಸುಮ ಗಿಲ್ಬರ್ಟ್ ಇಂಗ್ಲಿಷ್ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರ ಪಡಿಸಿದ ಸ್ಟ್ರಾಂಡಲಿಂಗ್ ಬೌಂಡರೀಸ್ : ಎ ಸ್ಟಡಿ ಆಫ್ ದಿ ಸೆಲೆಕ್ಟೆಡ್ ನಾವೆಲ್ಸ್ ಆಫ್ ಎಂ.ಜಿ. ವಾಸಂಜಿ ಮಹಾ ಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ಕೋಗಿಲು ಬಡಾವಣೆ ಅಕ್ರಮ ನಿವಾಸಿಗಳ ತೆರವು; ಶಾಸಕ ಎಸ್.ಆರ್.ವಿಶ್ವನಾಥ್ ನೇತೃತ್ವದ ಸತ್ಯಶೋಧನಾ ಸಮಿತಿ ವರದಿ

ಇಡೀ ಪ್ರಕರಣ ಸಂಬಂಧ ಎನ್‌ಐಎ ತನಿಖೆಗೆ ಆಗ್ರಹ

ಬೆಂಗಳೂರು,ಜ.12(ಕೆಎಂಶಿ)–ಕೋಗಿಲು ಬಡಾವಣೆ ಅಕ್ರಮ ನಿವಾಸಿಗಳ ತೆರವು ಸಂಬಂಧ ಘಟನಾವಳಿಯ ತನಿಖೆಯನ್ನು ಎನ್‌ಐಎಗೆ ವಹಿಸುವಂತೆ ಯಲಹಂಕ ಶಾಸಕ ಎಸ್.ಆರ್.ವಿಶ್ವನಾಥ್ ಆಗ್ರಹಿಸಿದ್ದಾರೆ.

ಕೋಗಿಲು ಬಡಾವಣೆ ವಿಷಯಕ್ಕೆ ಸಂಬಂಧಿಸಿದಂತೆ ಅವರ ನೇತೃತ್ವದ ಸತ್ಯಶೋಧನ ತಂಡವು ಸೋಮವಾರ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ವರದಿ ಸಲ್ಲಿಸಿತು.

ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕೇರಳ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ನಾಯಕ ಕೆ.ಸಿ.ವೇಣುಗೋಪಾಲ್ ಸಾಕಷ್ಟು ಕೂಗಾಡಿದರು. ಆದರೆ, ತೆರವಾದವರ ಪಟ್ಟಿಯಲ್ಲಿ ಒಬ್ಬರೇ ಒಬ್ಬರು ಕೇರಳದವರಿಲ್ಲ. ಕೇರಳದ ಮತಕ್ಕಾಗಿ ಇಷ್ಟೆಲ್ಲ ರಾದ್ಧಾಂತ ಮಾಡಿದ್ದಾರೆ ಎಂದು ಆಕ್ಷೇಪಿಸಿದರು.

ಕೇರಳದವರು ಇರಲಿ ಬಿಡಲಿ, ಅಲ್ಲಿನ ರಾಜಕಾರಣಕ್ಕಾಗಿ ನಮ್ಮ ರಾಜ್ಯವನ್ನು ಬಲಿ ಪಡೆಯುವ ಕೆಲಸ ಮಾಡಿದ್ದಾರೆ. ಒಬ್ಬರೇ ಒಬ್ಬರು ಕೇರಳದವರಿಲ್ಲ. ಒಬ್ಬರು ಕ್ರಿಶ್ಚಿಯನ್ ಇದ್ದಾರೆ. ನಮಗೆ ಸಿಕ್ಕಿದ ಪಟ್ಟಿಯಲ್ಲಿ ಬಹುತೇಕ ಎಲ್ಲರೂ ಮುಸ್ಲಿಮರೇ ಇದ್ದಾರೆ. ಬೆಂಗಳೂರಿನಲ್ಲಿ ಸರಕಾರಿ ಜಾಗದಲ್ಲಿ ಹೊಸದಾಗಿ ಗುಡಿಸಲು ಹಾಕಿಕೊಂಡವರನ್ನು ಕೂಡಲೇ ಸರಕಾರ ತೆರವುಗೊಳಿಸಬೇಕು ಎಂದು ಆಗ್ರಹಿಸಿದರು.

ನಗರದಲ್ಲಿರುವ 100 ಚಿಂದಿ ಆಯುವವರ ಪೈಕಿ ಶೇ. 95 ಜನರು ರೋಹಿಂಗ್ಯಾಗಳೇ ಇದ್ದಾರೆ. ಅವರ ಬಳಿ ಕೆಲವು ಕಾರ್ಡ್‌ಗಳಿವೆ. ನಾವು ಹೋಗಿ ಕೇಳಿದಾಗ ಕೊಟ್ಟಿಲ್ಲ. ವಲಸಿಗರ ಕಾರ್ಡ್ ಅವರ ಬಳಿ ಇದೆ. ಹಣ ಕೊಟ್ಟು ಗಡಿ ದಾಟಿ ಬಂದುದಾಗಿ ಹೇಳುತ್ತಾರೆ. ಪಶ್ಚಿಮ ಬಂಗಾಳದ ಮೂಲಕ ಬರಲು ವ್ಯವಸ್ಥೆ ಕಲ್ಪಿಸುವ ತಂಡವೇ ಇದೆ ಎಂದು ಅವರೇ ಹೇಳಿದ್ದಾಗಿ ವಿವರಿಸಿದರು.



ಕೋಗಿಲು ಬಡಾವಣೆ ವಿಷಯಕ್ಕೆ ಸಂಬಂಧಿಸಿದಂತೆ ಸತ್ಯಶೋಧನ ತಂಡವು ಸೋಮವಾರ ಬಿಜೆಪಿರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಗೆ ವರದಿ ಸಲ್ಲಿಸಿತು.

ಅವರ ಭಾಷೆ ಹಿಂದಿಯೂ ಅಲ್ಲ, ಉರ್ದುವೂ ಅಲ್ಲ, ಅದು ನಮಗೆ ಅರ್ಥವೂ ಆಗುವುದಿಲ್ಲ ಎಂದು ತಿಳಿಸಿದರು, ಬಾಂಗ್ಲಾ ಮತ್ತು ರೋಹಿಂಗ್ಯಾ ಭಾಷೆ ಕೇಳಿದೊಡನೆ ಗೊತ್ತಾಗುತ್ತದೆ, ಮೊನ್ನೆ ಟಿ.ವಿ.ಚಾನೆಲ್ ಒಂದರಲ್ಲಿ ಮಹಿಳೆಯೊಬ್ಬರು ಜೈ ಬಾಂಗ್ಲಾ ಹೇಳಿದ್ದನ್ನು ಕೇಳಿದ್ದೇವೆ, ಅವರು ಇಲ್ಲಿ ರಾಜಾರೋಷವಾಗಿ ಇದ್ದಾರೆ ಎಂದರು.

ಎರಡು ಲಕ್ಷಕ್ಕೂ ಹೆಚ್ಚು ರೋಹಿಂಗ್ಯಾಗಳು ಮತ್ತು ಬಾಂಗ್ಲಾದವರಿದ್ದಾರೆ ಎಂಬ ವರದಿಗಳು ಬಂದಿವೆ, ಅವೆಲ್ಲವನ್ನೂ ಪರಿಶೀಲಿಸಿ, ಅಂಥವರನ್ನು ಬಂಧಿಸಬೇಕು, ಅವರ ದೇಶಕ್ಕೆ ಕಳಿಸುವುದು ಅಥವಾ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಎಸ್.ಆರ್. ವಿಶ್ವನಾಥ್ ಒತ್ತಾಯಿಸಿದರು.

ರಾಜಕಾಲುವೆ ಮೇಲಿನ ಮನೆಗಳನ್ನೂ ಒಡೆಯಲಾಗಿದೆ, ಕಾಚರಕನಹಳ್ಳಿ ಕೆರೆಯಲ್ಲಿ ಮನೆ ಕಟ್ಟಿದರೆಂದು ಗುಡಿಸಲಿಗೆ ಬೆಂಕಿ ಹಾಕಿದ್ದರು, ಅವರಿಗೂ ನಾವು ಪರಿಹಾರ ಕೊಟ್ಟಿಲ್ಲ ಎಂದು ತಿಳಿಸಿದರು.

15 ಸಾವಿರಕ್ಕೂ ಹೆಚ್ಚು ಜನರು ಮನೆಗಾಗಿ ಅರ್ಜಿ ಹಾಕಿ ಕಾಯುತ್ತಿದ್ದಾರೆ, ಈ ಥರ ಅಕ್ರಮವಾಗಿ ಮನೆ ಕೊಡುವುದಾಗಲೀ, ನಿಯಮಬಾಹಿರವಾಗಿ ಸಹಾಯ ಧನ ನೀಡುವುದಾಗಲೀ ಮಾಡಬಾರದು ಎಂದು ವರದಿಯಲ್ಲಿ ತಿಳಿಸಿರುವುದಾಗಿ ಹೇಳಿದರು.

ನಿಯಮದ ಪ್ರಕಾರ ಮಾಡಬೇಕೇ ಹೊರತು ಮಾನವೀಯತೆ ದೃಷ್ಟಿಯಿಂದ ಕ್ರಮ ಬೇಡ, ಗುಲ್ಬರ್ಗಾ ಮತ್ತಿತರ ಕಡೆಗಳಿಂದ ಬಂದು ಅಕ್ರಮವಾಗಿ ಗುಡಿಸಲು ಹಾಕಿಕೊಂಡು ತೆರವಾದವರಿಗೆ ಪರಿಹಾರ ಕೊಡದೇ, ಹೊರದೇಶದವರಿಗೆ ಈ ಥರ ಕುಮ್ಮಕ್ಕು ಕೊಡುವುದನ್ನು, ಬಿಜೆಪಿ ಯಾವುದೇ ಕಾರಣಕ್ಕೂ ಒಪ್ಪುವುದಿಲ್ಲ, ಅವರೆಲ್ಲರನ್ನು ನಮ್ಮ ಸಮರ್ಥ ಪೊಲೀಸ್ ಇಲಾಖೆ ಪರಿಶೀಲನೆ ಮಾಡಬೇಕು ಎಂದು ಒತ್ತಾಯಿಸಿದರು.

ತರಾತುರಿಯಲ್ಲಿ ಹೊರದೇಶದವರಿಗೆ ಮನೆ ಕೊಡಲು ಸರ್ಕಾರ ಹೊರಟಿದೆ. ವಿದೇಶದವರು ಇರುವ ಕಾರಣ ಎನ್‌ಐಎ ತನಿಖೆ ಆಗಬೇಕಿದೆ ಎಂದರು.

ಸುತ್ತೂರು ಜಾತ್ರೆ ಪ್ರಚಾರ ರಥಕ್ಕೆ ಸ್ವಾಗತ



ಸುತ್ತೂರು ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ತಿ.ನರಸೀಪುರ ಪಟ್ಟಣಕ್ಕೆ ಆಗಮಿಸಿದ ಪ್ರಚಾರ ರಥಯಾತ್ರೆಯನ್ನು ಮುಖಂಡರು ಸ್ವಾಗತಿಸಿದರು.

ತಿ.ನರಸೀಪುರ, ಜ.12– ಮಕರ ಸಂಕ್ರಾಂತಿ ಹಬ್ಬದಿಂದ 6 ದಿನಗಳವರೆಗೆ ಸುತ್ತೂರು ಶ್ರೀ ಕ್ಷೇತ್ರದಲ್ಲಿ ವಿಜ್ಯಂಭಣೆಯಿಂದ ನಡೆಯಲಿರುವ ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಜಾತ್ರಾ ಮಹೋತ್ಸವಕ್ಕೆ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸುವಂತೆ ಕೃಷಿಕ ಸಮಾಜದ ತಾಲೂಕು ಅಧ್ಯಕ್ಷ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಉಪಾಧ್ಯಕ್ಷ ಬೆನಕನಹಳ್ಳಿ ಎಂ.ಶಿವಮಲ್ಲಪ್ಪ ಮನವಿ ಮಾಡಿದರು.

ನಂಜನಗೂಡು ತಾಲೂಕು ಸುತ್ತೂರು ಶ್ರೀ ಕ್ಷೇತ್ರದಲ್ಲಿ ಜ.15 ರಿಂದ 20 ರವರೆಗೆ ಸುತ್ತೂರು ಜಾತ್ರಾ ಮಹೋತ್ಸವ ನಡೆಯಲಿರುವ ಹಿನ್ನೆಲೆಯಲ್ಲಿ ಪಟ್ಟಣಕ್ಕೆ ಆಗಮಿಸಿದ ಪ್ರಚಾರ ರಥ ಯಾತ್ರೆಗೆ ಪಟ್ಟಣದ ವಿದ್ಯೋದಯ ಕಾಲೇಜು ವೃತ್ತದಲ್ಲಿ ಲಿಂಗಾಯತ ಸಮುದಾಯದ ಮುಖಂಡರೊಡಗೂಡಿ ಸ್ವಾಗತ ಕೋರಿ ಅವರು ಮಾತನಾಡಿದರು.

ಸುತ್ತೂರು ಜಾತ್ರೆಯೂ ಈ ಭಾಗದ ಜಾತ್ರೆಗಳಲ್ಲಿ ಹೆಚ್ಚು ಪ್ರಸಿದ್ದವಾಗಿದ್ದು ವೈಜ್ಞಾನಿಕ ರೀತಿಯಲ್ಲಿ ಜಾತ್ರೆ ನಡೆಯುತ್ತಿದೆ. ಭಜನಾ ಮೇಳ, ವಸ್ತು ಪ್ರದರ್ಶನ, ಕೃಷಿ ಮೇಳ, ದನಗಳ ಜಾತ್ರೆ, ಸಾಂಸ್ಕೃತಿಕ ಮೇಳ, ದೇಸಿ ಆಟಗಳು, ದೋಣಿ ವಿಹಾರ, ಚಿತ್ರಕಲೆ, ರಂಗೋಲಿ, ಗಾಳಿಪಟ, ಸೋಬಾನೆ ಪದ, ರಾಗಿ ಬೀಸುವ ಸ್ಪರ್ಧೆಗಳು ಸೇರಿದಂತೆ ಗ್ರಾಮೀಣ ಕ್ರೀಡೆಗಳು, ವೈವಿದ್ಯಮಯ ಸಾಂಸ್ಕೃತಿಕ ಕಾರ್ಯ ಕ್ರಮಗಳು ನಡೆಯಲಿವೆ ಎಂದರು.

ಜನವರಿ 15ರ ಗುರುವಾರದಂದು ಆರಂಭಗೊಳ್ಳುವ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಶುಕ್ರವಾರ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗಲಿದ್ದು, 17ರ ಶನಿವಾರದಂದು ರಥೋತ್ಸವ, 18ರ ಭಾನುವಾರದಂದು ಶ್ರೀ ಮಹದೇಶ್ವರ ಕೊಂಡೋತ್ಸವ, ಲಕ್ಷ ದೀಪೋತ್ಸವ, ಮುತ್ತಿನ ಪಲ್ಲಕ್ಕಿ ಉತ್ಸವ, 19ರ ಸೋಮವಾರ ರಾತ್ರಿ ಕಪಿಲಾ ನದಿಯಲ್ಲಿ ಆಕರ್ಷಣೀಯವಾದ ತೆಪ್ಪೋತ್ಸವ ನಡೆಯಲಿದೆ, ಅಂತಿಮ ದಿನವಾದ 20ರ ಮಂಗಳವಾರ ಅನ್ನ ಬ್ರಹ್ಮೋತ್ಸವ ಕಾರ್ಯಕ್ರಮಗಳು ನಡೆಯಲಿದೆ.

ಈ ವೇಳೆ ವಾಟಾಳು ಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ಮುಡುಕನಪುರ ಮಠದ ಶ್ರೀ ಷಡಕ್ಷರಿದೇಶಿಕೇಂದ್ರ ಸ್ವಾಮೀಜಿ, ಬೆನಕನಹಳ್ಳಿ ಮಠ ದ ಶ್ರೀ ಇಮ್ಮಡಿ ಬಸವಲಿಂಗ ಸ್ವಾಮೀಜಿ,ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಪ್ರಕಾಶ್, ಉಪಾಧ್ಯಕ್ಷ ಎಸ್.ಕೆ. ಕಿರಣ್, ಪ್ರಧಾನ ಕಾರ್ಯದರ್ಶಿ ಕುರುಬೂರ್ ಶಿವು, ಬಸವ ಬಳಗದ ಅಧ್ಯಕ್ಷ ಪರಮೇಶ್ ಪಟೇಲ್, ಗ್ರಾಪಂ ಸದಸ್ಯ ಕಿರಗಸೂರು ಮಹಾದೇವಸ್ವಾಮಿ, ಯುವ ಘಟಕದ ಅಧ್ಯಕ್ಷ ಕೈಯಂಬಳ್ಳಿ ಅಶೋಕ್, ಹೋಟೆಲ್ ರಾಜಣ್ಣ, ಜಿ.ಎಲ್.ಉಮೇಶ್, ಜೆಎಸ್‌ಎಸ್ ಕಲ್ಯಾಣ ಮಂಟಪ ವ್ಯವಸ್ಥಾಪಕ ಯೋಗೇಶ್, ಕಾರ್ ಮಲ್ಲಪ್ಪ, ರಾಜ್ಯ ಸಮಿತಿ ನಿರ್ದೇಶಕ ಎನ್.ಲೋಕೇಶ್ ನಿರ್ದೇಶಕರಾದ ಸುಗಂಧರಾಜು, ಕಾವೇರಿಪುರ ಮಲ್ಲು, ಓಂಕಾರ್ ಸ್ವಾಮಿ, ತೊಟ್ಟವಾಡಿ ಕುಮಾರ್, ಚಂದ್ರಧರ, ಪೂಜಿತ್ ಮೆಡಿಕಲ್ ಕುಮಾರ್, ಹಿರಿಯೂರು ನವೀನ್, ತೊಂಟೇಶ್, ಕೆಬ್ಬೆಹುಂಡಿ ಮಾರುಪ್ಪ, ಆಡಿಟರ್ ಮಂಜುನಾಥ್, ತೊಟ್ಟವಾಡಿ ರವಿ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆಬ್ಬೆಹುಂಡಿ ಸೋಮಶೇಖರ್, ಅಕ್ಕಿ ನಾಗಪ್ಪ, ಅಡುಗೆಪ್ರಭು ಮತ್ತಿತರರಿದ್ದರು.

ಮರ್ಯಾದೆ ಹತ್ಯೆ ಖಂಡಿಸಿ ಪ್ರತಿಭಟನೆ



ಮರ್ಯಾದೆ ಹತ್ಯೆ ಖಂಡಿಸಿ ಹುಣಸೂರಲ್ಲಿ ಪ್ರತಿಭಟನೆ ನಡೆಸಲಾಯಿತು.

ಹುಣಸೂರು, ಜ.12– ನಗರದ ಸಂವಿಧಾನ ವೃತ್ತದಲ್ಲಿ ದಲಿತ ಮಹಿಳಾ ಒಕ್ಕೂಟದ ವತಿಯಿಂದ ರಾಜ್ಯದಲ್ಲಿ ಮರ್ಯಾದೆ ಹತ್ಯೆ ಹೆಸರಿನಲ್ಲಿ ನಡೆಯುತ್ತಿರುವ ಹತ್ಯೆಗಳ ವಿರುದ್ಧ ಕಠಿಣ ಕಾಯಿದೆ ಜಾರಿಗೆ ತರುವಂತೆ ಆಗ್ರಹಿಸಿ ಪ್ರತಿಭಟನಾ ಧರಣಿ ನಡೆಸಿದರು.

ದಲಿತ ಮಹಿಳಾ ಒಕ್ಕೂಟದ ಜಿಲ್ಲಾ ಸಂಚಾಲಕಿ ಮಹದೇವಮ್ಮ ಮಾತನಾಡಿ ನಮ್ಮ ದೇಶದಲ್ಲಿ ಇನ್ನೂ ಜಾತಿ ವ್ಯವಸ್ಥೆ ಜೀವಂತವಾಗಿದ್ದು ಜನರನ್ನು ನಿಯಂತ್ರಿಸುತ್ತಿದೆ ಎಂಬುದಕ್ಕೆ ರಾಜ್ಯದಲ್ಲಿ ನಡೆಯುತ್ತಿರುವ ಮರ್ಯಾದೆ ಹತ್ಯೆಯಂತಹ ಕಠೋರ ಘಟನೆಗಳೆ ಜೀವಂತ ಸಾಕ್ಷಿಯಾಗಿವೆ. ಈ ನಿಟ್ಟಿನಲ್ಲಿ ಪ್ರಜ್ಞಾವಂತ ವಲಯದಿಂದ ಕೇಳಿ ಬರುತ್ತಿರುವ ಕಠಿಣ ಕಾನೂನು ವ್ಯವಸ್ಥೆ ಜಾರಿಯಾಗಬೇಕು ಸಂವಿಧಾನದ ಅಶಯದಂತೆ ನ್ಯಾಯ ಸಮ್ಮತವಾಗಿ ಮಹಿಳೆಯರಿಗೆ ಭದ್ರತೆಯ ಬದುಕು ಸಿಗುವಂತಾಗಬೇಕು ಎಂದರು.

ಹುಬ್ಬಳ್ಳಿಯ ಇನಾಂ ವೀರಾಪುರಂನಲ್ಲಿ ಏಳು ತಿಂಗಳ ಗರ್ಭಿಣಿಯನ್ನು ಅವಳ ತಂದೆ ಮತ್ತು ಕುಟುಂಬಸ್ಥರು ಸೇರಿ ಕೊಲೆ ಮಾಡಿದ್ದು ಮೃಗಿಯ ಕೃತ್ಯವಾಗಿದ್ದು ನಾಗರಿಕ ಸಮಾಜವೇ ತಲೆ ತಗ್ಗಿಸುವಂತಾಗಿದೆ. ಅಲ್ಲದೆ ಇದು ದೇಶದಲ್ಲೇ ಜಾತಿ ಕ್ರೂರತೆಯ ಪ್ರದರ್ಶನವಾಗಿದೆ. ಇದನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ಇಂತಹ ಮರ್ಯಾದೆ ಹತ್ಯೆಗಳನ್ನು ತಡೆಗಟ್ಟಲು ಸರ್ಕಾರ ಕಠಿಣ ಕಾಯಿದೆಯನ್ನು ಜಾರಿಗೆ ತರಬೇಕು ಎಂದರು.

ನಂತರ ಪ್ರಗತಿಪರ ಸಂಘಟನೆ ಮತ್ತು ದಲಿತ ಮುಖಂಡ ಅತ್ತಿಕುಪ್ಪೆ ರಾಮಕೃಷ್ಣ ಮಾತನಾಡಿ, ಜಾತಿ ಕ್ರೌರ್ಯದ ಘಟನೆಗಳು ಉತ್ತರ ರಾಜ್ಯಗಳಾದ ಹರಿಯಾಣ, ರಾಜಸ್ಥಾನ ಮತ್ತಿತರ ರಾಜ್ಯಗಳಲ್ಲಿ ಹೆಚ್ಚು ನಡೆಯುತ್ತಿದ್ದು, ಈಗ ನಮ್ಮ ರಾಜ್ಯದಲ್ಲೂ ಇಂತಹ ಘಟನೆಗಳು ನಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಪ್ರಸ್ತುತ ಸಮ ಸಮಾಜದಲ್ಲಿ ಯಾವುದೂ ಧರ್ಮ ಜಾತಿ ಎನ್ನದೆ ಯುವ ಜನಾಂಗ ಮದುವೆಯಾಗಲು ಮುಕ್ತ ಅವಕಾಶವಿರಬೇಕು. ಜಾತಿಯ ಹೆಸರಿನಲ್ಲಿ ಇದಕ್ಕೆ ಕಡಿವಾಣ ಹಾಕಿ ಮೂಲಭೂತ ಹಕ್ಕನ್ನು ಹತ್ತಿಕ್ಕುವ ಕೆಲಸ ನಡೆದರೆ ಇಂತಹ ಕ್ರೂರ ಘಟನೆಗಳು ನಡೆಯುತ್ತವೆ ಎಂದರು.

ಇಂತಹ ಕ್ರೂರ ಘಟನೆಗಳನ್ನು ತಡೆಯಲು ಸರ್ಕಾರ ಕಠಿಣ ಕಾನೂನು ತರಲು ಮುಖ್ಯಮಂತ್ರಿಗಳು, ಗೃಹ ಸಚಿವರು ಗಂಭೀರ ಚಿಂತನೆ ನಡೆಸಿ ಸಂವಿಧಾನದಲ್ಲಿ ಹಿಂದೂ ಬಿಲ್‌ಕೋಡ್‌ನಲ್ಲಿ ತಿಳಿಸಿರುವಂತೆ ಯುವತಿಯರ ಇಚ್ಚೆಗೆ ತಕ್ಕಂತೆ ವಿವಾಹವಾಗಲು ಸುಭದ್ರತೆಯ ಕಾನೂನು ತರಬೇಕು ಎಂದರು.

ಪ್ರತಿಭಟನೆಯಲ್ಲಿ ಬಾಲಸುಂದರ್, ಶಿವರಾಜ್, ಸಿದ್ದೇಶ್, ಚಲುವರಾಜು, ಮಹೇಶ್, ನಂಜುಂಡ ಮಹದೇವಮ್ಮ ತೆಕ್ಕಲಬಾಡಿ, ನಾರಾಯಣ, ಪುಟ್ಟರಾಜು, ಗಿರೀಶ್, ದೀಪಾ, ಪ್ರಭಾ, ಮಂಜುಳಾ, ಜಾನ್ ಕ್ರಿಷ್ಟಫರ್, ಇನ್ನೂ ಅನೇಕರು ಭಾಗವಹಿಸಿದ್ದರು.

ರಾಜ್ಯ ಸರ್ಕಾರಿ ಫಾರ್ಮಸಿ ಅಧಿಕಾರಿಗಳ ಸಂಘದ ಅಧ್ಯಕ್ಷರಾಗಿ ಉಮೇಶ್ ಬಾಬು ಆಯ್ಕೆ



ರಾಜ್ಯ ಸರ್ಕಾರಿ ಫಾರ್ಮಸಿ ಅಧಿಕಾರಿಗಳ ಸಂಘದ ಪದಾಧಿಕಾರಿಗಳನ್ನು ಅಭಿನಂದಿಸಲಾಯಿತು.

ಹೆಚ್.ಡಿ.ಕೋಟೆ: ಕರ್ನಾಟಕ ರಾಜ್ಯ ಸರ್ಕಾರಿ ಫಾರ್ಮಸಿ ಅಧಿಕಾರಿಗಳ ಸಂಘದ ಮೈಸೂರು, ಬೆಂಗಳೂರು ಮತ್ತು ಚಾಮರಾಜನಗರ ಜಿಲ್ಲೆಗೆ ಅಧ್ಯಕ್ಷ ಹೆಚ್.ಡಿ.ಕೋಟೆಯ ಸಾರ್ವಜನಿಕ ಆಸ್ಪತ್ರೆಯ ಹಿರಿಯ ಫಾರ್ಮಸಿ ಅಧಿಕಾರಿ ಹೆಚ್.ಎನ್.ಉಮೇಶ್ ಬಾಬು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಮೈಸೂರಿನ ಚಿಕ್ಕಮ್ಮ ನಿಕೇತನ ಕಮ್ಯೂನಿಟಿ ಹಾಲ್‌ನಲ್ಲಿ ನಡೆದ ಕರ್ನಾಟಕ ರಾಜ್ಯ ಸರ್ಕಾರಿ ಫಾರ್ಮಸಿ ಅಧಿಕಾರಿಗಳ ಸಂಘ ಬೆಂಗಳೂರು, ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಶಾಖೆಯ ಸರ್ವ ಸದಸ್ಯರ ಸಭೆಯಲ್ಲಿ 2026–29ನೇ ಸಾಲಿಗೆ ಉಮೇಶ್ ಬಾಬು ಅವರನ್ನು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷರಾಗಿ ಹೆಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಯ ಹಿರಿಯ ಫಾರ್ಮಸಿ ಅಧಿಕಾರಿ ಉಮೇಶ್ ಬಾಬು, ಕಾರ್ಯದರ್ಶಿಯಾಗಿ ನಾಗೇಶ್ ನೆಲಪ್ಪಗೋಳ್, ರಾಜ್ಯ ಪರಿಷತ್ ಸದಸ್ಯರಾಗಿ ವೈ.ಎಸ್.ಶಶಿಧರ, ಜಿಲ್ಲಾ ಖಜಾಂಚಿಯಾಗಿ ಕೆ.ವಿ.ಕವಿತಾ ಅವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಇದೇ ಸಂದರ್ಭದಲ್ಲಿ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು. ಸಭೆಯಲ್ಲಿ ರಾಜ್ಯ ಮಾಜಿ ಉಪಾಧ್ಯಕ್ಷರು ಹಾಗೂ ನಿಕಟ ಪೂರ್ವ ಜಿಲ್ಲಾಧ್ಯಕ್ಷ ಸಿ.ಎಲ್.ಸೋಮಶೇಖರ್, ಮಾಜಿ ಮಹಿಳಾ ಉಪಾಧ್ಯಕ್ಷೆ ಕೆ.ಆರ್.ಅನುಸೂಯ, ಜಿಲ್ಲಾ ನಿಕಟಪೂರ್ವ ಗೌರವಾಧ್ಯಕ್ಷ ವಿ.ಮಂಜುನಾಥ, ನಿವೃತ್ತ ಹಿರಿಯ ಫಾರ್ಮಸಿ ಅಧಿಕಾರಿ ಗಣೇಶ್‌ರಾವ್, ಸುರೇಶ್, ಕೊಪ್ಪಳ ಜಿಲ್ಲಾ ಅಧ್ಯಕ್ಷ ಸುನಿಲ್, ಕೊಡಗು ಜಿಲ್ಲಾ ಅಧ್ಯಕ್ಷೆ ನಾಗಮಣಿ, ಮಂಡ್ಯ ಜಿಲ್ಲಾ ಕಾರ್ಯದರ್ಶಿ ಯತೀಶ್, ಯಾದಗಿರಿ ಜಿಲ್ಲಾ ಕಾರ್ಯದರ್ಶಿ ರಮೇಶ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಸತೀಶ್, ಮಾಜಿ ಆಂತರಿಕ ಲೆಕ್ಕ ಪರಿಶೋಧನಾಧಿಕಾರಿ ಪ್ರಕಾಶ್, ಇನ್ನು ಮುಂತಾದವರು ಹಾಜರಿದ್ದರು.

ತಲಕಾಡು ಬಳಿ ಯುವಕ ಅನುಮಾನಾಸ್ಪದ ಸಾವು

ಸಾವಿನ ಬಗ್ಗೆ ಶಂಕೆ ವ್ಯಕ್ತಪಡಿಸಿ ತಾಯಿಯಿಂದ ದೂರು



ತಿ.ನರಸೀಪುರ, ಜ.12– ಯುವಕನೊಬ್ಬನ ಮೃತ ದೇಹ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿ ಮೃತನ ತಾಯಿ ತಲಕಾಡು ಪೊಲೀಸರಿಗೆ ದೂರು ನೀಡಿದ್ದಾರೆ.

ತಾಲೂಕಿನ ತಲಕಾಡು ಪೊಲೀಸ್ ಠಾಣೆ ವ್ಯಾಪ್ತಿಯ ಹೊಸಬೀದಿಯ ನಿವಾಸಿ ರತ್ನಮ್ಮ ಲೇಟ್ ವೆಂಕಟೇಶ್ ಎಂಬುವರ ಪುತ್ರ ಟಿ.ವಿ.ಸುರೇಶ್(35) ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ವ್ಯಕ್ತಿ.

ಟಿ.ವಿ.ಸುರೇಶ್ ಬೆಂಗಳೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ಮಾಡುತ್ತಿದ್ದು ವಾರಕ್ಕೊಮ್ಮೆ ತಲಕಾಡಿಗೆ ಬಂದು ಪೋಷಕರ ಆರೋಗ್ಯ ವಿಚಾರಿಸಿ ಹೋಗುತ್ತಿದ್ದನೆನ್ನಲಾಗಿದೆ. ಇತ್ತೀಚಿಗೆ ತನ್ನ ಮನೆಯವರು ಓಂ ಶಕ್ತಿ ದೇವಸ್ಥಾನಕ್ಕೆ ತಮಿಳುನಾಡಿಗೆ ಹೋಗಿದ್ದ ಸಂದರ್ಭದಲ್ಲಿ ಊರಿಗೆ ಬಂದು ಅವರೆಲ್ಲರನ್ನು ಕಳುಹಿಸಿಕೊಟ್ಟು ತಾನು ಮನೆಯಲ್ಲಿ ಉಳಿದುಕೊಂಡಿದ್ದ ಓಂ ಶಕ್ತಿ ದೇವಸ್ಥಾನದಿಂದ ತನ್ನ ಹೆಣ್ಣು ಮಕ್ಕಳೊಂದಿಗೆ ಹಿಂದಿರುಗಿ ಬಂದ ರತ್ನಮ್ಮ ಮನೆಯ ಬೀಗ ಟಿ.ವಿ.ಸುರೇಶನ ಬಳಿ ಇದ್ದ ಹಿನ್ನೆಲೆಯಲ್ಲಿ ಸುರೇಶನಿಗೆ ಫೋನ್ ಮಾಡಿದ್ದಾರೆ. ಆದರೆ ಟಿ.ವಿ.ಸುರೇಶ ಫೋನ್ ರಿಸೀವ್ ಮಾಡಲಿಲ್ಲ.

ಅಷ್ಟರಲ್ಲಾಗಲೇ ಸುರೇಶ್ ಮೃತಪಟ್ಟನೆಂದು ಗ್ರಾಮಸ್ಥರು ಚರ್ಚಿಸುತ್ತಿದ್ದ ಹಿನ್ನೆಲೆಯಲ್ಲಿ ಗಾಬರಿಯಾದ ರತ್ನಮ್ಮ ತಲಕಾಡು–ಬೆಳಕ ವಾಡಿ ಮುಖ್ಯರಸ್ತೆಯಲ್ಲಿರುವ ಹುಚ್ಚ ಮಹದೇವನ ಮಗ ಶೇಖರನ ಮನೆ ಬಳಿ ಬಂದು ನೋಡಲಾಗಿ ಮನೆಯ ಕಿಟಕಿಯ ಕಂಬಿಯ ರಾಡಿಗೆ ಸೀರೆಯಿಂದ ನೇಣು ಬಿಗಿದ ಸ್ಥಿತಿಯಲ್ಲಿ ಸುರೇಶನ ಶವ ಪತ್ತೆಯಾಗಿದೆ.

ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿರುವ ಮೃತ ಸುರೇಶನ ತಾಯಿ ಸಾವಿನ ಬಗ್ಗೆ ತನಿಖೆ ನಡೆಸಿ ನ್ಯಾಯ ದೊರಕಿಸಿಕೊಡುವಂತೆ ತಲಕಾಡು ಪೊಲೀಸರಿಗೆ ದೂರು ನೀಡಿದ್ದು ದೂರು ದಾಖಲಿಸಿಕೊಂಡಿರುವ ಎಎಸ್‌ಐ ರಾಮಕೃಷ್ಣ ಮುಂದಿನ ಕ್ರಮ ಜರುಗಿಸಿದ್ದಾರೆ.

ಮಡುವಿನಹಳ್ಳಿ ಗ್ರಾಮದಲ್ಲಿ ಹೆಣ್ಣು ಚಿರತೆ ಸಾವು

ಮಲ್ಕುಂಡಿ: ಸಮೀಪದ ಮಡುವಿನಹಳ್ಳಿ ಗ್ರಾಮದ ನಟರಾಜು ಎಂಬುವರ ಜಮೀನಿನಲ್ಲಿ ಹೆಣ್ಣು ಚಿರತೆಯು ಸಾವನ್ನಪ್ಪಿದೆ.

ಭಾನುವಾರ ರಾತ್ರಿ ಬೇರೆ ಪ್ರಾಣಿ ಜೊತೆಗೆ ಗುದ್ದಾಟ ಮಾಡಿ ಚಿರತೆಯ ಕತ್ತಿನ ಭಾಗಕ್ಕೆ ಪೆಟ್ಟಾಗಿ ಸಾವನ್ನಪ್ಪಿದೆ ವಿಷಯ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಅರಣ್ಯ ಅಧಿಕಾರಿ ನೀತಿನ್ ಕುಮಾರ್ ಪರಿಶೀಲಿಸಿ ಮಾತನಾಡಿದ ಅವರು ಸುಮಾರು 9–10 ತಿಂಗಳ



ಚಿರತೆಯು ಬೇರೆ ಪ್ರಾಣಿ ಜೊತೆಗೆ ಗುದ್ದಾಡಿ ಸಾವನ್ನಪ್ಪಿದೆ ಎಂದು ತಿಳಿಸಿದರು. ಚಿರತೆಯನ್ನು ಶವಪರೀಕ್ಷೆಗಾಗಿ ನಂಜನಗೂಡಿಗೆ ರವಾನಿಸಲಾಗಿದೆ

ಜೂಜುಕೋರರ ಬಂಧನ: 1.5 ಲಕ್ಷ ನಗದು ವಶ

ತಲಕಾಡು, ಜ.12– ಜೂಜು ಅಡ್ಡೆ ಮೇಲೆ ದಾಳಿ ನಡೆಸಿದ ಪೊಲೀಸರು ಇಸ್ಪೀಟಾಟದಲ್ಲಿ ನಿರತರಾಗಿದ್ದ 8 ಮಂದಿ ಜೂಜುಕೋರರನ್ನು ಬಂಧಿಸಿ 1.5 ಲಕ್ಷ ರೂ.ನಗದು ಕಾರು ಹಾಗೂ ಬೈಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ತಲಕಾಡು ಠಾಣೆ ವ್ಯಾಪ್ತಿಯ ಹೆಮ್ಮಿಗೆ ಗ್ರಾಮದ ಕಾಲುವೆ ಏರಿ ಮೇಲೆ ಇಸ್ಪೀಟಾಟ ಆಡುತ್ತಿದ್ದ ಮಾಹಿತಿ ಪಡೆದ ಪೊಲೀಸರು ದಾಳಿ ನಡೆಸಿ ಜೂಜಾಟದಲ್ಲಿ ನಿರತರಾಗಿದ್ದ ತಿ.ನರಸೀಪುರ ಪಟ್ಟಣದ ಸಂಪತ್, ಶಂಕರ್, ಕುಮಾರ, ರಾಮ, ಮಹದೇವನಾಯಕ, ರಾಕೇಶ್, ಹೆಮ್ಮಿಗೆ ಗ್ರಾಮದ ಕುಳ್ಳ ಅಲಿಯಾಸ್ ಹೊನ್ನಯ್ಯ ಹಾಗು ಮಾದಾಪುರ ಗ್ರಾಮದ ಕೆಂಚ ಅಲಿಯಾಸ್ ಮಧು ಅವರನ್ನು ವಶಕ್ಕೆ ಪಡೆದಿದ್ದಾರೆ.

ದಾಳಿ ವೇಳೆ ಪಣಕ್ಕಿಟ್ಟಿದ್ದ 1.5 ಲಕ್ಷ ರೂ. ನಗದು, ಸ್ವಿಪ್ಟ್ ಕಾರು ಹಾಗು 4 ಸ್ಪ್ಲೆಂಡರ್ ಬೈಕ್‌ನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಎಎಸ್‌ಪಿ ನಾಗೇಶ್, ಮಲ್ಲಿಕ್ ಮಾರ್ಗದರ್ಶನದಲ್ಲಿ ಅಪರಾಧ ವಿಭಾಗದ ಸತೀಶ್, ಅಬ್ದುಲ್ ಲತೀಫ್, ಅಶೋಕ್, ಬಾಸ್ಕರ್ ದಾಳಿಯಲ್ಲಿ ಪಾಲ್ಗೊಂಡಿದ್ದರು.

ಸಾ.ರಾ.ಮಹೇಶ್ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಹೇಳಿಲ್ಲ



ಪತ್ರಿಕಾಗೋಷ್ಠಿಯಲ್ಲಿ ತಾಪಂ ಮಾಜಿ ಅಧ್ಯಕ್ಷ ದೊಡ್ಡಕೊಪ್ಪಲು ನಾಗಣ್ಣ, ಜೆಡಿಎಸ್ ಮುಖಂಡ ಗಂಧನಹಳ್ಳಿ ಜಲೇಂದ್ರ ಮಾತನಾಡಿದರು.

ಕೆ.ಆರ್.ನಗರ : ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೇರಿದಂತೆ ಅನೇಕ ರಾಜಕೀಯ ನಾಯಕರು, ದಿಗ್ಗಜರು ಇದೇ ನನ್ನ ಕಡೆ ಚುನಾವಣೆ ಎಂದು ಘೋಷಣೆ ಮಾಡಿ ಸೋತಿದ್ದರೂ ಮತ್ತೆ ಚುನಾವಣೆಗೆ ಸ್ಪರ್ಧೆ ಮಾಡುತ್ತಿದ್ದಾರೆ. ಅಂತಹದ್ದರಲ್ಲಿ ನಮ್ಮ ನಾಯಕರಾದ ಮಾಜಿ ಸಚಿವ ಸಾ.ರಾ. ಮಹೇಶ್ ಅವರು ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಹೇಳಿಲ್ಲ ಎಂದು ಕುರುಬ ಸಮುದಾಯದ ತಾ.ಪಂ. ಮಾಜಿ ಅಧ್ಯಕ್ಷ ದೊಡ್ಡಕೊಪ್ಪಲು ನಾಗಣ್ಣ ಮತ್ತು ಜೆಡಿಎಸ್ ಮುಖಂಡ ಗಂಧನಹಳ್ಳಿ ಜಲೇಂದ್ರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಮುಖಂಡರ ಆರೋಪಕ್ಕೆ ತಿರುಗೇಟು ನೀಡಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಮಾಜಿ ಸಚಿವರಾದ ಸಾ.ರಾ.ಮಹೇಶ್ ಅವರ ಸುದೀರ್ಘ ರಾಜಕೀಯ ಸೇವೆಯಿಂದಲೇ ಜನಪ್ರಿಯತೆ ಪಡೆದು ಜನಪ್ರಿಯ ಶಾಸಕರಾಗಿದ್ದು ಇದನ್ನು ಸಹಿಸದ ಕಾಂಗ್ರೆಸ್ ಮುಖಂಡರು ಇಲ್ಲಸಲ್ಲದ ಅಪಾದನೆ ಮಾಡುತ್ತಿದ್ದಾರೆ, ನೀವು ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದಲ್ಲಿ ಅಧಿಕಾರಕ್ಕೆ ಬರಲು ಇಪ್ಪತ್ತು ವರ್ಷಗಳು ಬೇಕಾಗಿತ್ತು ಎಂದು ಕಾಂಗ್ರೆಸ್ ಪಕ್ಷದ ವಿರುದ್ಧ ಟೀಕಿಸಿದರು.

ಕೋವಿಡ್ ಸಂದರ್ಭದಲ್ಲಿ ತಮ್ಮ ಸ್ವಂತ ಆಸ್ತಿ ಅಡವಿಟ್ಟು ಕ್ಷೇತ್ರದ 80 ಸಾವಿರ ಕುಟುಂಬಕ್ಕೆ ಪಡಿತರ ಕಿಟ್ ವಿತರಣೆ ಮಾಡಿದರು, ಅಲ್ಲದೆ ಕೋವಿಡ್‌ನಲ್ಲಿ ಮೃತಪಟ್ಟ 136 ಕುಟುಂಬಗಳಿಗೆ ತಲಾ 25 ಸಾವಿರ ಆರ್ಥಿಕ ನೆರವು ನೀಡಿ ಸಾಂತ್ವನ ಹೇಳಿದ್ದಾರೆ ಎಂದರು.

ಬಳಿಕ ಗಂಧನಹಳ್ಳಿ ಜಲೇಂದ್ರ ಮಾತನಾಡಿ ಶಾಸಕ.ಡಿ.ರವಿಶಂಕರ್ ಅವರು ಜನಾಶೀರ್ವಾದ ಯಾತ್ರೆ ಮೂಲಕ ಮತ ಯಾಚನೆಗೆ ಬಂದಾಗ ನಾನು ಶಾಸಕನಾದರೆ ಗಂಧನಹಳ್ಳಿ ಗ್ರಾಮವನ್ನು ಸಮಗ್ರ ಅಭಿವೃದ್ಧಿ ಮಾಡುತ್ತೇನೆ ಎಂದರು. ಎಲ್ಲಿ ಅಭಿವೃದ್ಧಿ ಎಂದು ಪ್ರಶ್ನೆ ಮಾಡಿ ಅವರು

ಮಂಚನಹಳ್ಳಿ ಗುರುಪ್ರಸಾದ್ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ಕುರುಬ ಸಮಾಜದ ಜೆಡಿಎಸ್ ಮುಖಂಡರಾದ ಮಂಚನಹಳ್ಳಿ ಗುರು ಪ್ರಸಾದ್, ಮಧುವನಹಳ್ಳಿ ಶಿವಣ್ಣ, ಬಂಗಾರಿ, ಗಂಧನಹಳ್ಳಿ ರವೀಶ್, ಮೊದಲಾದವರು ಇದ್ದರು.

ಮಾನವ ಜೀವನ ಶಾಶ್ವತವಲ್ಲ, ಸತ್ಕಾರ್ಯಗಳೇ ಶಾಶ್ವತ



ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳವರ 25ನೇ ಪುಣ್ಯಸ್ಮರಣೋತ್ಸವ ಮತ್ತು ಜನ ಜಾಗೃತಿ ಧಾರ್ಮಿಕ ಸಭೆಯನ್ನು ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಸ್ವಾಮೀಜಿ ಉದ್ಘಾಟಿಸಿದರು.

ನಂಜನಗೂಡು: ಮಾನವ ಜೀವನ ಶಾಶ್ವತವಲ್ಲ. ಆದರೆ, ಮನುಷ್ಯ ಮಾಡಿದ ಸತ್ಕಾರ್ಯಗಳ ನೆನಪು ಶಾಶ್ವತವಾಗಿ ಉಳಿಯುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಸ್ವಾಮೀಜಿ ಹೇಳಿದರು.

ಭಾನುವಾರ ನಗರದ ಗೌರಿಘಟ್ಟ ಬೀದಿಯಲ್ಲಿರುವ ಹೊನ್ನಲಗೆರೆ ಮಠದಲ್ಲಿ ಆಯೋಜಿಸಿದ್ದ ಲಿಂಗೈಕ್ಯ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳವರ 25ನೇ ಪುಣ್ಯ ಸ್ಮರಣೋತ್ಸವ ಮತ್ತು ಜನ ಜಾಗೃತಿ ಧಾರ್ಮಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಶಾಸಕ ದರ್ಶನ್ ಧ್ರುವನಾರಾಯಣ್ ಮಾತನಾಡಿ ರಂಭಾಪುರಿ ವೀರ ಸಿಂಹಾಸನಾದೀಶ್ವರ ಮಠಕ್ಕೆ 300 ವರ್ಷಗಳ ಇತಿಹಾಸವಿದ್ದು ನಂಜನಗೂಡಿನ ಶಾಖಾ ಮಠಕ್ಕೆ ಮುಜರಾಯಿ ಇಲಾಖೆಯಿಂದ ಮುಂಬರುವ ದಿನಗಳಲ್ಲಿ ಅನುದಾನ ಕೊಡಿಸಿ ಕೊಡುವುದಾಗಿ ಭರವಸೆ ನೀಡಿದರು.

ಹೊನ್ನಲೆಗೆರೆ ಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಮಾತನಾಡಿದರು. ಇನ್ನು ಸಮಾರಂಭಕ್ಕೂ ಮುನ್ನ ನಗರದ ಪ್ರಮುಖ ರಸ್ತೆಗಳಲ್ಲಿ ಶ್ರೀ ರಂಭಾಪುರಿ ಸ್ವಾಮೀಜಿಯವರನ್ನು ಭವ್ಯ ಸಾರೋಟಿನಲ್ಲಿ ಮೆರವಣಿಗೆ ಮೂಲಕ ಕರೆತರಲಾಯಿತು. ಕಾರ್ಯಕ್ರಮದಲ್ಲಿ ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್, ಮುಡುಕುತೊರೆ ಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಧನಗೂರು ಮಠದ ಷಡಕ್ಷರ ಶಿವಾಚಾರ್ಯ ಸ್ವಾಮೀಜಿ, ಕಲ್ಲುಬಾಳು ಮಠದ ಶಿವಾನಂದ ಶಿವಾಚಾರ್ಯ ಸ್ವಾಮೀಜಿ, ವಾಟಾಳು ಮಠದ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ಮಲ್ಲನಮೂಲೆ ಮಠದ ಇಮ್ಮಡಿ ಸಿದ್ದಲಿಂಗ ಸ್ವಾಮೀಜಿ, ಶರಣ ಸಂಗಮ ಮಠದ ನಾಗರಾಜೇಂದ್ರ ಸ್ವಾಮೀಜಿ, ನವಿಲೂರು ಮಠದ ಚನ್ನಬಸವ ಸ್ವಾಮೀಜಿ ಮೊದಲಾದವರು ಭಾಗವಹಿಸಿದ್ದರು.

ಶಾಸಕ ಜಿ.ಡಿ.ಹರೀಶ್‌ಗೌಡರಿಂದ ಈರಣ್ಣ ಕಟ್ಟೆಗೆ ಪೂಜೆ



ಈರಣ್ಣೇಶ್ವರ ಹಬ್ಬದ ಪ್ರಯುಕ್ತ ಶಾಸಕ ಜಿ.ಡಿ.ಹರೀಶ್‌ಗೌಡರು, ಮೈಮುಲ್ ನಿರ್ದೇಶಕ ಕೆ.ಎಸ್.ಕುಮಾರ್ ಅವರೊಂದಿಗೆ ಹೊಸರಾಮನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಈರಣ್ಣ ಕಟ್ಟೆಗೆ ಪೂಜೆ ಸಲ್ಲಿಸಿದರು. ಈ ವೇಳೆ ಅವರನ್ನು ಅಭಿನಂದಿಸಲಾಯಿತು. ಜೆಡಿಎಸ್ ಮುಖಂಡ ಎಸ್.ಲೋಕೇಶ್, ಗ್ರಾಪಂ ಅಧ್ಯಕ್ಷ ರವಿ.ಆರ್.ಬಿ, ಸೋಮಶೇಖರ್, ಶಿವಕುಮಾರ್ ಹಾಜರಿದ್ದರು.

ಬೆಟ್ಟದಪುರ ಬೆಟ್ಟಕ್ಕೆ 50 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಕಾಮಗಾರಿ

ಜ.28ರಂದು ಮುಖ್ಯಮಂತ್ರಿಗಳಿಂದ ಗುದ್ದಲಿ ಪೂಜೆ



ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ ಕೆ.ವೆಂಕಟೇಶ್ ಗುದ್ದಲಿ ಪೂಜೆ ನೆರವೇರಿಸಿದರು.

ಪಿರಿಯಾಪಟ್ಟಣ: ತಾಲೂಕಿನ ಹಲವಾರು ಗ್ರಾಮಗಳ ಅಭಿವೃದ್ಧಿಗೆ 9 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗೆ ಸಚಿವ ಕೆ.ವೆಂಕಟೇಶ್ ಚಾಲನೆ ನೀಡಿದ್ದು, ಜನವರಿ 28ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಟ್ಟದಪುರದ ಬೆಟ್ಟಕ್ಕೆ 50 ಕೋಟಿ ರೂ ವೆಚ್ಚದಲ್ಲಿ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಲಿದ್ದಾರೆ ಎಂದು ಅವರು ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ, ಚಪ್ಪರದಹಳ್ಳಿ, ಹಲಗನಹಳ್ಳಿ, ಅಂಬಲಾರೆ ಹಾರನಹಳ್ಳಿ, ಬಿಲ್ಲುಂದ ಚನ್ನಕೇಶವಪುರ ಗ್ರಾಮಗಳಲ್ಲಿ ಹಾರಂಗಿ ನೀರಾವರಿ ಇಲಾಖೆ ವತಿಯಿಂದ ಸುಮಾರು 9 ಕೋಟಿ ರೂ. ವೆಚ್ಚದಲ್ಲಿ ರಸ್ತೆ, ಚರಂಡಿ ಹಾಗೂ ಕಾಂಕ್ರೀಟ್ ರಸ್ತೆಗಳಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ತಾಲೂಕಿನ ಅಭಿವೃದ್ಧಿಗೆ ನಾನು ಪ್ರಯತ್ನ ಮೀರಿ ಶ್ರಮಿಸುತ್ತಿದ್ದು ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಅಭಿವೃದ್ಧಿ ಮಾಡಲಾಗುವುದು ಇದೇ ಜ.28ರಂದು ಮುಖ್ಯಮಂತ್ರಿ ಬೆಟ್ಟದಪುರ ಬೆಟ್ಟಕ್ಕೆ 50 ಕೋಟಿ ರೂ. ವೆಚ್ಚದಲ್ಲಿ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಲಿದ್ದಾರೆ ಹಾಗೂ ಮತ್ತೊಂದು ಏತ ನೀರಾವರಿ ಯೋಜನೆಗೆ ಚಾಲನೆ ನೀಡಲಿದ್ದಾರೆ. ಅಲ್ಲದೆ ಇನ್ನು ಹಲವಾರು ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಿದ್ದು, ಅಂದು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಆಗಮಿಸಬೇಕೆಂದು ಅವರು ಮನವಿ ಮಾಡಿದರು.

14ನೇ ವರ್ಷದ ವಾರ್ಷಿಕೋತ್ಸವ

ಪಿರಿಯಾಪಟ್ಟಣ: ಪಿರಿಯಾಪಟ್ಟಣ ತಾಲೂಕಿನ ಕಿತ್ತೂರು ಗ್ರಾಮದ ಆಕ್ಸ್‌ಫರ್ಡ್ ಪಬ್ಲಿಕ್ ಶಾಲೆಯ 14ನೇ ವರ್ಷದ ವಾರ್ಷಿಕೋತ್ಸವವನ್ನು ವಿವಿಧ ಕಾರ್ಯಕ್ರಮಗಳೊಂದಿಗೆ ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಿರಿಯಾಪಟ್ಟಣ ತಾಲೂಕಿನ ಗ್ಯಾರೆಂಟಿ ಅನುಷ್ಠಾನ ಆಶ್ರಯ ಸಮಿತಿಯ ಅಧ್ಯಕ್ಷ ನಿತಿನ್ ವೆಂಕಟೇಶ್ ವಹಿಸಿದ್ದರು. ವ್ಯವಸಾಯ ಸೇವಾ ಸಹಕಾರ ಸಂಘದ ಅಧ್ಯಕ್ಷ ಸುಮಿತ್, ಮಾಜಿ ಅಧ್ಯಕ್ಷ ಸಚ್ಚಿನ್, ನಿವೃತ್ತ ಪ್ರೌಢಶಾಲಾ ಮುಖ್ಯ ಶಿಕ್ಷಕರಾದ ಕುಮಾರ್, ಗ್ರಾಮ ಪಂಚಾಯಿತಿ ಸದಸ್ಯ ದೀಪು, ಜಗದೀಶ್, ಸಂಸ್ಥೆಯ ನಿರ್ದೇಶಕ ಕೆ.ಬಿ.ಸುಬ್ರಹ್ಮಣ್ಯ ಇದ್ದರು.

ಎಲ್ಲಾ ಕ್ಷೇತ್ರಗಳಿಗಿಂತ ಶಿಕ್ಷಣ ಕ್ಷೇತ್ರ ಪವಿತ್ರ



ಕಂಪಲಾಪುರ: ಯಾವುದೇ ಕ್ಷೇತ್ರಗಳಿಗೆ ಹೋಲಿಸಿದರೆ ಶಿಕ್ಷಣ ಕ್ಷೇತ್ರ ತುಂಬಾ ಪವಿತ್ರವಾದದ್ದು ಎಂದು ಸಮೀಪದ ಬೋರೆಹೊಸಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಎಸ್‌ಡಿಎಂಸಿ ಅಧ್ಯಕ್ಷ ಜಯಣ್ಣ ಅಭಿಪ್ರಾಯ ಪಟ್ಟರು.

ಇದೇ ಶಾಲೆಯಲ್ಲಿ ಶಿಕ್ಷಕರಾಗಿ 16 ವರ್ಷಗಳ ಕಾಲ ಸೇವೆ ಸಲ್ಲಿಸಿ ಬೇರೆ ಶಾಲೆಗೆ ವರ್ಗಾವಣೆಗೊಂಡ ರಿಯಾಜ್ ಅಹಮದ್ ಅವರಿಗೆ ಬೀಳ್ಕೊಡುಗೆ ನೀಡಿ ಮಾತನಾಡಿ ನಮ್ಮ ಶಾಲೆಗೆ ರಿಯಾಜ್‌ರವರು ಸಲ್ಲಿಸಿರುವ ಸೇವೆ ಅವಿಸ್ಮರಣೀಯ. ಇವರ ಕರ್ತವ್ಯದ ದಿನಗಳಲ್ಲಿ ಶಾಲೆ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ, ಜೊತೆಗೆ ಪೋಷಕರ ಜೊತೆಗೆ ವಾತ್ಸಲ್ಯ, ಮಕ್ಕಳೊಂದಿಗೆ ಅವರ ಒಡನಾಟ ಹೇಳತೀರದು, ಇವರ ಸೇವೆ ಇನ್ನು ಇದ್ದಿದ್ದರೆ ನಮ್ಮ ಶಾಲೆ ಜಿಲ್ಲಾ ಮಟ್ಟದಲ್ಲಿ ಉತ್ತಮ ಹೆಸರು ಮಾಡುತಿತ್ತು ಎಂದರು.

ಮುಖ್ಯ ಶಿಕ್ಷಕ ಸುರೇಂದ್ರ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ಮಾಜಿ ಅಧ್ಯಕ್ಷ ಕುಮಾರ್, ಸದಸ್ಯರಾದ ಸ್ವಾಮಿ, ವೆಂಕಟೇಶ್ ನಾಯಕ, ಶಿಕ್ಷಕಿಯರಾದ ಗಾಯತ್ರಿ, ಪ್ರಭಾವತಿ, ದೀಪಶ್ರೀ ಸೇರಿದಂತೆ ಪೋಷಕರು ಹಾಜರಿದ್ದರು.

ಸರಗೂರು ತಾಪಂ ಹಳೆಯ ಕಟ್ಟಡ ಕೆಡವಿ ನೂತನ ಕಟ್ಟಡ ನಿರ್ಮಿಸಿ

ತಾಪಂ ಸಭೆಯಲ್ಲಿ ಅಧಿಕಾರಿಗಳಿಗೆ ಶಾಸಕ ಅನಿಲ್ ಚಿಕ್ಕಮಾದು ಸೂಚನೆ



ಸಾಮಾನ್ಯ ಸಭೆಯಲ್ಲಿ ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿದರು.

ಸರಗೂರು: ಶಿಥಿಲಗೊಂಡಿರುವ ಪಟ್ಟಣ ಪಂಚಾಯಿತಿ ಹಳೆಯ ಕಟ್ಟಡವನ್ನು ಶೀಘ್ರದಲ್ಲೆ ಕೆಡವಿ ನೂತನ ಕಟ್ಟಡ ನಿರ್ಮಾಣಕ್ಕೆ ಮುಂದಾಗಿ ಎಂದು ಶಾಸಕ ಅನಿಲ್ ಚಿಕ್ಕಮಾದು ಸೂಚಿಸಿದ್ದಾರೆ.

ಪಟ್ಟಣ ಪಂಚಾಯಿತಿ ಕಚೇರಿಯಲ್ಲಿ ಸೋಮವಾರ ನೂತನ ಅಧ್ಯಕ್ಷೆ ಚೈತ್ರಾಸ್ವಾಮಿ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಪಟ್ಟಣದ ಹೃದಯ ಭಾಗದಲ್ಲಿರುವ ಪಟ್ಟಣ ಪಂಚಾಯಿತಿ ಹಳೆಯ ಕಟ್ಟಡವನ್ನು ಕೆಡವಿ ನೂತನ ಕಟ್ಟಡವನ್ನು ನಿರ್ಮಿಸಬೇಕು. ಇದಕ್ಕಾಗಿ 50 ಲಕ್ಷ ರೂ. ಅನುದಾನವಿದ್ದು, ಹೆಚ್ಚುವರಿ ಅನುದಾನಕ್ಕಾಗಿ ಸರ್ಕಾರದೊಂದಿಗೆ ಚರ್ಚಿಸಿ ಬಿಡುಗಡೆ ಮಾಡಿಸಿಕೊಡಲಾಗುವುದು ಎಂದರು.

ಇದಕ್ಕೆ ಪ್ರತಿಕ್ರಿಯಸಿದ ಮುಖ್ಯಾಧಿಕಾರಿ ಎಸ್.ಕೆ.ಸಂತೋಷ್‌ಕುಮಾರ್, ಪಟ್ಟಣ ಪಂಚಾಯಿತಿ ಕಚೇರಿ ಸ್ಥಳಾಂತರಕ್ಕೆ ಕಟ್ಟಡ ಸಮಸ್ಯೆಯಿದ್ದು, ಕಟ್ಟಡ ಗುರುತಿಸಿದ ಕೂಡಲೇ ಸ್ಥಳಾಂತರಿಸಿ ಪಂಚಾಯಿತಿ ಕಚೇರಿ ಕೆಡವಿ ನೂತನ ಕಟ್ಟಡ ನಿರ್ಮಾಣ ಮಾಡಲಾಗುವುದು. ಹೆಚ್ಚುವರಿಯಾಗಿ ಸರಕಾರಕ್ಕೆ 5 ಕೋಟಿ ರೂ.ಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಪಟ್ಟಣದ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಗಿಡ–ಗಂಟಿಗಳನ್ನು ತೆರವುಗೊಳಿಸಲು ಅಧಿಕಾರಿಗಳು ಮುಂದಾಗಬೇಕು. ಕಂದಾಯ ಭೂಮಿಗಳಲ್ಲಿಯೂ ಬೆಳೆದಿರುವ ಜಂಗಲ್ ತೆರವಿಗೆ ತಹಸೀಲ್ದಾರ್ ಅವರು ಸೂಚನೆ ನೀಡಬೇಕು. ವಾರದೊಳಗೆ ಜಂಗಲ್ ತೆರವುಗೊಳಿಸಬೇಕು ಎಂದು ಗಡುವು ನೀಡಿದರು.

ಟ್ರಾಫಿಕ್ ಸರಿಪಡಿಸಿ: ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ಇದ್ದು, ಸಮಸ್ಯೆ ಬಗೆಹರಿಸಲು ಕ್ರಮವಹಿಸಬೇಕು. ಅಲ್ಲಲ್ಲಿ ವಾಹನ ನಿಲುಗಡೆ ನಿಷೇಧಿಸಲಾಗಿದೆ ಎಂಬ ನಾಮಫಲಕ ಅಳವಡಿಸಲು ಕ್ರಮವಹಿಸಬೇಕು. ವಾಹನಗಳು ಸೂಕ್ತ ಸ್ಥಳದಲ್ಲಿ ನಿಲ್ಲಿಸುವಂತೆ ಪೊಲೀಸರು ಸೂಚನೆ ನಿಡಬೇಕು ಎಂದು ತಾಕೀತು ನೀಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪಿಎಸ್‌ಐ ಆರ್. ಕಿರಣ್, ಆಟೋ ಚಾಲಕರು ಶಿಸ್ತಿನಿಂದ ಟ್ರಾಫಿಕ್ ನಿಯಮ ಪಾಲಿಸುತ್ತಿದ್ದಾರೆ. ನಾಲ್ಕು ಚಕ್ರದ ಗೂಡ್ಸ್ ವಾಹನಗಳು, ಕಾರು, ಜೀಪ್‌ಗಳಿಗೆ ವಾಹನ ನಿಲುಗಡೆಗೆ ಪ್ರತ್ಯೇಕವಾದ ಜಾಗಬೇಕು ಎಂದು ಸಲಹೆ ನೀಡಿದರು. ಆಗ ಮುಖ್ಯಾಧಿಕಾರಿ ಸಂತೋಷ್ ಕುಮಾರ್, ಸದಸ್ಯರಾದ ಶ್ರೀನಿವಾಸ್ ಮಾತನಾಡಿ, ಬಸ್ ನಿಲ್ದಾಣದ ಹಿಂಭಾಗದಲ್ಲಿ ಬಾಬು ಜಗಜೀವನ್‌ರಾಮ್ ಸಮುದಾಯ ಭವನದ ಪಕ್ಕದಲ್ಲಿ ಸಾರ್ವಜನಿಕ ಜಾಗವಿದ್ದು, ಅಲ್ಲಿ ವಾಹನಗಳ ನಿಲುಗಡೆಗೆ ಅವಕಾಶ ಮಾಡಿಕೊಟ್ಟರೆ ಅನುಕೂಲವಾಗಲಿದೆ ಎಂದರು. ಇದಕ್ಕೆ ಶಾಸಕರು ಶೀಘ್ರದಲ್ಲೆ ವಾಹನಗಳ ನಿಲುಗಡೆಗೆ ಅವಕಾಶ ಮಾಡಿಕೊಡಬೇಕು. ಇದರಿಂದ ಯಾರಿಗೂ ತೊಂದರೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದರು.

ತಹಸೀಲ್ದಾರ್ ಮೋಹನಕುಮಾರಿ, ಪಪಂ ಅಧ್ಯಕ್ಷೆ ಚೈತ್ರಾಸ್ವಾಮಿ, ಸದಸ್ಯರಾದ ಶ್ರೀನಿವಾಸ್, ಚಲುವಕೃಷ್ಣ, ಹೇಮಾವತಿ ರಮೇಶ್, ಸಣ್ಣತಾಯಮ್ಮ, ಚಂದ್ರಕಲಾ ರಾಜಣ್ಣ, ಪಿಎಸ್‌ಐ ಆರ್.ಕಿರಣ್, ಸಾರಿಗೆ ಇಲಾಖೆಯ ಮಹದೇವಣ್ಣ, ಅರಣ್ಯ ಇಲಾಖೆ ಡಿಆರ್ ಎಫ್‌ಓ ಪ್ರದೀಪ್, ಸಿಬ್ಬಂದಿಗಳಾದ ರಾಮು, ಪಳನಿ, ಶಿವಪ್ರಸಾದ್, ಅನಿತಾಕುಮಾರಿ, ಅರ್ಜುನ, ಸ್ವಾಮಿ, ನಾಗೇಶ್, ಗಿರೀಶ್, ಶಾಸಕರ ಆಪ್ತ ಸಹಾಯಕ ಸುದರ್ಶನ್, ಸಿದ್ದರಾಜು ಸೇರಿದಂತೆ ಇನ್ನಿತರರು ಹಾಜರಿದ್ದರು.

ಬಿಜೆಪಿ ಕಾರ್ಯಕರ್ತೆ ವಿವಸ್ತ್ರಗೊಳಿಸಿ ದೌರ್ಜನ್ಯ ಖಂಡಿಸಿ
ಮೈಸೂರಲ್ಲಿ ಬಿಜೆಪಿ ಬೃಹತ್ ಪ್ರತಿಭಟನೆ

ಮೈಸೂರು, ಜ.12(ಜಿಎ)–ಹುಬ್ಬಳ್ಳಿಯಲ್ಲಿ ಬಿಜೆಪಿ ಕಾರ್ಯಕರ್ತೆ ಸುಜಾತರನ್ನು ವಿವಸ್ತ್ರಗೊಳಿಸಿ, ಅವರ ಮೇಲೆ ದೌರ್ಜನ್ಯ ನಡೆಸಿದ್ದನ್ನು ಖಂಡಿಸಿ ಮೈಸೂರು ನಗರ ಬಿಜೆಪಿ ಮತ್ತು ಗ್ರಾಮಾಂತರ ಜಿಲ್ಲಾ ಘಟಕದ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು.



ಬಿಜೆಪಿ ಕಾರ್ಯಕರ್ತೆ ವಿವಸ್ತ್ರಗೊಳಿಸಿ, ಅವರ ಮೇಲಿನ ದೌರ್ಜನ್ಯ ಖಂಡಿಸಿ ಮೈಸೂರು ನಗರ ಬಿಜೆಪಿ, ಗ್ರಾಮಾಂತರ ಜಿಲ್ಲಾ ಘಟಕದಿಂದ ಪ್ರತಿಭಟನೆ ನಡೆಯಿತು.

ಮೈಸೂರಿನ ರಾಮಸ್ವಾಮಿ ವೃತ್ತದಲ್ಲಿ ಬಿಜೆಪಿ ಮುಖಂಡರು, ಕಾರ್ಯಕರ್ತರು, ವಿವಿಧ ಮೋರ್ಚಾಗಳ ಅಧ್ಯಕ್ಷರು ಜಮಾಯಿಸಿ 'ಕಾಂಗ್ರೆಸ್ ಸರ್ಕಾರ ತೊಲಗಲಿ', 'ಕಾನೂನು ಸುವ್ಯವಸ್ಥೆ ಹಳ್ಳಹಿಡಿಸಿರುವ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ', 'ಹಿಂದು ಹೆಣ್ಣು ಮಕ್ಕಳ ಸುರಕ್ಷತೆಯನ್ನು ಕಡೆಗಣಿಸಿರುವ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ', 'ಹಿಂದುಗಳಿಗೆ ರಕ್ಷಣೆ ನೀಡದ ತುಘಲಕ್ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ', 'ದೇಶ ಕಂಡ ಕಡು ಭ್ರಷ್ಟ ಸಿಎಂ ಸಿದ್ದರಾಮಯ್ಯನವರಿಗೆ ಧಿಕ್ಕಾರ', 'ರಾಜ್ಯ ಕಂಡ ಅತೀ ಭ್ರಷ್ಟ ಸರ್ಕಾರಕ್ಕೆ ಧಿಕ್ಕಾರ' ಮುಂತಾದ ಭಿತ್ತಿ ಫಲಕಗಳನ್ನು ಹಿಡಿದು ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ರಾಜ್ಯ ಬಿಜೆಪಿ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಪ್ರಫುಲ್ಲಾ ಮಲ್ಲಾಡಿ ಮಾತನಾಡಿ, ಹುಬ್ಬಳ್ಳಿಯಲ್ಲಿ ನಡೆದ ಘಟನೆ ಅಮಾನವೀಯ ಮತ್ತು ಆತಂಕವನ್ನುಂಟು ಮಾಡಿದೆ. ರಾಜಕೀಯ ವಿಚಾರಕ್ಕೆ ಸಂಬಂಧಿಸಿದಂತೆ ಕಾನೂನು ಪ್ರಕಾರ ನಡೆಯುವ ಬದಲಿಗೆ ವೈಯಕ್ತಿಕ ವಿಚಾರದಂತೆ ವರ್ತಿಸಿ, ಪೊಲೀಸರು ಮೃಗದಂತೆ ನಡೆದುಕೊಂಡಿದ್ದಾರೆ. ಮಹಿಳಾ ಕಾರ್ಯಕರ್ತೆಯನ್ನು ಬಂಧಿಸುವ ನೆಪದಲ್ಲಿ ಹಿಂಸೆ, ದೌರ್ಜನ್ಯದ ಜೊತೆಗೆ ವಿವಸ್ತ್ರಗೊಳಿಸಿ ಮಹಿಳೆಯರಿಗೆ ಸುರಕ್ಷತೆ ಇಲ್ಲದಂತೆ ಆತಂಕ ಸೃಷ್ಟಿಸಲಾಗಿದೆ. ರಾಜ್ಯ ಸರ್ಕಾರ ಮತ್ತು ರಾಜ್ಯ ಮಹಿಳಾ ಆಯೋಗ ಪ್ರಾಮಾಣಿಕವಾಗಿ ತನಿಖೆ ಮಾಡದೆ ಆಕೆಯೂ ಸ್ವಯಂಪ್ರೇರಿತವಾಗಿ ವಿವಸ್ತ್ರಗೊಂಡಳೆಂದು ಹೇಳಿರುವುದು ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಸಮಾಜಘಾತುಕ ಚಟುವಟಿಕೆಗಳು ಹೆಚ್ಚಾಗಿವೆ. ಮೈಸೂರಿನಲ್ಲಿ ಬಾಲಕಿ ಮೇಲೆ ಅತ್ಯಾಚಾರ, ಬೆಂಗಳೂರು, ಹುಣಸೂರಿನಲ್ಲಿ ಹಾಡಹಗಲೇ ದರೋಡೆ ನಡೆದಿರುವುದು ಸಾಕ್ಷಿಯಾಗಿದೆ ಎಂದು ಆರೋಪಿಸಿದರು.

ಮಹಿಳೆಯರ ಖಾತೆಗೆ ಐದು ಸಾವಿರ ಕೋಟಿ ರೂ. ಗೃಹಲಕ್ಷ್ಮೀ ಹಣಜಮಾ ಮಾಡಿಲ್ಲ. ಈ ಹಣ ಎಲ್ಲಿ ಹೋಯಿತು ಎಂಬುದನ್ನು ಸರ್ಕಾರ ಬಹಿರಂಗಪಡಿಸಬೇಕು. ಮೈಸೂರು ಅರಮನೆಯ ಎದುರು ಸಂಭವಿಸಿದ ಹೀಲಿಯಂ ಗ್ಯಾಸ್ ಸಿಲಿಂಡರ್ ಸ್ಫೋಟದಲ್ಲಿ ಮೃತಪಟ್ಟ ಇಬ್ಬರು ಮಹಿಳೆಯರ ಕುಟುಂಬಕ್ಕೆ ಪರಿಹಾರ ಘೋಷಣೆ ಮಾಡಿಲ್ಲ. ರಾಜ್ಯದ ವಿಚಾರದಲ್ಲಿ ಮೌನವಾಗಿರುವ ಸಿಎಂ, ಕೇರಳಕ್ಕೆ ಪರಿಹಾರ ಕೊಡುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದರು.

ಮಾಜಿ ಉಪ ಮೇಯರ್ ಡಾ.ಎಂ.ಜೆ. ರೂಪಾ ಮಾತನಾಡಿ, ಹುಬ್ಬಳ್ಳಿ ಘಟನೆಯ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು. ಕಾನೂನುಬಾಹಿರ ಕ್ರಮ ಅನುಸರಿಸಿದ ಪೊಲೀಸರನ್ನು ಅಮಾನತುಪಡಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮೈಸೂರು ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಗ್ರಾಮಾಂತರ ಅಧ್ಯಕ್ಷ ಕುಂಬ್ರಳ್ಳಿ ಎನ್.ಸುಬ್ಬಣ್ಣ, ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಕೌಟಿಲ್ಯ ಆರ್.ರಘು, ಮಾಜಿ ಸಂಸದ ಪ್ರತಾಪ್ ಸಿಂಹ, ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಕಾಂಪೋಸ್ಟ್ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಂ.ಶಿವಕುಮಾರ್, ಮಾಜಿ ಮೇಯರ್‌ಗಳಾದ ಸಂದೇಶ್ ಸ್ವಾಮಿ, ಶಿವಕುಮಾರ್, ನಗರ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರಾದ ಎಂ.ಅರುಣ್‌ಕುಮಾರ್‌ಗೌಡ, ಮೈ.ಪು. ರಾಜೇಶ್, ಎಂ.ಆರ್.ಬಾಲಕೃಷ್ಣ, ಪ್ರಧಾನ ಕಾರ್ಯದರ್ಶಿಗಳಾದ ಬಿ.ಎಂ. ರಘು, ರಘುಮೂರ್ತಿ, ವಿ.ಸೋಮಸುಂದರ್, ಪಾಲಿಕೆ ಮಾಜಿ ಸದಸ್ಯರಾದ ಎಂ.ಕೆ.ಶಂಕರ್, ಸೌಮ್ಯ ಉಮೇಶ್, ಪ್ರಮೀಳಾ ಭರತ್, ಆರ್.ರವೀಂದ್ರ, ರಂಗಸ್ವಾಮಿ, ಎಂ.ಯು. ಸುಬ್ಬಯ್ಯ, ನಗರ ಎಸ್.ಟಿ.ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ಎಂ.ರಾಮಕೃಷ್ಣ, ಚಾಮರಾಜ ಕ್ಷೇತ್ರದ ಅಧ್ಯಕ್ಷ ದಿನೇಶ್‌ಗೌಡ, ಎನ್‌ಆರ್ ಕ್ಷೇತ್ರದ ಮಾಜಿ ಅಧ್ಯಕ್ಷ ಸು.ಮುರುಳಿ, ಗ್ರಾಮಾಂತರ ಉಪಾಧ್ಯಕ್ಷೆ ನಳಿನಿ, ವಕ್ತಾರರಾದ ಮಹೇಶ್ ರಾಜೇ ಅರಸ್, ದಯಾನಂದ ಪಟೇಲ್, ಸಂತೋಷ್‌ಕುಮಾರ್, ಕೆಆರ್ ಕ್ಷೇತ್ರದ ಅಧ್ಯಕ್ಷ ಗೋಪಾಲ್‌ರಾಜೇ ಅರಸ್, ಮಾಜಿ ಉಪಾಧ್ಯಕ್ಷ ಜೋಗಿ ಮಂಜು ಮುಖಂಡರಾದ ಎಸ್.ಜಯಪ್ರಕಾಶ್ (ಜೆಪಿ), ವಾಣೀಶ್ ಕುಮಾರ್, ಚೇತನ್ ಇನ್ನಿತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	**(ದೂ: 2521923)**
ಪರಾಶಕ್ತಿ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	**(ದೂ: 2422871)**
ಮನ ಶಂಕರ ವರಪ್ರಸಾದಗಾರು (ತೆ)	3 ಪ್ರದರ್ಶನಗಳು
ಬಾಲಾಜಿ	**(ದೂ: 2497199)**
ತೇರಾ ಇಸ್ಕ್ ಮೈನ್ (ಹಿ)	3 ಪ್ರದರ್ಶನಗಳು
ಮಹದೇಶ್ವರ	**(ಮೊ:9900820093)**
45 ಫೇಸ್ ದಿ ಇಯರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರಾಜಾ ಸಾಬ್ (ಕ)	2 ಪ್ರದರ್ಶನಗಳು
ರಾಜಕಮಲ್	
ಧುರಂದರ್ (ಹಿ)	4 ಪ್ರದರ್ಶನಗಳು
ಸಂಗಂ	
ಮಾರ್ಕ್ (ಕ)	4 ಪ್ರದರ್ಶನಗಳು
ಲಿಡೋ	
ಡೆವಿಲ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ರಾಜಾ ಸಾಬ್ (ಹಿಂ)	4 ಪ್ರದರ್ಶನಗಳು

ಮಾಯಾವತಿ ಹುಟ್ಟುಹಬ್ಬದ ಅಂಗವಾಗಿ
ಜ.15 ಸ್ಫೂರ್ತಿ ಪ್ರೇರಣಾ ಸಮಾವೇಶ



ಮೈಸೂರು, ಜ.12(ಜಿಎ)–ಬಹುಜನ ಸಮಾಜ ಪಾರ್ಟಿ (ಬಿಎಸ್‌ಪಿ)ಯ ರಾಷ್ಟ್ರೀಯ ಅಧ್ಯಕ್ಷೆ ಮಾಯಾವತಿ ಅವರ ಹುಟ್ಟುಹಬ್ಬದ ಅಂಗವಾಗಿ ದೇಶದಾದ್ಯಂತ ಜನಕಲ್ಯಾಣ ದಿವಸ್ ಆಚರಿಸಲಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಮೈಸೂರು ಭಾಗದಿಂದ ಸ್ಫೂರ್ತಿ ಪ್ರೇರಣಾ ಸಮಾವೇಶವನ್ನು ಜ.15ರಂದು ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ಏರ್ಪಡಿಸಲಾಗಿದೆ ಎಂದು ಬಿಎಸ್‌ಪಿ ರಾಜ್ಯಾಧ್ಯಕ್ಷ ಎಂ.ಕೃಷ್ಣಮೂರ್ತಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10.30ಕ್ಕೆ ಸಂಸದ ರಾಜಾರಾಮ್ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ. ಮೈಸೂರು, ಚಾಮರಾಜನಗರ, ಮಂಡ್ಯ ಸೇರಿದಂತೆ ವಿವಿಧ ಜಿಲ್ಲೆಗಳಿಂದ 2ಸಾವಿರ ಮಂದಿ ಭಾಗವಹಿಸಲಿದ್ದಾರೆ. ಈ ಸಮಾವೇಶಕ್ಕೆ ಯಾವುದೇ ಜನರಿಂದ ಹಣ ಸಂಗ್ರಹ ಮಾಡಿಲ್ಲ. ಬದಲಾಗಿ ಕಾರ್ಯಕರ್ತರಿಂದ ಸಂಗ್ರಹಿಸಿದ ಹಣದಿಂದ ಮಾಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ ವಿಚಾರಕ್ಕಿಂತ ಕೇವಲ ಕುರ್ಚಿ ವಿಚಾರಕ್ಕೆ ಹೆಚ್ಚಿನ ಕಿತ್ತಾಟ ನಡೆಯುತ್ತಿದೆ. ಸಿದ್ದರಾಮಯ್ಯ ಅವರ ದಾಖಲೆ ಜನರಿಗೆ ಸಂತಸ ತಂದಿದ್ದೀಯಾ ಎಂಬ ಪ್ರಶ್ನೆ ಮೂಡುತ್ತಿದೆ. ಗ್ಯಾರಂಟಿ ಯೋಜನೆಗೆ ಮಾತ್ರ ಹೊತ್ತು ನೀಡಿ ಅಭಿವೃದ್ಧಿ ಶೂನ್ಯವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಮತ್ತೊಂದೆಡೆ ಅಲ್ಪಸಂಖ್ಯಾತರು ಮತ್ತು ದಲಿತರಿಗೂ ಸರ್ಕಾರ ಮೋಸ ಮಾಡುತ್ತಿದ್ದು, ಎಸ್‌ಸಿ, ಎಸ್‌ಟಿ ಹಣವನ್ನು ದುರುಪಯೋಗ ಮಾಡಿಕೊಂಡಿದೆ. ದೇವರಾಜ ಅರಸು ಅವರು ಭೂಮಿ ಇಲ್ಲದ ಸಾವಿರಾರೂ ಮಂದಿಗೆ ಭೂಮಿ ನೀಡಿದ್ದಾರೆ. ಆದರೆ, ಸಿದ್ದರಾಮಯ್ಯ ಹೇಗೆ ಅರಸು ಅವರಿಗೆ ಹೋಲಿಕೆ ಮಾಡಿಕೊಳ್ಳುತ್ತಾರೆ ಎಂದು ಪ್ರಶ್ನಿಸಿದರು.

ರಾಜ್ಯದ ಎಲ್ಲಾ ವಿವಿಯಲ್ಲಿ ಅಧ್ಯಾಪಕರ ಕೊರತೆ ಇದೆ. ಸರ್ಕಾರಿ ಶಾಲೆಗಳು ಮುಚ್ಚುತ್ತಿವೆ. ಶಿಕ್ಷಣ ವ್ಯವಸ್ಥೆ ಹಳ ಹಿಡಿಯುತ್ತಿದೆ. ಶೀಘ್ರವಾಗಿ ಅಧ್ಯಾಪಕರನ್ನು ನೇಮಕ ಮಾಡಿ. ವಿವಿಧ ಇಲಾಖೆಯಲ್ಲಿ ಮೂರು ಲಕ್ಷ ಉದ್ಯೋಗವನ್ನು ಭರ್ತಿ ಮಾಡಬೇಕು. ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇದ್ದು, ಕೂಡಲೇ ಭರ್ತಿ ಮಾಡಿ ಎಂದು ಆಗ್ರಹಿಸಿದರು. ಸುದ್ದಿ ಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಜಿಲ್ಲಾ ಉಸ್ತುವಾರಿ ಬಸವಣ್ಣ, ಹರೀಶ್, ನಂಜುಂಡಿ, ರಾಜೇಶ್ ಇದ್ದರು.

ಪರಿಶಿಷ್ಟ ಜಾತಿ ಅಲೆಮಾರಿ ಕೊರಮ ಜನಾಂಗದ ಮಹಿಳೆ ಮೇಲೆ ಮಾರಣಾಂತಿಕ ಹಲ್ಲೆ ಆರೋಪ

ಆರೋಪಿಗಳ ಬಂಧಿಸದೆ ಮೀನಾಮೇಷ ಎಣಿಸುತ್ತಿರುವ ಪೊಲೀಸರು, ಜಾರಿ ನಿರ್ದೇಶನಾಲಯದ ಅಧಿಕಾರಿಗಳು

ಮೈಸೂರು,ಜ.12(ಜಿಎ)–ಪರಿಶಿಷ್ಟ ಜಾತಿ ಅಲೆಮಾರಿ ಕೊರಮ ಜನಾಂಗದ ಮಹಿಳೆ ಮೇಲೆ ಮಾರಣಾಂತಿಕವಾಗಿ ಹಲ್ಲೆ ನಡೆದು 15 ದಿನ ಕಳೆದರೂ ಆರೋಪಿಗಳನ್ನು ಬಂಧಿಸದೇ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯ ಪೊಲೀಸ್ ಅಧಿಕಾರಿಗಳು ಮೀನಾಮೇಷ ಎಣಿಸುತ್ತಿದ್ದಾರೆ ಎಂದು ಮೈಸೂರು ಜಿಲ್ಲಾ ಕೊರಮ–ಕೊರಚ ಮಹಾಸಂಘದ ಅಧ್ಯಕ್ಷ ಡಿ.ಎನ್.ಮುತ್ತುರಾಜ್ ದೂರಿದರು.

ಮೈಸೂರು ಜಿಲ್ಲಾ ಪತ್ರಕರ್ತ ಸಂಘದ ಸಭಾಂಗಣದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹುಣಸೂರು ತಾಲೂಕಿನ ತೊಂಡಾಳ್ ಗ್ರಾಮದ ನಿವಾಸಿ, ಕೊರಮ ಜನಾಂಗದ ಸಾಕಮ್ಮ ಅವರ ಮೇಲೆ ನೆರೆಯ ಮನೆಯ ಭಾಗ್ಯಮ್ಮ ಮತ್ತು ಅವರ ಕುಟುಂಬದವರು ಡಿ.26ರಂದು ಏಕಾಏಕಿ ಸಾಕಮ್ಮ ಅವರ ಮನೆಗೆ ನುಗ್ಗಿ ಹಲ್ಲೆ ನಡೆಸಿ, ಅವಾಚ್ಯ ಪದಗಳಿಂದ ನಿಂದಿಸಿದ್ದಾರೆ.

ಈ ಸಂಬಂಧ ಬಿಳಿಕೆರೆ ಪೊಲೀಸ್ ಠಾಣೆಯಲ್ಲಿ ಜಾತಿ ನಿಂದನೆ ಪ್ರಕರಣ ದಾಖಲಾಗಿ, ಅಲ್ಲಿಂದ ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯಕ್ಕೆ ಪ್ರಕರಣ ವರ್ಗಾವಣೆಯಾಗಿದೆ. ಘಟನೆ ನಡೆದು 15 ದಿನವಾದರೂ ಆರೋಪಿಗಳ ಬಂಧನವಾಗಿಲ್ಲ. ಪರಿಶಿಷ್ಟ ಜಾತಿಯವರಿಗೆ ಹಲ್ಲೆಯಾದಲ್ಲಿ ಕೂಡಲೇ ಆರೋಪಿಗಳ ಬಂಧನವಾಗಬೇಕು ಆದರೂ ನ್ಯಾಯ ದೊರಕಿಸಿಕೊಡುವ ಕೆಲಸವನ್ನು ಪೊಲೀಸ್ ಇಲಾಖೆ ಮಾಡಿಲ್ಲ ಎಂದರು.

ಹಲ್ಲೆಗೊಳಗಾದ ಸಾಕಮ್ಮ ಮಾತನಾಡಿ, ಮನೆಯೊಳಗಿನ ನೀರೊಲೆ ಬಳಿ ಕುಳಿತಿದ್ದ ನನ್ನ ಮೇಲೆ ಏಕಾಏಕಿ ಮಾರುತಿ ಮತ್ತು ಭಾಗ್ಯಮ್ಮ ಹಲ್ಲೆ ಮಾಡಿದರು. ಮನೆಯ ಹೊರಗೆ ನನ್ನನ್ನು ಎಳೆದು ತಂದು ಹೊಡೆದರಲ್ಲದೆ ಮನಸ್ಸೋ ಇಚ್ಛೆ ಬಾಯಿಗೆ ಬಂದಂತೆ ಬೈದು ದೈಹಿಕವಾಗಿ ಕುಗ್ಗಿಸಿದ್ದಾರೆ. ಆರೋಪಿಗಳನ್ನು ಬಂಧಿಸಿ, ನ್ಯಾಯ ದೊರಕಿಸದಿದ್ದರೆ ಗ್ರಾಮ ತೊರೆಯಬೇಕು ಇಲ್ಲವೇ ಆತ್ಮಹತ್ಯೆ ಮಾಡಿಕೊಳ್ಳಬೇಕಾಗಿದೆ ಎಂದು ಕಣ್ಣೀರು ಹಾಕಿದರು.

ಸುದ್ದಿಗೋಷ್ಠಿಯಲ್ಲಿ ತೊಂಡಾಳ್ ಗ್ರಾಮದ ಯಜಮಾನರಾದ ಮುಕುಂದ ಶೆಟ್ಟಿ, ಗ್ರಾಮಸ್ಥರಾದ ಮುದ್ದಶೆಟ್ಟಿ, ಆರ್.ಅಶೋಕ್, ಮಹೇಶ್, ಪಿರಿಯಾಪಟ್ಟಣ ತಾಲೂಕು ಕುಳುವ ಮಹಾಸಂಘದ ಶ್ರೀನಿವಾಸ್, ವಿಶ್ವನಾಥ್ ಮತ್ತಿತರರಿದ್ದರು.

ಹಿರಿಯ ನಾಗರಿಕರ ಸಂಘದಿಂದ ಸಾಧಕರಿಗೆ ಸನ್ಮಾನ



ಬಿ.ಜಿ.ಎಸ್ ಒಕ್ಕಲಿಗರ ಕ್ಷೇಮಾಭಿವೃದ್ಧಿ ಹಿರಿಯ ನಾಗರಿಕರ ಸಂಘದ ವತಿಯಿಂದ ನಿವೃತ್ತ ಅಧಿಕಾರಿ ಪಿ.ಎಂ.ರಾಮು ದಂಪತಿಯನ್ನು ಅಭಿನಂದಿಸಲಾಯಿತು

ಮೈಸೂರು,ಜ.12–ಮೈಸೂರಿನ ಜಯನಗರದಲ್ಲಿರುವ ಬಿ.ಜಿ.ಎಸ್ ಒಕ್ಕಲಿಗರ ಕ್ಷೇಮಾಭಿವೃದ್ಧಿ ಹಿರಿಯ ನಾಗರಿಕರ ಸಂಘದ ವತಿಯಿಂದ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ನೇಗಿಲಯೋಗಿ ಸಭಾಂಗಣದಲ್ಲಿ ಸೋಮವಾರ ನಡೆದ ಕಾರ್ಯಕ್ರಮದಲ್ಲಿ ತೋಟಗಾರಿಕೆ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಪಿ.ಎಂ.ರಾಮು ಹಾಗೂ ಅವರ ಪತ್ನಿ ಪಾರ್ವತಮ್ಮ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಇಂದಿನ ಎಂಡಿಎ)ದ ನಿವೃತ್ತ ಕಾರ್ಯಪಾಲಕ ಇಂಜಿನಿಯರ್ ಎಸ್.ವಿ.ಗೌಡಪ್ಪ ಮಾತನಾಡಿ, ಹಿರಿಯ ನಾಗರಿಕರನ್ನು ಗೌರವಿಸುವುದು ಸಮಾಜದ ಕರ್ತವ್ಯ. ಮನೆಯಲ್ಲಿ ಹಿರಿಯರಿಗೆ ಪೂಜ್ಯನೀಯವಾಗಿ ಕಾಣಬೇಕು. ಅವರ ಆರೋಗ್ಯ, ಆಸೆ–ಆಕಾಂಕ್ಷೆಗಳಿಗೆ ಗಮನಕೊಡುವುದು ಮಕ್ಕಳ ಜವಾಬ್ದಾರಿ ಎಂದರು.

ಪದವಿಪೂರ್ವ ಶಿಕ್ಷಣ ಇಲಾಖೆ ನಿವೃತ್ತ ಪ್ರಾಂಶುಪಾಲ ಹೆಚ್.ರಾಜುಗೌಡ ಮಾತನಾಡಿ, ಅವಕಾಶ ವಂಚಿತರು ಸಮಾಜದಲ್ಲಿ ನೆಮ್ಮದಿಯಿಂದ ಬದುಕುವ ವಾತಾವರಣ ಸೃಷ್ಟಿಯಾಗಬೇಕು. ಈ ನಿಟ್ಟಿನಲ್ಲಿ ಉಳ್ಳವರು ಮುಂದಾಗಬೇಕು. ನೊಂದವರು ಮುಖ್ಯವಾಹಿನಿಗೆ ಬರಲು ಅವರಿಗೆ ಸಹಕಾರ ನೀಡಬೇಕು ಎಂದು ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ನೇಗಿಲಯೋಗಿ ಸಂಸ್ಥೆಯ ಅಧ್ಯಕ್ಷ ರವಿಕುಮಾರ್, ಕಾರ್ಯದರ್ಶಿ ಕೆ.ಎಸ್.ಕೃಷ್ಣ, ನಿರ್ದೇಶಕ ದೇವರಾಜು, ಶಕುಂತಲ, ದೇವರಾಜಯ್ಯ, ಪುಟ್ಟಸ್ವಾಮಿ, ಜವರೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಹಾಡಹಗಲೇ ಮನೆ ಬೀಗ ಮುರಿದು
ನಗದು, ಚಿನ್ನಾಭರಣ ಕಳವು



ಪಿರಿಯಾಪಟ್ಟಣ, ಜ. 12(ಆರ್‌ಕೆ)–ಹಾಡಹಗಲೇ ಮನೆ ಮುಂಬಾಗಿಲ ಬೀಗ ಮುರಿದು 2.5 ಲಕ್ಷ ರೂ ನಗದು ಹಾಗೂ 30 ಗ್ರಾಂ ಚಿನ್ನಾಭರಣ ಕಳವು ಮಾಡಿರುವ ಘಟನೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕು, ಬೈಲಕುಪ್ಪೆ ಬಳಿಯ ಬಸವನಹಳ್ಳಿಯಲ್ಲಿ ಶನಿವಾರ ಸಂಜೆ ನಡೆದಿದೆ.

ಕಾರಿನಲ್ಲಿ ಬಂದ ನಾಲ್ವರು ಖದೀಮರು ಗ್ರಾಮದ ರಮೇಶ್ ನಾಯಕ ಎಂಬುವರ ಮನೆ ಬೀಗ ಮುರಿದು ಒಳ ನುಸುಳಿ ಕೊಠಡಿಯ ಅಲ್ಮೇರದಲ್ಲಿದ್ದ 2.5 ಲಕ್ಷ ರೂ. ನಗದು ಹಾಗೂ 30 ಗ್ರಾಂ ಆಭರಣ ಕದ್ದು ಪರಾರಿಯಾಗಿದ್ದರು. ಬೀಗ ಹಾಕಿಕೊಂಡು ಅಂದು ಜಮೀನಿಗೆ ಹೋಗಿದ್ದ ಮನೆಯವರು ಸಂಜೆ 6 ಗಂಟೆಗೆ ಹಿಂದಿರುಗಿದಾಗ ಬಾಗಿಲು ತೆರೆದಿರುವುದು ಕಂಡುಬಂತು. ಆಶ್ಚರ್ಯಗೊಂಡ ರಮೇಶ್ ನಾಯಕ ಕುಟುಂಬದವರು ಒಳ ಹೋಗಿ ನೋಡಿದಾಗ ನಗದು ಮತ್ತು ಚಿನ್ನಾಭರಣ ನಾಪತ್ತೆಯಾಗಿರುವುದು ಕಂಡು ಬಂದಿತು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಬೈಲುಕುಪ್ಪೆ ಠಾಣೆ ಸಬ್‌ಇನ್ಸ್‌ಪೆಕ್ಟರ್ ಸ್ವಾಮಿನಾಯಕ್ ಹಾಗೂ ಸಿಬ್ಬಂದಿ ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ತನಿಖೆ ವೇಳೆ ಖದೀಮರು ಕಾರಿನಲ್ಲಿ ಬಂದು ಕೃತ್ಯವೆಸಗಿ ಪರಾರಿಯಾಗಿರುವುದು ಸಿಸಿ ಕ್ಯಾಮರ ದೃಶ್ಯಾವಳಿಯಿಂದ ಕಂಡು ಬಂದಿದೆ. ಆರೋಪಿಗಳ ಪತ್ತೆಗೆ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಮಹಾಜನ ಪ್ರೌಢಶಾಲೆ ಹಳೆ ವಿದ್ಯಾರ್ಥಿಗಳಿಂದ ಗುರುವಂದನೆ



ಮಹಾಜನ ಪೌಢಶಾಲಾ ಆವರಣದಲ್ಲಿ 2001ನೇ ಬ್ಯಾಚ್‌ನ ಹಳೆಯ ವಿದ್ಯಾರ್ಥಿಗಳ ಗುರುವಂದನಾ ಕಾರ್ಯಕ್ರಮ ನಡೆಯಿತು.

ಮೈಸೂರು, ಜ.12(ಬಿಎಲ್‌ಯು)–ಮೈಸೂರಿನ ಮಹಾಜನ ಪ್ರೌಢಶಾಲೆಯ 2001ನೇ ಬ್ಯಾಚ್‌ನ ಹಳೆಯ ವಿದ್ಯಾರ್ಥಿಗಳು ಗುರು ವಂದನಾ ಕಾರ್ಯಕ್ರಮ ಆಯೋಜಿಸಿದ್ದರು.

ಶಾಲೆಯ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಶಾಲೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 14 ಶಿಕ್ಷಕರನ್ನು ಗೌರವಿಸಲಾಯಿತು. ಈ ವೇಳೆ ಶಾಲೆಯ ಪ್ರಾಂಶುಪಾಲರಾದ ಎಸ್.ಸುಜಾತಾ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಶಿಕ್ಷಕರು, ಸ್ಮರಣೀಯ ಘಟನೆಗಳು ಸೇರಿದಂತೆ ವಿದ್ಯಾರ್ಥಿಗಳೊಂದಿಗೆ ಕಳೆದ ಅಮೂಲ್ಯ ಕ್ಷಣಗಳನ್ನು ಹಂಚಿಕೊಂಡರು.

ನಾಳೆ ಲೋಕಾಯುಕ್ತ ದೂರು ಸ್ವೀಕಾರ

ಮೈಸೂರು,ಜ.12–ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಅಧಿಕಾರಿಗಳಿಂದ ಜನವರಿ 14ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆ, ಹೆಚ್.ಡಿ.ಕೋಟೆ ತಾಲ್ಲೂಕಿನ ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಾರ್ವಜನಿಕ/ ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸಾರ್ವಜನಿಕರು ದೂರು ನೀಡಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಉದೇಶ ಟಿ.ಜೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದ್ಯಮಗಳ ವ್ಯಾಪಕತೆಯಿಂದ ಕೃಷಿ ಭೂಮಿ ವಿಸ್ತೀರ್ಣ ಕಡಿತ

ತೋಟಗಾರಿಕಾ ವಿಶ್ವವಿದ್ಯಾಲಯದ ಕುಲಪತಿ ಡಾ.ವಿಷ್ಣುವರ್ಧನ ಆತಂಕ

ಮೈಸೂರು, ಜ.12(ಎಂಕೆ)– ರಿಯಲ್ ಎಸ್ಟೇಟ್ ಸೇರಿದಂತೆ ಇನ್ನಿತರೆ ಉದ್ಯಮಗಳಿಂದ ವರ್ಷದಿಂದ ವರ್ಷಕ್ಕೆ ಕೃಷಿ ಭೂಮಿ ವಿಸ್ತೀರ್ಣ ಕಡಿಮೆಯಾಗುತ್ತಿದೆ ಎಂದು ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ವಿಷ್ಣುವರ್ಧನ ಆತಂಕ ವ್ಯಕ್ತಪಡಿಸಿದರು.



'ಹಣ್ಣು–ಹೊನ್ನು' ಬಾನುಲಿ ಸರಣಿ ಕಾರ್ಯಕ್ರಮವನ್ನು ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ವಿಷ್ಣವರ್ಧನ ಉದ್ಘಾಟಿಸಿದರು.

ಮೈಸೂರಿನ ಕರ್ಜನ್‌ಪಾರ್ಕ್‌ನಲ್ಲಿರುವ ತೋಟಗಾರಿಕೆ ಇಲಾಖೆಯ ಡಾ.ಎಂ.ಹೆಚ್. ಮರೀಗೌಡ ಸಭಾಂಗಣದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಮತ್ತು ಆಕಾಶವಾಣಿ ವತಿಯಿಂದ ಆಯೋಜಿಸಿದ್ದ 'ಹಣ್ಣು–ಹೊನ್ನು' ಬಾನುಲಿ ಸರಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ಭೂಮಿಯನ್ನೇ ಬೇರೆ ಬೇರೆ ಉದ್ಯಮಗಳಿಗೆ ಅತಿಯಾಗಿ ಬಳಕೆ ಮಾಡಿಕೊಳ್ಳುತ್ತಿರುವುದರಿಂದ ಯುವಕರು ಕೃಷಿ ಬಿಟ್ಟು, ಪಟ್ಟಣದತ್ತ ವಲಸೆ ಬರುವಂತಾಗಿದೆ ಎಂದರು.

ಅಲ್ಲದೆ ರಾಸಾಯನಿಕ ಗೊಬ್ಬರ, ಕೀಟನಾಶಕಗಳ ಬಳಕೆಯಿಂದಾಗಿ ಕೃಷಿ ಭೂಮಿ ಫಲವತ್ತತೆಯೂ ಕಡಿಮೆಯಾಗುತ್ತಿದೆ. ಮುಂದಿನ ಪೀಳಿಗೆಗೆ ಉತ್ತಮ ಕೃಷಿಯನ್ನು ಭೂಮಿಯನ್ನು ಬಳುವಳಿಯಾಗಿ ನೀಡಬೇಕೆಂದರೆ ಕಡ್ಡಾಯವಾಗಿ ಹಸಿರೆಲೆ ಮತ್ತು ಜೈವಿಕ ಗೊಬ್ಬರ ಬಳಕೆ ಮಾಡಬೇಕು. ಇದರಿಂದ ಭೂಮಿಯ ಫಲವತ್ತತೆ ಹೆಚ್ಚುವುದರ ಜೊತೆಗೆ ಪರಿಸರ ರಕ್ಷಣೆಯೂ ಆಗಲಿದೆ ಎಂದು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿ ತೋಟಗಾರಿಕೆ ಬೆಳೆ ಹೆಚ್ಚಾಗುತ್ತಿದ್ದು, ತೆಂಗು ಬೆಳೆಯುವವರ ಸಂಖ್ಯೆ ಜಾಸ್ತಿಯಾಗುತ್ತಿದೆ. ಲಾಭದಾಯಕ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರು, ಮಿಶ್ರ ಕೃಷಿಗೆ ಆದ್ಯತೆ ನೀಡಬೇಕು. ಮಿಶ್ರ ಕೃಷಿಯಿಂದ ಸೀಮಿತ ಭೂಮಿಯಲ್ಲಿಯೇ ಅಧಿಕ ಲಾಭ ಪಡೆಯಬಹುದಾಗಿದೆ ಎಂದು ಸಲಹೆ ನೀಡಿದರು.

ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ.ಸಿ.ಎನ್.ಹಂಚಿನಮನಿ ಮಾತನಾಡಿ, ಭಾರತ ವೈವಿಧ್ಯಮ ಕೃಷಿ ಉತ್ಪನ್ನಗಳನ್ನು ಬೆಳೆಯುವ ದೇಶವಾಗಿದ್ದು, ವಿದೇಶಗಳಲ್ಲಿ ಬೆಳೆಯಲಾಗದ ಹಲವು ಕೃಷಿ ಉತ್ಪನ್ನಗಳನ್ನು ಭಾರತದಲ್ಲಿ ಬೆಳೆಯಬಹುದು. ವಿದೇಶಿ ಮಾರುಕಟ್ಟೆಗಳಲ್ಲಿ ಭಾರತದ ಕೃಷಿ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಾಗಿರುವುದರಿಂದ ರಫ್ತು ಮಾಡುವ ಗುಣಮಟ್ಟವಿರುವ ಬೆಳೆಗಳನ್ನು ಬೆಳೆಯುವಂತೆ ಕಿವಿಮಾತು ಹೇಳಿದರು.

ಮಣ್ಣಿನ ಫಲವತ್ತತೆ ರಕ್ಷಿಸಿ: ರೈತರು ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಾಗಿರುವ ಬೆಳೆಗಳನ್ನು ಬೆಳೆದು ಆರ್ಥಿಕವಾಗಿ ಸದೃಢರಾಗಬೇಕು. ಮುಖ್ಯವಾಗಿ ಮಣ್ಣಿನ ಗುಣಮಟ್ಟ ಹೆಚ್ಚಿಸಿ, ಫಲವತ್ತತೆ ಕಡಿಮೆಯಾಗದಂತೆ ಸಂರಕ್ಷಣೆ ಮಾಡಬೇಕು ಎಂದರು. ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಡಾ.ಹೆಚ್.ಎಂ.ನಾಗರಾಜ್, ಆಕಾಶವಾಣಿಯ ಕಾರ್ಯಕ್ರಮ ನಿರ್ವಾಹಕ ಎನ್.ಕೇಶವಮೂರ್ತಿ, ರೈತರು, ತೋಟಗಾರಿಕೆ ಇಲಾಖೆ ಅಧಿಕಾರಿ–ಸಿಬ್ಬಂದಿ ಉಪಸ್ಥಿತರಿದ್ದರು.

ಪೂರ್ಣ ಪ್ರಜ್ಞಾ ವಿದ್ಯಾಕೇಂದ್ರ ಶಾಲೆ ವಾರ್ಷಿಕೋತ್ಸವ

ಶಿಕ್ಷಣದೊಂದಿಗೆ ಮಕ್ಕಳು ಸಾಧನೆಗೆ ಸಜ್ಜಾಗಬೇಕು: ಶಾಸಕ ಟಿ.ಎಸ್.ಶ್ರೀವತ್ಸ ಕಿವಿಮಾತು



ಪೂರ್ಣ ಪ್ರಜ್ಞಾ ವಿದ್ಯಾ ಕೇಂದ್ರ ಶಾಲೆಯ ವಾರ್ಷಿಕೋತ್ಸವದಲ್ಲಿ ಗಣ್ಯರು ಹಾಗೂ ಸಮಿತಿಯ ಹಿರಿಯರನ್ನು ಅಭಿನಂದಿಸಲಾಯಿತು.

ಮೈಸೂರು,ಜ.12–ಮೈಸೂರಿನ ಕುವೆಂಪು ನಗರ ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ನಾಗರಿಕ ವೇದಿಕೆಯ ಪೂರ್ಣ ಪ್ರಜ್ಞಾ ವಿದ್ಯಾಕೇಂದ್ರ ಶಾಲೆಯ 21ನೇ ಶಾಲಾ ವಾರ್ಷಿಕೋತ್ಸವ ಭಾನುವಾರ ನಡೆಯಿತು.

ಶ್ರೀ ಆದಿಶಕ್ತಿ ಬಂದಂತಮ್ಮ ಕಾಳಮ್ಮ ಸಮುದಾಯ ಭವನದಲ್ಲಿ ನಡೆದ ವಾರ್ಷಿಕೋತ್ಸವನ್ನು ಉದ್ಘಾಟಿಸಿದ ಶಾಸಕ ಟಿ.ಎಸ್. ಶ್ರೀವತ್ಸ ಮಾತನಾಡಿ, ಮಕ್ಕಳು ಶಿಕ್ಷಣದ ಜೊತೆಗೆ ತಮ್ಮ ಆಸಕ್ತಿಯ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಈಗಿನಿಂದಲೇ ಸಂಕಲ್ಪ ತೊಡಬೇಕು ಎಂದು ಹೇಳಿದರು.

ಕಳೆದ ವರ್ಷ ಮೈಸೂರಿನ 7ನೇ ತರಗತಿಯ 12 ವರ್ಷದ ಬಾಲಕ ವಿವೇಕಾನಂದರ ಕುರಿತು 14 ಗಂಟೆ 4 ನಿಮಿಷ ಮಾತನಾಡಿ, ವಿಶ್ವದಾಖಲೆ ಮಾಡಿದ. ಎರಡನೇ ತರಗತಿ ವಿದ್ಯಾರ್ಥಿ ಕೇವಲ 30 ನಿಮಿಷದಲ್ಲಿ ಸುಮಾರು 150 ಶ್ಲೋಕಗಳನ್ನು ಪಠಣೆ ಮಾಡಿ, ದಾಖಲೆ ಬರೆದಿದ್ದಾನೆ. ಏಕಲವ್ಯ ಪ್ರಶಸ್ತಿ ಪುರಸ್ಕೃತರಾದ ಅಂತರರಾಷ್ಟ್ರೀಯ ಕ್ರೀಡಾಪಟು ಶ್ರೀಮತಿ ರೀನಾ ಜಾರ್ಜ್ ಅದ್ವಿತೀಯ ಸಾಧನೆ ಮಾಡಿದ್ದಾರೆ. ಆದ್ದರಿಂದ ಮಕ್ಕಳು ಕೇವಲ ಪಾಠ ಪ್ರವಚನಕ್ಕೆ ಸೀಮಿತವಾಗದೆ, ಪಠ್ಯೇತರ ಚಟುವಟಿಕೆಗಳಲ್ಲೂ ತೊಡಗಬೇಕು. ಏನಾದರೂ ಸಾಧನೆ ಮಾಡಿ ಪೋಷಕರು, ಶಾಲೆ ಹಾಗೂ ದೇಶಕ್ಕೆ ಕೀರ್ತಿ ತರಬೇಕು ಎಂದು ಆಶಿಸಿದರು.

ನಾಗರಿಕ ವೇದಿಕೆಯು ಕಡಿಮೆ ಶುಲ್ಕದಲ್ಲಿ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕಲ್ಪಿಸುತ್ತಿರುವುದು, ಸಮಿತಿಯ ಆಜೀವ ಸದಸ್ಯರನ್ನು ಗೌರವಿಸುವ ಮೂಲಕ ಹಿರಿಯರ ಸೇವೆಯನ್ನು ಸ್ಮರಿಸಿಕೊಳ್ಳುತ್ತಿರುವುದು ಶ್ಲಾಘನೀಯ. ಇಂತಹ ಒಳ್ಳೆಯ ಕಾರ್ಯಗಳನ್ನು ಮುಂದುವರೆಸಲಿ ಎಂದು ಹಾರೈಸಿದರು.

ಇದೇ ವೇಳೆ ಅತಿ ಹೆಚ್ಚು ಅಂಕ ಗಳಿಸಿದ ಮಕ್ಕಳಿಗೆ ನಗದು ಬಹುಮಾನ ಹಾಗೂ ಪಾರಿತೋಷಕವನ್ನು ಶಾಲೆಯ ಅಧ್ಯಕ್ಷ ಲೋಕೇಶ್ ನೀಡಿದರು. ಏಕಲವ್ಯ ಪ್ರಶಸ್ತಿ ಪುರಸ್ಕೃತರಾದ ಅಂತರರಾಷ್ಟ್ರೀಯ ಕ್ರೀಡಾಪಟು ಶ್ರೀಮತಿ ರೀನಾ ಜಾರ್ಜ್, ನಾಗರಿಕ ವೇದಿಕೆ ಕಾರ್ಯಾಧ್ಯಕ್ಷ ಕೆ.ಆರ್. ಶ್ರೀರಂಗಯ್ಯ, ಗೌರವಾಧ್ಯಕ್ಷ ಬಿ.ಪಿ.ಪುಟ್ಟಸ್ವಾಮಿ, ಕಾರ್ಯದರ್ಶಿ ಬಿ.ಶ್ರೀಕಾಂತ್, ಪೂರ್ಣ ಪ್ರಜ್ಞಾ ವಿದ್ಯಾ ಕೇಂದ್ರ ಶಾಲೆಯ ಅಧ್ಯಕ್ಷ ಜೆ.ಲೋಕೇಶ್, ಮುಖ್ಯ ಶಿಕ್ಷಕಿ ಶ್ರೀಮತಿ ಶ್ಯಾಮಲಾದೇವಿ, ಕಾರ್ಯಕಾರಿ ಸಮಿತಿ ಸದಸ್ಯರು, ಶಿಕ್ಷಕರು ಮತ್ತಿತರರು ಉಪಸ್ಥಿತರಿದ್ದರು.

ದ್ವೇಷ ಭಾಷಣ ಮಸೂದೆಗೆ ಸಹಿ ಹಾಕಬೇಡಿ; ಬಾಂಗ್ಲಾದೇಶಿಯರಿಗೆ ಮನೆ ನೀಡದಂತೆ ಕ್ರಮ ಕೈಗೊಳ್ಳಿ

ರಾಜ್ಯಪಾಲರಲ್ಲಿ ಬಿಜೆಪಿ ಮನವಿ



ದ್ವೇಷ ಭಾಷಣ ಪ್ರತಿಬಂಧಕ ಮಸೂದೆಗೆ ಸಹಿ ಹಾಕಬಾರದು, ಕೋಗಿಲು ಬಡಾವಣೆಯಲ್ಲಿ ಒತ್ತುವರಿದಾರರು ಹಾಗೂ ಬಾಂಗ್ಲಾ ಪ್ರಜೆಗಳಿಗೆ ಮನೆ ನೀಡದಂತೆ ಕ್ರಮ ವಹಿಸಬೇಕೆಂದು ರಾಜ್ಯಪಾಲರಿಗೆ ರಾಜ್ಯ ಬಿಜೆಪಿ ಮನವಿ ಮಾಡಿತು.

ಬೆಂಗಳೂರು, ಜ. 12(ಕೆಎಂಶಿ)– ದ್ವೇಷ ಭಾಷಣ ಪ್ರತಿಬಂಧಕ ಮಸೂದೆಗೆ ಸಹಿ ಹಾಕಬಾರದು, ಕೋಗಿಲು ಬಡಾವಣೆಯಲ್ಲಿ ಒತ್ತುವರಿದಾರರಿಗೆ ಹಾಗೂ ಬಾಂಗ್ಲಾ ಪ್ರಜೆಗಳಿಗೆ ಮನೆ ನೀಡದಂತೆ ಕ್ರಮ ವಹಿಸಬೇಕೆಂದು ರಾಜ್ಯಪಾಲರಿಗೆ ರಾಜ್ಯ ಬಿಜೆಪಿ ಇಂದಿಲ್ಲಿ ಮನವಿ ಮಾಡಿದೆ.

ರಾಜ್ಯಪಾಲರಿಗೆ ಮನವಿ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಇಲ್ಲದೆ ಜಂಗಲ್ ರಾಜ್ ಆಗಿರುವುದರ ಬಗ್ಗೆ ರಾಜ್ಯಪಾಲರಿಗೆ ಮನವರಿಕೆ ಮಾಡಿಕೊಟ್ಟಿದ್ದೇವೆ.

ಕರ್ನಾಟಕವನ್ನು ಗೂಂಡಾ ರಾಜ್ಯದಿಂದ ಕಾಪಾಡಿ ಎಂದು ಮನವಿ ಮಾಡಿದ್ದೇವೆ. ಮಸೂದೆ ರಚಿಸಲು ಮಾತ್ರ ಅಧಿವೇಶನವನ್ನು ಕರೆಯಬೇಕಿದೆ. ಆದರೆ ಕಾಂಗ್ರೆಸ್ ಸರ್ಕಾರ ದ್ವೇಷ ಭಾಷಣ ಪ್ರತಿಬಂಧಕ ಮಸೂದೆ ಬಗ್ಗೆ ಚರ್ಚೆಗೆ ಅವಕಾಶ ನೀಡಿಲ್ಲ, ಕಣ್ಣು ಮಿಟುಕಿಸಿದರೆ, ಕೈ ತೋರಿಸಿದರೆ ಬಂಧನ ಮಾಡುವಂತಹ ಕಾನೂನು ತರಲಾಗಿದೆ.

1975ರಲ್ಲಿ ಮಾಜಿ ಪ್ರಧಾನಿ ಇಂದಿರಾಗಾಂಧಿ ತಂದ ತುರ್ತು ಪರಿಸ್ಥಿತಿಯಂತೆಯೇ, ಮುಖ್ಯಮಂತ್ರಿ ಸಿದ್ದರಾಮಯ್ಯ ತುರ್ತು ಪರಿಸ್ಥಿತಿ ಹೇರುತ್ತಿದ್ದಾರೆ. ಆದ್ದರಿಂದ ಇದಕ್ಕೆ ಸಹಿ ಹಾಕಬಾರದು ಎಂದು ಮನವಿ ಮಾಡಲಾಗಿದೆ. ಈ ಕಾನೂನು ಜಾರಿಯಾದರೆ ಪ್ರತಿಪಕ್ಷಗಳ ಶಾಸಕರನ್ನು ಪೊಲೀಸರು ಸುಲಭವಾಗಿ ಬಂಧಿಸುತ್ತಾರೆ, ಸರ್ಕಾರದ ಸೂಚನೆ ಮೇರೆಗೆ ಯಾರ ಮೇಲೆ ಬೇಕಾದರೂ ಪೊಲೀಸರು ಪ್ರಕರಣ ದಾಖಲಿಸಬಹುದು, ಇದು ಕಾಂಗ್ರೆಸ್ ಕುತಂತ್ರದ ಮಸೂದೆ ಹಾಗೂ ವಾಕ್ ಸ್ವಾತಂತ್ರ್ಯ ಕಸಿಯುವ ಮಸೂದೆ ಎಂಬುದಾಗಿ ಮನವರಿಕೆ ಮಾಡಿದ್ದೇವೆ.

ಕಾಂಗ್ರೆಸ್ಸಿಗರಿಂದಲೇ ಕಾರ್ಯಕರ್ತನ ಕೊಲೆ: ಬಳ್ಳಾರಿಯಲ್ಲಿ ಕಾಂಗ್ರೆಸ್ ಪಕ್ಷದವರಿಂದ ಕಾರ್ಯಕರ್ತನ ಕೊಲೆಯಾಗಿದೆ. ಇದರ ಹಿಂದೆ ಇದ್ದವರನ್ನು ಬಂಧಿಸದೆ ಜನಾರ್ಧನ ರೆಡ್ಡಿಯವರ ಮೇಲೆ ಆರೋಪ ಹೊರಿಸಲಾಗಿದೆ. ಸತ್ಯ ಸಂಗತಿ ಹೊರಬರಲು ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ರಾಜ್ಯಪಾಲರಿಗೆ ಕೋರಲಾಗಿದೆ.

ಬಳ್ಳಾರಿಯಲ್ಲಿ ಜನವರಿ 17 ರಂದು ಸಮಾವೇಶ ನಡೆಸಿ, ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದನ್ನು ಖಂಡಿಸಲಿದ್ದೇವೆ ಎಂದು ತಿಳಿಸಿದರು.

ಸರ್ಕಾರ ಕೇರಳದ ಕೈಗೊಂಬೆ: ಕೋಗಿಲು ಅಕ್ರಮ ನಿವಾಸಿಗಳ ಕುರಿತು ಶಾಸಕ ವಿಶ್ವನಾಥ್ ನೇತೃತ್ವದ ಸತ್ಯ ಶೋಧನಾ ಸಮಿತಿ ವರದಿ ನೀಡಿದೆ, 36 ಲಕ್ಷ ಜನರು ಲಕ್ಷಾಂತರ ರೂ. ಪಾವತಿ ಮಾಡಿ ಮನೆ ಪಡೆಯಲು ಕಾಯುತ್ತಿದ್ದಾರೆ. ಕೇರಳದಲ್ಲಿ ಕೋಗಿಲೆ ಕೂಗಿದೆ ಎಂದಾಕ್ಷಣ, ರಾಜ್ಯದ ಕಾಗೆಗಳು ಬಾಯಿ ಮುಚ್ಚಿಕೊಂಡಿವೆ. ಕೇರಳ ಸರ್ಕಾರ ಕರ್ನಾಟಕವನ್ನು ಆಳುತ್ತಿದೆಯೇ ವೇಣುಗೋಪಾಲ್ ಹಾಗೂ ಅಲ್ಲಿನ ಮುಖ್ಯಮಂತ್ರಿ ಮಾತನ್ನು ನಮ್ಮ ಮುಖ್ಯಮಂತ್ರಿ ಕೇಳುತ್ತಿದ್ದಾರಾ?.

ನಮ್ಮ ಸರ್ಕಾರ ಕೇರಳದ ಕೈಗೊಂಬೆಯಾಗಬಾರದು. ಕೇರಳದಲ್ಲಿ ಮಾತೃಭಾಷಾ ನಿಯಮವನ್ನು ಉಲ್ಲಂಘನೆ ಮಾಡಿದ್ದರೂ ಅದನ್ನು ಮುಖ್ಯಮಂತ್ರಿ ಪ್ರಶ್ನೆ ಮಾಡಿಲ್ಲ. ಕಾಸರಗೋಡಿನ ಕನ್ನಡಿಗರ ಮೇಲೆ ಕೇರಳ ಸರ್ಕಾರ ದೌರ್ಜನ್ಯ ಮಾಡುತ್ತಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಒಂದು ಪತ್ರ ಬರೆದು ಸುಮ್ಮನಾಗಿದ್ದಾರೆ ಎಂದರು.

ಆದಷ್ಟು ಬೇಗ ಜಿಬಿಎ ಚುನಾವಣೆ ನಡೆಯಬೇಕು. ಬೆಂಗಳೂರಿನ ರಸ್ತೆ ಗುಂಡಿಗಳು, ಕಸದ ರಾಶಿ, ಕಾನೂನು ಸುವ್ಯವಸ್ಥೆ ಹಾಳಾಗಿರುವುದನ್ನು ನೋಡಿದರೆ ಕಾಂಗ್ರೆಸ್ ಚುನಾವಣೆಯಲ್ಲಿ ನೆಲ ಕಚ್ಚುವುದು ಖಚಿತವಾಗಿದೆ. ಮೈತ್ರಿಗೆ ಸಂಬಂಧಿಸಿದಂತೆ ವರಿಷ್ಠರು ತೀರ್ಮಾನಿಸಲಿದ್ದಾರೆ ಎಂದರು.

ಹನಿ ನೀರಾವರಿ ಮೂಲಕ ನೀರಿನ ಸದ್ಬಳಕೆ ಮಾಡಿಕೊಳ್ಳಿ

ಕೃಷಿ ನಿರ್ದೇಶಕ ಕೆ.ನಾಗರಾಜ್ ರೈತರಿಗೆ ಸಲಹೆ



ಮೈಸೂರಿನ ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಮೂರು ದಿನ ಏರ್ಪಡಿಸಿದ್ದ ತರಬೇತಿಯಲ್ಲಿ ಪಾಲ್ಗೊಂಡಿದ್ದ ರೈತರು ಕ್ಷೇತ್ರ ಭೇಟಿ ಮಾಡಿದರು.

ಮೈಸೂರು, ಜ.12– ಹನಿ ನೀರಾವರಿ ಅಳವಡಿಸಿಕೊಳ್ಳುವುದರ ಮೂಲಕ ನೀರಿನ ಸದ್ಬಳಕೆ ಮಾಡಿಕೊಳ್ಳಬೇಕೆಂದು ಉಪ ಕೃಷಿ ನಿರ್ದೇಶಕ ಕೆ.ನಾಗರಾಜ್ ಹೇಳಿದರು.

ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಮೂರು ದಿನ ಏರ್ಪಡಿಸಿದ್ದ 'ಕಬ್ಬು ಬೆಳೆಯಲ್ಲಿ ಸೂಕ್ಷ್ಮ ನೀರಾವರಿ, ರಸಾವರಿ ತಾಂತ್ರಿಕತೆ ಮತ್ತು ಆಧುನಿಕ ಬೇಸಾಯ ಪದ್ಧತಿಗಳ ಅಳವಡಿಕೆ ಮೂಲಕ ಅಧಿಕ ಲಾಭ' ಕುರಿತ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿ, ವಾಡಿಕೆಗಿಂತ ಕಡಿಮೆ ಮಳೆ ಬಿದ್ದರೂ ಹನಿ/ತುಂತುರು ನೀರಾವರಿ ಮೂಲಕ ನೀರಿನ ಸದ್ಬಳಕೆ ಮಾಡಿಕೊಳ್ಳಬಹುದು. ಫಲವತ್ತಾದ ಮಣ್ಣು ಮತ್ತು ನೀರನ್ನು ನಮ್ಮ ಮುಂದಿನ ಪೀಳಿಗೆಗೆ ಬಿಟ್ಟು ಹೋಗುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದರು.

ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕ ಡಾ.ಕೇಶವಯ್ಯ, ಕಬ್ಬು ಬೆಳೆಯ ಬಿತ್ತನೆ ಸಮಯ, ತಳಿ ಆಯ್ಕೆ, ಬಿತ್ತನೆ ತಯಾರಿ, ಬೀಜೋಪಚಾರ, ಮಡಿ ತಯಾರಿಕೆ, ಮಲ್ಚಿಂಗ್, ಅಂತರಬೆಳೆ ಪದ್ಧತಿಗಳು, ಕಬ್ಬಿನ ಬೆಳೆಯಲ್ಲಿ ಸುಧಾರಿತ ಬೇಸಾಯ ಪದ್ಧತಿಗಳು, ಕಳೆ ನಿರ್ವಹಣೆ ಕುರಿತು ವೈಜ್ಞಾನಿಕ ಮಾಹಿತಿ ನೀಡಿದರು.

ನೆಟಾಫೆಮ್ ಇರಿಗೇಶನ್ ಇಂಡಿಯಾ ಪ್ರೈವೇಟ್ ಲಿ. ಸಂಸ್ಥೆಯ ಬೇಸಾಯ ತಜ್ಞ ಡಾ.ಅಂಜನಪ್ಪ, ಕಬ್ಬು ಬೆಳೆಯಲ್ಲಿ ಹನಿ ನೀರಾವರಿ ಪದ್ಧತಿಗಳ ಅಳವಡಿಕೆ, ನಿರ್ವಹಣೆ, ರಸಾವರಿ ಪದ್ಧತಿಗಳು, ಎಚ್ಚರಿಕೆ ಕ್ರಮಗಳು, ಸಮಸ್ಯೆ ಹಾಗೂ ಪರಿಹಾರಗಳ ಕುರಿತು ತಿಳಿಸಿಕೊಟ್ಟರು. ಕೃಷಿ ವಿವಿ ಪ್ರಾಧ್ಯಾಪಕಿ ಡಾ.ಆರ್.ಸುಮಾ ಕಬ್ಬು ಬೆಳೆಯಲ್ಲಿ ಮಣ್ಣು ಪೋಷಕಾಂಶಗಳ ಮಹತ್ವ, ಕೊರತೆಯ ಲಕ್ಷಣ, ರಸಗೊಬ್ಬರ ನಿರ್ವಹಣೆ, ರಸಾವರಿಗೆ ರಸಗೊಬ್ಬರಗಳ ಕೋಷ್ಟಕ, ಲಘು ಪೋಷಕಾಂಶಗಳ ನಿರ್ವಹಣೆ ಮಾಹಿತಿ ನೀಡಿದರು.

ಸಸ್ಯ ರೋಗ ಶಾಸ್ತ್ರಜ್ಞೆ ಡಾ.ಆರ್.ಎನ್.ಪುಷ್ಪ, ಕಬ್ಬು ಬೆಳೆಯಲ್ಲಿ ರೋಗಗಳ ಗುರುತಿಸುವಿಕೆ ಮತ್ತು ಸಮಗ್ರ ನಿಯಂತ್ರಣಾ ಕ್ರಮ, ವಿವಿಧ ಕೀಟಗಳ ಗುರುತಿಸುವಿಕೆ ಮತ್ತು ಸಮಗ್ರ ನಿಯಂತ್ರಣಾ ಕ್ರಮ ಕುರಿತು ಉಪನ್ಯಾಸ ನೀಡಿದರು. ಕೃಷಿ ಹವಾಮಾನ ಕ್ಷೇತ್ರ ವಿಭಾಗದ ತಾಂತ್ರಿಕ ಅಧಿಕಾರಿ ಡಾ.ಜಿ.ವಿ.ಸುಮಂತ್ ಕುಮಾರ್, ಕೃಷಿಯಲ್ಲಿ ಎರೆಹುಳು ಗೊಬ್ಬರದ ಮಹತ್ವ ಕುರಿತು ಮಾಹಿತಿ ನೀಡಿದರು.

ಕ್ಷೇತ್ರ ಭೇಟಿಯಲ್ಲಿ ಮಂಡ್ಯ ಜಿಲ್ಲೆ ಮದ್ದೂರಿನಲ್ಲಿರುವ ತೋಟಗಾರಿಕೆ ಬೆಳೆಗಳ ನಿಖರ ಬೇಸಾಯ ತರಬೇತಿ ಉತ್ಕೃಷ್ಟ ಕೇಂದ್ರದಲ್ಲಿ ಹಲವು ಮಹತ್ವದ ವಿಚಾರಗಳನ್ನು ತಿಳಿಸಿಕೊಡಲಾಯಿತು. ತುಂತುರು ಘಟಕ ಹಾಗೂ ಸೂಕ್ಷ್ಮ ನೀರಾವರಿ ಪದ್ಧತಿಯಲ್ಲಿ ಸ್ವಯಂ ಚಾಲಿತ ನೀರಾವರಿ ಮತ್ತು ರಸಾವರಿ ವಿಧಾನಗಳ ವೀಕ್ಷಣೆ ಬಗ್ಗೆ ಉಪ ತೋಟಗಾರಿಕೆ ನಿರ್ದೇಶಕ ಡಾ.ವೆಂಕಟೇಶ್ ವಿವರಿಸಿದರು. ಬಳಿಕ ಕೊಪ್ಪ ಗ್ರಾಮದ ಪ್ರಾತಿಪರ ರೈತ ರಘು ಅವರು ಕಬ್ಬು ಬೆಳೆಯಲ್ಲಿ ಹನಿ ನೀರಾವರಿ ಘಟಕ ಅಳವಡಿಸಿರುವುದನ್ನು ವೀಕ್ಷಿಸಲಾಯಿತು. ಇದೇ ವೇಳೆ ರೈತರು ಅನಿಸಿಕೆ ಹಂಚಿಕೊಂಡರು. ತರಬೇತಿ ಸಂಯೋಜಕಿ ಎಂ.ಬಿ. ಮಂಜುಳ, ರೈತರಿಗೆ ಸಾಕಷ್ಟು ಮಹತ್ವದ ವಿಚಾರಗಳನ್ನು ತಿಳಿಸಿದರು.

ಇಂದು ಪಾಲಿಕೆ ಸ್ವಚ್ಛತಾ ಸಿಬ್ಬಂದಿಗೆ ವಿಶೇಷ ತರಬೇತಿ

ಮೈಸೂರು, ಜ.12– ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕೇಂದ್ರ ಸರ್ಕಾರದ 'ಸ್ವಚ್ಛ ಭಾರತ್ ಮಿಷನ್ 2.0' ಯೋಜನೆಯಡಿ ಪಾಲಿಕೆಯ ಸ್ವಚ್ಛತಾ ಸಿಬ್ಬಂದಿಗೆ ಒಂದು ದಿನದ ವಿಶೇಷ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಮಂಗಳವಾರ (ಜ.13) ಬೆಳಗ್ಗೆ 9.30ಕ್ಕೆ ಲಲಿತಮಹಲ್ ರಸ್ತೆಯ ರಾಜ್ಯ ನಗರಾಭಿವೃದ್ಧಿ ಸಂಸ್ಥೆ (ಎಸ್‌ಐಯುಡಿ) ಆವರಣದಲ್ಲಿ ಆಯೋಜಿಸಲಾಗಿದೆ.

ಉದ್ಘಾಟನಾ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಮೈಸೂರು–ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಚಾಮರಾಜನಗರ ಸಂಸದ ಎಂ.ಸುನೀಲ್, ಶಾಸಕರಾದ ಜಿ.ಟಿ.ದೇವೇಗೌಡ, ಟಿ.ಎಸ್.ಶ್ರೀವತ್ಸ, ಕೆ.ಹರೀಶ್ ಗೌಡ, ತನ್ವೀರ್ ಸೇಠ್, ಎಸ್‌ಐಯುಡಿ ನಿರ್ದೇಶಕ ಅರ್ಷದ್ ಉರ್ ರೆಹಮಾನ್ ಶರೀಫ್, ಪ್ರಾದೇಶಿಕ ಆಯುಕ್ತ ನಿತೇಶ್ ಪಾಟೀಲ್, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ನಗರ ಪಾಲಿಕೆ ಕಮಿಷನರ್ ಶೇಖ್ ತನ್ವೀರ್ ಆಸಿಫ್ ಮತ್ತಿತರ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಪೌರಕಾರ್ಮಿಕರಲ್ಲಿ ವೈಯಕ್ತಿಕ ಹಾಗೂ ಸಾಮಾಜಿಕ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವುದು ಈ ತರಬೇತಿಯ ಮುಖ್ಯ ಗುರಿಯಾಗಿದೆ. ಪೌರಕಾರ್ಮಿಕರ ವೃತ್ತಿಪರತೆಯನ್ನು ಹೆಚ್ಚಿಸಿ, ಮೈಸೂರನ್ನು ಇನ್ನಷ್ಟು ಆರೋಗ್ಯಕರ ಮತ್ತು ಮಾದರಿ ನಗರವನ್ನಾಗಿಸುವುದು ಈ ತರಬೇತಿಯ ಆಶಯವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜೂ.30ರೊಳಗೆ ಜಿಬಿಎ ಚುನಾವಣೆ ಮುಗಿಸಿ

● ರಾಜ್ಯ ಸರ್ಕಾರಕ್ಕೆ 'ಸುಪ್ರೀಂ' ಗಡುವು ● ಮತ್ತೆ ಸಮಯ ಕೇಳಿಕೊಂಡು ಬರಬೇಡಿ; ಎಚ್ಚರಿಕೆ

ನವದೆಹಲಿ: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ಚುನಾವಣೆಯನ್ನು ಜೂನ್ ಅಂತ್ಯದ ಒಳಗೆ ನಡೆಸುವಂತೆ ಸುಪ್ರೀಂಕೋರ್ಟ್ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ.



ನೂತನವಾಗಿ ರಚನೆಯಾಗಿರುವ 'ಗ್ರೇಟರ್ ಬೆಂಗಳೂರು ಪ್ರಾಧಿಕಾರ'ದ ಅಡಿಯಲ್ಲಿ ಬರುವ ಐದು ನಗರ ಪಾಲಿಕೆಗಳ ಚುನಾವಣಾ ಪ್ರಕ್ರಿಯೆಯನ್ನು ಜೂನ್ 30ರೊಳಗೆ ಪೂರ್ಣಗೊಳಿಸುವಂತೆ ಸುಪ್ರೀಂಕೋರ್ಟ್‌ನ ಸಿಜೆಐ ಪೀಠವು ರಾಜ್ಯ ಸರ್ಕಾರಕ್ಕೆ ಮತ್ತು ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಿದೆ.

ಸರ್ಕಾರದ ಪರವಾಗಿ ವಾದ ಮಂಡಿಸಿದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಮತ್ತು ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಅವರು, ವಾರ್ಡ್‌ಗಳ ಮೀಸಲಾತಿ ಪ್ರಕ್ರಿಯೆಯು ಪ್ರಸ್ತುತ ಅಂತಿಮ ಹಂತದಲ್ಲಿದೆ ಎಂದು ಕೋರ್ಟ್‌ಗೆ ತಿಳಿಸಿದರು. ಫೆಬ್ರವರಿ 28ರೊಳಗೆ ಮೀಸಲಾತಿ ಪಟ್ಟಿಯು ಅಧಿಕೃತವಾಗಿ ಹೊರಬೀಳಲಿದ್ದು, ತದನಂತರ ಚುನಾವಣೆ ನಡೆಸುವ ಜವಾಬ್ದಾರಿ ಆಯೋಗಕ್ಕೆ ಇರಲಿದೆ ಎಂದು ಸ್ಪಷ್ಟಪಡಿಸಿದರು.

ಮಾರ್ಚ್ 16ರವರೆಗೆ ಮತದಾರರ ಪಟ್ಟಿಯ ಪರಿಶೀಲನೆ ನಡೆಯಲಿದೆ. ಇದಾದ ಬಳಿಕ ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ನಡೆಯಲಿರುವುದರಿಂದ ಸಿಬ್ಬಂದಿ ಕೊರತೆ ಎದುರಾಗಬಹುದು. ಈ ಹಿನ್ನೆಲೆಯಲ್ಲಿ ಚುನಾವಣೆ ನಡೆಸಲು ಮೇ ಕೊನೆಯ ವಾರದವರೆಗೂ ಸಮಯಾವಕಾಶಬೇಕು ಎಂದು ರಾಜ್ಯ ಚುನಾವಣಾ ಆಯೋಗವು ತನ್ನ ವಾದ ಮಂಡಿಸುತ್ತಾ ಮನವಿ ಮಾಡಿತು. ಸಂಪೂರ್ಣ ಪ್ರಕ್ರಿಯೆ ಮುಗಿಸಲು ಜೂನ್‌ವರೆಗೂ ಸಮಯ ಬೇಕಾಗಬಹುದು ಎಂದು ಆಯೋಗವು ಸುಪ್ರೀಂ ಕೋರ್ಟ್‌ಗೆ ವಿವರಿಸಿತು.

ಎಲ್ಲಾ ವಾದಗಳನ್ನು ಆಲಿಸಿದ ಸುಪ್ರೀಂಕೋರ್ಟ್, ಜೂನ್ 30ರ ಒಳಗೆ ಯಾವುದೇ ಕಾರಣಕ್ಕೂ ವಿಳಂಬ ಮಾಡದೆ ಚುನಾವಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಗಡುವು ನೀಡಿದೆ. ಅಲ್ಲದೆ, 'ಮತ್ತೆ ಸಮಯ ಕೇಳಿಕೊಂಡು ಬರಬೇಡಿ' ಎಂದು ರಾಜ್ಯ ಸರ್ಕಾರಕ್ಕೆ ಕಟ್ಟುನಿಟ್ಟಾದ ಎಚ್ಚರಿಕೆಯನ್ನು ನೀಡಿದೆ. ಈ ಹಿಂದೆ ಬಿಜೆಪಿ ಸರ್ಕಾರವಿದ್ದಾಗಲೂ ಸುಪ್ರೀಂಕೋರ್ಟ್‌ನಲ್ಲಿ ಬಿಬಿಎಂಪಿ ಚುನಾವಣೆ ನಡೆಸುವಂತೆ ಕೆಲವರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು.